ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 22, ಸಂಚಿಕೆ: 57, ಪುಟಗಳು: 8, ಶುಕ್ರವಾರ, 7 ಡಿಸೆಂಬರ್ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3



ವೇಣು ಸಾರಥ್ಯದಲ್ಲಿ...




### ಸುಭಾಷಿತ

ಅಹಂಕಾರ ಘೋರ ವಿಷವಿದ್ದಂತೆ ಕುಡಿದವರು ಸಾಯಲೇಬೇಕು.

### ಪಂಚಾಂಗ

(ಶನಿವಾರ 7, ಡಿಸೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಮಾರ್ಗಶಿರ ಮಾಸ, ಶುಕ್ಲ ಪಕ್ಷ,
- ಷಷ್ಠಿ / ಸಪ್ತಮಿ, ಶನಿವಾರ,
- ಧನಿಷ್ಠ ನಕ್ಷತ್ರ
- ರಾಹುಕಾಲ: 09:22 ರಿಂದ 10:48
- ಗುಳಿಕಕಾಲ: 06:31 ರಿಂದ 07:56
- ಯಮಗಂಡಕಾಲ: 01:40 ರಿಂದ 03:06

## ಸಂಕ್ಷಿಪ್ತ ಸುದ್ದಿ

### ಸರ್ಜಾಪುರ-ಹೆಬ್ಬಾಳ ಮೆಟ್ರೋ ಕಾಮಗಾರಿಗೆ ಸರ್ಕಾರ ಅಸ್ತು



**ಬೆಂಗಳೂರು:** ನಮ್ಮ ಮೆಟ್ರೋ ಪ್ರಯಾಣಿಕರಿಗೆ ಕರ್ನಾಟಕ ಸರ್ಕಾರ ಸಿಹಿ ಸುದ್ದಿ ನೀಡಿದೆ. ಬೆಂಗಳೂರು ಮೆಟ್ರೋ ರೈಲು ಯೋಜನೆಯ ಹಂತ-3ರಲ್ಲಿ ಸರ್ಜಾಪುರದಿಂದ ಹೆಬ್ಬಾಳದವರೆಗೆ (ಕೆಂಪು ಮಾರ್ಗ) ಉದ್ದೇಶಿಸಿರುವ 36.59 ಕಿ.ಮೀ. ಉದ್ದದ ಮೆಟ್ರೋ ಕಾಮಗಾರಿಯ ಯೋಜನಾ ಪೂರ್ವ ಸಿದ್ಧತೆಗೆ ಸಚಿವ ಸಂಪುಟ ಸಭೆಯಲ್ಲಿ ಅಂಗೀಕಾರ ದೊರೆತಿದೆ.

28,405 ಕೋಟಿ ಅಂದಾಜು ವೆಚ್ಚದಲ್ಲಿ ಸರ್ಜಾಪುರದಿಂದ ಹೆಬ್ಬಾಳದವರೆಗೆ 36.59ಕಿ. ಮೀ ಉದ್ದದ ಮೆಟ್ರೋ ಮಾರ್ಗ ನಿರ್ಮಿಸಲು ಉದ್ದೇಶಿಸಿದ್ದು, 17 ಮೆಟ್ರೋ ನಿಲ್ದಾಣ ಒಳಗೊಂಡ 22.14 ಕಿ.ಮೀ. ಎಲಿವೇ ಟೆಡ್ ಮಾರ್ಗ ಹಾಗೂ 11 ನಿಲ್ದಾಣ ಒಳಗೊಂಡ 14.45 ಕಿ.ಜೀ. ಸುರಂಗ ಮಾರ್ಗದ ಕಾಮಗಾರಿ ನಡೆಯಲಿದೆ. ಪುಟ 2

### ಅಪ್ಪ ಬೈಕ್ ಕೊಡಿಸಿಲ್ಲ ಅಂತ ಆತ್ಮಹತ್ಯೆಗೆ ಶರಣಾದ ಯುವಕ!



**ದಾವಣಗೆರೆ:** ಅಪ್ಪ ಬೈಕ್ ಕೊಡಿಸಲಿಲ್ಲ ಎಂದು ಮಗ ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾದ ಘಟನೆ ನ್ಯಾಮತಿ ಪಟ್ಟಣದಲ್ಲಿ ನಡೆದಿದೆ. ಆತ್ಮಹತ್ಯೆಗೆ ಶರಣಾದ ಯುವಕನನ್ನು ವಿಕಾಸ್.ಆರ್ (20) ಎಂದು ಗುರುತಿಸಲಾಗಿದೆ. ಯುವಕ ಹಲವು ದಿನಗಳಿಂದ ಬೈಕ್ ಕೊಡಿಸುವಂತೆ ತನ್ನ ತಂದೆಯ ಬಳಿ ಕೇಳಿದ್ದ. ಹಣದ ಅಡಚಣೆಯಿಂದ ಪೋಷಕರಿಗೆ ಬೈಕ್ ಕೊಡಿಸಲು ಆಗಿರಲಿಲ್ಲ. ಇದೇ ವಿಚಾರಕ್ಕೆ ಯುವಕ ಮಾನಸಿಕವಾಗಿ ಕುಗ್ಗಿ ತಂದೆ ಮೇಲೆ ಕೋಪ ಮಾಡಿಕೊಳ್ಳುತ್ತಿದ್ದ. ಮನೆಯವರ ಜೊತೆ ಮಾತನಾಡುವುದು ಮತ್ತು ಸರಿಯಾಗಿ ಊಟ ಮಾಡುವುದನ್ನು ಸಹ ಬಿಟ್ಟಿದ್ದ. ಮನೆ ತೊರೆದು ಒಂದು ವಾರದಿಂದ ಕುಂಕುವ ಗ್ರಾಮದ ಸಂಬಂಧಿಕರ ಮನೆಯಲಿದ್ದ. ಅಲ್ಲೇ ಆತ ವಿಷ ಸೇವಿಸಿದ್ದಾನೆ. ತಕ್ಷಣ ಗ್ರಾಮಸ್ಥರು ಆತನನ್ನು ನ್ಯಾಮತಿ ಆಸ್ಪತ್ರೆಗೆ ದಾಖಲಿಸಿದ್ದರು. ಹೆಚ್ಚಿನ ಚಿಕಿತ್ಸೆಗಾಗಿ ಮಣಿಪಾಲ್ ಮತ್ತು ಶಿವಮೊಗ್ಗ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೆ ಆತ ಸಾವನ್ನಪ್ಪಿದ್ದಾನೆ.

ಇಡಿ ವಿರುದ್ಧ ಸುಪ್ರೀಂ ಕದ ತಟ್ಟುತ್ತಾರಾ ಸಿಎಂ

## ಇಂದು ಸಂಪುಟ ಸಭೆಯಲ್ಲಿ ಪ್ರಮುಖ ವಿಚಾರಗಳ ಬಗ್ಗೆ ಚರ್ಚೆ!

**ಬೆಂಗಳೂರು:** ರಾಜ್ಯ ಸರ್ಕಾರವು ಶುಕ್ರವಾರ ಸಚಿವ ಸಂಪುಟ ಸಭೆ ನಡೆಸಲಿದ್ದು, ಈ ಸಭೆಯಲ್ಲಿ ಹಲವು ಪ್ರಮುಖ ನಿರ್ಧಾರಗಳನ್ನು ತೆಗೆದುಕೊಳ್ಳುವ ಸಾಧ್ಯತೆ ಇದೆ. ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆಯುವ ಕ್ಯಾಬಿನೆಟ್ ಮೀಟಿಂಗ್‌ನಲ್ಲಿ ಹಲವು ಮಹತ್ವದ ವಿಷಯಗಳ ಬಗ್ಗೆ ಚರ್ಚೆ ನಡೆಯಲಿವೆ. ಮೂಡಾ ವಿಚಾರದಲ್ಲಿ ಇಡಿಯಿಂದ ಪತ್ರ ವ್ಯವಹಾರ, ಲೋಕಾಯುಕ್ತರಿಗೆ ಪತ್ರದ ಮೂಲಕ ಒತ್ತಡ ತರುವ ತಂತ್ರದ ಬಗ್ಗೆ ಇಡಿ ವಿರುದ್ಧ ಸುಪ್ರೀಂ ಕೋರ್ಟ್ ಮೆಟ್ಟಿಲೇರುವ ಕುರಿತು ಚರ್ಚೆ ನಡೆಸುವ ಸಾಧ್ಯತೆ ಇದೆ. ಎಲ್ಲಾ ಸಚಿವರ ಅಭಿಪ್ರಾಯ ಪಡೆಯಲಿರುವ ಸಿಎಂ. ಸಂಪುಟ ಸಮ್ಮತಿಸಿದರೆ ಇಡಿ ವಿರುದ್ಧ ಮೇಲ್ಮನವಿ ಸಲ್ಲಿಸಲಿದ್ದಾರೆ.

ಬೆಳಗಾವಿ ಚಳಿಗಾಲದ ಅಧಿವೇಶನ ಹಿನ್ನೆಲೆ ಪ್ರತಿಪಕ್ಷಗಳನ್ನ ಹೇಗೆ ನಿಯಂತ್ರಣದಲ್ಲಿಡಬೇಕು? ಹೇಗೆ ಕಟ್ಟಿ ಹಾಕಬೇಕೆಂದು ಸಚಿವರಿಗೆ ಕಿವಿಮಾತು ಹೇಳಲಿದ್ದಾರೆ. ಅಲ್ಲದೆ ಮೂರು ಉಪಚುನಾವಣೆಗಳಲ್ಲಿ ಗೆಲುವು ಹಿನ್ನೆಲೆ, ಈ 3 ಕ್ಷೇತ್ರಗಳಿಗೆ ಹೆಚ್ಚಿನ ಅನುದಾನ ನೀಡುವ ಸಾಧ್ಯತೆ ಕೂಡ ಇದೆ.



**ಸಂಪುಟ ಸಭೆಯಲ್ಲಿ ಯಾವೆಲ್ಲ ವಿಚಾರ ಚರ್ಚೆ?:** ಕರ್ನಾಟಕ (ತಿದ್ದುಪಡಿ) ಉಪಖನಿಜ ನಿಯಮಗಳು, ಅನುಮೋದನೆ ನೀಡುವ ಬಗ್ಗೆ ಚರ್ಚೆ ನಡೆಯುವ ಸಾಧ್ಯತೆ ಇದೆ. ಕಲ್ಲು ಗಣಿ ಗುತ್ತಿಗೆ ಪಡೆದು ಅಕ್ರಮವಾಗಿ ಮತ್ತು ಹೆಚ್ಚುವರಿ ಗಣಿಗಾರಿಕೆ, ಸಾಗಾಣಿಕೆ ಮಾಡಿ ಸರ್ಕಾರಕ್ಕೆ ಕೋಟ್ಯಾಂತರ ರೂ ಮೋಸ ಎಸಗಿರುವ ಗಣಿಗಳಿಗ ಒನ್ ಟೈಂ ಸೆಟಲ್‌ಮೆಂಟ್ ಆಧಾರದಲ್ಲಿ ದಂಡ ಶುಲ್ಕ ಪಾವತಿಗೆ ಅನುಮೋದನೆ ನೀಡುವ ವಿಧೇಯಕ ಒಪ್ಪಿಗೆ ನೀಡುವ ಸಾಧ್ಯತೆ ಇದೆ.

ಆಯ್ದ ರಾಜ್ಯ ಸ್ವಾಮ್ಯದ ಸಾರ್ವಜನಿಕ ವಲಯ ಉದ್ದಿಮೆಗಳು ಅಂತರ್ ನಿಗಮ ಠೇವಣಿಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸುವುದು.

ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಮತ್ತು ಸಂರಕ್ಷಣೆ (ತಿದ್ದುಪಡಿ) ವಿಧೇಯಕ 2024ಕ್ಕೆ ಅನುಮೋದನೆ ನೀಡುವುದು

2024-25ನೇ ಸಾಲಿಗೆ ರಾಷ್ಟ್ರೀಯ ಆರೋಗ್ಯ ಅಭಿಯಾನದ ಉಚಿತ ರೋಗ ಪತ್ತೆ ಮತ್ತು ಉಚಿತ ಔಷಧಿ ಸೇವೆಗಳ ಕಾರ್ಯಕ್ರಮದ ಅಡಿಯಲ್ಲಿ ಸಮುದಾಯ ಆರೋಗ್ಯ ಕೇಂದ್ರ, ತಾಲೂಕು ಆಸ್ಪತ್ರೆ, ತಾಯಿ ಮತ್ತು ಮಕ್ಕಳ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ ಹಾಗೂ ಪುಟ 2

# ಕರ್ನಾಟಕಕ್ಕೆ ಮೋದಿ ಗಿಫ್ಟ್



## ಬಳ್ಳಾರಿಗೆ ಹೊಸ ನವೋದಯ ವಿದ್ಯಾಲಯ

**ಬೆಂಗಳೂರು:** ಕರ್ನಾಟಕಕ್ಕೆ ಮೂರು ಹೊಸ ಕೇಂದ್ರೀಯ ವಿದ್ಯಾಲಯಗಳನ್ನು ಘೋಷಣೆ ಮಾಡಿರುವ ಕೇಂದ್ರ ಸರ್ಕಾರ ಇದೀಗ ಮತ್ತೊಂದು ಉಡುಗೊರೆ ನೀಡಿದೆ. ಬಳ್ಳಾರಿಯಲ್ಲಿ ನವೋದಯ ವಿದ್ಯಾಲಯ ಸ್ಥಾಪಿಸಲು ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿಯು ಅನುಮೋದನೆ ನೀಡಿದೆ. ಇದರ ಜತೆಗೆ, ನವೋದಯ ಯೋಜನೆಯ ವ್ಯಾಪ್ತಿಗೆ ಒಳಪಡದ ವಿವಿಧ ಜಿಲ್ಲೆಗಳಲ್ಲಿ 28 ಹೊಸ ನವೋದಯ ವಿದ್ಯಾಲಯಗಳನ್ನು ಸ್ಥಾಪಿಸಲು ಅನುಮೋದನೆ ನೀಡಲಾಗಿದೆ.

2024-25 ರಿಂದ 2028-29 ರವರೆಗಿನ ಐದು ವರ್ಷಗಳ ಅವಧಿಯಲ್ಲಿ 28 ನವೋದಯ ವಿದ್ಯಾಲಯಗಳ ಸ್ಥಾಪನೆಗೆ ಒಟ್ಟು ಅಂದಾಜು ಹಣಕಾಸು ಅವಶ್ಯಕತೆ 2359.82 ಕೋಟಿ ರೂ. ಆಗಿದೆ. ಇದು 1944.19 ಕೋಟಿ ರೂ.ಗಳ ಬಂಡವಾಳ ವೆಚ್ಚ ಮತ್ತು 415.63 ಕೋಟಿರೂ. ಗಳ ಕಾರ್ಯಾಚರಣೆಯ ವೆಚ್ಚವನ್ನು ಒಳಗೊಂಡಿದೆ ಎಂದು ಆರ್ಥಿಕ



ವ್ಯವಹಾರಗಳ ಸಂಪುಟ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

ಯೋಜನೆಯ ಅನುಷ್ಠಾನಕ್ಕೆ 560 ವಿದ್ಯಾರ್ಥಿಗಳ ಸಾಮರ್ಥ್ಯದೊಂದಿಗೆ ಪೂರ್ಣ ಪ್ರಮಾಣದ ನವೋದಯ ವಿದ್ಯಾಲಯವನ್ನು ಸ್ಥಾಪಿಸಬೇಕಿದೆ. ಇದಕ್ಕಾಗಿ ಸಮಿತಿಯು ನಿರ್ಧರಿಸಿದ ನಿಯಮಗಳ ಪ್ರಕಾರ, ಆಡಳಿತ ರಚನೆಯಲ್ಲಿ ಹುದ್ದೆಗಳನ್ನು ರಚಿಸುವ ಅಗತ್ಯವಿದೆ. ಇದರಿಂದ 560 X 28 = 15680 ವಿದ್ಯಾರ್ಥಿಗಳು ಪ್ರಯೋಜನ ಪಡೆಯಲಿದ್ದಾರೆ.

**1316 ಜನರಿಗೆ ನೇರ ಖಾಯಂ ಉದ್ಯೋಗ:** ಚಾಲ್ತಿಯಲ್ಲಿರುವ ನಿಯಮಗಳ ಪ್ರಕಾರ, ಪೂರ್ಣ ಪ್ರಮಾಣದ ನವೋದಯ ವಿದ್ಯಾಲಯವು 47 ಜನರಿಗೆ ಉದ್ಯೋಗವನ್ನು ಒದಗಿಸುತ್ತದೆ ಮತ್ತು ಅದರ ಪ್ರಕಾರ ಮಂಜೂರಾದ 28 ನವೋದಯ ವಿದ್ಯಾಲಯಗಳು ಪುಟ 2

ಮುಡಾದ ಮತ್ತೊಂದು ಹಗರಣ ಬಯಲು

## ಸರ್ಕಾರದ ಬೊಕ್ಕಸಕ್ಕೆ 300 ಕೋಟಿ ರೂ. ನಷ್ಟ

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾಗಿರುವ ಹಗರಣ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿದೆ. ಮೈಸೂರಿನ ವಿಜಯನಗರದಲ್ಲಿ ಸುಮಾರು ಒಂದು ಕೋಟಿ ರೂಪಾಯಿಗೂ ಅಧಿಕ ಬೆಲೆಬಾಳುವ 23 ನಿವೇಶನಗಳನ್ನು ಕೇವಲ 3 ಸಾವಿರ ರೂ.ಗೆ ಮಾರಾಟ ಮಾಡಿರುವ ಆರೋಪ ಮುಡಾದ ವಿರುದ್ಧ ಕೇಳಿಬಂದಿದೆ. ಇದರಿಂದ ಸರ್ಕಾರದ ಬೊಕ್ಕಸಕ್ಕೆ 300 ಕೋಟಿ ರೂಪಾಯಿಗೂ ಅಧಿಕ ನಷ್ಟವಾಗಿದೆ ಎಂದು ಹೇಳಲಾಗುತ್ತಿದೆ. ಪುಟ 2



## ಸೆಂಟ್ರಲ್ ಜೈಲಿನಲ್ಲೇ ಕೈದಿಗಳ ಎಣ್ಣೆ ಪಾರ್ಟಿ

### ನಟೋರಿಯಸ್ ಕೈದಿಗಳ ವರ್ಗಾವಣೆ ಬೆನ್ನಲ್ಲೇ ವೀಡಿಯೋ ವೈರಲ್

**ಕಲಬುರಗಿ:** ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಕೈದಿಗಳಿಗೆ ರಾಜಾತಿಥ್ಯವೇ ನಡೆಯುತ್ತಿದೆ. ಜೈಲಿನಲ್ಲೇ ಕೈದಿಗಳು ಎಣ್ಣೆ ಪಾರ್ಟಿ ಮಾಡುತ್ತಿರುವ ವೀಡಿಯೋ ವೈರಲ್ ಆಗಿದ್ದು, ಜೈಲಿನ ಕರ್ಮಕಾಂಡ ಮತ್ತಷ್ಟು ಬಯಲಾಗಿದೆ.

ಶಂಕಿತ ಉಗ್ರ ಜುಲ್ಫಿಕರ್, ಶಿವಮೊಗ್ಗ ರೌಡಿಶೀಟರ್ ಬಚ್ಚನ್ ಸೇರಿ ಆರು ನಟೋರಿಯಸ್ ಕೈದಿಗಳ ಶಿಫ್ಟ್ ಬೆನ್ನಲ್ಲೇ ಜೈಲಿನಲ್ಲಿನ ಮತ್ತಷ್ಟು ವೀಡಿಯೋ ವೈರಲ್ ಆಗಿವೆ. 2 ತಿಂಗಳ ಹಿಂದಿನ ವೀಡಿಯೋ ಇದು ಎನ್ನಲಾಗಿದೆ.

ರಾಶಿ ರಾಶಿ ಸ್ಮಾರ್ಟ್‌ಫೋನ್‌ಗಳು, ಬೀಡಿ-ಸಿಗರೇಟ್ ಪ್ಯಾಕೇಟ್‌ಗಳನ್ನ ಒಂದೇಡೆ ಹಾಕಿರುವ ವೀಡಿಯೋ ಕೂಡ ವೈರಲ್ ಆಗಿದೆ.



ಜೈಲ್ ಅಧೀಕ್ಷಕಿಯನ್ನ ಟಾರ್ಗೆಟ್ ಮಾಡಿಕೊಂಡು ವೀಡಿಯೋ ರಿಲೀಸ್ ಮಾಡಲಾಗಿದೆ. ಜೈಲು ಮುಖ್ಯ ಅಧೀಕ್ಷಕಿಗೆ ಹಣ ನೀಡುವ ಕುರಿತು ಕೈದಿಗಳು ಮಾತುಕತೆ ನಡೆಸಿರುವುದು ಇದರಿಂದ ಬಹಿರಂಗಗೊಂಡಿದೆ.

ಅ.14 ರಂದು ಜೈಲು ಮುಖ್ಯ ಅಧೀಕ್ಷಕಿಯಾಗಿ ಡಾ.ಅನಿತಾ ಅವರು ಅಧಿಕಾರ ಸ್ವೀಕರಿಸಿದ್ದಾರೆ. ಅ.16 ರಿಂದ ಜೈಲಿನಲ್ಲಿ ಕಟ್ಟುನಿಟ್ಟಿನ ನಿಯಮ ಜಾರಿಗೆ ಜೈಲ್ ಸುಪರಿಂಟೆಂಡೆಂಟ್ ಮುಂದಾಗಿದ್ದರು.

ಅ.16 ದಿನಾಂಕ ಕಾಣುವಂತೆ ದಿನಪತ್ರಿಕೆಯಲ್ಲಿ ದಿನಾಂಕ ತೋರಿಸಿ ಹಣದ ಬಗ್ಗೆ ಮಾತುಕತೆ ನಡೆಸಲಾಗಿದೆ. ಅ.29 ರಂದು ರಾಶಿ ರಾಶಿ ಗುಟ್ಕಾ, ಬೀಡಿ, ಸಿಗರೇಟ್ ಗುಡ್ಡೆ ಹಾಕಿ ವೀಡಿಯೋ ಮಾಡಲಾಗಿದೆ. ಪುಟ 2

ಭಾರತದ ಮೇಲೆ ದಾಳಿ ಮುಂದುವರಿಸುತ್ತೇವೆ

## ಉಗ್ರ ಅಜರ್ ಭಾಷಣ

**ನವದೆಹಲಿ:** ನಿಷೇಧಿತ ಭಯೋತ್ಪಾದನಾ ಸಂಘಟನೆ ಜೈಶ್-ಎ-ಮೊಹಮ್ಮದ್ ಮುಖ್ಯಸ್ಥ ಹಾಗೂ 2011ರ ಸಂಸತ್ ದಾಳಿಯಂತಹ ಭಯೋತ್ಪಾದಕ ಕೃತ್ಯಗಳ ಮಾಸ್ಟರ್ ಮೈಂಡ್ ಉಗ್ರ ಮಸೂದ್ ಅಜರ್ ವಿರುದ್ಧ ಪಾಕಿಸ್ತಾನ ಕ್ರಮಕೈಗೊಳ್ಳಬೇಕು ಎಂದು ಭಾರತ ಒತ್ತಾಯಿಸಿದೆ.

ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದ ಬಹವಾಲ್ ಪುರದ ಇಸ್ಲಾಮಿಕ್ ಸೆಮಿನರಿಯಲ್ಲಿ ಅಜರ್ ಸಾರ್ವಜನಿಕ ಭಾಷಣ ಮಾಡಿದ್ದಾನೆ. 'ಭಾರತದ ಮೇಲೆ ದಾಳಿಯನ್ನು ಮುಂದುವರೆಸಲಾಗುವುದು' ಎಂದು ಭಾಷಣದಲ್ಲಿ ಪ್ರತಿಜ್ಞೆ ಮಾಡಿದ್ದಾನೆ. ಅಲ್ಲದೇ, ಪ್ರಧಾನಿ ನರೇಂದ್ರ ಮೋದಿಯವರ ಬಗ್ಗೆ ಅವಹೇಳನಕಾರಿ ಪದಗಳನ್ನು ಬಳಸಿದ್ದಾನೆ. ಆತನ ಭಾಷಣದ ವರದಿ ಆಧರಿಸಿ ಭಾರತ ಕ್ರಮಕ್ಕೆ ಆಗ್ರಹಿಸಿದೆ.



ಅಜರ್‌ನ ಭಾಷಣದ ವರದಿಗಳನ್ನು ಉಲ್ಲೇಖಿಸಿದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಇದು ನಿಜವಾಗಿದ್ದರೆ, ಗಡಿಯಾಚೆಗೆ ತನ್ನ ನೆಲದಿಂದ ಕಾರ್ಯನಿರ್ವಹಿಸುತ್ತಿರುವ ಭಯೋತ್ಪಾದಕ ಸಂಘಟನೆಗಳು ಮತ್ತು ಭಯೋತ್ಪಾದಕರನ್ನು ಒಳಗೊಂಡಿರುವ ಪಾಕಿಸ್ತಾನದ ಪುಟ 2

## ಯತ್ನಾಳ್‌ಗೆ ಸೈಲೆಂಟ್ ಟಾಸ್ಕ್ ಕೊಟ್ರಾ ಹೈಕಮಾಂಡ್?

**ಹುಬ್ಬಳ್ಳಿ:** ಇನ್ಮೇಲೆ ನಾನು ಸೈಲೆಂಟ್, ರಮೇಶ್ ಜಾರಕಿಹೊಳಿ ವೈಲೆಂಟ್ ಅಂತ ಮಾಜಿ ಸಚಿವ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ. ದೆಹಲಿಯಲ್ಲಿ ಬಿಜೆಪಿ ಹೈಕಮಾಂಡ್ ಭೇಟಿ ಮಾಡಿದ ಬಳಿಕ ಹುಬ್ಬಳ್ಳಿಯಲ್ಲಿ ಪ್ರತಿಕ್ರಿಯೆ ನೀಡಿದ ಅವರು, ನಾನು ಸದ್ಯಕ್ಕೆ ಸೈಲೆಂಟ್ ಆಗ್ತೇನೆ, ಆದ್ರೆ ಮುಂದೆ ಒಬ್ಬೊಬ್ಬರಾಗಿ ವೈಲೆಂಟ್ ಆಗ್ತಾ ಹೋಗ್ತೇವೆ. ಆ ರೀತಿಯ ಪ್ಲಾನ್ ಹಾಕಿಕೊಂಡಿದ್ದೇವೆ ಎಂದಿದ್ದಾರೆ.

ನನ್ನ ಮೇಲೆ ಹೈಕಮಾಂಡ್‌ಗೆ ಯಾವಾಗ್ಲೂ ಪ್ರೀತಿ ಇದೆ ಅಂತ ಯತ್ನಾಳ್ ಹೇಳಿದ್ದಾರೆ. ಯತ್ನಾಳ್‌ನನ್ನು ಮುಗಿಸುತ್ತೇನೆ ಅನ್ನೋರಿಂದ ಏನೂ ಆಗಲ್ಲ. ಯಾರಿಂದಲೂ ನನಗೆ ಏನು ಮಾಡಲು ಆಗಲ್ಲ. ಯಾರು ಯಾರು ಉತ್ತರ ಕೊಡ್ತಾರೋ ನೋಡೋಣ. ಎಲ್ಲರಿಗೂ ಉತ್ತರ ಕೊಡಲು ನಾನು ಸದಾ ಸಿದ್ದ ಅಂತ ವಿರೋಧಿಗಳಿಗೆ ಯತ್ನಾಳ್ ಟಾಂಗ್ ಕೊಟ್ರು.

**ದೆಹಲಿ ನಾಯಕರು ನನಗೆ ಶಹಬಾಶ್ ಗಿರಿ ಕೊಟ್ಟಿದ್ದಾರೆ:** ನಾನು ಅಂಜಿಲ್ಲ, ಅಳುಕಿಲ್ಲ, ಮುಖ ಸಪ್ಪಗೆ ಮಾಡಿಲ್ಲ.



ದೆಹಲಿಯಿಂದ ಹಸನ್ಮುಖಿಯಾಗಿ ಬರುತ್ತಿದ್ದೇನೆ ಅನ್ನೋದನ್ನ ಅರ್ಥ ಮಾಡಿಕೊಳ್ಳಿ. ಅಲ್ಲಿ ನನಗೆ ಯಾರೂ ತರಾಟೆ ತೆಗೆದುಕೊಂಡಿಲ್ಲ. ಬದಲಾಗಿ ದೆಹಲಿ ನಾಯಕರು ನನಗೆ ಶಹಬಾಶ್ ಗಿರಿ ಕೊಟ್ಟಿದ್ದಾರೆ ಅಂತ ಯತ್ನಾಳ್ ಹೇಳಿದ್ರು.

**ಹೈಕಮಾಂಡ್ ನೋಟಿಸ್‌ಗೆ ಉತ್ತರ ಕೊಟ್ಟಿದ್ದೇನೆ:** ಹೈಕಮಾಂಡ್ ಕೊಟ್ಟ ನೋಟಿಸ್‌ಗೆ ನಾನು ಉತ್ತರ ಕೊಟ್ಟಿದ್ದೇನೆ.

ಮಂಡ್ಯದಲ್ಲಿ ಮತ್ತೆ ಮಾರ್ದನಿಸುತ್ತಿದೆ

## ಜೈ ಶ್ರೀರಾಮ್ ಘೋಷಣೆ!

**ಮಂಡ್ಯ:** ಅಯೋಧ್ಯೆಯಲ್ಲಿ ಶ್ರೀರಾಮನ ಮಂದಿರ ಕೆಡವಿ ಬಾಬ್ರಿ ಮಸೀದಿ ನಿರ್ಮಿಸಿದಂತೆ, ಟಿಪ್ಪು ಸುಲ್ತಾನ್ ಆಳ್ವಿಕೆಯಲ್ಲಿ ಶ್ರೀರಂಗಪಟ್ಟಣದ ಮೂಡಲ ಬಾಗಿಲು ಆಂಜನೇಯ ಸ್ವಾಮಿ ದೇವಾಲಯವನ್ನು ಧ್ವಂಸಗೊಳಿಸಿ ವಿವಾದಿತ ಜಾಮಿಯಾ ಮಸೀದಿ ನಿರ್ಮಾಣ ಮಾಡಲಾಗಿದೆ ಎನ್ನುವ ಆರೋಪ ಆಗಾಗ ಕೇಳಿಬರುತ್ತಲೇ ಇರುತ್ತದೆ. ಆಂಜನೇಯನಿಗೆ ಮೂಲ ಸ್ಥಳದಲ್ಲೇ ಮಂದಿರ ನಿರ್ಮಾಣದ ಸಂಕಲ್ಪದೊಂದಿಗೆ ನಿನ್ನೆಯಿಂದ ಹನುಮ ಮಾಲಾಧಾರಿಗಳಾಗಿ ಭಜರಂಗಿಗಳ ಹನುಮ ಜಪ ಆರಂಭಿಸಿದ್ದಾರೆ.

**ಡಿಸೆಂಬರ್ 15 ಕ್ಕೆ ಹನುಮಮಾಲಾ ಧಾರಿಗಳ ಸಂಕೀರ್ತನಾ ಯಾತ್ರೆ:** ಕಳೆದ ಒಂದು ದಶಕದಿಂದ ಶ್ರೀರಂಗಪಟ್ಟಣದಲ್ಲಿ ಹನುಮ ಮಾಲಾಧಾರಿಗಳ ಸಂಕೀರ್ತನಾ ಯಾತ್ರೆ ನಡೆಯುತ್ತಿದ್ದು, ಈ ಬಾರಿ ಡಿಸೆಂಬರ್ 15 ಕ್ಕೆ ಹನುಮಮಾಲಾ ಧಾರಿಗಳ ಸಂಕೀರ್ತನಾ ಯಾತ್ರೆ ನಡೆಸಲು ನಿರ್ಧರಿಸಲಾಗಿದೆ.



ಇದರಿಂದ ಗಲಭೆಗಳು ನಡೆಯದಂತೆ ಪೊಲೀಸರು ಈಗಿನಿಂದಲೇ ಹೈ ಅಲರ್ಟ್ ಆಗಿದ್ದಾರೆ.

ಮೂಡಲ ಬಾಗಿಲು ಆಂಜನೇಯನ ಮೂಲ ದೇಗುಲ ಸ್ಥಳದಲ್ಲಿ ದೇಗುಲ ನಿರ್ಮಿಸುವ ಸಂಕಲ್ಪದೊಂದಿಗೆ ನಿನ್ನೆಯಿಂದ ಹನುಮ ಮಾಲಾಧಾರಿಗಳಾಗಿ ಭಜರಂಗಿಗಳ ಹನುಮ ಜಪ ಆರಂಭಿಸಿದ್ದಾರೆ. ಪುಟ 2

ಮತ್ತೆ ಗಗನಕ್ಕೇರಿದ ಈರುಳ್ಳಿ, ಬೆಳ್ಳುಳ್ಳಿ ಬೆಲೆ

## ದರ ಏರಿಕೆ ಕಂಡು ಗೃಹಿಣಿಯರು ಕಂಗಾಲು

**ಬೆಂಗಳೂರು:** ಬೆಂಗಳೂರಿನಲ್ಲಿ ಈರುಳ್ಳಿ, ಬೆಳ್ಳುಳ್ಳಿ ಬೆಲೆ ಮತ್ತೆ ಗಗನಕ್ಕೇರಿದೆ. ರಿಟೇಲ್‌ನಲ್ಲಿ ಬೆಳ್ಳುಳ್ಳಿ ಕೆಜಿಗೆ 500 ರಿಂದ 550 ರೂಪಾಯಿ ಇದ್ದರೆ, ಎಪಿಎಂಸಿ ಮಾರುಕಟ್ಟೆಯಲ್ಲಿ 400 ರಿಂದ 450 ರೂಪಾಯಿಗೆ ಮಾರಾಟವಾಗುತ್ತಿದೆ. ಈರುಳ್ಳಿ ರಿಟೇಲ್‌ನಲ್ಲಿ 70 ರಿಂದ 80 ರೂಪಾಯಿಗೆ ಮಾರಾಟವಾಗುತ್ತಿದ್ದರೆ, ಎಪಿಎಂಸಿಯಲ್ಲಿ ಹೋಲ್‌ಸೇಲ್ ನಲ್ಲಿ 50 ರಿಂದ 60 ರೂಪಾಯಿಗೆ ಮಾರಾಟವಾಗುತ್ತಿದೆ.

ಈರುಳ್ಳಿ ಬೆಲೆ ನೂರರ ಗಡಿ ತಲುಪುವ ಸಾಧ್ಯತೆ ಇದೆ. ಈಗಾಗಲೇ ಎಪಿಎಂಸಿ ಮಾರುಕಟ್ಟೆಯಲ್ಲಿ ಸಾಧಾರಣ ಈರುಳ್ಳಿ ಕೆಜಿಗೆ 40 ರಿಂದ 50 ರೂಪಾಯಿಗೆ ಮಾರಾಟವಾಗುತ್ತಿದ್ದರೆ, ಇತ್ತ ಉತ್ತಮ ಗುಣಮಟ್ಟದ ಈರುಳ್ಳಿ ಕೆಜಿಗೆ 60 ರಿಂದ 70 ರೂಪಾಯಿಗೆ ಮಾರಾಟವಾಗುತ್ತದೆ.



ಸಣ್ಣಪುಟ್ಟ ಮಾರುಕಟ್ಟೆಯಲ್ಲಿ, ರಸ್ತೆಬದಿಯಲ್ಲಿ ಸಾಮಾನ್ಯ ಈರುಳ್ಳಿ ಕೆಜಿಗೆ 50 ರಿಂದ 60 ರೂಪಾಯಿಗೆ ಮಾರಾಟವಾಗುತ್ತಿದೆ. ಉತ್ತಮ ಗುಣಮಟ್ಟದ ಈರುಳ್ಳಿ ಕೆಜಿಗೆ 70 ರಿಂದ 80 ರೂಪಾಯಿಗೆ ಮಾರಾಟ ಮಾಡಲಾಗುತ್ತಿದೆ.

ಬೆಳ್ಳುಳ್ಳಿ ದರ ಈಗಾಗಲೇ ಅರ್ಧಶತಕ ಬಾರಿಸಿ ಮುನ್ನುಗ್ಗುತ್ತಿದೆ. ಎಪಿಎಂಸಿಯಲ್ಲಿ ಸಾಮಾನ್ಯ ಬೆಳ್ಳುಳ್ಳಿಗೆ ಪುಟ 2

# ಹೋಟೆಲ್ ಬಾಣಸಿಗ ಭೀಕರ ಹತ್ಯೆ




**ಉಡುಪಿ:** ಹೋಟೆಲ್ ಕಾರ್ಮಿಕರೊಬ್ಬರನ್ನು ಬಿಯರ್ ಬಾಟಲಿ ಗಾಜಿನಿಂದ ಕುತ್ತಿಗೆ ಕೊಯ್ದು ಕೊಲೆ ಮಾಡಿರುವ ಘಟನೆ ಉಡುಪಿಯಲ್ಲಿ ನಡೆದಿದೆ.

» **ಬಿಯರ್ ಬಾಟಲಿ ಗಾಜಿನಿಂದ ಕತ್ತು ಸೀಳಿ ಕೊಲೆ**

ಮಣಿಪಾಲ ಅನಂತ ಕಲ್ಯಾಣನಗರ ಸಮೀಪ ಮೃತದೇಹ ಬೆಳಗ್ಗೆ ಕಂಡುಬಂದಿದ್ದು, ಮೃತರನ್ನು ಕೇರಳ ಕಾಸರಗೋಡಿನ ಶ್ರೀಧರ್ ನಾಯಕ ಎಂದು ಗುರುತಿಸಲಾಗಿದೆ. ಮಣಿಪಾಲದ ಹೋಟೆಲ್‌ನಲ್ಲಿ ಕೆಲಸ ಮಾಡಿಕೊಂಡಿದ್ದು, ಬೆಳಗ್ಗೆ ಬಾಡಿಗೆ ಮನೆಯಿಂದ ಹೋಟೆಲ್‌ಗೆ ಹೋಗುತ್ತಿದ್ದರು ಎಂಬ ಮಾಹಿತಿಯಿದೆ. ದುಷ್ಕರ್ಮಿಗಳು ಕುತ್ತಿಗೆಯನ್ನು ಬಿಯರ್ ಬಾಟಲಿಯಿಂದ ಕೊಯ್ದು ಹತ್ಯೆ ಮಾಡಿರುವುದು ಎಂದು ಶಂಕಿಸಲಾಗಿದೆ. ಕೊಲೆ ಯಾವ ಕಾರಣಕ್ಕೆ ನಡೆದಿದೆ ಮತ್ತು ಯಾರು ಮಾಡಿದ್ದಾರೆ ಎಂಬುದು ಇನ್ನಷ್ಟೇ ತಿಳಿದು ಬರಬೇಕಾಗಿದೆ. ಸ್ಥಳಕ್ಕೆ ಉಡುಪಿ ಎಸ್‌ಪಿ ಡಾ. ಕೆ.ಅರುಣ್ ಕುಮಾರ್ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಮಣಿಪಾಲ ಇನ್ ಸ್ಪೆಕ್ಟರ್ ದೇವರಾಜ್ ನೇತೃತ್ವದಲ್ಲಿ ತನಿಖೆ ನಡೆಸುತ್ತಿದ್ದು, ಆರೋಪಿಗಳ ಪತ್ತೆಗೆ ಬೆನ್ನುಬಿದ್ದಿದ್ದಾರೆ. ಸ್ಥಳೀಯರ, ಪರಿಚಯಸ್ಥರ ವಿಚಾರಣೆ ನಡೆಯುತ್ತಿದೆ.

# ಬೆಂಗಳೂರಲ್ಲಿ ಪುಡಿ ರೌಡಿಗಳ ಅಟ್ಟಹಾಸ

**ಬೆಂಗಳೂರು:** ರಾಜಧಾನಿಯಲ್ಲಿ ಪುಡಿ ರೌಡಿಗಳ ಅಟ್ಟಹಾಸ ಮಿತಿ ಮೀರಿದೆ. ಜಾಗದ ವಿಚಾರಕ್ಕೆ ಮನೆ ಮಾಲೀಕನಿಗೆ ಥಳಿಸಿದ್ದಲ್ಲದೇ, ಜೆಸಿಬಿ ತಂದು ಮನೆಯ ಗೋಡೆ ಧ್ವಂಸಗೊಳಿಸಿರುವ ಘಟನೆ ನಡೆದಿದೆ.



» **ಜೆಸಿಬಿ ಮೂಲಕ ಮನೆ ಗೋಡೆ ಧ್ವಂಸ**

ವೈಟ್‌ಫೀಲ್ಡ್‌ನಲ್ಲಿ 50ಕ್ಕೂ ಹೆಚ್ಚು ಪುಂಡರು ದಾಳಿ ನಡೆಸಿದ್ದಾರೆ. ಜಾಗದ ಮಾಲೀಕ ವಿಶಾಲ್ ಬಾಳಿಗ ಮನೆ ಮೇಲೆ ದಾಳಿ ನಡೆದಿದೆ. ಗೋಪಾಲ್ ಜವಹಾರ್ ಎಂಬಾತನ ವಿರುದ್ಧ ಆರೋಪ ಕೇಳಿಬಂದಿದೆ. ಮನೆ ಮಾಲೀಕರ ದೂರಿನನ್ವಯ ಎಫ್‌ಐಆರ್ ದಾಖಲಾಗಿದೆ.

**ಘಟನೆ ಏನು?:** 50ಕ್ಕೂ ಹೆಚ್ಚು ಪುಂಡರು ಬೆಳಗ್ಗೆ 9:30ರ ಹೊತ್ತಿಗೆ ಗೋಪಾಲ್ ಎಂಬವರ ಮನೆಗೆ ಏಕಾಏಕಿ ನುಗ್ಗಿ ದಾಂಧಲೆ ಮಾಡಿದ್ದಾರೆ. 2 ಜೆಸಿಬಿ ಬಳಸಿ ಮನೆಯ ಗೋಡೆಗೆ ಗುದ್ದಿಸಿ ಧ್ವಂಸ ಮಾಡಿದ್ದಾರೆ. ಜಾಗದ ವಿಚಾರಕ್ಕೆ ಈ ಗಲಾಟೆ ನಡೆದಿದೆ. ಹಲ್ಲೆ ಮಾಡುವ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಸ್ಥಳೀಯರು ಕೂಡ ದೃಶ್ಯವನ್ನು ಮೊಬೈಲ್ ಗಳಲ್ಲಿ ಸೆರೆ ಹಿಡಿದಿದ್ದಾರೆ. ಕೊನೆಗೂ ಮನೆ ಮಾಲೀಕರು ನೀಡಿದ ದೂರಿನನ್ವಯ ಎಫ್‌ಐಆರ್ ದಾಖಲಾಗಿದೆ.

## ಮುಡಾದ ಮತ್ತೊಂದು ಅಕ್ರಮ ಬಯಲು

# ಕ್ರಯ ಪತ್ರ ಆಗುವ ಮುನ್ನವೇ ಸೇಲ್ ಅಗ್ರಿಮೆಂಟ್?!

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಹಗರಣ ಕರ್ನಾಟಕದಲ್ಲಿ ಸಾಕಷ್ಟು ಸದ್ದು ಮಾಡಿದೆ. ಈ ಹಗರಣ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಉರುಳಾಗಿ ಪರಿಣಮಿಸಿದೆ. ಇದೀಗ ಮುಡಾ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾಗಿರುವ ಮತ್ತೊಂದು ಅಕ್ರಮ ಬಯಲಾಗಿದೆ. ಕ್ರಯ ಪತ್ರ ಮುನ್ನವೇ ಸೇಲ್ ಅಗ್ರಿಮೆಂಟ್ ಮಾಡಿಕೊಟ್ಟಿರುವ ಆರೋಪ ಕೇಳಿಬಂದಿದೆ.



**ಏನಿದು ಪ್ರಕರಣ:** ಚಾಮುಂಡಿ ನಗರ ಸರ್ವೋದಯ ಸಂಘದ ಸದಸ್ಯರು 17 ಎಕರೆ ಪ್ರದೇಶದಲ್ಲಿನ 48 ನಿವೇಶನಗಳು ನಮ್ಮದು ಎಂದು ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸುತ್ತಾರೆ. ಆದರೆ, ಮುಡಾ ಅಧಿಕಾರಿಗಳು ಈ 17 ಎಕರೆ ಪ್ರದೇಶಗಳನ್ನು ರೈತರಿಂದ ನೇರವಾಗಿ ನಾವು ಖರೀದಿಸಿದ್ದೇವೆ ಎಂದು ನ್ಯಾಯಾಲಯಕ್ಕೆ ತಿಳಿಸುತ್ತಾರೆ. ಕೊನೆಗೆ ನ್ಯಾಯಾಲಯ ಮಾನವೀಯ ದೃಷ್ಟಿಯಿಂದ ಸಂಘದ ಸದಸ್ಯರನ್ನು ಪರಿಗಣಿಸಿ, ಈ ಬಗ್ಗೆ ಸರ್ಕಾರದೊಂದಿಗೆ ಚರ್ಚಿಸಿ ಎಂದು ಮೂಡಾಗೆ ಸೂಚನೆ ನೀಡುತ್ತದೆ.

ಬಳಿಕ, ಮುಡಾ ಅಧಿಕಾರಿಗಳು ಚಾಮುಂಡಿ ನಗರ ಸರ್ವೋದಯ ಸಂಘದ ಸದಸ್ಯರಿಗೆ ನಿವೇಶನ ನೀಡಲು ನಿರ್ಧರಿಸುತ್ತದೆ. ಅದರಂತೆ ಮುಡಾ ಸಂಘದ ಸದಸ್ಯರ ಹೆಸರಿಗೆ ನಿವೇಶನಗಳ ಕ್ರಯ ಪತ್ರ ಮಾಡಿಕೊಡುತ್ತದೆ. ಆದರೆ, ಸಂಘದ ಸದಸ್ಯರು ಕ್ರಯ ಪತ್ರ ಆಗುವ ಒಂದು ತಿಂಗಳು ಮುನ್ನವೇ ಇನ್ನೊಬ್ಬರಿಗೆ ಸೇಲ್ ಅಗ್ರಿಮೆಂಟ್ ಕೊಟ್ಟಿದ್ದಾರೆ.

**ಕೇಸ್ ನಂ1:** ಸೂರ್ಯಕುಮಾರಿ ಎಂಬುವರ ಹೆಸರಿಗೆ 2023ರ ನವೆಂಬರ್ 29 ರಂದು ಕ್ರಯ ಪತ್ರ ಮಾಡಿಕೊಡಲಾಗುತ್ತದೆ. ಮುಡಾ ನಿವೇಶನ ಸಂಖ್ಯೆ 42ನ್ನು ಕ್ರಯ ಮಾಡಿಕೊಟ್ಟಿದೆ. ಆದರೆ, ಸೂರ್ಯಕುಮಾರಿ ಕ್ರಯ ಪತ್ರ ಆಗುವ ಮುನ್ನವೇ ಅಂದರೆ 2023ರ ಅಕ್ಟೋಬರ್ 13 ರಂದು ನಿವೇಶನವನ್ನು ವಿನೋದ್ ಕುಮಾರ್ ಎಂಬುವರಿಗೆ ಸೇಲ್ ಅಗ್ರಿಮೆಂಟ್ ಮಾಡಿಕೊಟ್ಟಿದ್ದಾರೆ.

**ಕೇಸ್ ನಂ 2:** ಎ.ಫ್ರಾನ್ಸಿಸ್ ಎಂಬುವರಿಗೆ 2023ರ ಡಿಸೆಂಬರ್ 15 ರಂದು ಮುಡಾ ನಿವೇಶನ ಸಂಖ್ಯೆ 128ನ್ನು ಕ್ರಯ ಮಾಡಿಕೊಟ್ಟಿದೆ. ಆದರೆ, ಕ್ರಯ ಪತ್ರ ಆಗುವ ಮುನ್ನವೇ ಅಂದರೆ 2023ರ ಡಿಸೆಂಬರ್ 1 ರಂದು ಮುಂಜುನಾಥ್ ಎಂಬುವರಿಗೆ ಸೇಲ್ ಅಗ್ರಿಮೆಂಟ್ ಮಾಡಿಕೊಡಲಾಗಿದೆ.

**ಕೇಸ್ ನಂ3:** ರತ್ನ ಎಂಬುವರಿಗೆ 2023ರ ಡಿಸೆಂಬರ್ 15 ರಂದು ಮುಡಾ ನಿವೇಶನ ಸಂಖ್ಯೆ 13ನ್ನು ಕ್ರಯ ಮಾಡಿಕೊಟ್ಟಿದೆ. ಆದರೆ, ಕ್ರಯ ಪತ್ರ ಆಗುವ ಮುನ್ನವೇ ಅಂದರೆ 2023ರ ಡಿಸೆಂಬರ್ 1 ರಂದೇ ಮಂಜುನಾಥ್ ಎಂಬುವರಿಗೆ ಸೇಲ್ ಅಗ್ರಿಮೆಂಟ್ ಮಾಡಿಕೊಡಲಾಗಿದೆ.

**ಕೇಸ್ ನಂ4:** ಶಿವಮ್ಮ ಎಂಬುವರಿಗೆ 2023ರ ಡಿಸೆಂಬರ್ 15 ರಂದು ಮುಡಾ ನಿವೇಶನ ಸಂಖ್ಯೆ 17ನ್ನು ಕ್ರಯ ಮಾಡಿಕೊಟ್ಟಿದೆ. ಆದರೆ, ಕ್ರಯ ಪತ್ರ ಆಗುವ ಮುನ್ನವೇ ಅಂದರೆ 2023 ಡಿಸೆಂಬರ್ 1 ರಂದೇ ಮಂಜುನಾಥ್ ಎಂಬುವರಿಗೆ ಭೂಮಿ ಸೇಲ್ ಅಗ್ರಿಮೆಂಟ್ ಮಾಡಿಕೊಡಲಾಗಿದೆ.

**ಕೇಸ್ ನಂ 5:** ಮುಕುಂದ್ ಎಂಬುವರಿಗೆ 2023ರ ಡಿಸೆಂಬರ್ 15 ರಂದು ಮುಡಾ ನಿವೇಶನ ಸಂಖ್ಯೆ 22ನ್ನು ಮುಡಾ ಕ್ರಯ ಮಾಡಿಕೊಟ್ಟಿದೆ. ಆದರೆ, ಕ್ರಯ ಪತ್ರ ಆಗುವ ಮುನ್ನವೇ ಮಂಜುನಾಥ್ ಎಂಬುವರಿಗೆ ಸೇಲ್ ಅಗ್ರಿಮೆಂಟ್ ಮಾಡಿಕೊಡಲಾಗಿದೆ.

ನಾಲ್ಕು ನಿವೇಶನಗಳ ಸೇಲ್ ಅಗ್ರಿಮೆಂಟ್ ಪಡೆದ ಮಂಜುನಾಥ್ ಅಲಿಯಾಸ್ ಕಾರ್ತಿಕ ಬಡಾವಣೆ ಮಂಜುನಾಥ್ 50:50 ಅನುಪಾತದ ಮುಡಾ ಕೇಸ್‌ನಲ್ಲಿ ಇಡಿ ತನಿಖೆ ಎದುರಿಸುತ್ತಿದ್ದಾರೆ. ಹೀಗೆ ತಮ್ಮ ಹೆಸರಿಗೆ ಕ್ರಯ, ಖಾತೆ ಆಗದೆ ಸಂಘದ ಸದಸ್ಯರು ಇನ್ನೊಬ್ಬರಿಗೆ ಭೂಮಿ ಮಾರಿದರಾ ಎಂಬ ಅನುಮಾನ ವ್ಯಕ್ತವಾಗಿದೆ. ಆಥವಾ ಭೂಮಿ ಕಬಳಿಸುವ ಸಂಚಿನಿಂದಲೇ ಸೇಲ್ ಅಗ್ರಿಮೆಂಟ್ ಮಾಡಿಕೊಂಡರಾ ಭೂಗಳ್ಳರು ಎಂಬ ಅನುಮಾನ ವ್ಯಕ್ತವಾಗಿದೆ.

## ನಿಧಿ ಆಸೆಗೆ ಸೊಸೆಯನ್ನೇ ಬಲಿ ಕೊಡಲು ಮುಂದಾಗಿದ್ರಾ?

# ಅತ್ತೆ, ಮಾವ ಬಿಚ್ಚಿಟ್ರು ಶಾಕಿಂಗ್ ರಹಸ್ಯ!



**ಬಾಗಲಕೋಟೆ:** ಜನರು ನಿಧಿ ಆಸೆಗೆ ಎಂತಾ ಕೆಲಸಕ್ಕೂ ಮುಂದಾಗೋದನ್ನ ನಾವು ನೋಡಿದ್ದೇವೆ. ಹಲವು ದೇವಾಲಯಗಳು, ಮೂರ್ತಿಗಳು, ಪ್ರಮುಖ ಶಾಸನಗಳಂತಾ ಐತಿಹಾಸಿಕ ಸ್ಥಳಗಳನ್ನು ಜನರು ನಿಧಿಯಾಸೆಗೆ ಬಲಿ ಕೊಡುವುದನ್ನ ನಾವು ನೋಡಿದ್ದ. ಕಲವರು ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿ ಪ್ರಾಣಿ ಬಲಿ, ನರ ಬಲಿ ಕೊಟ್ಟಂತ ಕೆಲವು ಉದಾಹರಣೆಗಳು ನಮ್ಮ ಮುಂದಿವೆ. ಈಗ ಅಂತದ್ದೇ ಒಂದು ಅನುಮಾನ ಮೂಡಿದ್ದು, ಬಾಗಲಕೋಟೆಯಲ್ಲಿ ನಿಧಿಯಾಸೆಗೆ ಅತ್ತೆ, ಮಾವ ಸೇರಿ ಸೊಸೆಯನ್ನೇ ಬಲಿಕೊಡಲು ಮುಂದಾಗಿದ್ರಾ ಅನ್ನೋ ಪ್ರಶ್ನೆ ಮೂಡಿದೆ.

ಬಾಗಲಕೋಟೆ ಜಿಲ್ಲೆ ಬಾದಾಮಿ ತಾಲೂಕಿನ ಯಂಡಿಗೇರಿ ಗ್ರಾಮದಲ್ಲಿ ಅತ್ತೆ ಮತ್ತು ಮಾವ ಸೇರಿಕೊಂಡು ನಿಧಿ ಆಸೆಗೆ ತಮ್ಮ ಸೊಸೆಯನ್ನೇ ಬಲಿ ಕೊಡಲು ಮುಂದಾಗಿದ್ದರು ಎಂಬ ಆರೋಪ ಕೇಳಿಬಂದಿದೆ. ಸ್ಥಳಕ್ಕೆ 112 ಪೊಲೀಸರು ಭೇಟಿ ನೀಡಿದ್ದು ಘಟನೆ ಬಗ್ಗೆ ಪರಿಶೀಲನೆ ನಡೆಸಿದ್ದಾರೆ.

**ಮನೆಲ್ಲೇ ಗುಂಡಿ ತೋಡಿ ಸಮಾಧಿಗೆ ಸ್ಕೆಚ್?:** ಯಂಡಿಗೇರಿ ಗ್ರಾಮದಲ್ಲಿ ತೋಟದ ಮನೆಯಲ್ಲಿ ಸೊಸೆ ಮುತ್ತಕ್ಕ ಪೂಜಾರ ಎಂಬುವವರನ್ನು ಬಲಿ ಕೊಡಲು ಸ್ಕೆಚ್ ಹಾಕಲಾಗಿತ್ತು ಎಂದು ಆರೋಪಿಸಲಾಗಿದೆ. ಮಾವ ರಾಮಣ್ಣ ಪೂಜಾರ, ಅತ್ತೆ ಪಾರ್ವತೆವ್ವ ಪೂಜಾರ ಮತ್ತು ನಾದಿನಿ ದೊಡ್ಡಮ್ಮ ಎಂಬುವವರು ಬಲಿಗೆ ಪ್ಲ್ಯಾನ್ ಮಾಡಿದ್ದರು ಎನ್ನಲಾಗಿದೆ. ತೋಟದ ಮನೆಯಲ್ಲಿ ಸುಮಾರು 5 ಅಡಿ ಆಳ ಮತ್ತು ಐದು ಅಡಿ ಅಗಲದ ಗುಂಡಿ ತೋಡಿ ಮುತ್ತಕ್ಕ ಪೂಜಾರ ಅವರನ್ನು ಜೀವಂತ ಸಮಾಧಿ ಮಾಡಲು ಸ್ಕೆಚ್ ಹಾಕಿದ್ದರು ಎನ್ನಲಾಗಿದೆ.

**ಘಟನೆ ಬೆಳಕಿಗೆ ಬಂದಿದ್ದೇಗೆ?:** ಮುತ್ತಕ್ಕ ಪೂಜಾರ ಅವರ ಸಹೋದರ ನಾಗರೆಡ್ಡಿ ಈ ಆರೋಪ ಮಾಡಿದ್ದು, ಅತ್ತೆ, ಮಾವ ಮತ್ತು ನಾದಿನಿ ಎಲ್ಲರೂ ಸೇರಿಕೊಂಡು ತನ್ನ ಸಹೋದರಿಯನ್ನು ಬಲಿ ಕೊಡಲು ಮುಂದಾಗಿದ್ದರು ಎಂದು ಆರೋಪಿಸಿದ್ದಾರೆ. ಬಲಿ ಕೊಡಲು ಮನೆಯಲ್ಲಿ ತಗ್ಗು ತೋಡಿದ್ದರು ಆದರೆ ಮುತ್ತಕ್ಕ ಅವರ ಸಂಬಂಧಿಕರು ಊರಿಗೆ ಬರುವ ವಿಚಾರ ತಿಳಿದು ಆ ಗುಂಡಿಯನ್ನು ಮುಚ್ಚಿದ್ದಾರೆ ಎಂದು ಹೇಳಲಾಗಿದೆ.

ಘಟನೆ ಕುರಿತು ಪ್ರತಿಕ್ರಿಯೆ ನೀಡಿರುವ ರಾಮಣ್ಣ ಪೂಜಾರ ಮತ್ತು ಅತ್ತೆ ಪಾರ್ವತೆವ್ವ ಈ ಆರೋಪವನ್ನು ತಳ್ಳಿಹಾಕಿದ್ದಾರೆ. ನಮ್ಮ ಇಬ್ಬರೂ ಗಂಡು ಮಕ್ಕಳು ,ಮೃತಪಟ್ಟಿದ್ದು ಈ ಬಗ್ಗೆ ವಿಚಾರ ಮಾಡಿದಾಗ ಯಾರೋ ವಾಮಾಚಾರ ಮಾಡಿ ಮನೆಯಲ್ಲಿ ಒಂದು ಗೊಂಬೆಯನ್ನು ಊತುಹಾಕಿದ್ದಾರೆ ಎಂದು ಹೇಳಿದ್ರು. ಅದನ್ನು ತೆಗೆಯೋದಕ್ಕಾಗಿ ಗುಂಡಿ ತೋಡಲಾಗಿತ್ತು. ಅಮಾವಾಸ್ಯೆ ದಿನ ಗುಂಡಿ ತೆಗೆದು ನೋಡಿದಾಗ ಆ ಜಾಗದಲ್ಲಿ ಒಂದು ಗೊಂಬೆ ಸಿಕ್ಕಿದ್ದು ಅದನ್ನು ಸುಟ್ಟುಹಾಕಿದ್ದೇವೆ. ನಮಗೆ ಯಾವುದೇ ನಿಧಿ ಆಸೆ ಇಲ್ಲ ಮತ್ತು ಸೊಸೆಯನ್ನು ಬಲಿ ಕೊಡುವ ಉದ್ದೇಶ ಇಲ್ಲ. ಇದು ಸುಳ್ಳು ಆರೋಪ ಎಂದು ಸೊಸೆ ಮುತ್ತಕ್ಕ ಪೂಜಾರ ಅವರ ಆರೋಪದ ಕುರಿತು ಸ್ಪಷ್ಟನೆ ನೀಡಿದ್ದಾರೆ. ಇನ್ನು ವಿಚಾರ ತಿಳಿದ 112 ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ನನಗೆ ಸಚಿವ ಸ್ಥಾನ ಕೊಡಲೇಬೇಕು

## ಎಸ್‌ಎನ್ ಸುಬ್ಬಾರೆಡ್ಡಿ ಆಗ್ರಹ

**ಚಿಕ್ಕಬಳ್ಳಾಪುರ:** ನನಗೆ ಸಚಿವ ಸ್ಥಾನ ಕೊಡಲೇಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಕ್ಷೇತ್ರದ ಶಾಸಕ ಎಸ್ ಎನ್ ಸುಬ್ಬಾರೆಡ್ಡಿ ಆಗ್ರಹಿಸಿದ್ದಾರೆ. ಸಚಿವ ಸ್ಥಾನ ಕೇಳಲು ನನಗೆ ಹಕ್ಕಿದೆ. ನನಗೆ ಸಚಿವ ಸ್ಥಾನ ಬೇಕು. ಅಪರೇಷನ್ ಕಮಲದಲ್ಲಿ ಬಿಜೆಪಿಯವರು ನನಗೆ ಸಚಿವ ಸ್ಥಾನದ ಆಫರ್ ಕೊಟ್ಟಿದ್ದರು. ಆದರೆ ನಾನು ಕಾಂಗ್ರೆಸ್ ಪಕ್ಷಕ್ಕೆ ನಿಷ್ಠೆಯಿಂದ ಇದ್ದೆ. ಮುಂದೆ ಸಚಿವ ಸಂಪುಟ ಪುನರಚನೆ ವೇಳೆ ನನಗೆ ಸಚಿವ ಸ್ಥಾನ ಕೊಡಬೇಕು ಎಂದು ಅವರು ಹೇಳಿದ್ದಾರೆ.



ನಾನು ಹಿರಿಯ ಶಾಸಕ. ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ನನಗೆ ಸಂಪುಟದಲ್ಲಿ ಸ್ಥಾನ ಕೊಡುವ ಭರವಸೆ ಇದೆ. ನಾನು ಎರಡು ಬಾರಿ ನಿಗಮ ಮಂಡಳಿ ತಿರಸ್ಕಾರ ಮಾಡಿದ್ದೇನೆ. ಚಿಕ್ಕಬಳ್ಳಾಪುರ, ಶಿಡ್ಲಘಟ್ಟ, ಗೌರಿಬಿದನೂರು, ಚಿಂತಾಮಣಿ ಕ್ಷೇತ್ರದ ಎಲ್ಲರೂ ಸಚಿವರಾಗಿದ್ದಾರೆ. ಬಾಗೇಪಲ್ಲಿ ಯಿಂದ ಇದುವರೆಗೂ ಯಾರೂ ಕೂಡ ಸಚಿವರಾಗಿಲ್ಲ, ಹಾಗಾಗಿ ನನಗೆ ಸಚಿವ ಸ್ಥಾನ ಕೊಡಬೇಕು ಎಂದು ಬೇಡಿಕೆ ಇಡುತ್ತಿದ್ದೇನೆ ಎಂದು ಅವರು ಹೇಳಿದ್ದಾರೆ.

**ಸಂಪುಟ ಪುನಾರಚನೆಗೆ ಗ್ರೀನ್ ಸಿಗ್ನಲ್ ನೀಡದ ಹೈಕಮಾಂಡ್:** ಕೆಲವು ದಿನಗಳ ಹಿಂದಷ್ಟೇ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ದೆಹಲಿಗೆ ತೆರಳಿ ಸಚಿವ ಸಂಪುಟ ಪುನರ್ ರಚನೆ ಬಗ್ಗೆ ಹೈಕಮಾಂಡ್ ಜೊತೆ ಚರ್ಚೆ ನಡೆಸಿದ್ದರು. ಆದರೆ ಸದ್ಯಕ್ಕೆ ಸಂಪುಟ ಪುನಾರಚನೆ ಬೇಡವೆಂದು ಹೈಕಮಾಂಡ್ ನಾಯಕರು ತಿಳಿಸಿದ್ದರು. ಅದಾಗಿಯೂ ರಾಜ್ಯದಲ್ಲಿ ಕೆಲವು ಮಂದಿ ಕಾಂಗ್ರೆಸ್ ನಾಯಕರು ಸಚಿವ ಸ್ಥಾನದ ಆಕಾಂಕ್ಷೆ ವ್ಯಕ್ತಪಡಿಸಿದ್ದಾರೆ.

**ಅಧಿಕಾರ ಹಂಚಿಕೆ ಒಪ್ಪಂದದ ವಿವಾದ:** ಒಂದೆಡೆ ಅಧಿಕಾರ ಹಂಚಿಕೆ ಸಂಬಂಧಪಟ್ಟಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿಕೆಗಳು ವಿವಾದ ಸೃಷ್ಟಿಸಿರುವ ಬೆನ್ನಲ್ಲೇ ಸುಬ್ಬಾರೆಡ್ಡಿ ಸಚಿವ ಸ್ಥಾನಕ್ಕೆ ಬೇಡಿಕೆ ಇಟ್ಟಿದ್ದಾರೆ.

ಅಧಿಕಾರ ಹಂಚಿಕೆ ಕುರಿತಾದ ಹೇಳಿಕೆ ಪ್ರತಿ ಹೇಳಿಕೆಗಳ ನಡುವೆ, ಇದೀಗ ಸಚಿವ ಸ್ಥಾನದ ಕೂಗು ಕೂಡ ಕೇಳಿಬಂದಿರೋದು ಪಕ್ಷದ ಅಂತರಿಕ ಸಂಘರ್ಷವನ್ನು ಯಾವ ಮಟ್ಟಕ್ಕೆ ಕೊಂಡೊಯ್ಯಲಿದೆ ಎಂಬುದನ್ನು ಕಾದು ನೋಡಬೇಕಿದೆ.

# ವಿಚಾರಗಳ ಬಗ್ಗೆ ಚರ್ಚೆ!

ರಾಜ್ಯ ಮಟ್ಟದ ಆಸ್ಪತ್ರೆಗಳಲ್ಲಿನ ಪ್ರಯೋಗಾಲಯಗಳಿಗೆ 19.70 ಕೋಟಿ ರೂ ವೆಚ್ಚದಲ್ಲಿ ಕಿಟ್‌ಗಳನ್ನು ಖರೀದಿಸಿ ಸರಬರಾಜು ಮಾಡಲು ಆಡಳಿತಾತ್ಮಕ ಅನುಮೋದನೆ ನೀಡುವುದು.

ವಿಶ್ವಬ್ಯಾಂಕ್ ನೆರವಿನೊಂದಿಗೆ 2500 ಕೋಟಿ ರೂ ವೆಚ್ಚದಲ್ಲಿ (ವಿಶ್ವಬ್ಯಾಂಕ್ ರೂ. 1750.00 ಕೋಟಿಗಳು, ರಾಜ್ಯ ಸರ್ಕಾರ ರೂ. 750.00 ಕೋಟಿಗಳು) ಸರ್ಕಾರಿ ಉನ್ನತ ಶಿಕ್ಷಣ ಸಂಸ್ಥೆಗಳನ್ನು ಬಲವರ್ಧನೆ ಗೊಳಿಸುವುದು.

ಕರ್ನಾಟಕ ಶಿಕ್ಷಣ ಸಂಸ್ಥೆಗಳು 5 (ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡಲು ಸಿಬಂಧನೆ ಮತ್ತು ಷರತ್ತುಗಳು) (ಕಾಲೇಜು ಶಿಕ್ಷಣ) (ತಿದ್ದುಪಡಿ) ನಿಯಮಗಳು, 2024ಕ್ಕೆ ಅನುಮೋದನೆ ನೀಡುವುದು.

ರಾಜ್ಯದಲ್ಲಿ ಅಲ್ಪಸಂಖ್ಯಾತ ಸಂಸ್ಥೆಗಳೆಂದು ಘೋಷಿಸಲು ಶೈಕ್ಷಣಿಕ ಇರುವ ನಿಯಮಗಳು/ ಆದೇಶಗಳನ್ನು ಪರಿಷ್ಕರಿಸುವ ಮೂಲಕ ಹಾಲಿ ಇರುವ ನಿರ್ಬಂಧ ಸಡಿಲಿಸಿ ಮೈನಾರಿಟಿ ಶಿಕ್ಷಣ ಸಂಸ್ಥೆಗಳನ್ನು ಮುಕ್ತಗೊಳಿಸುವುದು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ 2022-23 ಎಸ್.ಸಿ.ಪಿ/ ಲಭ್ಯವಿರುವ ಸಾಲಿನ ಟಿ.ಎಸ್.ಪಿ ಯೋಜನೆಯಡಿ 42.66 ಕೋಟಿ ರೂ ಮೊತ್ತದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ವಸತಿ ಶಾಲೆಗಳು ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳಿಗೆ ಮಂಚಗಳು, ನಾರಿನ ಹಾಸಿಗೆಗಳು ಹಾಗೂ ವಿದ್ಯುತ್ ಹೀಟ್ ಪಂಪ್‌ಗಳನ್ನು ಖರೀದಿಸಿ ಒದಗಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ 2024-25ನೇ ಸಾಲಿನ ಕ್ರಿಯಾ ಯೋಜನೆಯಂತೆ, ಕಲಬುರಗಿ ಜಿಲ್ಲೆಯ ಜೇವರ್ಗಿ ತಾಲ್ಲೂಕಿನ ಇಜೇರಿಯಿಂದ ಯಡ್ರಾಮಿ ವರೆಗೆ 53.42 8 ಕಿ.ಮೀ ರಿಂದ 63.42 8 ರಸ್ತೆ ಸುಧಾರಣೆ ಕಾಮಗಾರಿಯನ್ನು ರೂ.25.00 ಕೋಟಿಗಳ ಅಂದಾಜು ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವುದು

ಕರ್ನಾಟಕ ಜನನ ಮತು ಮರಣಗಳ ನೋಂದಣಿ (ತಿದ್ದುಪಡಿ) ನಿಯಮಗಳು, 2024ಕ್ಕೆ ಅನುಮೋದನೆ ನೀಡುವ ಬಗ್ಗೆ.

ರಾಷ್ಟ್ರೀಯ ಹೆದ್ದಾರಿ 207 (648) ಹೊಸಕೋಟೆ ತಾಲ್ಲೂಕಿನ ಕೊರಳೂರು ಗ್ರಾಮದಲ್ಲಿ ಕಿ.ಮೀ. 48.30ರಲ್ಲಿ ಹಾಲಿ ಇರುವ ಎಲ್.ಸಿ. 130ರ ಬದಲಾಗಿ ರೈಲ್ವೆ ಮೇಲುಸೇತುವೆ ನಿರ್ಮಾಣ ಕಾಮಗಾರಿಯ ರೂ. 97.27 ಕೋಟಿಗಳ (ಕೇಂದ್ರ - ರೂ. 43.02 ಕೋಟಿಗಳು, ರಾಜ್ಯ ರೂ. 54.25 ಕೋಟಿಗಳು) ಪರಿಷ್ಕೃತ ಅಂದಾಜಿಗೆ ಅನುಮೋದನೆ ನೀಡುವ ಬಗ್ಗೆ.

ಬೆಂಗಳೂರಿನ ಸಂಪಂಗಿರಾಮ ನಗರದಲ್ಲಿ ಸಮಾಜ ಕಲ್ಯಾಣ ಭವನ ನಿರ್ಮಾಣ ಕಾಮಗಾರಿಯ ರೂ. 40.50 ಕೋಟಿಗಳ ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

2024-25ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯ ವಸತಿ ಶಾಲೆ/ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಮತ್ತು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿನ ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳಿಗೆ ಪೌಷ್ಠಿಕ ಆಹಾರವನ್ನು ರೂ.43.95 ಕೋಟಿಗಳ ಅಂದಾಜು ಮೊತ್ತದಲ್ಲಿ ಖರೀದಿಸಿ ಒದಗಿಸುವ ಬಗ್ಗೆ.

ಬೆಂಗಳೂರು ಮೆಟ್ರೋ ರೈಲು ಯೋಜನೆಯ ಹಂತ-2ರ ರೂ. 40,614.27 ಕೋಟಿಗಳ ಪರಿಷ್ಕೃತ ಅಂದಾಜು ಮೊತ್ತಕ್ಕೆ ಅನುಮೋದನೆ ನೀಡುವ ಬಗ್ಗೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಮುಖ್ಯ ಮತ್ತು ಉಪ ಮುಖ್ಯ ರಸ್ತೆಗಳ ತುರ್ತು ಅಭಿವೃದ್ಧಿ ಕಾಮಗಾರಿಗಳ ರೂ. 694.00 ಕೋಟೆಗಳ ಪರಿಷ್ಕೃತ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ, ದಿನಾಂಕ: 22.11.2024 ರಂದು ಹೊರಡಿಸಿರುವ ಆದೇಶಕ್ಕೆ ಘಟನೋತ್ತರ ಅನುಮೋದನೆ ನೀಡುವ ಬಗ್ಗೆ.

ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ರೈತರ ಸಹಭಾಗಿತ್ವದಲ್ಲಿ ಅನುಪಾತದಲ್ಲಿ ಕಲಬುರಗಿ ತಾಲ್ಲೂಕಿನ ಹಾಗರಗಾ ಗ್ರಾಮದ ವಿವಿಧ ಸರ್ವೆ ನಂಬರ್ ಗಳಲ್ಲಿ, ಕೈಗೊಳ್ಳಲು ಉದ್ದೇಶಿಸಿರುವ ವಸತಿ ಯೋಜನೆಯ ರೂ. 97.50 ಕೋಟಿಗಳ ಮೊತ್ತದ ಪರಿಷ್ಕೃತ ಅಂದಾಜಿಗೆ ಅನುಮೋದನೆ ನೀಡುವ ಬಗ್ಗೆ.

## ಮೊದಲನೇ ಪುಟದಿಂದ...

ಕರ್ನಾಟಕ ಪ್ಲಾಟ್‌ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರ (ಸಾಮಾಜಿಕ ಭದ್ರತೆ ಹಾಗೂ ಕಲ್ಯಾಣ) ವಿಧೇಯಕ, 2024ಕ್ಕೆ ಅನುಮೋದನೆ ನೀಡುವ ಬಗ್ಗೆ ಸಂಪುಟ ಸಭೆಯಲ್ಲಿ ಚರ್ಚೆ ನಡೆಯುವ ಸಾಧ್ಯತೆ ಇದೆ ಎನ್ನಲಾಗಿದೆ.

# ಕರ್ನಾಟಕಕ್ಕೆ ಮೋದಿ ಗಿಫ್ಟ್

1316 ಜನರಿಗೆ ನೇರ ಖಾಯಂ ಉದ್ಯೋಗವನ್ನು ಒದಗಿಸುತ್ತವೆ. ಶಾಲಾ ಮೂಲಸೌಕರ್ಯಗಳನ್ನು ನಿರ್ಮಿಸಲು ನಿರ್ಮಾಣ ಮತ್ತು ಸಂಬಂಧಿತ ಚಟುವಟಿಕೆಗಳು ಅನೇಕ ಕುಶಲ ಮತ್ತು ಕೌಶಲ್ಯರಹಿತ ಕಾರ್ಮಿಕರಿಗೆ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಸಾಧ್ಯತೆಯಿದೆ. ಅದರ ವಸತಿ ಸ್ವರೂಪದಿಂದಾಗಿ ಪ್ರತಿ ನವೋದಯ ವಿದ್ಯಾಲಯವು ಸ್ಥಳೀಯ ಮಾರಾಟಗಾರರಿಗೆ ಆಹಾರ, ಉಪಭೋಗ್ಯ ವಸ್ತುಗಳು, ಪೀಠೋಪಕರಣಗಳು, ಬೋಧನಾ ಸಾಮಗ್ರಿಗಳು ಇತ್ಯಾದಿಗಳನ್ನು ಪೂರೈಸಲು ಮತ್ತು ಕ್ಷೌರಿಕರು, ಟೈಲರ್ ಗಳು, ಚಮ್ಮಾರರು, ಮನೆಗೆಲಸ ಮತ್ತು ಭದ್ರತಾ ಸೇವೆಗಳಿಗೆ ಮಾನವಶಕ್ತಿಯಂತಹ ಸ್ಥಳೀಯ ಸೇವಾ ಪೂರೈಕೆದಾರರಿಗೆ ಅವಕಾಶಗಳನ್ನು ಒದಗಿಸುತ್ತದೆ ಎಂದು ಪ್ರಕಟಣೆ ತಿಳಿಸಿದೆ.

**ಯಾವೆಲ್ಲ ರಾಜ್ಯಗಳಲ್ಲಿ ಹೊಸ ನವೋದಯ ಶಾಲೆ?:** ಕರ್ನಾಟಕದ ಬಳ್ಳಾರಿಯಲ್ಲಿ 1, ಅರುಣಾಚಲ ಪ್ರದೇಶದಲ್ಲಿ 9, ಅಸ್ಸಾಂ 6, ಮಣಿಪುರ 3, ಮಹಾರಾಷ್ಟ್ರ 3, ತೆಲಂಗಾಣ 5, ಪಶ್ಚಿಮ ಬಂಗಾಳ 2 ನವೋದಯ ಶಾಲೆಗಳನ್ನು ಹೊಂದಲಿವೆ.

ನವೋದಯ ವಿದ್ಯಾಲಯಗಳು ಸಂಪೂರ್ಣವಾಗಿ ವಸತಿ, ಸಹ-ಶಿಕ್ಷಣ ಶಾಲೆಗಳಾಗಿದ್ದು, ಅವರ ಕುಟುಂಬದ ಸಾಮಾಜಿಕ-ಆರ್ಥಿಕ ಸ್ಥಿತಿಯನ್ನು ಪರಿಗಣಿಸದೆ ಮುಖ್ಯವಾಗಿ ಗ್ರಾಮೀಣ ಪ್ರದೇಶಗಳ ಪ್ರತಿಭಾವಂತ ಮಕ್ಕಳಿಗೆ VI ರಿಂದ XII ನೇ ತರಗತಿಯವರೆಗೆ ಉತ್ತಮ ಗುಣಮಟ್ಟದ ಆಧುನಿಕ ಶಿಕ್ಷಣವನ್ನು ಒದಗಿಸುತ್ತವೆ ಎಂದು ಪ್ರಕಟಣೆ ತಿಳಿಸಿದೆ.

# 300 ಕೋಟಿ ರೂ. ನಷ್ಟ

ಮುಡಾ ಮಾಜಿ ಆಯುಕ್ತ ದಿನೇಶ್ ಮತ್ತು ರಿಯಲ್ ಎಸ್ಟೇಟ್ ಉದ್ಯಮಿ ಕಾರ್ತಿಕ ಬಡಾವಣೆಯ ಮಂಜುನಾಥ್‌ನಿಂದ ಮಹಾ ಭೂಗಳ್ಳತನ ನಡೆದಿದೆ ಎಂಬ ಆರೋಪ ಕೇಳಿಬಂದಿದೆ. ಜಾರಿ ನಿರ್ದೇಶನಾಲಯ (ಇಡಿ) ಮುಂದೆ ವಿಚಾರಣೆಗೆ ಹಾಜರಾಗಿದ್ದ ಮುಡಾ ಮಾಜಿ ಆಯುಕ್ತ ದಿನೇಶ್ ರಿಯಲ್ ಎಸ್ಟೇಟ್ ಉದ್ಯಮಿ ಮಂಜುನಾಥ್‌ಗೆ ಪ್ರೋತ್ಸಾಹದಾಯಕ ಯೋಜನೆ ಹೆಸರಿನಲ್ಲಿ ಐದೇ ದಿನಗಳಲ್ಲಿ ಒಂದು ನಿವೇಶನಕ್ಕೆ 3 ಸಾವಿರ ರೂಪಾಯಿಯಂತೆ 23 ಸೈಟ್‌ಗಳನ್ನು ನೀಡಲಾಗಿದೆ.

ಇನ್ನು, ಕ್ರಯ ಪತ್ರದಲ್ಲಿ ಮಂಜುನಾಥ್ ಯಾವ ಭೂಮಿ ಕಳೆದುಕೊಂಡಿದ್ದರೆ ಎಂಬ ಮಾಹಿತಿ ಇಲ್ಲ. ಆದರೆ, ಪ್ರೋತ್ಸಾಹದಾಯಕ ಎಂದು ನಮೂದಿಸಿ ನಿವೇಶನಗಳನ್ನು ನೀಡಲಾಗಿದೆ. 5 ಲಕ್ಷ ಶುಲ್ಕ ಪಾವತಿ ಸ್ಥಳದಲ್ಲಿ ಕೇವಲ 600 ರೂಪಾಯಿ ಪಾವತಿ ಮಾಡಿಸಿಕೊಂಡು ನಿವೇಶನ ನೀಡಲಾಗಿದೆ.

ಮುಡಾ ಭ್ರಷ್ಟಾಚಾರದ ಬಗ್ಗೆ ಒಂದು ವರ್ಷದ ಹಿಂದೆಯೇ ಕೃಷ್ಣ ಎಂಬವರು ಮೈಸೂರು ಲೋಕಾಯುಕ್ತಕ್ಕೆ ದೂರು ನೀಡಿದ್ದರು. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಆಯುಕ್ತ ಜಿ.ಟಿ.ದಿನೇಶ್‌ಕುಮಾರ್, ವಿಶೇಷ ತಹಶೀಲ್ದಾರ್ ಶಿವಕುಮಾರ್, ಹೆಚ್ಚುವರಿ ಜಿಲ್ಲಾ ನೋಂದಣಾಧಿಕಾರಿ ಕಾವ್ಯ, ರಿಯಲ್ ಎಸ್ಟೇಟ್ ಉದ್ಯಮಿ ಎನ್.ಮಂಜುನಾಥ್ ವಿರುದ್ಧ ದೂರು ದಾಖಲಿಸಿದ್ದರು.

ಪ್ರಾಧಿಕಾರದ ಸದಸ್ಯರುಗಳು, ಅಧಿಕಾರಿಗಳು, ನೌಕರರುಗಳು ಮತ್ತು ತಪ್ಪಿತಸ್ಥರುಗಳ ವಿರುದ್ಧ ಕಾನೂನು ಕ್ರಮಕ್ಕೆ ದೂರುದಾರ ಪರ ವಕೀಲ ರವಿಕುಮಾರ್ ಒತ್ತಾಯಿಸಿದ್ದಾರೆ.

# ಕೈದಿಗಳ ಎಣ್ಣೆ ಪಾರ್ಟಿ

ಜೈಲಿನ ಅಕ್ರಮಗಳಿಗೆ ಕಡಿವಾಣ ಹಾಕಲು ಮುಂದಾಗಿದ್ದ ಅಧೀಕ್ಷಕಿ ಅನೀತಾರನ್ನ ಟಾರ್ಗೆಟ್ ಮಾಡಿದ್ದಾರೆಯೇ ಎಂಬ ಅನುಮಾನ ವ್ಯಕ್ತವಾಗಿದೆ.

ಅ.16, 17 ರಂದು ಕಾರಗೃಹ ಇಲಾಖೆ ಎಸ್ಪಿ ಯಶೋಧಾ ತನಿಖೆಗೆ ಆಗಮಿಸಿದ್ದರು. ಎರಡೂ ದಿನ ಜೈಲಿನೊಳಗಡೆ ಇದ್ದು ತನಿಖೆ ಮಾಡಿದ್ದರು. ಅ ವೇಳೆ ವೀಡಿಯೋ ಹೇಗಾಯ್ತು ಎನ್ನುವ ಬಗ್ಗೆ ಅನುಮಾನ ಮೂಡಿದೆ.

# ಉಗ್ರ ಅಜರ್ ಭಾಷಣ

ದ್ವಂದ್ವ ನಿಲುವನ್ನು ಬಹಿರಂಗಪಡಿಸಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಮಸೂದ್ ಅಜರ್ ಭಾರತದಲ್ಲಿನ ಗಡಿಯಾಚೆಗಿನ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿದ್ದಾನೆ. ಆತನ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ನಾವು ಒತ್ತಾಯಿಸುತ್ತೇವೆ. ಆದ್ದರಿಂದ ಅವನನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಬೇಕು. ಆದರೆ, ಅವನು ಪಾಕಿಸ್ತಾನದಲ್ಲಿ ಇಲ್ಲ ಎಂದು ಆ ದೇಶ ಹೇಳಿದೆ. ಆದರೆ, ವರದಿಗಳನ್ನು ನಂಬುವುದಾದರೆ, ಅದು ಪಾಕಿಸ್ತಾನದ ದ್ವಂದ್ವವನ್ನು ಬಹಿರಂಗಪಡಿಸುತ್ತದೆ ಎಂದು ಬೇಸರ ಹೊರಹಾಕಿದ್ದಾರೆ.

ಅಜರ್ ತನ್ನ ಅತಿರೇಕದ ಭಾಷಣದಲ್ಲಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರನ್ನು 'ಇಲಿ' ಎಂದು ಕರೆದಿದ್ದಾನೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದಕ ದಾಳಿಯನ್ನು ಹೆಚ್ಚಿಸುವ ಉದ್ದೇಶವನ್ನು ಘೋಷಿಸಿದ್ದಾನೆ.

ಈ ಭಾಷಣವನ್ನು ನವೆಂಬರ್‌ನಲ್ಲಿ ಮಾಡಲಾಗಿದೆ ಎಂದು ವರದಿಯಾಗಿದೆ. ಅಜರ್ ಭಾರತದ ಮೋಸ್ಟ್ ವಾಂಟೆಡ್ ಭಯೋತ್ಪಾದಕರಲ್ಲಿ ಒಬ್ಬ.

# ಗೃಹಿಣಿಯರು ಕಂಗಾಲು

400 ರಿಂದ 450 ರುಪಾಯಿಗೆ ಮಾರಾಟವಾಗುತ್ತಿದೆ. ಫಸ್ಟ್ ಕ್ವಾಲಿಟಿ 450 ರಿಂದ 500 ರೂಪಾಯಿಗೆ ಮಾರಾಟವಾಗುತ್ತಿದ್ದರೆ, ಇತ್ತ ರಿಟೇಲ್ ಮಾರುಕಟ್ಟೆಯಲ್ಲಿ, ಅಂದರೆ ಬೀದಿ ಬದಿ ವ್ಯಾಪಾರಿಗಳು ಮತ್ತು ಸಣ್ಣಪುಟ್ಟ ಮಾರುಕಟ್ಟೆಗಳಲ್ಲಿ ಸಾಮಾನ್ಯ ಬೆಳ್ಳುಳ್ಳಿ ಕೆಜಿಗೆ 450 ರಿಂದ 500 ರೂಪಾಯಿಗೆ ಮಾರಾಟವಾಗುತ್ತಿದೆ. ಫಸ್ಟ್ ಕ್ವಾಲಿಟಿ ಬೆಳ್ಳುಳ್ಳಿ ಕೆಜಿಗೆ 550 ರಿಂದ 600 ರೂಪಾಯಿವರೆಗೆ ಮಾರಾಟವಾಗುತ್ತಿದೆ.

ಹೊರ ರಾಜ್ಯಗಳಿಂದ, ರಾಜ್ಯಕ್ಕೆ ಬರಬೇಕಿದ್ದ ಈರುಳ್ಳಿ, ಬೆಳ್ಳುಳ್ಳಿ ಆಮದು ಆಗದಿರುವುದೇ ದರ ಏರಿಕೆಗೆ ಕಾರಣ ಎಂದು ವ್ಯಾಪಾರಸ್ಥರು ತಿಳಿಸಿದ್ದಾರೆ. ಅಲ್ಲದೇ ರಾಜ್ಯದಲ್ಲಿ ಸುರಿದ ಅಕಾಲಿಕ ಮಳೆ ಹಿನ್ನೆಲೆಯಲ್ಲಿ ಬೆಳೆ ನಾಶವಾಗಿದೆ. ಇದರಿಂದ ಮಾರುಕಟ್ಟೆಗೆ ಈರುಳ್ಳಿ ಮತ್ತು ಬೆಳ್ಳುಳ್ಳಿ ಸರಿಯಾಗಿ ಬಾರದ ಹಿನ್ನೆಲೆಯಲ್ಲಿ ದರ ಹೆಚ್ಚಳವಾಗಿದೆ. ಪರಿಸ್ಥಿತಿ ಹೀಗೆ ಮುಂದುವರೆದರೆ ಈರುಳ್ಳಿ ಬೆಲೆ ನೂರರ ಗಡಿ ದಾಟುವ ಸಾಧ್ಯತೆ ಇದೆ.

ಬೆಳ್ಳುಳ್ಳಿ 600 ರೂಪಾಯಿ ಆಗಲಿದೆ. ಇತ್ತ ಮಹಾರಾಷ್ಟ್ರದಿಂದ ಜನವರಿ ತಿಂಗಳಿನಲ್ಲಿ ಮಾಲ್ ಬರುತ್ತದೆ ಅಲ್ಲಿಯವರೆಗೆ ದರ ಏರಿಕೆ ಆಗುತ್ತಿರುತ್ತದೆ. ಮಹಾರಾಷ್ಟ್ರದಿಂದ ಈರುಳ್ಳಿ, ಬೆಳ್ಳುಳ್ಳಿ ಬರಲು ಆರಂಭವಾದರೆ, ದರ ಇಳಿಕೆಯಾಗುತ್ತೆ ಎಂದು ತಿಳಿಸಿದ್ದಾರೆ.

ಒಟ್ಟಿನಲ್ಲಿ ಈರುಳ್ಳಿ, ಬೆಳ್ಳುಳ್ಳಿ ಇಲ್ಲದ ಅಡುಗೆಯನ್ನು ಕಲ್ಪಿಸಿಕೊಳ್ಳಲು ಮಹಿಳೆಯರಿಗೆ ಸಾಧ್ಯವೆ ಇಲ್ಲ. ಇಂತಹದರಲ್ಲಿ ಅಡುಗೆ ಮನೆಯ ಹಾಟ್ ಫೇವರಿಟ್ ಈರುಳ್ಳಿ, ಬೆಳ್ಳುಳ್ಳಿ ಬೆಲೆ ದಿನದಿಂದ ದಿನಕ್ಕೆ ಏರಿಕೆ ಆಗುತ್ತಿರುವುದು ನಿಜವಾಗಿಯೂ ಗೃಹಿಣಿಯರ ನಿದ್ದೆ ಗೆಡಿಸಿರುವುದಂತು ಸುಳ್ಳಲ್ಲ.

# ಜೈ ಶ್ರೀರಾಮ್ ಘೋಷಣೆ!

ದೇವಾಲಯ ಧ್ವಂಸಗೊಳಿಸಿ ಟಿಪ್ಪು ಜಾಮೀಯಾ ಮಸೀದಿ ನಿರ್ಮಾಣ ಮಾಡಿದ್ರಾ?

ಶ್ರೀರಂಗಪಟ್ಟಣದ ಮೂಡಲ ಬಾಗಿಲು ಆಂಜನೇಯ ಸ್ವಾಮಿ ದೇವಾಲಯ ಧ್ವಂಸಗೊಳಿಸಿ ಟಿಪ್ಪು ಸುಲ್ತಾನ್ ವಿವಾದಿತ ಜಾಮೀಯಾ ಮಸೀದಿ ನಿರ್ಮಾಣ ಮಾಡಿದ್ದಾರೆ. ಈ ಕುರಿತು ಉತ್ಖನನ ನಡೆಸಿ ವರದಿ ಸಲ್ಲಿಸಲು ಭಾರತೀಯ ಪುರಾತತ್ವ ಸರ್ವೇಕ್ಷಣಾಲಯಕ್ಕೆ ನಿರ್ದೇಶನ ನೀಡಬೇಕೆಂದು ಕೋರಿ ಸಲ್ಲಿಸಿರುವ ಅರ್ಜಿ ಸಂಬಂಧ ಕರ್ನಾಟಕ ಹೈಕೋರ್ಟ್ ವಿಭಾಗೀಯ ಪೀಠವು ರಾಜ್ಯ ಸರ್ಕಾರ ಹಾಗೂ ಎಎಸ್‌ಐಗೆ ನೋಟಿಸ್ ಜಾರಿಗೊಳಿಸಿತ್ತು.

ಮಂಡ್ಯ ಜಿಲ್ಲೆಯ ಹಾಲಹಳ್ಳಿಯಲ್ಲಿಯ ಭಜರಂಗ ಸೇನೆ ರಾಜ್ಯಾಧ್ಯಕ್ಷ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಕುರಿತು ಸಿಜೆ ಎನ್.ವಿ. ಅಂಜಾರಿಯಾ ಹಾಗೂ ನ್ಯಾ.ಕೆ.ವಿ. ಅರವಿಂದ್ ಅವರಿದ್ದ ವಿಭಾಗೀಯ ಪೀಠ ವಿಚಾರಣೆ ನಡೆಸಿತ್ತು.

ಅರ್ಜಿದಾರರ ಪರ ವಾದ ಆಲಿಸಿದ ನ್ಯಾಯಾಲಯ, ಇಲ್ಲಿಸಂರಕ್ಷಿತ ಸ್ಮಾರಕದ ಕುರಿತು ಪ್ರಶ್ನಿಸಲಾಗಿದ್ದು, ಅರ್ಜಿ ಮೂಲಕ ನ್ಯಾಯ ವ್ಯಾಪ್ತಿ ಬದಲಾಯಿಸಲು ಕಷ್ಟ ಸಾಧ್ಯ ಎಂದು ಮೌಖಿಕವಾಗಿ ಅಭಿಪ್ರಾಯಪಟ್ಟಿತ್ತು. ಪ್ರಕರಣ ಸಂಬಂಧ ಭಾರತೀಯ ಪುರಾತತ್ವ ಸರ್ವೇಕ್ಷಣಾಲಯ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ, ಮುಜರಾಯಿ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ, ಮಂಡ್ಯ ಜಿಲ್ಲಾಧಿಕಾರಿ, ರಾಜ್ಯ ಧಾರ್ಮಿಕ ಪರಿಷತ್, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಸೇರಿ ಎಲ್ಲಾ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿತ್ತು.

ಅರ್ಜಿದಾರರ ಪರ ವಕೀಲರು ''ಮೂಡಲ ಬಾಗಿಲು ಆಂಜನೇಯ ಸ್ವಾಮಿ ದೇವಾಲಯವನ್ನು ವಿಜಯನಗರ ಸಾಮ್ರಾಜ್ಯ, ಮೈಸೂರು ಸಾಮ್ರಾಜ್ಯ ಹಾಗೂ ದಳವಾಯಿ ದೊಡ್ಡಯ್ಯ ಸೇರಿ ಅನೇಕ ಆಡಳಿತಗಾರರು ಪೋಷಿಸಿಕೊಂಡು ಬಂದಿದ್ದರು. ಆದರೆ, ಟಿಪ್ಪು ಸುಲ್ತಾನ್ ಅದನ್ನು ಧ್ವಂಸಗೊಳಿಸಿ ಬಳಿಕ ಅದೇ ಜಾಗದಲ್ಲಿ ಬಳಿಕ ಜಾಮೀಯಾ ಮಸೀದಿ ನಿರ್ಮಿಸಿದ್ದಾನೆ ಎಂದು ಆರೋಪಿಸಿದ್ದರು.

''ಈ ಬಗ್ಗೆ ಅಧ್ಯಯನ ಸರ್ವೆ ಹಾಗೂ ಉತ್ಖನನ ನಡೆಸಿ 30 ದಿನಗಳೊಳಗೆ ವಸ್ತುಸ್ಥಿತಿ ವರದಿ ಸಲ್ಲಿಸುವಂತೆ ಭಾರತೀಯ ಪುರಾತತ್ವಸರ್ವೇಕ್ಷಣಾಲಯಕ್ಕೆ ನಿರ್ದೇಶಿಸಬೇಕು. ದೇವಾಲಯದ ಆವರಣದಲ್ಲಿರುವ ಹಿಂದೂ ಸಂಸ್ಕೃತಿ ಹಾಗೂ ಪರಂಪರೆ ಕುರುಹುಗಳಾಗಿರುವ ಗರುಡಗಂಬ, ಕಲ್ಯಾಣಿ, ಸ್ತೂಪ, ಸ್ತಂಭ, ಹಿಂದೂ ದೇವ-ದೇವತೆಗಳ ಕಲ್ಲಿನ ಕೆತ್ತನೆಗಳು ಹಾಗೂ ಭೂಗತ ದೇವಸ್ಥಾನದ ಭಾಗ, ವಾಸ್ತು ಶಿಲ್ಪ, ಹೂತಿಟ್ಟ ವಿಗ್ರಹಗಳನ್ನು ಸಂರಕ್ಷಿಸಲು ಭಾರತೀಯ ಪುರಾತತ್ವಸರ್ವೇಕ್ಷಣಾಲಯ, ಸರಕಾರ ಮತ್ತು ಜಿಲ್ಲಾಡಳಿತಕ್ಕೆ ನಿರ್ದೇಶಿಸಬೇಕು'' ಎಂದೂ ಕೋರಿದ್ದರು.

# ಟಾಸ್ಕ್ ಕೊಟ್ರಾ ಹೈಕಮಾಂಡ್?

ನಮ್ಮ ನಡುವೆ ಯಾರು ಸಂಧಾನ ಮಾಡುವವರಿದ್ದಾರೆ? ಶಿಸ್ತು ಸಮಿತಿ ಅಧ್ಯಕ್ಷ ಮತ್ತು ರಾಜನಾಥ್ ಸಿಂಗ್‌ರನ್ನು ಭೇಟಿಯಾಗಿದ್ದು ಬಿಟ್ಟರೆ ಬೇರೆ ಯಾರನ್ನೂ ಭೇಟಿಯಾಗಿಲ್ಲ. ವಕ್ಫ್ ಕಾನೂನಿನ ಬಗ್ಗೆ ನಾವು ಹೆಚ್ಚು ಗಮನ ಕೊಟ್ಟಿದ್ದೇವೆ ಅಂತ ಯತ್ನಾಳ್ ಹೇಳಿದ್ರು.

**ನಮ್ಮ ಟಾರ್ಗೆಟ್ ವಿಜಯೇಂದ್ರ, ಅಲ್ಲ:** ನನಗೆ ಪರ್ಮನೆಂಟ್ ಆಗಿ ಸೈಲೆಂಟ್ ಆಗಿರೋಕೆ ಹೇಳಿದ್ದಾರೆ. ಆದರೆ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ಮುಂದುವರಿಸುತ್ತೇವೆ. ನಮ್ಮ ನಾಯಕರ ವಿರುದ್ಧ ಗುಪ್ತ ಪತ್ರಗಳನ್ನು ಬರೆಯುತ್ತೇನೆ. ವಿಜಯೇಂದ್ರ, ಸೇರಿ ಎಲ್ಲರ ಬಗ್ಗೆಯೂ ಬರೆಯುತ್ತೇವೆ. ನಮ್ಮ ಟಾರ್ಗೆಟ್ ವಿಜಯೇಂದ್ರ ಅಲ್ಲ, ಬಿಜೆಪಿಯನ್ನು ಮತ್ತೊಮ್ಮೆ ಅಧಿಕಾರಕ್ಕೆ ತರಬೇಕು ಅನ್ನೋದೇ ನಮ್ಮ ಟಾರ್ಗೆಟ್ ಅಂತ ಯತ್ನಾಳ್ ಹೇಳಿದ್ರು.

ನಾವು ಅಧಿಕಾರಕ್ಕೆ ಬಂದಾಗ ಪ್ರಾಮಾಣಿಕರನ್ನು ಸಿಎಂ ಮಾಡೋ ಗುರಿಯಿದೆ, ಭ್ರಷ್ಟರು ಸಿಎಂ ಆಗಬಾರದು ಅನ್ನೋ ಉದ್ದೇಶವಿದೆ. ದಾಂಧಲೆ ಮಾಡಬೇಡ ಅಂತ ಮನೆಯಲ್ಲಿ ಹೇಳ್ತಾರೆ ಅಲ್ವಾ? ಹಾಗೆ ನನಗೂ ಹೇಳಿ ಕಳಿಸಿದ್ದಾರೆ. ಸದ್ಯ ನಾನು ಸೈಲೆಂಟ್, ರಮೇಶ್ ಜಾರಕಿಹೊಳಿ ವೈಲೆಂಟ್ ಆಗ್ತಾರೆ. ಅವರಿಗೆ ಒಂದು ಪಿರಿಯೇಡ್ ಕೊಟ್ಟಿದ್ದೇವೆ. ಅವರ ನಂತರ ಮತ್ತೊಬ್ಬರು ವೈಲೆಂಟ್ ಆಗುತ್ತಾರೆ ಅಂತ ಯತ್ನಾಳ್ ಹೇಳಿದರು.

# ಸರ್ಕಾರ ಅಸ್ತು

ಕೆಂಪು ಮಾರ್ಗದ ಪ್ರತಿ ಕಿಮೀ ನಿರ್ಮಾಣಕ್ಕೆ 776 ಕೋಟಿ ರೂ. ವೆಚ್ಚವಾಗಲಿದೆ. ಈ ಹಂತ ಪೂರ್ಣಗೊಂಡರೆ 258 ಕಿಮೀ ಮೆಟ್ರೋ ಮಾರ್ಗ ಸಿದ್ಧವಾಗಲಿದೆ. ಸಂಪುಟದ ಅನುಮೋದನೆ ಪಡೆದ ಈ ಯೋಜನೆ ಕೇಂದ್ರ ಸರ್ಕಾರಕ್ಕೆ ಸಲ್ಲಿಕೆಯಾಗಲಿದೆ. ಮುಂದಿನ ಒಂದು ವರ್ಷದೊಳಗೆ ಕೇಂದ್ರದ ಅನುಮೋದನೆ ಸಿಗುವ ಸಾಧ್ಯತೆ ಇದೆ. 2026ರಲ್ಲಿ ಇದರ ಕಾಮಗಾರಿ ಆರಂಭವಾದಲ್ಲಿ 2031ಕ್ಕೆ ಕಾಮಗಾರಿ ಪೂರ್ಣಗೊಳ್ಳುವ ಸಾಧ್ಯತೆ ಇದೆ.

ಇಬ್ಬಲೂರು, ಅಗರ, ಡೈರಿ ಸರ್ಕಲ್, ಕೆಆರ್ ಸರ್ಕಲ್ ಹಾಗೂ ಹೆಬ್ಬಾಳದಲ್ಲಿ ಐದು ಇಂಟರ್ ಚೇಂಜ್ ಸ್ಟೇಷನ್ ನಿರ್ಮಾಣ ಮಾಡಲಾಗುತ್ತದೆ

**ಎಲ್ಲೆಲ್ಲಿ ನಿಲ್ದಾಣಗಳು?:** ಸರ್ಜಾಪುರ, ಕಾಡ ಅಗ್ರಹಾರ ರೋಡ್, ಸೋಮಪುರ, ದೊಮ್ಮಸಂದ್ರ, ಮುತ್ತನಲ್ಲೂರು ಕ್ರಾಸ್, ಕೊಡತಿ ಗೇಟ್, ಅಂಬೇಡ್ಕರ್ ನಗರ, ಕಾರ್ಮಲ್ ರಾಂ, ದೊಡ್ಡಕನ್ನೆಲಿ, ಕಲ್ಕೊಂಡರಹಳ್ಳಿ, ಬೆಳ್ಳಂದೂರು ಗೇಟ್, ಇಬ್ಬಲೂರು, ಅಗರ, ಜಕ್ಕಸಂದ್ರ, ಕೋರಮಂಗಲ 3ನೇ ಬ್ಲಾಕ್, ಕೋರಮಂಗಲ 2ನೇ ಬ್ಲಾಕ್, ಡೈರಿ ಸರ್ಕಲ್, ನಿಮ್ಹಾನ್ಸ್, ಶಾಂತಿನಗರ, ಟೌನ್ ಹಾಲ್, ಕೆಆರ್ ಸರ್ಕಲ್, ಬಸವೇಶ್ವರ ಸರ್ಕಲ್, ಬೆಂಗಳೂರು ಗಾಲ್ಫ್ ಕೋರ್ಸ್, ಮೇಕ್ರಿ ಸರ್ಕಲ್, ಪ್ಯಾಲೇಸ್ ಗುಟ್ಟಳ್ಳಿ, ವೆಟರ್ನರಿ ಕಾಲೇಜು, ಗಂಗಾನಗರ, ಹೆಬ್ಬಾಳದಲ್ಲಿ ರೈಲು ನಿಲ್ಲಲಿದೆ.

## ಸಾಲ ಮರುಪಾವತಿ ಮಾಡದ ಆರೋಪ

# ಡಿಕೆಶಿ ಆಪ್ತ, ಕಾಂಗ್ರೆಸ್ ಮುಖಂಡನ ಶಾಲೆಗೆ ಬೀಗ




**ಮಂಡ್ಯ:** ಸಾಲ ಮರುಪಾವತಿ ಮಾಡದ ಹಿನ್ನೆಲೆ ಡಿಸಿಎಂ ಡಿ.ಕೆ. ಶಿವಕುಮಾರ್ ಆಪ್ತ ಹಾಗೂ 'ಕೈ' ಮುಖಂಡನ ಖಾಸಗಿ ಶಿಕ್ಷಣ ಸಂಸ್ಥೆಗೆ ಬ್ಯಾಂಕ್ ಅಧಿಕಾರಿಗಳು ಬೀಗ ಹಾಕಿದ್ದಾರೆ. ಇದೀಗ ಶಾಲೆಯಲ್ಲಿನ ಮಕ್ಕಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿದೆ.

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಬಾಬುರಾಯನಕೊಪ್ಪಲು ಬಳಿ ಇರುವ ಕೇಂಬ್ರಿಡ್ಜ್ ಸ್ಕೂಲ್ ಕಾಲೇಜಿಗೆ ಬ್ಯಾಂಕ್ ಅಧಿಕಾರಿಗಳು ಬೀಗ ಹಾಕಿದ್ದು, ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ಅತಂತ್ರ ಪರಿಸ್ಥಿತಿಗೆ ಸಿಲುಕಿದೆ. ಶಾಲೆಯ ಆಡಳಿತ ಮಂಡಳಿ ಯಡವಟ್ಟಿನಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ಕುತ್ತು ಬಂದಿದ್ದು, ಸಾಲಸೋಲ ಮಾಡಿ ಫೀಜ್ ಕಟ್ಟಿದ್ದ ಪೋಷಕರು ಆತಂಕದಲ್ಲಿ ಇದ್ದಾರೆ. ಕಾಂಗ್ರೆಸ್ ಮುಖಂಡ ಹಾಗೂ ಡಿಕೆಶಿ ಆಪ್ತನಾದ ಹರಳಹಳ್ಳಿ ವಿಶ್ವನಾಥ್‌ಗೆ ಸೇರಿದ ಸ್ಕೂಲ್ ಇದಾಗಿದೆ.

ಬೆಂಗಳೂರಿನ ವಿಶ್ವೇಶ್ವರಯ್ಯ ಕೋ ಆಪರೇಟಿವ್ ಬ್ಯಾಂಕ್‌ನಲ್ಲಿ ಶಾಲೆಯ ಮೇಲೆ ಸಾಲವನ್ನು ಮಾಡಲಾಗಿದೆ. ಆದರೆ, ಸಾಲವನ್ನು ಬ್ಯಾಂಕ್‌ನವರ ಟೈಂಬಾಂಡ್ ಮುಗಿದರೂ ಮರುಪಾವತಿ ಮಾಡಿಲ್ಲ. ಹೀಗಾಗಿ ಬ್ಯಾಂಕ್‌ನಿಂದ ನೋಟೀಸ್ ನೀಡಿದ್ರೂ, ಸಾಲ ಮರುಪಾವತಿ ಮಾಡಿಲ್ಲ. ಆದ್ದರಿಂದ ಕಳೆದ ಶನಿವಾರವೇ ಸ್ಕೂಲ್ ಗೇಟ್‌ಗೆ ಬ್ಯಾಂಕ್ ಅಧಿಕಾರಿಗಳು ಬೀಗ ಹಾಕಿದ್ದಾರೆ. ಒಂದು ವಾರದಿಂದ ಇಲ್ಲಿನ ವಿದ್ಯಾರ್ಥಿಗಳಿಗೆ ರಜೆ ನೀಡಲಾಗಿದೆ. ಬೀಗ ಹಾಕಿದರೂ ಒಂದು ಕಡೆ 10ನೇ ತರಗತಿ ವಿದ್ಯಾರ್ಥಿಗಳಿಗೆ ಮಾತ್ರ ತರಗತಿ ಮಾಡಲಾಗುತ್ತಿದೆ. ಇದೀಗ ಶಾಲೆ ಆಡಳಿತ ಮಂಡಳಿ ವಿರುದ್ಧ ಪೋಷಕರ ಆಕ್ರೋಶ ವ್ಯಕ್ತಪಡಿಸುತ್ತಿದ್ದು, 'ಸಾಲಸೂಲ ಮಾಡಿ ಫೀಜ್ ಕಟ್ಟಿದ್ದೀವಿ. ಈಗ ಬ್ಯಾಂಕ್‌ನವರು ಶಾಲೆಗೆ ಬೀಗ ಹಾಕಿದ್ದಾರೆ. ನಮ್ಮ ಮಕ್ಕಳ ಭವಿಷ್ಯ ಏನಾಗಬೇಕು' ಎಂದು ಆತಂಕ ವ್ಯಕ್ತಪಡಿಸುತ್ತಿದ್ದಾರೆ.

# ಬಾಣಂತಿಯರ ಸಾವು ಕೇಸ್ ಪ್ರಕರಣದಲ್ಲಿ ನನ್ನ ತಪ್ಪಿದ್ರೆ ರಾಜೀನಾಮೆ ಕೊಡಲು ಸಿದ್ಧ

**ಬೆಂಗಳೂರು:** ಬಳ್ಳಾರಿಯಲ್ಲಿ ಬಾಣಂತಿಯರ ಸಾವು ಪ್ರಕರಣದಲ್ಲಿ ನನ್ನ ತಪ್ಪಿದ್ದರೆ ರಾಜೀನಾಮೆ ಕೊಡಲು ಸಿದ್ಧನಿದ್ದೇನೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಬಾಣಂತಿಯರ ಸರಣಿ ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ನಗರದ ವಿಧಾನಸೌಧದಲ್ಲಿ ಮಾತನಾಡಿದ ಅವರು, ಬಿಜೆಪಿಯವರು ಲೋಕಾಯುಕ್ತಕ್ಕೆ ಖಂಡಿತ ದೂರು ಕೊಡಲಿ. ಇದರಲ್ಲಿ ವಿಪಕ್ಷದವರ ಸಹಕಾರವೂ ಬೇಕು. ಈ ಪ್ರಕರಣದಲ್ಲಿ ನನ್ನ ತಪ್ಪಿದ್ರೆ ನಾನು ರಾಜೀನಾಮೆ ಕೊಡಲೂ ಸಿದ್ಧನಾಗಿದ್ದೇನೆ. ಇದರಲ್ಲಿ ನನ್ನ ಪ್ರತಿಷ್ಠೆ ಏನಿಲ್ಲ. ಇದು ಜೀವದ ವಿಚಾರ. ನನ್ನ ರಾಜೀನಾಮೆಯಿಂದ ಸರಿಯಾಗುತ್ತೆ ಅಂದರೆ ರಾಜೀನಾಮೆಗೂ ಸಿದ್ಧ. ಆದರೆ ಈ ಪ್ರಕರಣದಲ್ಲಿ ಸರ್ಕಾರ ಗಂಭೀರವಾಗಿದೆ. ತಪ್ಪಿತಸ್ಥರಿಗೆ ತಕ್ಕ ಶಿಕ್ಷೆ ಆಗಲೇಬೇಕು. ಕ್ರಮ ತೆಗೆದುಕೊಳ್ಳಲೇಬೇಕು. ಇಲ್ಲಿಯವರೆಗೆ ಈ ವರ್ಷ ರಾಜ್ಯದಲ್ಲಿ 327 ಮೆಟರ್ನಲ್ ಸಾವಾಗಿದೆ. ಎಲ್ಲವನ್ನೂ ಪರಿಶೀಲಿಸಿ ಅಂತ ಹೇಳಿದ್ದೇವೆ. ಇಂತಹ ಪ್ರಕರಣಗಳಲ್ಲಿ ಸಹನೆ ಇರಬಾರದು, ಕಠಿಣ ಕಾನೂನು ಕ್ರಮ ಆಗಬೇಕು ಎಂದು ತಿಳಿಸಿದರು.



# ಮಹಾ ಪರಿನಿರ್ವಾಣ ದಿನದ ನಿಮಿತ್ತ ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜೆ, ಪುಷ್ಪಾರ್ಚಣೆ



**ಕೋಲಾರ:** ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ ಮಹಾ ಪರಿನಿರ್ವಾಣ ದಿನಾಚರಣೆ ನಿಮಿತ್ತ ಇಂದು ಬೆಳಿಗ್ಗೆ ನಗರದ ಬಂಗಾರಪೇಟೆ ವೃತ್ತದಲ್ಲಿ ಇರುವ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಗೆ ಹಾಗೂ ನಚಿಕೇತ ವಿದ್ಯಾರ್ಥಿ ನಿಲಯದಲ್ಲಿರುವ ಡಾ. ಅಂಬೇಡ್ಕರ್ ಪ್ರತಿಮೆಗೆ ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ಸೇರಿದಂತೆ ಗಣ್ಯರಿಂದ ಮಾಲಾರ್ಪಣೆ, ಪುಷ್ಪಾರ್ಪಣೆ ಕಾರ್ಯಕ್ರಮ ಜರುಗಿತು.

ನಂತರ ಟಿ. ಚನ್ನಯ್ಯ ರಂಗಮಂದಿರದಲ್ಲಿಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ, ಪುಷ್ಪಾರ್ಚಣೆ ಮಾಡಿ, ಅವರು ನಮಿಸಿದರು.

ಈ ಸಂದರ್ಭದಲ್ಲಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಬಿ. ನಿಖಿಲ್, ಅಪರ ಜಿಲ್ಲಾಧಿಕಾರಿ ಮಂಗಳ., ತಹಶಿಲ್ದಾರ ನಯನ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಶ್ರೀನಿವಾಸ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಿಬ್ಬಂದಿಗಳು ಮತ್ತು ಸಮಾಜದ ಪ್ರಮುಖರು ಸೇರಿದಂತೆ ಅನೇಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಕಾಲೇಜು ವಾರ್ಷಿಕೋತ್ಸವ



**ಬೆಂಗಳೂರು:** ಮಹಾಲಕ್ಷ್ಮಿ ಲೇಔಟ್ ಶ್ರೀಕಂಠೇಶ್ವರ ನಗರದ ವಿವೇಕಾನಂದ ಮಹಿಳಾ ಕಾಲೇಜು ಹಾಗೂ ಜನತಾ ಶಿಕ್ಷಣ ಸಂಸ್ಥೆ ವಿದ್ಯಾಲಯ ನಾಗಪುರ ವಾರ್ಡ್ ನ ಡಾ. ರಾಜಕುಮಾರ್ ಒಳಾಂಗಣ ಸಭಾಂಗಣದಲ್ಲಿಂದು ಹಮ್ಮಿಕೊಂಡಿದ್ದ ಕಾಲೇಜು ವಾರ್ಷಿಕೋತ್ಸವ ಸಮಾರಂಭದಲ್ಲಿ ಮಾಜಿ ಸಚಿವರು ಹಾಗೂ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯನವರು ಉದ್ಘಾಟಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ನಟಿ ಹಾಗೂ ಮಾಜಿ ವಿಧಾನ ಪರಿಷತ್ ಸದಸ್ಯೆ ತಾರ ಅನುರಾಧ, ಮಾಜಿ ಕುಲಪತಿ ಪ್ರೊಫೆಸರ್ ಜಿ ಕೆ ನಾರಾಯಣ ರೆಡ್ಡಿ, ಸಂಸ್ಥೆಯ ಗೌರವ ಕಾರ್ಯದರ್ಶಿ ಹೆಚ್ ಜಿ ಬಾಲಗೋಪಾಲ್ ಛೇರ್ ಮನ್ ಕೆ ಪಿ ಮಂಜು, ಹಾಸ್ಯ ನಟ ಹುಲಿ ಕಾರ್ತಿಕ್. ಖ್ಯಾತ ಗಾಯಕ ಕಂಬದ ರಂಗಯ್ಯ,, ಕಾಲೇಜಿನ ಪ್ರಾಂಶುಪಾಲರಾದ ಪುಷ್ಪಲತಾ, ತ್ರಿವೇಣಿ ಹಾಗೂ ಬೋಧಕ ಬೋಧಕೇತರ ವರ್ಗ ಮತ್ತು ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

# ಅಪರಿಚಿತ ಶವ: ವಾರಸುದಾರರ ಪತ್ತೆಗೆ ಸಹಕರಿಸಲು ಮನವಿ

**ಚಾಮರಾಜನಗರ:** ಗುಂಡ್ಲುಪೇಟೆ ಪಟ್ಟಣದ ವಿಜಯಪುರ ಬಡಾವಣೆಯಲ್ಲಿರುವ ನಿರ್ಮಾಣ ಹಂತದ ವಾಣಿಜ್ಯ ಮಳಿಗೆಯ ಕಟ್ಟಡದ ಬಳಿ ಅಪರಿಚಿತ ಪುರುಷ ಶವ ಪತ್ತೆಯಾಗಿದ್ದು, ವಾರಸುದಾರರ ಪತ್ತೆಗೆ ಸಹಕರಿಸುವಂತೆ ಕೋರಲಾಗಿದೆ. ಮೃತರಿಗೆ ಸುಮಾರು 50 ವರ್ಷ ವಯಸ್ಸಾಗಿದ್ದು ನೀಲಿ ಬಣ್ಣದ ಜೀನ್ಸ್ ಜಾಕೆಟ್, ಹಸಿರು ಬಣ್ಣದ ತುಂಬು ತೋಳಿನ ಶರ್ಟು ಹಾಗೂ ಕಂದು ಬಣ್ಣದ ಫಾರ್ಮಲ್ ಪ್ಯಾಂಟ್ ಧರಿಸಿರುತ್ತಾರೆ. ಇವರ ವಾರಸುದಾರರು ಇದ್ದಲ್ಲಿ ಗುಂಡ್ಲುಪೇಟೆ ಪೊಲೀಸ್ ಠಾಣೆಯ ಸಬ್‌ಇನ್ಸ್‌ಪೆಕ್ಟರ್ ಅವರನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ವಿವಿಧೆಡೆ ವಿದ್ಯುತ್ ವ್ಯತ್ಯಯ

**ಚಾಮರಾಜನಗರ:** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಿಂದ ಚಾಮರಾಜನಗರ ಮತ್ತು ಸಂತೇಮರಹಳ್ಳಿ ಉಪವಿಭಾಗ ವ್ಯಾಪ್ತಿಯಲ್ಲಿ ಮೂರನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿಯನ್ನು ಡಿಸೆಂಬರ್ 8 ರಂದು ಹಮ್ಮಿಕೊಂಡಿರುವುದರಿಂದ ಅಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.ಬದನಗುಪ್ಪೆ, ಪಣ್ಯದಹುಂಡಿ, ಬೆಂಡರವಾಡಿ, ಕೆಲ್ಲಂಬಳ್ಳಿ ಎನ್‌ಜೆವೈ, ಇಂಡಸ್ಟ್ರಿಯಲ್ ಏರಿಯಾ, ಕೆಇಡಿಪಿ 10 ಮತ್ತು 11, ಮುತ್ತಿಗೆ, ಹೆಗ್ಗೋಠಾರ ಹಾಗೂ ಕೆಐಎಡಿಬಿ ಇಂಡಸ್ಟ್ರಿಯಲ್ ಏರಿಯಾ ಮರಿಯಾಲ, ಬೇಡರಪುರ, ಕೆಲ್ಲಂಬಳ್ಳಿ, ಬಸವನಪುರ ಮತ್ತು ಹಿರಿಕೆರೆ, ಕಾಳಿಕಾಂಬ ಕಾಲೋನಿ, ಚಂದಕವಾಡಿ, ರೇಚಂಬಳ್ಳಿ, ಮಲ್ಲೇದೇವನಹಳ್ಳಿ, ನವೋದಯ, ಹೊಂಡರಬಾಳು, ಜ್ಯೋತಿಗೌಡನಪುರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.ಸಾರ್ವಜನಿಕರು ನಿಗಮದ ಜೊತೆ ಸಹಕರಿಸಬೇಕು. ವಿದ್ಯುತ್ ಸಂಬಂಧಿತ ದೂರು ಮತ್ತು ಸಹಾಯಕ್ಕಾಗಿ ಗ್ರಾಹಕರು ಉಚಿತ ದೂ.ಸಂ 1912 ಸಂಪರ್ಕಿಸುವಂತೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಳೆ ಬೆಳೆ ಪ್ರದೇಶ ವಿಸ್ತರಣೆಗೆ ಸಹಾಯಧನ

**ಚಾಮರಾಜನಗರ:** ತೋಟಗಾರಿಕೆ ಇಲಾಖೆಯಿಂದ 2024–25ನೇ ಸಾಲಿನಲ್ಲಿ ತಾಳೆ ಬೆಳೆಗೆ ಉಚಿತವಾಗಿ ಸಸಿ, ಡೀಸಲ್ ಪಂಪ್‌ಸೆಟ್, ಯಂತ್ರೋಪಕರಣ ಇನ್ನಿತರ ಸಹಾಯಧನ ಸೌಲಭ್ಯಗಳನ್ನು ಒದಗಿಸಲಾಗುತ್ತಿದ್ದು ಇದರ ಪ್ರಯೋಜನ ಪಡೆಯಲು ಮನವಿ ಮಾಡಲಾಗಿದೆ. ಪ್ರಪಂಚದಾದ್ಯಂತ ಸಾಗುವಳಿ ಮಾಡಲಾಗುತ್ತಿರುವ ಖಾದ್ಯ ತೈಲ ಬೆಳೆಗಳಲ್ಲಿ ಅತ್ಯಂತ ಹೆಚ್ಚು ತೈಲದ ಇಳುವರಿ ನೀಡುವುದು ತಾಳೆ ಬೆಳೆಯಾಗಿದೆ. ಹೆಚ್ಚು ಮಳೆ ಬೀಳುವ ಹಾಗೂ ನೀರಾವರಿ ಅನುಕೂಲವಿರುವ ಪ್ರದೇಶಗಳಲ್ಲಿ ಹೆಚ್ಚು ಸಾವಯವಯುಕ್ತ ಉತ್ತಮ ರಚನೆಯನ್ನು ಹೊಂದಿದ ನೀರು ಬಸಿದು ಹೋಗುವಂತಹ ಆಳವಾದ ಕೆಂಪುಗೋಡು ಮತ್ತು ಮಧ್ಯಮ ಕಪ್ಪು ಮಣ್ಣಿನಲ್ಲಿ ತಾಳೆಯು ಹೆಚ್ಚು ಇಳುವರಿ ಕೊಡುತ್ತದೆ. ತೇವಾಂಶದಿಂದ ಕೂಡಿದ ಉಷ್ಣ ಹವಾಮಾನ ಈ ಬೆಳೆಗೆ ಸೂಕ್ತವಾಗಿದೆ. ತಾಳೆ ಬೆಳೆಯ ಪ್ರದೇಶ ವಿಸ್ತರಣೆಗಾಗಿ ರೈತರಿಗೆ ಸರ್ಕಾರದಿಂದ ಉಚಿತವಾಗಿ ಸಸಿಗಳನ್ನು ವಿತರಿಸಲಾಗುವುದು. ನಾಟಿ ಮಾಡಿದ ನಾಲ್ಕು ವ?ದವರೆಗೆ ನಿರ್ವಹಣೆಗೆ ಅಂತರ ಬೆಳೆ ಬೇಸಾಯಕ್ಕೆ ಡೀಸಲ್ ಪಂಪ್‌ಸೆಟ್ ಅಳವಡಿಕೆ, ಯಂತ್ರೋಪಕರಣಗಳಿಗೆ ಇಲಾಖಾ ವತಿಯಿಂದ ಸಹಾಯಧನ ನೀಡಲಾಗುವುದು. ತಾಳೆ ಬೆಳೆ ನಾಟಿ ಮಾಡಿದ ರೈತರಿಗೆ ಇಲಾಖೆ ವತಿಯಿಂದ ಹನಿ ನೀರಾವರಿ ಪದ್ಧತಿ ಅಳವಡಿಕೆ, ಕೃಷಿಹೊಂಡ ನಿರ್ಮಾಣ, ಕೊಯ್ಲು ಮಾಡುವ ಉಪಕರಣಕ್ಕೆ ವಿಶೇ? ಉತ್ತೇಜನ ನೀಡಿ ಸಹಾಯಧನ ನೀಡಲಾಗುತ್ತದೆ. ಕೊಯ್ಲು ಬಳಿಕ ಫಸಲನ್ನು ಕನಿ?ಠ ಬೆಂಬಲೆಯಡಿ ಸರ್ಕಾರದ ಅನುಮೋದಿತ ಕಂಪನಿಯಿಂದ ಬೈ ಬ್ಯಾಕ್ ಅರೇಂಜ್‌ಮೆಂಟ್ /ನೇರ ಖರೀದಿ ಒಪ್ಪಂದ ವ್ಯವಸ್ಥೆಯಡಿ ಖರೀದಿಸಿ ಹಣವನ್ನು ರೈತರ ಬ್ಯಾಂಕ್ ಖಾತೆಗೆ ಪಾವತಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತೋಟಗಾರಿಕೆ ಇಲಾಖೆಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು.

# ರೆಡ್ ಕ್ರಾಸ್ ಸಂಸ್ಥೆಯ ಸಭೆ

**ಬೆಂ.ಗ್ರಾ.:** ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಬೆಂಗಳೂರು ಗ್ರಾಮಾಂತರ ಜಿಲ್ಲಾ ಶಾಖೆಯ ಸರ್ವ ಸದಸ್ಯರ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಡಿಸೆಂಬರ್ 27 ರ ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

# 9ರಂದು ಪಿಂಚಣಿ ಅದಾಲತ್

**ಮಂಡ್ಯ:** ಡಿಸೆಂಬರ್ 9 ರಂದು ಮದ್ಯಾಹ್ನ 3 ಗಂಟೆಗೆ ಮಂಡ್ಯ ವಿಭಾಗದ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಪಿಂಚಣಿ ಅದಾಲತ್ ಏರ್ಪಡಿಸಲಾಗಿದೆ. ಅಂಚೆ ಇಲಾಖೆಯ ಪಿಂಚಣಿದಾರರಿಗೆ ತಮ್ಮ ಪಿಂಚಣಿ ಸೇವೆಯಲ್ಲಿ ಏನಾದರೂ ತೊಂದರೆ ಅಥವಾ ಕುಂದು ಕೊರತೆ ಇದ್ದಲ್ಲಿ ಡಿಸೆಂಬರ್ 9 ರೊಳಗೆ ಅಂಚೆ ಅಧೀಕ್ಷಕರ ಕಚೇರಿಗೆ ಲಿಖಿತ ರೂಪದಲ್ಲಿ ತಲುಪಿಸುವಂತೆ ಕೋರಲಾಗಿದೆ. ಇಚ್ಚೆಯುಳ್ಳ ಪಿಂಚಣಿದಾರರು ತಮ್ಮ ಸ್ವಂತ ಖರ್ಚಿನಲ್ಲಿ ಪಿಂಚಣಿ ಅದಾಲತ್ ನಲ್ಲಿ ಭಾಗವಹಿಸಬಹುದು.

# ಗೋವಿಂದ್‌ಗೆ ಅಭಿನಂದನೆ



**ಕೋಲಾರ:** ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಚುನಾವಣೆಯಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಹಾಗೂ ಶಿಕ್ಷಕರ ಗೆಳೆಯರ ಬಳಗ ಬೆಂಬಲಿತ ಅಭ್ಯರ್ಥಿಯಾಗಿ ಸ್ಪರ್ಧಿಸಿ, ವಿಜೇತರಾಗಿ ಜಿಲ್ಲಾ ಶಾಖೆಗೆ ನಿರ್ದೇಶಕರಾಗಿ ಸಂಘಕ್ಕೆ ಆಯ್ಕೆಯಾಗಿರುವ ಯು.ಗೋವಿಂದ್ ರವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ತಾಲ್ಲೂಕಿನ ನರಸಾಪುರ ಹೋಬಳಿಯಲ್ಲಿ ನರಸಾಪುರ ಹಾಗೂ ಬೆಳಮಾರನಹಳ್ಳಿ ಕ್ಲಸ್ಟರ್ ನ ಸಿ ಆರ್ ಪಿ ಗಳಾಗಿ ಕಾರ್ಯ ನಿರ್ವಹಿಸುತ್ತಾ ಎಲ್ಲಾ ಶಾಲೆಗಳ ಶಿಕ್ಷಕರ ಹಾಗೂ ವಿದ್ಯಾರ್ಥಿಗಳು ಮನ ಗೆದ್ದಿರುವ ಶ್ರೀಯುತ ಯು.ಗೋವಿಂದ್ ರವರು ಇತ್ತೀಚೆಗೆ ನಡೆದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘಕ್ಕೆ ಶಿಕ್ಷಕರ ಕ್ಷೇತ್ರದಿಂದ ಸ್ಪರ್ಧಿಸಿ ಜಯ ಗಳಿಸುವ ಮೂಲಕ ಜಿಲ್ಲಾ ಶಾಖೆಗೆ

ನಿರ್ದೇಶಕರಾಗಿ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ನರಸಾಪುರ ಹಾಗೂ ಬೆಳಮಾರನಹಳ್ಳಿ ಕ್ಲಸ್ಟರ್ ನ ಮುಖ್ಯ ಶಿಕ್ಷಕರಿಂದ ಅಭಿನಂದನೆ ಸಲ್ಲಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಮಾತನಾಡಿದ ದಿನ್ನೆಹೊಸಹಳ್ಳಿ ಶಾಲೆಯ ಬಡ್ತಿ ಮುಖ್ಯಶಿಕ್ಷಕರಾದ ಕೆ.ಟಿ.ನಾಗರಾಜ ರವರು ಇಡೀ ತಾಲೂಕಿನಲ್ಲಿ ಒಳ್ಳೆಯ ಸೇವೆಯನ್ನು ಮಾಡಿ ಎಲ್ಲಾ ಶಿಕ್ಷಕರ ಮನಸ್ಸನ್ನು ಗೆದ್ದು ಚುನಾವಣೆಯಲ್ಲಿ ಅತ್ಯಧಿಕ ಮತಗಳಿಂದ ಜಯಶೀಲರಾಗಿರುವುದು ಸಂತೋಷವಾಗಿದೆ. ಅಷ್ಟೇ ಅಲ್ಲದೆ ನರಸಾಪುರ ಹೋಬಳಿಗೆ ಹೆಮ್ಮೆಯ ವಿಷಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಯು.ಗೋವಿಂದ್ ರವರನ್ನು ಎನ್.ಪಿ ಶ್ರೀನಿವಾಸ್ ನೇತೃತ್ವದಲ್ಲಿ ಎರಡು ಕ್ಲಸ್ಟರ್ಗಳ ಬಡ್ತಿ ಮುಖ್ಯಶಿಕ್ಷಕರು ಹಾಗೂ ಪ್ರಭಾರಿ ಮುಖ್ಯ ಶಿಕ್ಷಕರು ಸೇರಿ ಸನ್ಮಾನಿಸಲಾಯಿತು.

# ಕನ್ನಡ ವಿರೋಧಿ ಟಿಪ್ಪು ಗೋಷ್ಠಿ ಬೇಡ



**ಮಂಡ್ಯ:** ಅಪ್ಪಟ ಕನ್ನಡಿಗರ ಜಿಲ್ಲೆ , ಮಂಡ್ಯದಲ್ಲಿ ನಡೆಯಲಿರುವ ಸಾಹಿತ್ಯ ಸಮ್ಮೇಳನದಲ್ಲಿ ಕನ್ನಡ ವಿರೋಧಿ ಟಿಪ್ಪು ಸುಲ್ತಾನ್ ವಿಚಾರ ಘೋಷ್ಠಿಗೆ ಅವಕಾಶ ನೀಡಬಾರದೆಂದು ಜಿಲ್ಲಾಧಿಕಾರಿ ಅವರಿಗೆ ಬಿಜೆಪಿ ಕಾರ್ಯಕರ್ತರು ಮನವಿ ಸಲ್ಲಿಸಿದರು.

ಟಿಪ್ಪುಸುಲ್ತಾನ್ ಕನ್ನಡ ವಿರೋಧಿಯೂ ಆಗಿದ್ದು, ಆತ ತನ್ನ ಆಡಳಿತಾವಧಿಯಲ್ಲಿ ಈ ನಾಡಿನ ಜನರ ಮೇಲೆ ಬಲತ್ಕಾರವಾಗಿ ಪರ್ಷಿಯಾ ಭಾಷೆಯನ್ನು ಹೇರಿ ಜಾರಿಗೆ ತಂದಿರುವುದನ್ನು ಇತಿಹಾಸದ ಪುಟಗಳು ಸಾರಿ ಹೇಳುತ್ತಿವೆ. ಇತ್ತಿಚಿನ ದಿನಗಳಲ್ಲಿ ಆತನ ಮತಾಂಧತೆ ಹಾಗೂ ಕನ್ನಡ ವಿರೋಧಿ ನಿಲುವಿನ ಕುರಿತು ವ್ಯಾಪಕವಾದ ಚರ್ಚೆಗಳು ಕರ್ನಾಟಕದಲ್ಲಿ ನಡೆದಿದ್ದು, ಆತನೊಬ್ಬ ಕನ್ನಡ ದ್ವೇಷಿ ಹಾಗೂ ಹಿಂದು ವಿರೋದಿ ಮತಾಂಧನೆಂಬುದು ಮತ್ತಷ್ಟು ಬಹಿರಂಗವಾಗಿದೆ. ಆ ಮೂಲಕ ಆತ ಅತ್ಯಂತ ವಿವಾದಾಸ್ಪದ ವ್ಯಕ್ತಿಯಾಗಿ ಹೊರಹೊಮ್ಮಿರುತ್ತಾನೆ. ಇಂತಹ ವ್ಯಕ್ತಿಯ ವಿಚಾರ ಘೋಷ್ಠಿಯನ್ನು ಕೆಲ ಸಾಹಿತಿಗಳು ಮಂಡ್ಯ ದಲ್ಲಿ ನಡೆಯಲಿರುವ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಆಯೋಜಿಸಲು ಸಿದ್ಧತೆ ಮಾಡಿಕೊಂಡಿರುವುದು ಮಾಧ್ಯಮಗಳ ಮುಖೇನ ತಿಳಿದಿದೆ ,ಹಾಗು ಮಂಡ್ಯ ಜಿಲ್ಲೆಯ ಇತಿಹಾಸದ ಕೈಗನ್ನಡಿಯಂತಿರುವ ಈ ನಾಡಿನ ಹಿರಿಯ ಸಾಹಿತಿಗಳು ಹೊರತಂದಿರುವ ಸುವರ್ಣ ಮಂಡ್ಯ ಪುಸ್ತಕದಲ್ಲೂ ಟಿಪ್ಪು ಸುಲ್ತಾನ್ ಒಕ್ಕಲಿಗರ ವಿರೋಧಿ , ಕನ್ನಡ ವಿರೋಧಿ , ಮತಾಂದ . ಸ್ತ್ರಿ ಪೀಡಕ ಎಂದುದರ ಬಗ್ಗೆ ಉಲ್ಲೇಖಿಸಲಾಗಿದೆ , ಮೈಸೂರು ಗೆಜೆಟೀರ್ , ಚಿತ್ರದುರ್ಗ ಗೆಜೆಟೀರ್ , ಕೊಡಗು ಗೆಜೆಟೀರ್ , ಹಾಗು ಟಿಪ್ಪುವಿನ ಆಸ್ಥಾನದ ಇತಿಹಾಸಕಾರ ಮೀರ್ ಹುಸ್ಸೇನ್ ಅಲಿಖಾನ್ ಕೀರ್ಮಾನಿ ರವರಿಂದ ವಿರಚಿತವಾದ ದಿ ನಿಶಾನ್ ಏ ಹೈದರಿಯಲ್ಲಿ , ಆತನ ಆಡಳಿತದ ಕಾಲದಲ್ಲಿ ಕರ್ನಾಟಕದ ಅನೇಕ ಊರುಗಳ ಹೆಸರನ್ನು ಪರ್ಶಿಯನ್ ಭಾಷೆಗೆ ಬದಲಾಯಿಸಿದ್ದ , ಆತನ ಆಡಳಿತದಲ್ಲಿ , ಪರ್ಶಿಯನ್ ಭಾಷೆಯನ್ನೇ ಬಳಸಿದ್ದ , ಆತನ ನಾಣ್ಯಗಳು ಕೂಡ ಪರ್ಶಿಯನ್ ಪದಗಳದ್ದು , ಎಂಬುದರ ಬಗ್ಗೆ ಧಾಖಲಾಗಿದೆ , ಉಚ್ಚನ್ಯಾಯಾಲಯದ ನ್ಯಾಯಾಧೀಶರು ಕೂಡ ಟಿಪ್ಪು ಎಸ್ ಏ ಮೊನಾರ್ಕ್ ನಾಟ್ ಏ ಫ್ರೀ ಡಮ್ ಫೈಟರ್ ಎಂದು ಉಚ್ಚರಿಸಿ ನ್ಯಾಯಾಲಯದಲ್ಲಿ ಅಭಿಪ್ರಾಯ ಪಟ್ಟಿದ್ದಾರೆ , ಟಿಪ್ಪುವಿನ ಕಾಲದಲ್ಲಿ ಹೇರಲಾದ ಪರ್ಶಿಯನ್ ಭಾಷ ಪದಗಳು ನಾಡಿನ ಆಡಳಿತದಲ್ಲಿ ಹಾಗೆ ಇವೆ , ಉದಾಹರಣೆಗೆ . ದರಖಾಸ್ತು , ಮಸಲತ್ತು , ಮುಕ್ಕಾಂ , ಅಖೈರು , ಆಸಾಮಿ , ಠಿಕಾಣಿ , ಪಿರ್ಯಾದು , ಅಮೀನಾ , ಹಿಸ್ಸಾ , ಕಬ್ಜ . ಖರಾಬು ಹೀಗೆ ಹಲವಾರು ಪದಗಳು ಹಾಗೆ ಇವೆ , ಸಾಹಿತ್ಯ ಸಮ್ಮೇಳನದಲ್ಲಿ ಕನ್ನಡ ಪರ ಹೋರಾಟಗಾರರು , ಕನ್ನಡ ವಿದ್ವಾಂಸರು , ಕವಿಗಳು ಸಾಹಿತಿಗಳು , ಈ ಬಗ್ಗೆ ಗಮನ ಹರಿಸಿ ಈ ಪರ್ಶಿಯನ್ ಪದ ತೆಗೆದು ಪರ್ಯಾಯವಾಗಿ ನಮ್ಮ ಕನ್ನಡ ಪದಗಳನ್ನು ಬಳಸಲು ಸರ್ಕಾರಕ್ಕೆ ಆಗ್ರಹಿಸಬೇಕೆಂದು ಮನವಿ ಮಾಡುತ್ತೇವೆ , ಹಾಗೆಯೆ ಸುಮಾರು 30 ಕೋಟಿ ರೂಪಾಯಿಗೂ ಹೆಚ್ಚು ಹಣ ವ್ಯಯಮಾಡಿ ನುಡಿ ಜಾತ್ರೆ ನಮ್ಮ ಮಂಡ್ಯ ಜಿಲ್ಲೆಯಲ್ಲಿ ಮಾಡುತ್ತಿರುವುದು ಹೆಮ್ಮೆಯ ವಿಚಾರ ಆದರೆ ಮೊಸರಿನಸಿಕ್ಕ ಕಲ್ಲಿನ ಹಾಗೆ . ಕನ್ನಡ ವಿರೋಧಿ ಟಿಪ್ಪುವಿನ ವಿಚಾರ ಘೋಷ್ಠಿ ಈ ಕನ್ನಡದ ಹಬ್ಬದಲ್ಲೇಕೆ ಹಾಗಾಗಿ ಈ ಗೋಷ್ಟಿಗೆ ಅನುಮತಿ ನೀಡಬಾರದು ಎಂದು ಮನವಿ ಮಾಡಿದರು. ಜಿಲ್ಲಾ ವಕ್ತಾರ ಸಿ.ಟಿ.ಮಂಜುನಾಥ್, ಶಿವಕುಮಾರ್ ಆರಾಧ್ಯ, ಹೊಸಹಳ್ಳಿ ಶಿವು, ನಂದೀಶ್ ಭಾಗವಹಿಸಿದ್ದರು.

# ಅಂಬೇಡ್ಕರ್ ಇಂದಿಗೂ ಪ್ರಸ್ತುತ: ಇಂಡುವಾಳು ಸಚ್ಚಿದಾನಂದ

**ಮಂಡ್ಯ:** ಡಾ.ಬಿ ಆರ್ ಅಂಬೇಡ್ಕರ್ ಅವರು ತಮ್ಮ ಬದುಕನ್ನು ಸಾಮಾಜಿಕ ಹೋರಾಟದಲ್ಲಿ ಹಾಗೂ ಸಮಾಜದ ಬದಲಾವಣೆಗಾಗಿ ತಮ್ಮ ಜೀವನವನ್ನು ಮುಡುಪಾಗಿಟ್ಟಿದ್ದರು ಎಂದು ಇಂಡುವಾಳು ಸಚ್ಚಿದಾನಂದ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಎದುರು ಬಾಬಾ ಸಾಹೇಬ್ ಡಾ ಬಿ ಆರ್ ಅಂಬೇಡ್ಕರ್ ಅವರ 68ನೇ ಪರಿನಿರ್ವಾಣ ದಿನದ ಅಂಗವಾಗಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಅವರು ಮಾತನಾಡಿದರು.

ಡಾ ಬಿ ಆರ್ ಅಂಬೇಡ್ಕರ್ ಅವರು ಸಂವಿಧಾನವನ್ನು ಒಂದು ಜಾತಿಗೆ ಮೀಸಲಿಡದೆ ಎಲ್ಲಾ ವರ್ಗದ ಜನರಿಗೂ ಸರಿಸಮಾನವಾಗಿ ಬಾಳ್ವೆ ಮಾಡುವಂತೆ ಸಂವಿಧಾನ ರಚಿಸಿದ್ದರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಯತ್ತಗದಹಳ್ಳಿ ಸಂಜು, ಹನಿ ಯಂಬಾಡಿ ಸತೀಶ್, ಮಂಗಲ ರಮೇಶ್ ಭಾಗವಹಿಸಿದ್ದರು.



# ವಿದ್ಯಾರ್ಥಿಗಳು ಮುಖ್ಯ ವಾಹಿನಿಗೆ ಬರಬೇಕು: ಅಮಿತ್



**ಚಾಮರಾಜನಗರ:** ಪ್ರತಿಯೊಬ್ಬ ವಿದ್ಯಾರ್ಥಿಗಳು ಕಠಿಣ ಪರಿಶ್ರಮದಿಂದ ವಿದ್ಯಾಭ್ಯಾಸ ಕಲಿತು ಮುಖ್ಯ ವಾಹಿನಿಗೆ ಬರಬೇಕು ಎಂದು ಮೈಸೂರು ಸರ್ಕಾರಿ ಶಿಕ್ಷಣ ವಿದ್ಯಾಲಯ ಪ್ರಾವಚಕ ಡಿಆರ್ ಅಮಿತ್ ತಿಳಿಸಿದರು

ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯ ಬಿಎಡ್ ಕಾಲೇಜ್ ನಲ್ಲಿ, ಏರ್ಪಡಿಸಿದ ವಿದ್ಯಾರ್ಥಿ ಸಂಘದ ಸಮರೋಪ ಸಮಾರಂಭ ಹಾಗೂ ಅಂತಿಮ ಬಿ ಎಡ್, ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ ದಲ್ಲಿಮುಖ್ಯ ಭಾಷಣ ಮಾಡಿ

ವಿದ್ಯಾರ್ಥಿಗಳು ಓದಿನ ಜತೆಯಲ್ಲಿ ಕ್ರೀಡಾ ಸಾಧನೆ ಮತ್ತು ಸಾಂಸ್ಕೃತಿಕ ಸಾಧನೆ ಮಾಡುವುದು ಒಂದೆಡೆಯಾದರೆ, ಮುಂದಿನ ಜೀವನದ ಗುರಿಯನ್ನು ಬೆನ್ನಟ್ಟಲು ಉನ್ನತ ವ್ಯಾಸಂಗಗಳಾದ ಐಎಎಸ್, ಕೆಎಎಸ್ ಕ್ಷೇತ್ರಗಳಲ್ಲಿ ಸಾಧನೆ ಮಾಡಲು ಪಿಯುಸಿ ಹಂತದಲ್ಲೆ ಸಿದ್ಧತೆಯಲ್ಲಿ ತನ್ನ ದೃಢತೆಯನ್ನು ಸರಿದೂಗಿಸಿಕೊಳ್ಳಲು ಸನ್ನದ್ಧರಾಗಬೇಕು ಎಂದರು ವಿದ್ಯಾರ್ಥಿಗಳಿರುವ ಪರಿಶ್ರಮವನ್ನು ವಿದ್ಯಾಭ್ಯಾಸಕ್ಕೆ ಆಸಕ್ತಿ ವಹಿಸಿದರೆ ಉತ್ತಮ ಅಂಕ ಗಳಿಸಲು ಸಾಧ್ಯವಾಗುತ್ತದೆ ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜೆಎಸ್ ಎಸ್ ಶಿಕ್ಷಣ ಮಹಾವಿದ್ಯಾಲಯ ಬಿಎಡ್ ಕಾಲೇಜಿನ ಪ್ರಾಂಶುಪಾಲ ಡಾ ಕೆ ಸಿ ಬಸವಣ್ಣ ಮಾತನಾಡಿ ನಮ್ಮ ಕಾಲೇಜಿನಲ್ಲಿ ನಿರಂತರ ಅಧ್ಯಯನದಿಂದ ಜ್ಞಾನ ಅಭಿವೃದ್ಧಿ ಸಾಧ್ಯ ಆಗುವ ಜೊತೆಗೆ ಉತ್ತಮ ಶಿಕ್ಷಕ ಶಿಕ್ಷಕಿ ಆಗಲು ಸಾಧ್ಯವಾಗುತ್ತದೆ ಈಗಾಗಲೇ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ. ಸಾವಿರಾರು ವಿದ್ಯಾರ್ಥಿಗಳು ಶಿಕ್ಷಕರಾಗಿ ಕರ್ತವ್ಯ ಮಾಡುತ್ತಿದ್ದಾರೆ ಎಂದು ಮೆಚ್ಚಿಗೆ ವ್ಯಕ್ತಪಡಿಸಿದರು.

ಮಂಡ್ಯ ಜಿಲ್ಲೆನಾಗಮಂಗಲದಕ್ಷೇತ್ರ ಶಿಕ್ಷಣಾಧಿಕಾರಿ ಕೆ ಯೋಗೇಶ್, ಕಾಲೇಜಿನ ಉಪನ್ಯಾಸಕ ರಾಜು ಜೈನ್, ಯೋಗೇಶ್ ಕೆಎಂ, ಶಿವಶಂಕರ ರಾಜ ಅರಸ್. ಕೆಕೆ, ಸಿದ್ದರಾಜು ಕೆ ಎಸ್, ಸುರೇಶ್ ಡಿಎಸ್, ಎಂಬಿ ಶ್ರೀಧರ್, ವಿದ್ಯಾರ್ಥಿ ಸಂಘದ ನಿಶ್ಚಿತ, ಮಾಳ ವಿಕಾ, ತೇಜಸ್ವಿನಿ, ಶಿಲ್ಪ, ಚಂದನ, ಸೌಮ್ಯ, ಮೇಘ, ಪ್ರೀತಿ, ಇತರ ವಿದ್ಯಾರ್ಥಿಗಳು ಅನಿಸಿಕೆ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಹಲವಾರು ಉಪನ್ಯಾಸಕರು. ವಿದ್ಯಾರ್ಥಿಗಳು ಹಾಜರಿದ್ದರು.

# ತಂಬಾಕು ಮುಕ್ತ ಯುವ ಅಭಿಯಾನ



**ಹುಳಿಯಾರು:** ಹಂದನಕೆರೆ ಗ್ರಾಮ ಪಂಚಾಯ್ತಿಯಲ್ಲಿ ಇತ್ತೀಚೆಗೆ ತಂಬಾಕು ಮುಕ್ತ ಯುವ ಅಭಿಯಾನ ಕಾರ್ಯಕ್ರಮ ಆಯೋಜಿಸಿ ತಂಬಾಕು ಉತ್ಪನ್ನಗಳ ಬಳಕೆಯಿಂದ ಆಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲಾಯಿತು.

ತಂಬಾಕು ಮುಕ್ತ ಗ್ರಾಮವನ್ನಾಗಿ ಘೋಷಿಸುವ ಬಗ್ಗೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಜೊತೆ ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿಯ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಸಿ.ವಿ.ವೆಂಕಟರಾಮಯ್ಯನವರು ಚರ್ಚಿಸಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ಸಿಬ್ಬಂದಿಗಳಾದ ಕಾಂತರಾಜು, ಮಧು, ಸೌಭಾಗ್ಯಮ್ಮ, ಮೀನಾಕ್ಷಮ್ಮ ಹಾಗೂ ಗ್ರಾಮ ಪಂಚಾಯಿತಿಯ ಕಚೇರಿ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಪುಷ್ಪ ನಮನ



**ದೇವನಹಳ್ಳಿ ಪಟ್ಟಣದ ತಾಲ್ಲೂಕು ಆಡಳಿತ ಕಚೇರಿ ಯಲ್ಲಿ ದಲಿತ ವಿವಿಧ ಸಂಘಟನೆಗಳಿಂದ ಡಾ.ಬಿಆರ್. ಅಂಬೇಡ್ಕರ್ ಅವರ ಪುಣ್ಯಸ್ಮರಣೆ ದಿನದ ಅಂಗವಾಗಿ ಅಂಬೇಡ್ಕರ್ ಪುತ್ತಳಿಕೆಗೆ ಪುಷ್ಪ ನಮನ ಸಲ್ಲಿಸಲಾ ಯಿತು. ತಹಶಿಲ್ದಾರ್ ಬಾಲಕೃಷ್ಣ, ದಲಿತ ಮುಖಂಡರಾದ ಮೂರ್ತಿ, ಮಾರಪ್ಪ ,ಅತ್ತಿಬೆಲೆ ನರಸಪ್ಪ, ಕೆವಿ.ಸ್ವಾಮಿ, ಬುಳ್ಳಹಳ್ಳಿ ಮುನಿರಾಜು, ಮೂರ್ತಿ, ಸಾವಕನಹಳ್ಳಿ ಶ್ರೀನಿವಾಸ್, ದಲಿತ ಮಹಿಳೆಯ ರಾದ,ಸೋಲೂರು ನಾಗರಾಜು, ಶ್ರೀನಿವಾಸ್ ಗಾಂಧಿ, ಯಲಿಯೂರು ನಾರಾಯಣ ಸ್ವಾಮಿ, ರಾಜಣ್ಣ, ಕದಿರಪ್ಪ,ಪಾಳ್ಯ ಮುನಿರಾಜು, ದೇವನಾಯಕಹಳ್ಳಿ ನಾಗರಾಜು, ವೆಂಕಟೇಶ್, ಹಠವಾದಿ ಲಕ್ಷ್ಮಣ್, ಸಮಾಜ ಕಲ್ಯಾಣ ಸಿಬ್ಬಂದಿ ವರ್ಗ, ಇಒ ಶ್ರೀನಾಥ್ ಗೌಡ, ಬಿಇಒ ಸುಮಾ ಮುಂತಾದವರು ಕಾರ್ಯಕರ್ತರು ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.**

# ಶ್ರದ್ಧಾಂಜಲಿ ಅರ್ಪಿಸಿದ ಕಲಾವಿದರು



**ಬೆಂಗಳೂರು:** ಕನ್ನಡ ಚಿತ್ರರಂಗದ ಹಿರಿಯ ಕಲಾವಿದೆ ದಕ್ಷಿಣ ಭಾರತದಹೆಸರಾಂತ ವರನಟಿ ಡಾ. ಎಂ ಲೀಲಾವತಿ ಚಿತ್ರರಂಗವನ್ನಗಲಿ ಒಂದು ವರ್ಷವಾಯಿತು. ಅವರ ಪುಣ್ಯಸ್ಮರಣೆಯ ನಿಮಿತ್ತ ಮಗ ವಿನೋದ್ ರಾಜ್ ಹುಟ್ಟೋರು ಸೋಲದೇವನಹಳ್ಳಿಯಲ್ಲಿ ಪ್ರೀತಿಯ ಅಮ್ಮನ ಸ್ಮಾರಕ ಮತ್ತು ಅವರ ನೆನಪಿನ ಸಂಗ್ರಹ ನಿರ್ಮಿಸಿದ್ದಾರೆ ವೀಕ್ಷಿಸಲು ಬರುವವರಿಗೆ ನಿತ್ಯ ದಾಸೋಹವಿದೆ.

ಕರ್ನಾಟಕ ಚಲನಚಿತ್ರ ಪೋಷಕ ಕಲಾವಿದರ ಸಂಘದ ಚುನಾಯಿತ ಅಧ್ಯಕ್ಷರಾದ ಪದ್ಮಿನಿ ನಂದಾ, ಹಂಗಾಮಿ ಕಾರ್ಯದರ್ಶಿ ಹಿರಿಯ ಹಾಸ್ಯ ಕಲಾವಿದ ಮೂಗ್ ಸುರೇಶ್, ಆಡಳಿತ ಮಂಡಳಿಯ ಸದಸ್ಯರು, ಅನೇಕ

ಸದಸ್ಯ ಕಲಾವಿದರು ಹಿರಿಯ ಕಲಾವಿದರು ಇಂದು ಸ್ಮಾರಕಕ್ಕೆ ಭೇಟಿಕೊಟ್ಟು ಹೃದಯಪೂರ್ವಕ ಶ್ರದ್ಧಾಂಜಲಿ ಅರ್ಪಿಸಿ ಸ್ಮಾರಕ ಹಾಗೂ ಅವರ ಚಲನಚಿತ್ರ ಕ್ಷೇತ್ರದ ಸಂಗ್ರಹವನ್ನ ವೀಕ್ಷಿಸಿದರು. ಈ ಸಂದರ್ಭದಲ್ಲಿ ವಿನೋದ್ ರಾಜ್ ಅವರು ಸಲ್ಲಿಸುತ್ತಿರುವ ಸಾಮಾಜಿಕ ರೈತ ಸೇವೆ ಹಾಗೂ ಚಿತ್ರರಂಗದ ಕಲಾವಿದರ ಸೇವೆಗಾಗಿ ಪೋಷಕ ಕಲಾವಿದರ ಸಂಘದವತಿಯಿಂದ ಆತ್ಮೀಯವಾಗಿ ಸತ್ಕಾರಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ನಟ ವಿನೋದ್ ರಾಜ್ ಅಮ್ಮನವರು ಚಿತ್ರಕ್ಷೇತ್ರದಲ್ಲಿ ನಡೆದುಬಂದ ದಾರಿಯನ್ನ, ಅವರು ರೈತರ ಮತ್ತು ಕಲಾವಿದರ ಬಗ್ಗೆ ಇಟ್ಟಿದ್ದ ಕಾಳಜಿಯನ್ನ ವಿವರಿಸಿದರು. ನಟ ಗಾಯಕ ಪೋಷಕ ಕಲಾವಿದರು ವಿಜಯಕುಮಾರ್ ಚಿತೋರಿ ಅವರ ಜೊತೆಗೂಡಿ ಗಾಯನದ ಮುಖಾಂತರ ಶ್ರದ್ಧಾಂಜಲಿ ಅರ್ಪಿಸಿದರು.


ಕರ್ನಾಟಕ ಸರ್ಕಾರ

ಕಾರ್ಯನಿರ್ವಾಹಕ ಅಧಿಕಾರಿಗಳ ಕಛೇರಿ

**ತಾಲ್ಲೂಕು ಪಂಚಾಯತ್, ಹುಣಸೂರು**

ಸಂ.ಕಾಅ/ತಾ.ಪಂ./ಹುಣಸೂರು/ಇ–ಪ್ರಕ್ಯೂರ್ ಮೆಂಟ್/ಸ.ಇಂ–1

**ಅಲ್ಪಾವಧಿ ಇ–ಪ್ರಕ್ಯೂರ್‌ಮೆಂಟ್–ಟೆಂಡರ್ ಪ್ರಕಟಣೆ ಸಂಖ್ಯೆ.01/2024–25/ ದಿ: 04.12.2024**

ಕರ್ನಾಟಕ ಸರ್ಕಾರದ ರಾಜ್ಯಪಾಲರ ಪರವಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಹುಣಸೂರುರವರು ಕರ್ನಾಟಕ ಸರ್ಕಾರದ ವಿದ್ಯುನ್ಮಾನ ಸಂಗ್ರಹಣೆ ವೇದಿಕೆ ಮೂಲಕ ಬೆಂಗಳೂರುರವರ ಸಹಯೋಗದೊಂದಿಗೆ,/PWD/PRED Registered by Government ನಲ್ಲಿ ನೊಂದಾಯಿತರಾಗಿರುವ ಅಂದರೆ ಲೋಕೋಪಯೋಗಿ ಇಲಾಖೆ/ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ಕಡ್ಡಾಯವಾಗಿ ಎನ್‌ರೋಲ್ ಮಾಡಿರುವ 3ನೇ ದರ್ಜೆ ಹಾಗೂ 4ನೇ ದರ್ಜೆ ಮತ್ತು ಮೇಲ್ಪಟ್ಟ ಗುತ್ತಿಗೆದಾರರಿಂದ ಟೆಂಡರ್ ನಮೂನೆ **KW-1** ಪದ್ಧತಿಯಂತೆ 2024–25ನೇ ಸಾಲಿನ ಸಂಯುಕ್ತ ಅನುದಾನ (ತಾಲ್ಲೂಕು ಪಂಚಾಯಿತಿ) ಲೆಕ್ಕ ಶೀರ್ಷಿಕೆ:–2515–00–102– 0–62 ಅನುದಾನದಡಿ ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಫಾರಂ ಬೆಲೆ ಇ–ಪ್ರಕ್ಯೂರ್‌ಮೆಂಟ್ ನಂತೆ ಸಲ್ಲಿಸಬೇಕು. ಸದರಿ ಕಾಮಗಾರಿಗಳ ಒಟ್ಟು ಮೊತ್ತವು ರೂ.39.00ಲಕ್ಷಗಳಾಗಿದ್ದು, ಒಟ್ಟು 03 ಕಾಮಗಾರಿಗಳಿಗೆ ಇ–ಪ್ರಕ್ಯೂರ್‌ಮೆಂಟ್ ಮೂಲಕ ಅಲ್ಪಾವಧಿ ಟೆಂಡರ್‌ನ್ನು ಆಹ್ವಾನಿಸಲಾಗಿರುತ್ತದೆ. ಇ.ಎಂ.ಡಿ ಮೊತ್ತವು ಸದರಿ ನೋಟಿಫಿಕೇಷನ್‌ನಲ್ಲಿ/ಇ– ಪ್ರಕ್ಯೂರ್‌ಮೆಂಟ್ ಕಾಮಗಾರಿಗಳಂತೆ ಇರುತ್ತದೆ. ಟೆಂಡರ್ ಫಾರಂಗೆ ಅರ್ಜಿ ಸಲ್ಲಿಸಲು ಮತ್ತು ಭರ್ತಿ ಮಾಡಿದ ಫಾರಂಗಳನ್ನು ಆನ್ ಲೈನ್‌ನಲ್ಲಿ ಸಲ್ಲಿಸಲು **ದಿನಾಂಕ:05.12.2024** ರಿಂದ **11.12.2024** ಸಂಜೆ 4.00 ಘಂಟೆಯವರೆಗೆ ಹಾಗೂ ಟೆಂಡರ್ ಬಗ್ಗೆ ಸ್ಪಷ್ಟೀಕರಣ/ವಿಚಾರಿಸಿ ಮಾಹಿತಿ ಪಡೆಯಲು ಅಂತಿಮ **ದಿನಾಂಕ: 11.12.2024,** 4.00 ಘಂಟೆಯಾಗಿದ್ದು, ಸಾಧ್ಯವಾದರೆ ಟೆಂಡರ್ ತೆರೆಯುವ **ದಿನಾಂಕ:11.12.2024ರ** ಸಂಜೆ 5.00 ಘಂಟೆಯ ನಂತರವಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ಕರ್ನಾಟಕ ಸರ್ಕಾರದ ವಿದ್ಯುನ್ಮಾನ ಸಂಗ್ರಹಣೆ ವೇದಿಕೆ ಮೂಲಕ (e-procurement portal) https://kppp.karnataka.gov.in ವೆಬ್ ಸೈಟ್ ನಲ್ಲಿ ಪಡೆಯಬಹುದಾಗಿದೆ. ಈ ಬಗ್ಗೆ ಇನ್ನೂ ಹೆಚ್ಚಿನ ವಿವರಗಳಿಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಹುಣಸೂರು (ಫೋನ್ ನಂ.0821– 252028) ರವರ ಕಛೇರಿಯ ವೇಳೆಯಲ್ಲಿ ಪಡೆಯಬಹುದು.

**ಸಹಿ/– ಕಾರ್ಯನಿರ್ವಾಹಕ ಅಧಿಕಾರಿಗಳು,**
**ತಾಲ್ಲೂಕು ಪಂಚಾಯತ್, ಹುಣಸೂರು**

DIPR/DDMYS/921/KSMCA-619/2024-25

## ವಿದ್ಯುತ್ ವ್ಯತ್ಯಯ

**ಚಿಕ್ಕಬಳ್ಳಾಪುರ:** ಚಿಂತಾಮಣಿ 220 ಕೆ.ವಿ ಸ್ವೀಕರಣಾ ಕೇಂದ್ರದಿಂದ ಹೊರಹೋಗುವ 66 ಕೆವಿ ಚಿಂತಾಮಣಿ-ತಳಗವಾರ ಮಾರ್ಗದ ಹಾಲಿ ಇರುವ ಅಂಥಿಣಜ ವಾಹಕವನ್ನು ಆಡಿಚಿಇಜ ವಾಹಕವನ್ನಾಗಿ ಉನ್ನತೀಕರಿಸುವ ಕಾಮಗಾರಿಯನ್ನು ಬೃಹತ್ ಕಾಮಗಾರಿ ವಿಭಾಗ, ಕ.ವಿ.ಪ್ರ.ನಿ.ನಿ ಕೋಲಾರ ರವರು ಹಮ್ಮಿಕೊಂಡಿದ್ದು, ಡಿಸೆಂಬರ್ 9 ರಿಂದ 27 ರವರೆಗೆ ತಳಗವಾರ ಉಪಕೇಂದ್ರದಿಂದ ವಿದ್ಯುತ್ ಸರಬರಾಜಾಗವು ಎಲ್ಲಾ ಕೃಷಿ ಫೀಡರ್ ಗಳಿಗೆ ರಾತ್ರಿ 9 ಗಂಟೆಯಿಂದ ಬೆಳಿಗ್ಗೆ 10 ಗಂಟೆಯವರೆಗೆ ಪಾಳಿಯಲ್ಲಿ ವಿದ್ಯುತ್ ಸರಬರಾಜು ಮಾಡಲಾಗುವುದು ಹಾಗೂ ಎನ್.ಜೆ.ವೈ ಮತ್ತು ಕೈಗಾರಿಕ ಮಾರ್ಗಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ಯಾವುದೇ ವಿದ್ಯುತ್ ವ್ಯತ್ಯಯವಾಗುವುದಿಲ್ಲ ಎಂದು ಚಿಂತಾಮಣಿ ಬೆ.ವಿ.ಕಂ ಗ್ರಾಮೀಣ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

## ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ತರಬೇತಿಗೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಎ.ಎನ್.ಎಂ ತರಬೇತಿ ಕೇಂದ್ರಗಳಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದ್ದು. ಅರ್ಜಿ ಸಲ್ಲಿಸುವ ಅವಧಿಯನ್ನು ಡಿಸೆಂಬರ್ 18 ರ ವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಹೇಶ್ ಕುಮಾರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅರ್ಹತೆಗಳು: ದ್ವಿತೀಯ ಪಿ.ಯು.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. 18 ರಿಂದ 30 ವರ್ಷದೊಳಗಿರಬೇಕು. ಕನಿಷ್ಠ 5 ವರ್ಷಗಳು ಕರ್ನಾಟಕ ರಾಜ್ಯದಲ್ಲಿ ವಿದ್ಯಾಭ್ಯಾಸ ಮಾಡಿರಬೇಕು. ಹೆಚ್ಚಿನ ಮಾಹಿತಿಗಾಗಿ https://hfwcom.karnataka.gov.in ನಲ್ಲಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ನಗರದ ಕಂದವಾರ ಜಿಲ್ಲಾ ಎ.ಎನ್.ಎಂ ತರಬೇತಿ ಕೇಂದ್ರವನ್ನು ಸಂಪರ್ಕಿಸಬಹುದು.

## 9ರಂದು ರಾಷ್ಟ್ರೀಯ ಜಂತುಹುಳು ನಿವಾರಣಾ ದಿನಾಚರಣೆ

**ಮಂಡ್ಯ:** ಡಿಸೆಂಬರ್ 9 ಸೋಮವಾರ ದಂದು ರಾಷ್ಟ್ರೀಯ ಜಂತುಹುಳು ನಿವಾರಣೆ ದಿನಾಚರಣೆಯ ಕಾರ್ಯಕ್ರಮವಿರುವ ಪ್ರಯುಕ್ತ ಜಿಲ್ಲೆಯ ಎಲ್ಲಾ ಶಾಲಾ ಮಕ್ಕಳು ಪೂರ್ಣ ಪ್ರಮಾಣದಲ್ಲಿ ತರಗತಿಗೆ ಹಾಜರಾಗಿ ಮಾತ್ರೆಗಳನ್ನು ತೆಗೆದುಕೊಳ್ಳುವಂತೆ ಸಂಬಂಧ ಪಟ್ಟ ಶಾಲಾ ಶಿಕ್ಷಕರು ಸೂಕ್ತ ಕ್ರಮ ವಹಿಸತಕ್ಕದ್ದು.=ಡಿಸೆಂಬರ್ 9 ರಂದು ಗೈರು ಹಾಜರಾದ ವಿದ್ಯಾರ್ಥಿಗಳಿಗೆ 16 ರಂದು ಮಾತ್ರೆಗಳನ್ನು ನೀಡಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಕ್ಷೇಪಣೆಗಳಿದ್ದಲ್ಲಿ ದೂರು ಸಲ್ಲಿಸಿ

**ಮಂಡ್ಯ:** ಮಂಡ್ಯ ತಾಲ್ಲೂಕು, ಕೊತ್ತತ್ತಿ ಹೋಬಳಿ, ಸೂನಗಹಳ್ಳಿ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ 84 ಸಂಖ್ಯೆ ನೀಲಗಿರಿ ಮರಗಳನ್ನು ನೂತನ ಶಾಲಾ ಕಟ್ಟಡ ಹಾಗೂ ಇನ್ನಿತರ ನಿರ್ಮಾಣಕ್ಕಾಗಿ ತೆರವು ಮಾಡುವಂತೆ ಶಾಲಾ ವತಿಯಿಂದ ಮನವಿ ಮಾಡಿದ್ದು, ಅದರಂತೆ ಅರಣ್ಯ ಇಲಾಖೆ ವತಿಯಿಂದ ಸದರಿ 84 ಸಂಖ್ಯೆ ನೀಲಗಿರಿ ಮರಗಳನ್ನು ತೆರವುಗೊಳಿಸುವ ಸಂಬಂದ ಸಾರ್ವಜನಿಕರ ವಿಚಾರಣೆ ಮಾಡಲು ಪ್ರಾದೇಶಿಕ ಅರಣ್ಯ ವಲಯ ಅರಣ್ಯಾಧಿಕಾರಿಗಳು ನಿರ್ಧರಿಸಿದ್ದು ಸದರಿ ನೀಲಗಿರಿ ಮರಗಳನ್ನು ತೆರವು ಮಾಡುವ ಸಂಬಂಧ ಯಾವುದಾದರೂ ಸಂಘ ಸಂಸ್ಥೆಗಳಿಂದ, ಸಾರ್ವಜನಿಕರಿಂದ, ಪರಿಸರ ಪ್ರೇಮಿಗಳಿಂದ ಅಹವಾಲುಗಳಿದ್ದರೆ ಸಲ್ಲಿಸಲು ಏಳು ದಿನಗಳ ಕಾಲಾವಕಾಶ ನೀಡಿದ್ದು ಏನಾದರೂ ಆಕ್ಷೇಪಣೆಗಳಿದ್ದಲ್ಲಿ ಡಿಸೆಂಬರ್ 16 ರಂದು ಮಂಡ್ಯ ಪ್ರಾದೇಶಿಕ ಅರಣ್ಯ ವಲಯ ಕಚೇರಿಗೆ ಸಲ್ಲಿಸತಕ್ಕದ್ದು ಎಂದು ಮಂಡ್ಯ ಪ್ರಾದೇಶಿಕ ಅರಣ್ಯ ವಲಯ ಅರಣ್ಯಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** National Council for Teacher Education ನಿಂದ ಮಾನ್ಯತೆ ಪಡೆದಿರುವ ಸರ್ಕಾರಿ/ಅರೆಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ದಾಖಲಾತಿ ಹೊಂದಿ 2024-25 ನೇ ಸಾಲಿನಲ್ಲಿ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ವಿದ್ಯಾರ್ಥಿಗಳಿಗೆ ರೂ 25,000/- ಗಳ ವಿಶೇಷ ಪ್ರೋತ್ಸಾಹಧನವನ್ನು ಅರ್ಹ ವಿದ್ಯಾಥಿಗಳ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮುಖಾಂತರ ಜಮಾ ಮಾಡಲಾಗುವುದು.

ಈ ಸೌಲಭ್ಯವನ್ನು ಪಡೆದುಕೊಳ್ಳಲು ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಆಸಕ್ತ ಅಲ್ಪಸಂಖ್ಯಾತರ ಸಮುದಾಯದ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿಯನ್ನು ಡಿಸೆಂಬರ್ 25 ರೊಳಗೆ https://sevasindhu.karnataka.gov.in ವೆಬ್‌ಸೈಟ್ ಮುಖಾಂತರ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:- ಮಂಡ್ಯ ಜಿಲ್ಲಾ ಕಛೇರಿ-08232297240, ತಾಲೂಕು ವಿಸ್ತರಣಾಧಿಕಾರಿ ಮಂಡ್ಯ ವಿಭಾಗ-7259138868, ಪಾಂಡವಪುರ ತಾಲೂಕು ವಿಸ್ತರಣಾಧಿಕಾರಿ 7019571032, ಮಂಡ್ಯ ತಾಲೂಕು ಮಾಹಿತಿ ಕೇಂದ್ರ-9880743927, ಮಳವಳ್ಳಿ 9986682921, ಪಾಂಡವಪುರ-7353860464, ನಾಗಮಂಗಲ-9663180791, ಶ್ರೀರಂಗಪಟ್ಟಣ-9036485386, ಮದ್ದೂರು-9886786913, ಕೆ.ಆರ್.ಪೇಟೆ-9035251834 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ. ಬಿ.ಆರ್. ಅಂಬೇಡ್ಕರ್ ಪರಿನಿಬ್ಬಾಣ ದಿನ ಆಚರಣೆ

**ಚಾಮರಾಜನಗರ:** ಬಾಬಾ ಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 68ನೇ ಪರಿನಿಬ್ಬಾಣ ದಿನದ ಅಂಗವಾಗಿ ನಗರದಲ್ಲಿಂದು ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಸಂವಿಧಾನಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರಿಗೆ ಗೌರವ ಸಮರ್ಪಣೆ ಮಾಡಿದರು.

ಮೊದಲು ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಸಂವಿಧಾನಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ನಗರಸಭೆ ಸದಸ್ಯರಾದ ಎಸ್. ಸುರೇಶ್, ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಇನ್ನಿತರ ಗಣ್ಯರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಬಳಿಕ ನಗರದ ಜೆ.ಎಚ್. ಪಟೇಲ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಹಾಗೂ ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್ ಅವರು ದೀಪ ಬೆಳಗಿಸಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಗೌರವ ಸಲ್ಲಿಸಿದರು.

ಇದೇ ವೇಳೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ




ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಎಲ್ಲಾ ಗ್ರಂಥಗಳಿಗಿಂತ ಶ್ರೇಷ್ಠ ಗ್ರಂಥ ನಮ್ಮ ಸಂವಿಧಾನವಾಗಿದೆ. ಅದೇ ಸಂವಿಧಾನದಡಿ ನಾವೆಲ್ಲರೂ ನೆಮ್ಮದಿಯಿಂದ ಬದುಕುತ್ತಿದ್ದೇವೆ. ಅದಕ್ಕೆ ಕಾರಣಕರ್ತರು ಸಾಮಾಜಿಕ ನ್ಯಾಯ ಪರಿಕಲ್ಪನೆಯಡಿ ದೇಶದ ಎಲ್ಲರಿಗೂ ಸಮಾನತೆ ಒದಗಿಸಿದ ಮಹಾನ್ ಮಾನವತಾವಾದಿ ಡಾ. ಬಿ.ಆರ್. ಅಂಬೇಡ್ಕರ್ ಆಗಿದ್ದಾರೆ ಎಂದರು.

ಹಲವು ವರ್ಷಗಳ ಕಾಲ ಆಳಿದ ಬ್ರಿಟೀಷರು ದೇಶವನ್ನು ಬಡತನಕ್ಕೆ ನೂಕಿದ್ದರು. ಬಳಿಕ ಸ್ವಾತಂತ್ರ್ಯ ನಂತರ ದೇಶದಲ್ಲಿದ್ದ ಬಡತನ, ಅನಕ್ಷರತೆ, ಅಸಮಾನತೆಯನ್ನು ಹೋಗಲಾಡಿಸಿ ಪ್ರತಿಯೊಬ್ಬರಿಗೂ ಗೌರವಯುತ ಬದುಕು ಕಟ್ಟಿಕೊಡಲು ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನ ರಚಿಸಿದರು. ಹಲವಾರು ದೇಶಗಳ ಉತ್ತಮ ಸಂವಿಧಾನಗಳನ್ನು ಅಧ್ಯಯನ ಮಾಡಿದ ಅಂಬೇಡ್ಕರ್ ಅವರು ನಮ್ಮ ದೇಶಕ್ಕೆ ಏನು ಬೇಕು, ಏನು ಬೇಡ ಎಂಬುದನ್ನು ಮನಗಂಡಿದ್ದರು ಎಂದು ತಿಳಿಸಿದರು. ಸಾಮಾಜಿಕ ನ್ಯಾಯದಡಿ ಪುರುಷ, ಮಹಿಳೆಯರು ಸೇರಿದಂತೆ ಎಲ್ಲಾ ವರ್ಗಗಳಿಗೂ ಸಮಾನತೆ, ಪ್ರತಿಯೊಬ್ಬರಿಗೂ ಮತದಾನದ ಹಕ್ಕನ್ನು ಒದಗಿಸಿದರು. ಇದರಿಂದಾಗಿಯೇ ವಿಶ್ವದಲ್ಲಿಯೇ ಅತಿ ದೊಡ್ಡ ಪ್ರಜಾಪ್ರಭುತ್ವದ ದೇಶವಾಗಿ ಭಾರತ ಗುರುತಿಸಿಕೊಂಡಿದೆ. ಇದಕ್ಕೆ ನಮ್ಮ ಸಂವಿಧಾನವೇ ಕಾರಣವಾಗಿದೆ. ಅಂತಹ ಮಹತ್ವಪೂರ್ಣ ಸಂವಿಧಾನ ರಚಿಸಿದ ಡಾ. ಬಿ.ಆರ್. ಅಂಬೇಡ್ಕರ್ ಅವರು ಚಿರಸ್ಮರಣೀಯರಾಗಿದ್ದಾರೆ ಎಂದರು. ಅಂಬೇಡ್ಕರ್ ಚಿಂತನೆ, ಆಶಯಗಳನ್ನು ಜನಸಾಮಾನ್ಯರಿಗೆ ಪಸರಿಸುವ ಸಲುವಾಗಿ ವಿಜಯವಾಡದಲ್ಲಿ ಅಂಬೇಡ್ಕರ್ ಪ್ರತಿಮೆ, ಬೃಹತ್ ಗ್ರಂಥಾಲಯ ಹಾಗೂ ಅಂತರಾಷ್ಟ್ರೀಯ ಅಧ್ಯಯನ ಕೇಂದ್ರ ತೆರೆಯಲಾಗಿದೆ. ಅದೇ ಮಾದರಿಯಲ್ಲಿ ವಿದ್ಯಾರ್ಥಿಗಳಿಗೆ ಮಾತ್ರವಲ್ಲ, ಪ್ರತಿಯೊಬ್ಬರಿಗೂ ಅನುಕೂಲವಾಗುವಂತೆ ಚಾಮರಾಜನಗರ ಜಿಲ್ಲೆಯಲ್ಲಿ ದಕ್ಷಿಣ ಭಾರತದಲ್ಲಿಯೇ ಅತಿದೊಡ್ಡ ಸಂಶೋಧನಾ ಕೇಂದ್ರವನ್ನು ಸಮಾಜ ಕಲ್ಯಾಣ ಇಲಾಖೆ ಮೂಲಕ ತೆರೆಯಲು ಚಿಂತನೆ ನಡೆಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

# ಅಂಬೇಡ್ಕರ್ ತತ್ವ ಅನುಸರಿಸಿ

**ಮಂಡ್ಯ:** ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಡಿಸೆಂಬರ್ 6 ರಂದು ತಮ್ಮ ದೇಹವನ್ನು ತ್ಯಾಗ ಮಾಡಿದ್ದು, ಅವರ ಕೊಡುಗೆ, ಸಾಧನೆಗ, ಆದರ್ಶ, ಚಿಂತನೆ ಹಾಗೂ ಮೌಲ್ಯಗಳು ಇಂದಿಗೂ ಜೀವಂತವಾಗಿದೆ. ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅವರ ಚಿಂತನೆ, ತತ್ವ ಹಾಗೂ ಆದರ್ಶವನ್ನು ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ತಿಳಿಸಿದರು.

ಅವರು ಇಂದು ಭಾರತ ರತ್ನ, ಸಂವಿಧಾನ ಶಿಲ್ಪಿ, ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ರವರ 68ನೇ ಪರಿನಿರ್ವಾಣ ದಿನದ ಅಂಗವಾಗಿ ಜಿಲ್ಲಾಧಿಕಾರಿಗಳ ಕಛೇರಿಯ ಮುಂಭಾಗದ ಉದ್ಯಾನವನದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ರವರ ಪ್ರತಿಮೆಗೆ ಅವರು ಮಾಲಾರ್ಪಣೆ ಹಾಗೂ ಪು?ಪಾರ್ಚನೆ ನೆರವೇರಿಸಿ ಮಾತನಾಡಿದರು.

ಬಾಬಾ ಸಾಹೇಬ್ ಅಂಬೇಡ್ಕರ್ ಅವರು ದೇಶ ಕಂಡಂತಹ ಹೊಸ ಶಕ್ತಿ ಹಾಗೂ ಚೇತನವಾಗಿದ್ದು, ದೇಶಕ್ಕೆ ಅತಿ ದೊಡ್ಡ ಸಂವಿಧಾನವನ್ನು ಕೊಟ್ಟಂತಹ ಪುಣ್ಯಾತ್ಮರು. ಅವರು ನೀಡಿರುವ ಸಂವಿಧಾನದ ಅಡಿಯಲ್ಲಿ ನಾವೆಲ್ಲರೂ ಜೀವಿಸುತ್ತಿದ್ದು,

ಅಂತಹ ಚೈತನ್ಯ ನಮ್ಮ ದೇಶಕ್ಕೆ ದಕ್ಕಿದ್ದು ನಮ್ಮೆಲ್ಲರ ಪುಣ್ಯವಾಗಿದೆ ಎಂದರು.

ಅಂಬೇಡ್ಕರ್ ರವರು ಕಂಡಂತಹ ಕನಸಿನ ಅನುಗುಣವಾಗಿ ಸಂವಿಧಾನದ ಆಶಯಗಳಂತೆ ಪಣತೊಟ್ಟು ನಾವೆಲ್ಲರೂ ಬದುಕಬೇಕು.ಅವರು ಚಿಂತನೆಗಳನ್ನು ನಮ್ಮ ಮಕ್ಕಳ ಮನಸ್ಸಿನಲ್ಲಿ ಬಿತ್ತಬೇಕು ಎಂದು ತಿಳಿಸಿದರು.



ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶೇಖ್ ತನ್ವಿರ್ ಆಸೀಫ್ ಅವರು ಮಾತನಾಡಿ ಇಂದು ಬಾಬಾ ಸಾಹೇಬ್ ಡಾ. ಬಿ.ಆರ್.ಅಂಬೇಡ್ಕರ್ ರವರ 68ನೇ ಪರಿನಿರ್ವಾಣ ದಿನವಾಗಿದೆ. ಅವರು ಬರೆದಿರುವ ಪುಸ್ತಕಗಳು ಪ್ರಸ್ತುತ ದಿನದಲ್ಲಿಯೂ ಜೀವಂತವಾಗಿದೆ. ನಮ್ಮ ದೇಶಕ್ಕೆ ಅವರು ಕೊಟ್ಟಿರುವ ಸಂವಿಧಾನವು ನಮ್ಮ ಬದುಕಿಗೆ ದಾರಿಯಾಗಿದೆ. ಅವರು ಪ್ರತಿಯೊಬ್ಬರಿಗೂ ಸಮಾನತೆ, ಐಕ್ಯತೆ, ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯವನ್ನು ಸಂವಿಧಾನದ ಮೂಲಕ ನೀಡಿ ಜನರಿಗೆ ಶಕ್ತಿ ತುಂಬಿದ್ದಾರೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಅವರು ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರು ಡಿಸೆಂಬರ್ 6 ರಂದು ನಮ್ಮನ್ನು ಶಾರೀರಾತ್ಮಕವಾಗಿ ಆಗಲಿದರು ಕೂಡ ಅವರು ನೀಡಿದ ಸಂವಿಧಾನದ ಆಧಾರದ ಮೇಲೆ ಇಂದಿಗೂ ಕಾನೂನು ವ್ಯವಸ್ಥೆ ನಿಂತಿದೆ. ಇವತ್ತಿನ ಕಾಲಮಾನ ಕ್ಕೂ ಪ್ರಸ್ತುತವಾದ ಸಂವಿಧಾನವನ್ನು ಭಾರತಕ್ಕೆ ನೀಡಿದ ಮಹಾನ್ ಚೇತನರಾಗಿದ್ದು, ಇನ್ನೂ ಸಾವಿರಾರು ವರ್ಷ ಕಳೆದರೂ ಬಾಬ ಸಾಹೇಬ್ ಹೆಸರು ಅಜರಾಮರವಾಗಿ ಇರುತ್ತದೆ ಎಂದರು. ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಡಾ ಸಿದ್ದಲಿಂಗೇಶ್ ಸೇರಿದಂತೆ ಮುಖಂಡರುಗಳು ಉಪಸ್ಥಿತರಿದ್ದರು.

# ಸಂವಿಧಾನ ಬಹಳ ಶ್ರೇಷ್ಠ

**ಚಾಮರಾಜನಗರ:** ಬಿ.ಆರ್.ಅಂಬೇಡ್ಕರ್ ರವರು ನೀಡಿರುವ ಸಂವಿಧಾನವು ಬಹಳ ಶ್ರೇಷ್ಟವಾದುದು ಮತ್ತು ಅದನ್ನು ಓದಿ ಅರ್ಥಮಾಡಿಕೊಂಡು ಜೀವನಕ್ಕೆ ಅಳವಡಿಸಿಕೊಳ್ಳಬೇಕು ಎಂದು ದಲಿತ ಮುಖಂಡರಾದ ವೆಂಕಟರಮಣಸ್ವಾಮಿ ಪಾಪು ತಿಳಿಸಿದರು.

ನಗರದ ಡಾ. ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಸಂವಿಧಾನ ಶಿಲ್ಪಿ ಭಾರತರತ್ನ ಡಾ.ಬಿಆರ್ ಅಂಬೇಡ್ಕರ್ ರವರ 68ನೇ ಮಹಾ ಪರಿನಿಬ್ಬಾಣ ದಿನದ ಪ್ರಯುಕ್ತ ಈಶ್ವರಿ ಸೋಶಿಯಲ್ ಟ್ರಸ್ಟ್ ವತಿಯಿಂದ 68 ಸಾಲುಗಿಡಗಳನ್ನು ನೆಡುವ ಕಾರ್ಯಕ್ರಮಕ್ಕೆ ಗಿಡವನ್ನು ನೆಡುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಈ ದೇಶಕ್ಕೆ ಮತ್ತು ಸರ್ವಭೌಮತೆಗೆ ಸಂವಿಧಾನವು ಬುನಾದಿಯಾಗಿದೆ. ಶ್ರೇಷ್ಟವಾದ ಸಂವಿದಾನವನ್ನು ನೀಡಿದ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರಿಗೆ ದೇಶದ ಜನತೆ ಚಿರಋಣಿಯಾಗಿರಬೇಕು. ಸಂವಿಧಾನವು ಸುಭದ್ರವಾಗಿದ್ದು ಅದಕ್ಕೆ ಯಾವುದೇ ಧಕ್ಕೆ ಬರುವುದಿಲ್ಲ ಎಂದರು.

ದಲಿತ ಸಂಘರ್ಷ ಸಮಿತಿ ಹೋರಾಟಗಾರ ಸಿ.ಎಂ.ಕೃ?ಣ್ಣಮೂರ್ತಿ ಮಾತನಾಡಿ ಬೇರೆ ದೇಶದ ಸಂವಿಧಾನಕ್ಕಿಂತ ನಮ್ಮ ದೇಶದ ಸಂವಿಧಾನವು ಬಹಳ ಉತ್ತಮವಾಗಿದೆ. ಈ ದೇಶವು ಐಕ್ಯತೆ ಮತ್ತು ಸಮಗ್ರತೆಯಿಂದ 75 ವರ್ಷ ಕಳೆದರು ಸಹ ದೇಶವು ಸುಭದ್ರವಾಗಿರಲು ಡಾ. ಬಿ.ಆರ್ ಅಂಬೇಡ್ಕರ್ ನೀಡಿರುವ ಸಂವಿಧಾನವೇ ಮುಖ್ಯ ಕಾರಣವಾಗಿದೆ. ಸಂವಿಧಾನ ಪೀಠಿಕೆಯಲ್ಲಿ ಇಡೀ ಸಂವಿಧಾನದ ಸಾರಾಂಶ ಅಡಗಿದೆ. ಒಂದು ಅಧ್ಯಯನದ ಪ್ರಕಾರ ಬೇರೆ ಬೇರೆ ದೇಶಗಳ ಸಂವಿಧಾನದ ಆಯಸ್ಸು ಸರಾಸರಿ 17 ವರ್ಷಗಳಾಗಿರುತ್ತದೆ, ಆದರೆ ನಮ್ಮ ದೇಶದ ಸಂವಿಧಾನಕ್ಕೆ 75 ವರ್ಷ ಕಳೆದರು ಸಹ ಅದು ಹಿಮಾಲಯ ಪರ್ವತದಂತೆ ಗಟ್ಟಿಯಾಗಿ ನಿಂತಿದೆ ಅದನ್ನು ಅಲುಗಾಡಿಸಲು ಯಾರಿಂದಲು ಸಾಧ್ಯವಿಲ್ಲ. ಸಂವಿಧಾನವು ಪ್ರತಿಯೊಂದು ಜೀವಿಗೂ ಬದುಕುವ ಹಕ್ಕನ್ನು ನೀಡಿರುತ್ತದೆ ಎಂದು ಹೇಳಿದರು.

ಈಶ್ವರಿ ಸೋಶಿಯಲ್ ಟ್ರಸ್ಟ್ ಸಂಸ್ಥಾಪಕರಾದ ಸಿ.ಎಂ.ವೆಂಕಟೇಶ್ ಮಾತನಾಡಿ ಮಹನೀಯರ ಜನ್ಮ ದಿನಾಚರಣೆ, ಪುಣ್ಯ ಸ್ಮರಣೆ, ಜಯಂತಿ ಮುಂತಾದ ವಿಶೇಷ ಸಂದರ್ಭಗಳಲ್ಲಿ ಸಾಲು ಗಿಡಗಳನ್ನು ನೇಡುವ ಹವ್ಯಾಸಗಳನ್ನು 9 ವರ್ಷಗಳಿಂದ ನಡೆಸಿಕೊಂಡು ಬರಲಾಗುತ್ತಿದೆ. ಆ ಗಿಡಗಳು ಈಗ ಮರಗಳಾಗಿ ಉತ್ತಮ ಗಾಳಿಯನ್ನು ನೀಡುತ್ತಿದೆ. ಚಾಮರಾಜನಗರವು ಉತ್ತಮ ಗಾಳಿಯನ್ನು ನೀಡುವುದರಲ್ಲಿ ರಾಷ್ಟ್ರಮಟ್ಟದಲ್ಲಿ ಗುರುತಿಸಿ ಕೊಂಡಿರುವುದಕ್ಕೆ ಈ ಸಂದರ್ಭದಲ್ಲಿ ಹರ್ಷ ವ್ಯಕ್ತಪಡಿಸಿದರು.

ಈಶ್ವರಿ ಸೋಶಿಯಲ್ ಟ್ರಸ್ಟ್‌ನ ಟ್ರಸ್ಟಿ ಜಯಲಕ್ಷ್ಮಿ, ಚಾಮುಂಡೇಶ್ವರಿ ವಿದ್ಯುತ್ ನಿಗಮದ ಸಹಾಯಕ ಅಭಿಯಂತರರಾದ ಸಿ.ಎಸ್.ಪ್ರವೀಣ್, ವಿಶ್ವನಾಥ್ ಪಾಟೀಲ್, ಮೇಲ್ವಿಚಾರಕರಾದ ನಂಜುಂಡಸ್ವಾಮಿ, ಬುದ್ದಮಹೇಶ್, ರಾಮಸಮುದ್ರ ಚಲುವಮೂರ್ತಿ ಹಾಗೂ ಇನ್ನು ಮುಂತಾದವರು ಇದ್ದರು.



# ತಾಲೂಕು ಸಾರ್ವಜನಿಕ ಆಸ್ಪತ್ರೆಯ ಕಟ್ಟಡದ ಶಂಕುಸ್ಥಾಪನೆ

**ಚಾಮರಾಜನಗರ:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸಹಯೋಗದೊಂದಿಗೆ ಯಳಂದೂರು ತಾಲೂಕು ಸಾರ್ವಜನಿಕ ಆಸ್ಪತ್ರೆಯ 100 ಹಾಸಿಗೆಗಳ ಕಟ್ಟಡದ ಶಂಕುಸ್ಥಾಪನೆ ಕಾರ್ಯಕ್ರಮ ಡಿಸೆಂಬರ್ 7 ರಂದು ಮಧ್ಯಾಹ್ನ 3 ಗಂಟೆಗೆ ಯಳಂದೂರು ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ನೆರವೇರಲಿದೆ.

ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಶಂಕುಸ್ಥಾಪನೆ ನೆರವೇರಿಸುವರು. ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಘನ ಉಪಸ್ಥಿತಿ ವಹಿಸುವರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ದಿನೇಶ್ ಗುಂಡೂರಾವ್ ಅವರು ಉದ್ಘಾಟನೆ ನೆರವೇರಿಸುವರು. ಸಮಾಜ ಕಲ್ಯಾಣ ಸಚಿವರಾದ ಡಾ. ಹೆಚ್.ಸಿ ಮಹದೇವಪ್ಪ ಉಪಸ್ಥಿತರಿರುವರು. ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ಅಧ್ಯಕ್ಷತೆ ವಹಿಸುವರು.

ಲೋಕಸಭಾ ಸದಸ್ಯರಾದ ಸುನೀಲ್ ಬೋಸ್, ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಶಾಸಕರಾದ ಎಚ್.ಎಂ. ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರಾದ ಎಸ್. ಜಯಣ್ಣ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಯಳಂದೂರು ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಎಸ್. ಲಕ್ಷ್ಮಿ ಮಲ್ಲು, ಸದಸ್ಯರಾದ ಮಹೇಶ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

# ಗುಡಿ ಕೈಗಾರಿಕೆಗಳಿಗೆ ಬದುಕು ಕೊಟ್ಟ ವಿಶ್ವಕರ್ಮ ಯೋಜನೆ

**ಹುಳಿಯಾರು:** ಕೇಂದ್ರ ಸರ್ಕಾರವು ಗುಡಿ ಕೈಗಾರಿಕೆಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಗ್ರಾಮ ಪಂಚಾಯಿತಿಗಳ ಸಹಕಾರದೊಂದಿಗೆ ಬ್ಯಾಂಕುಗಳ ಮುಖಾಂತರ ವಿಶ್ವಕರ್ಮ ಯೋಜನೆಯನ್ನು ಜಾರಿಗೆ ತಂದಿರುವುದು ದೇಶದ ಅಭಿವೃದ್ಧಿಗೆ ಪೂರಕವಾಗಿದೆ ಎಂದು ಯಳನಾಡು ಕರ್ನಾಟಕ ಗ್ರಾಮೀಣ ಬ್ಯಾಂಕ್ ಶಾಖಾಧಿಕಾರಿ ಬಿ.ಆರ್.ರಕ್ಷಿತ್‌ಕುಮಾರ್ ತಿಳಿಸಿದರು.

ಹುಳಿಯಾರು ಹೋಬಳಿಯ ಯಳನಡು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ತಮ್ಮಡಿಹಳ್ಳಿ ಗ್ರಾಮದಲ್ಲಿ ಆರ್ಥಿಕ ಸಾಕ್ಷರತಾ ಕೇಂದ್ರ ಹಾಗೂ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ಜಂಟಿಯಾಗಿ ಗುರುವಾರ ಏರ್ಪಡಿಸಿದ್ದ ಜನ ಸುರಕ್ಷಾ ಯೋಜನೆ ಅಭಿಯಾನದಲ್ಲಿ ಮಾತನಾಡಿದರು.



ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಶ್ರೀ ಆರ್ ಎಂ ಕುಮಾರಸ್ವಾಮಿ ಮಾತನಾಡುತ್ತಾ ಕೇಂದ್ರ ಸರ್ಕಾರದ ಹಲವಾರು ಯೋಜನೆಗಳಾದ ಪ್ರಧಾನಮಂತ್ರಿ ಸುರಕ್ಷಾ ಹಾಗೂ ಜೀವನ ಜ್ಯೋತಿ ವಿಮಾ ಯೋಜನೆ, ಅಟಲ್ ಪೆನ್ಷನ್ ಯೋಜನೆ ಹಾಗೂ ಜನದನ್ ಖಾತೆ ಯೋಜನೆಗಳು ಜನರಿಗೆ ತುಂಬಾ ಉಪಯುಕ್ತವಾಗಿವೆ ಎಂದು ತಿಳಿಸಿದರು.

ಈ ಶಿಬಿರದಲ್ಲಿ ಕರ್ನಾಟಕ ಗ್ರಾಮೀಣ ಬ್ಯಾಂಕ್ ಯಳನಾಡು ಶಾಖೆಯ ನವೀನ್, ಬ್ಯಾಂಕ್ ಮಿತ್ರರಾದ ಧರಣೇಶ್, ಅಪ್ಸರ್, ರಾಜಶೇಖರ್ ಹಾಗೂ ಊರಿನ ಮುಖಂಡರು ಭಾಗವಹಿಸಿದ್ದರು.

# ಸಚಿವರ ಜಿಲ್ಲಾ ಪ್ರವಾಸ

**ಚಾಮರಾಜನಗರ:** ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಡಿಸೆಂಬರ್ 7ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಬೆಳಿಗ್ಗೆ 11 ಗಂಟೆಗೆ ಮುಖ್ಯಮಂತ್ರಿಯವರೊಂದಿಗೆ ಕೊಳ್ಳೇಗಾಲ ತಾಲೂಕಿನ ನರಿಪುರ ಗ್ರಾಮದ ಹೆಲಿಪ್ಯಾಡ್‌ಗೆ ಹೆಲಿಕಾಪ್ಟರ್ ಮೂಲಕ ಆಗಮಿಸುವರು. ಬಳಿಕ ಸತ್ತೇಗಾಲದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಲಕ್ಷ್ಮಮ್ಮ ಸೊಸಯ್ಯನ ಸಿದ್ದಯ್ಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಶಾಲಾ ಕಟ್ಟಡದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಯವರೊಂದಿಗೆ ಭಾಗವಹಿಸುವರು. ಮಧ್ಯಾಹ್ನ 12.15 ಗಂಟೆಗೆ ರಸ್ತೆ ಮೂಲಕ ಕೊಳ್ಳೇಗಾಲಕ್ಕೆ ಆಗಮಿಸುವರು. ಕೊಳ್ಳೇಗಾಲದ ನ್ಯಾಷನಲ್ ಸ್ಕೂಲ್ ಆವರಣದಲ್ಲಿ ಆಯೋಜಿಸಿರುವ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 109ನೇ ಜಯಂತಿ ಮಹೋತ್ಸವ ಉದ್ಘಾಟನೆ ಕಾರ್ಯಕ್ರಮದಲ್ಲಿ ಮುಖ್ಯ ಮಂತ್ರಿಯವರೊಂದಿಗೆ ಪಾಲ್ಗೊಳ್ಳುವರು. ಮಧ್ಯಾಹ್ನ 3.15 ಗಂಟೆಗೆ ರಸ್ತೆ ಮೂಲಕ ಯಳಂದೂರಿಗೆ ಆಗಮಿಸುವರು. ಯಳಂದೂರಿನ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ಆಯೋಜಿಸಿರುವ ಯಳಂದೂರು ತಾಲೂಕು ಸಾರ್ವಜನಿಕ ಆಸ್ಪತ್ರೆಯ 100 ಹಾಸಿಗೆಗಳ ಕಟ್ಟಡದ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಮುಖ್ಯ ಮಂತ್ರಿಯವರೊಂದಿಗೆ ಭಾಗವಹಿಸುವರು. ಸಂಜೆ 4.40 ಗಂಟೆಗೆ ಹೆಲಿಕಾಪ್ಟರ್ ಮೂಲಕ ಬೆಂಗಳೂರಿಗೆ ತೆರಳುವರು ಎಂದು ತಿಳಿಸಿದೆ.

# ಎಚ್‌ಐವಿ ಸಂಪೂರ್ಣವಾಗಿ ಗುಣಪಡಿಸಲು ಸಾಧ್ಯವಾಗುವುದಿಲ್ಲ

**ಹುಳಿಯಾರು:** ಹೆಚ್‌ಐವಿ ಎಂಬ ವೈರಸ್ ಮಾನವ ದೇಹದೊಳಗೆ ಸೇರಿ ದೇಹದ ರಕ್ಷಣಾ ವ್ಯವಸ್ಥೆಯಾದ ಬಿಳಿ ರಕ್ತ ಕಣಗಳ ಮೇಲೆ ದಾಳಿ ಮಾಡುವುದರಿಂದ ಶರೀರದ ರೋಗನಿರೋಧಕ ಶಕ್ತಿಯು ಕ್ರಮೇಣ ಕುಗ್ಗುತ್ತದೆ. ಇದರಿಂದ ಒಂದೊಂದೇ ಕಾಯಿಲೆಗಳು ಪ್ರಾರಂಭವಾಗುತ್ತದೆ. ಚಿಕಿತ್ಸೆ ಪಡೆದರೂ ಮತ್ತೆ ಮರುಕಳಿಸುತ್ತದೆ ಹಾಗೂ ಸಂಪೂರ್ಣವಾಗಿ ಗುಣಪಡಿಸಲು ಸಾಧ್ಯವಾಗುವುದಿಲ್ಲ ಎಂದು ಚಿಕ್ಕನಾಯಕನಹಳ್ಳಿಯ ಐಸಿಟಿಸಿ ಆಪ್ತಸಮಾಲೋಚಕರಾದ ನವೀನ್ ತಿಳಿಸಿದರು.

ಹುಳಿಯಾರು-ಕೆಂಕೆರೆ ಬಿ.ಎಂ.ಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಯುವ ರೆಡ್ ಕ್ರಾಸ್ ಘಟಕ ಹಾಗೂ ಐಕ್ಯುಎಸಿ ಸಹಯೋಗದೊಂದಿಗೆ ಶುಕ್ರವಾರ ಏರ್ಪಡಿಸಿದ್ದ ಹೆಚ್.ಐ.ವಿ ಏಡ್ಸ್ ಕುರಿತು ಅರಿವು ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹೆಚ್‌ಐವಿಯು ಒಬ್ಬರಿಂದ ಒಬ್ಬರಿಗೆ ಹರಡದಂತೆ ತಡೆಯಲು ಮುನ್ನೆಚ್ಚರಿಕೆಯ ಕ್ರಮಗಳೆಂದರೆ ಮರುಬಳಕೆ ಮಾಡದಂತಹ ಸೂಜಿ ಸಿರಿಂಜುಗಳನ್ನು ಬಳಸುವುದು, ನೋಂದಾಯಿತ ರಕ್ತ ನಿಧಿಯಿಂದಲೇ ರಕ್ತವನ್ನು ಪಡೆದುಕೊಳ್ಳುವುದು, ಅಪಘಾತವಾಗದಂತೆ ಎಚ್ಚರ ವಹಿಸುವುದು, ದುಶ್ಚಟಗಳಿಗೆ ಬಲಿಯಾಗದಿರುವುದು, ಸುರಕ್ಷಿತ ಲೈಂಗಿಕ ಸಂಪರ್ಕವನ್ನು ಹೊಂದುವುದು ಹಾಗೂ ಪೌಷ್ಟಿಕ ಆಹಾರ ಪದ್ಧತಿಯ ಮೂಲಕ ದೇಹದ ರೋಗ ನಿರೋಧಕ ಶಕ್ತಿಯನ್ನು ಕಾಪಾಡಿಕೊಳ್ಳಬೇಕು ಎಂದರು.

ಮುಖ್ಯ ಅತಿಥಿಗಳಾದ ಬಾಲಕೃಷ್ಣ ಮಾತನಾಡಿ ಅಸಾಂಕ್ರಾಮಿಕ ರೋಗಗಳಾದ ರಕ್ತದೊತ್ತಡ, ಮಧುಮೇಹ, ಕ್ಯಾನ್ಸರ್ ನಂತಹ ಕಾಯಿಲೆಗಳ ಕುರಿತು ಮಾಹಿತಿ ಹಾಗೂ ಅವುಗಳಿಂದ ಹೇಗೆ ಆರೋಗ್ಯವನ್ನು ರಕ್ಷಿಸಿಕೊಳ್ಳಬೇಕು ಎಂಬುದನ್ನು ತಿಳಿಸಿದರು.

ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕರಾದ ಪ್ರೊ. ಯೋಗೀಶ್ ಬಿ ಮಾತನಾಡಿ ಯುವಜನತೆಯು ಸಂಕುಚಿತ ಮನೋಭಾವವಿಲ್ಲದೆ ಆರೋಗ್ಯ ಶಿಕ್ಷಣ, ಲೈಂಗಿಕ ಶಿಕ್ಷಣ




ಪಡೆದುಕೊಳ್ಳಬೇಕು. ದೈಹಿಕ ಚಟುವಟಿಕೆ, ಸಮತೋಲಿತ ಆಹಾರ ಹಾಗೂ ವಿಶ್ರಾಂತಿ ಇವುಗಳ ಮೂಲಕ ಆರೋಗ್ಯ ಪೂರ್ಣ ಜೀವನ ನಡೆಸಬಹುದು ಎಂದರು.

ರಾಜ್ಯಶಾಸ್ತ್ರ ವಿಭಾಗದ ಉಪನ್ಯಾಸಕರಾದ ತಿಪ್ಪೇಸ್ವಾಮಿ ಮಾತನಾಡಿ ತನ್ನ ಆರೋಗ್ಯದ ಬಗ್ಗೆ ಲಕ್ಷ್ಯ ವಹಿಸುವವನೇ ನಿಜವಾದ ಶ್ರೀಮಂತ. ನಮ್ಮಲ್ಲಿರುವ ತಪ್ಪು ಕಲ್ಪನೆಗಳನ್ನು ನಿವಾರಿಸಬೇಕು. ಯುವ ಜನತೆ ಶಿಕ್ಷಣ ಹಾಗೂ ಸಮುದಾಯದ ನಡುವಿನ ಕೊಂಡಿ ಇದ್ದ ಹಾಗೆ. ಇಂತಹ ಕಾರ್ಯಕ್ರಮಗಳ ಮೂಲಕ ಪಡೆದ ಅರಿವು ಸಮಾಜದಲ್ಲಿ ಆರೋಗ್ಯಕರ ಜೀವನಕ್ಕೆ ಸಹಕಾರಿಯಾಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಪ್ರೊ ವೀರಣ್ಣ ಎಸ್.ಸಿ. ಮಾತನಾಡಿ ಹೆಚ್‌ಐವಿ ಹಾಗೂ ಏಡ್ಸ್ ಕುರಿತು ಜಾಗೃತಿಯನ್ನು ಬೆಳೆಸಿಕೊಂಡು ಆರೋಗ್ಯಕರವಾದ ಜೀವನ ನಡೆಸಬೇಕು ಎಂದು ಕಿವಿಮಾತು ಹೇಳಿದರಲ್ಲದೆ ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಂಡರೆ ಏಡ್ಸ್ ಮುಕ್ತ ಸಮಾಜ ನಿರ್ಮಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಯುವ ರೆಡ್ ಕ್ರಾಸ್ ಘಟಕದ ಸಂಚಾಲಕರಾದ ಡಾ.ಸಂಗೀತಾ ಪಿ. ಅವರು ಪ್ರಾಸ್ತವಿಕವಾಗಿ ಮಾತನಾಡಿದರು. ದ್ವಿತೀಯ ಬಿಕಾಂ ನ ವಿದ್ಯಾರ್ಥಿನಿಯರಾದ ರಂಜಿತಾ ಕೆ ಮತ್ತು ತಂಡ ಪ್ರಾರ್ಥಿಸಿದರು. ಲತಾ ಸಿ ಅವರು ಸ್ವಾಗತಿಸಿ, ತಸ್ಮಿಯ ಬಾನು ವಂದಿಸಿದರು. ಮೌನಶ್ರೀ ಅವರು ಕಾರ್ಯಕ್ರಮವನ್ನು ನಿರ್ವಹಿಸಿದರು. ಐಕ್ಯೂಎಸಿ ಸಂಚಾಲಕರಾದ ಡಾ.ಸರಸ್ವತಿ ಕೆ.ಬಿ ಹಾಗೂ ಬೋಧಕ ಬೋಧಕೇತರ ವೃಂದದವರು ಭಾಗವಹಿಸಿ ಯಶಸ್ಸಿಗೆ ಸಹಕರಿಸಿದರು.

# ಆಡಳಿತ ವ್ಯವಸ್ಥೆಗೆ ಹೊಸ ಆಯಾಮ ತಂದುಕೊಟ್ಟ 'ಅಂಬೇಡ್ಕರ್'

**ಚಾಮರಾಜನಗರ:** ನಗರದ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಸಂವಿಧಾನ ಶಿಲ್ಪಿ ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 68ನೇ ಪರಿನಿರ್ವಾಣ ದಿನವನ್ನು ಆಚರಿಸಲಾಯಿತು.

ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿದ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಅಂಬೇಡ್ಕರ್ ಅವರು ಇಡೀ ಜಗತ್ತು ಮೆಚ್ಚುವ ಸಂವಿಧಾನವನ್ನು ರಚಿಸಿದ್ದಾರೆ. ಈ ಮೂಲಕ ಭಾರತ ದೇಶದ ಆಡಳಿತ ವ್ಯವಸ್ಥೆಗೆ ಹೊಸ ಆಯಾಮ ತಂದುಕೊಟ್ಟಿದ್ದಾರೆ. ಹೀಗಾಗಿ ನಾವೆಲ್ಲರೂ ಅಂಬೇಡ್ಕರ್ ಅವರನ್ನು ಸದಾ ಸ್ಮರಿಸುವ ಅಗತ್ಯವಿದೆ ಎಂದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ. ಮರಿಸ್ವಾಮಿಮಾತನಾಡಿ,ಅಂಬೇಡ್ಕರ್ ವ್ಯಕ್ತಿ ಅಲ್ಲ ಅವರೊಬ್ಬ ಮಹಾನ್ ಶಕ್ತಿಯಾಗಿದ್ದಾರೆ. ದಲಿತರು, ಮಹಿಳೆಯರು ಹಾಗೂ ಕಾರ್ಮಿಕರ ಪರ ಹೋರಾಟ ನಡೆಸಿದ್ದಾರೆ.

ಅಂಬೇಡ್ಕರ್ ಅವರ ವಿಚಾರಧಾರೆ, ಆದರ್ಶಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆರ್.ಮಹದೇವ, ಚುಡಾ ಅಧ್ಯಕ್ಷ ಮಹಮದ್ ಅಸ್ಗರ್ ಮುನ್ನಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್. ಗುರುಸ್ವಾಮಿ, ಕೆಪಿಸಿಸಿ ಸದಸ್ಯ ಸೈಯದ್ ರಫೀ,ನಸ್ರುಲ್‌ಖಾನ್, ಆಯೂಬ್ ಖಾನ್, ಎಪಿಎಂಸಿಅಧ್ಯಕ್ಷ ಸೋಮೇಶ್, ಸದಸ್ಯ ಆಲೂರು ಪ್ರದೀಪ್, ಕರಿನಂಜನಪುರ ಸ್ವಾಮಿ, ಬಸವಣ್ಣ, ಜಿ,ಪಂ ಮಾಜಿ ಸದಸ್ಯ ಸದಾಶಿವಮೂರ್ತಿ, ಕೆರಹಳ್ಳಿ ನವೀನ್, ಕಾವೇರಿಶಿವಕುಮಾರ, ರಮೇಶ್, ರವಿಗೌಡ, ಪ್ರಕಾಶ್, ಕಾಗಲವಾಡಿ ಚಂದ್ರು, ಮರಿಯಾಲದಹುಂಡಿ ಕುಮಾರ್, ಅಪ್ಸರ್‌ಅಹಮದ್, ಉಡಿಗಾಲ ಮಹದೇವ್ ಎಂ.ಸಿ. ನಾಗರಾಜು, ಕುಮಾರ್, ರಾಜು,ರವೀಂದ್ರ, ಹಾಜರಿದ್ದರು.



# ನಗರಸಭೆಯಲ್ಲಿ ಜನನ ಪ್ರಮಾಣ ಪತ್ರ ನೀಡಲು 200 ರೂ.ಲಂಚ. ವೀಡಿಯೊ ವೈರಲ್

**ಚಾಮರಾಜನಗರ:** ಜಿಲ್ಲಾ ಕೇಂದ್ರದಲ್ಲಿರುವ ನಗರಸಭೆಯಲ್ಲಿ ಜನನ ಪ್ರಮಾಣ ಪತ್ರ ನೀಡಲು ಅರ್ಜಿದಾರರಿಂದ ರೂ 200ಗಳನ್ನು ಬಹಿರಂಗವಾಗಿ ಲಂಚ ಪಡೆದಿರುವ ವಿಡಿಯೋ ಇದೀಗ ವೈರಲ್ ಆಗಿದೆ.



ಚಾಮರಾಜನಗರ ತಾಲ್ಲೂಕಿನ ಅಮಚವಾಡಿ ಗ್ರಾಮದ ಮಹದೇವರ ಪತ್ನಿಗೆ ಸ್ಥಳೀಯ ಆಸ್ಪತ್ರೆಯಲ್ಲಿ ಹೆರಿಗೆಯಾಗಿತ್ತು. ಆಸ್ಪತ್ರೆಯಿಂದ ಮಗು ಜನನದ ಬಗ್ಗೆ ಮಾಹಿತಿ ನಗರಸಭೆಗೆ ರವಾನೆಯಾಗಿ ದಾಖಲೆಗೊಂಡಿತ್ತು. ಮಹದೇವ ಶೆಟ್ಟಿ ಮಗುವಿನ ಜನನ ಪ್ರಮಾಣ ಪತ್ರಕ್ಕೆ ಅರ್ಜಿ ಕಳೆದ ತಿಂಗಳು 22ರಂದು ಸಲ್ಲಿಸಿದ್ದರು. ಪ್ರಮಾಣ ಪತ್ರ ಕೊಡಲು ಈಗ ಬಾ ಆಗ ಬಾ ಹೋಗಿ ಬಾ 15 ದಿನಗಳಿಂದಲೂ ಸತಾಯಿಸುತ್ತಿದ್ದರು.

ಈತ 15 ದಿನಗಳಿಂದಲೂ ತಿರುಗುತ್ತಿದ್ದೇನೆ ಶೀಘ್ರ ಕೊಡುವಂತೆ ಒತ್ತಡ ಹೇರಿದಾಗ ಅದಕ್ಕೆಲ್ಲ ಹಣ ಕೊಡ ಬೇಕಾಗುತ್ತದೆ ಎಂಬ ಮಾಹಿತಿ ಅರಿತ ಅರ್ಜಿದಾರರು ಎಷ್ಟು ಎಂದು ಕೇಳಿದಾಗ 200 ರೂಪಾಯಿ ಕೊಡಬೇಕಾಗುತ್ತದೆ ಎಂದು ಜನನ ಪ್ರಮಾಣ ಪತ್ರ ನೀಡುವ ಹೊರಗುತ್ತಿಗೆ ಸಿಬ್ಬಂದಿ ಕನ್ಯಾ ತಿಳಿಸಿದ್ದಾರೆ. 200ರೂ ಲಂಚ ಕೊಡುತ್ತಿದ್ದಂತೆ ಯಾವುದೇ ತಕರಾರಿಲ್ಲದೆ ಜನನ ಪ್ರಮಾಣಪತ್ರ ಕೈಗೆ ಕೊಟ್ಟು ಕಳುಹಿಸಿದ್ದಾರೆ.

ನಗರಸಭೆಯಲ್ಲಿ ಸಿಸಿ ಕ್ಯಾಮೆರಾ ಇದ್ದರೂ ಕೂಡ ಇಲ್ಲದಂತಿದೆ. ನಗರಸಭೆ ಸಾರ್ವಜನಿಕರಿಗೆ ನರಕಸಭೆಯಾಗಿದೆ ಕಾಂಚಾಣ ಸದ್ದು ಮಾಡಿದರೆ ಮಾತ್ರ ಕೆಲಸವಾಗುತ್ತದೆ ಇಲ್ಲದಿದ್ದರೆ ಆ ವ್ಯಕ್ತಿಯ ಪಾಡು ನಾಯಿಪಾಡಾಗುತ್ತದೆ. ನಗರಸಭೆಯ ಸಿಬ್ಬಂದಿಗಳನ್ನು ಯಾರಾದರೂ ಪ್ರಶ್ನೆ ಮಾಡಿದರೆ ಸಂಬಂಧಪಟ್ಟ ಕಡತಗಳು ಇಲ್ಲ ಹೊರಗೆ ಹೋಗಿ ಎಂದು ಗತ್ತಿನಿಂದ ಹೇಳುವರು. ಲಂಚದ ರೂಪದಲ್ಲಿ ಹಣವನ್ನು ನೀಡಿದರೆ ಎರಡು ಮೂರು ದಿನಗಳಲ್ಲೇ ಕಡತಗಳು ಪ್ರತ್ಯಕ್ಷವಾಗಿ ಕೆಲಸಗಳು ಬೇಗ ಆಗುತ್ತದೆ ಇಂತಹ ಭ್ರಷ್ಟ ಅಧಿಕಾರಿ ಸಿಬ್ಬಂದಿಗಳು ನಗರಸಭೆಯಲ್ಲಿ ಇರುವ ತನಕ ಚಾಮರಾಜನಗರ ಜಿಲ್ಲಾ ಕೇಂದ್ರ ಹೇಗೆ ಉದ್ಧಾರವಾದೀತು. ಭ್ರಷ್ಟ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ರಾಜಕಾರಣಿಗಳು ಪರೋಕ್ಷವಾಗಿ ಪ್ರೋತ್ಸಾಹಿಸುತ್ತಿದ್ದಾರೆ ಇವರುಗಳ ವಿರುದ್ಧ ಸರ್ಕಾರ ಕಾನೂನು ಕ್ರಮ ಕೈಗೊಳ್ಳಬೇಕೆಂದು ಮಹದೇವ ಶೆಟ್ಟಿ ಆಗ್ರಹಿಸಿದ್ದಾರೆ.

# ಡಾ.ಬಿ.ಆರ್.ಮಹಾ ಪರಿನಿರ್ವಾಣ ದಿನಾಚರಣೆ

**ಬೆಂ. ಗ್ರಾ.:** ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ರವರ 68ನೇ ಮಹಾ ಪರಿನಿರ್ವಾಣ ದಿನವನ್ನು ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿ ಕಛೇರಿ ಸಭಾಂಗಣದಲ್ಲಿಂದು ಆಚರಿಸಲಾಯಿತು.

ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಡಾ.ಶಿವಶಂಕರ. ಎನ್ ಅವರು ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿದರು. ನಂತರ ಮಾತನಾಡಿ ಡಾ.ಬಿ.ಆರ್ ಅಂಬೇಡ್ಕರ್ ಅವರು ಬಡವರ ದೀನ ದಲಿತರ, ಶೋಷಿತ ವರ್ಗಗಳ ಅಭಿವೃದ್ಧಿಗೆ ದುಡಿದರು. ಸಾಮಾಜದ ಪ್ರತಿಯೊಬ್ಬ ಪ್ರಜೆಗೂ ಸಮಾನತೆ ಸಿಗಬೇಕು ಎನ್ನುವುದು ಅವರ ಆಶಯವಾಗಿತ್ತು. ಪ್ರತಿಯೊಬ್ಬರೂ ಡಾ. ಬಿ.ಆರ್ ಅಂಬೇಡ್ಕರ್ ಅವರ ಮಾರ್ಗದರ್ಶನ ಹಾಗೂ ಸಂವಿಧಾನದ ಆಶಯಗಳನ್ನು ಪಾಲಿಸೋಣ ಎಂದು ಜಿಲ್ಲಾಧಿಕಾರಿ ತಿಳಿಸಿದರು. ಅಪರ ಜಿಲ್ಲಾಧಿಕಾರಿ ಎಚ್. ಅಮರೇಶ್, ಜಿ ಪಂ ಉಪ ಕಾರ್ಯದರ್ಶಿ ಟಿ ಕೆ ರಮೇಶ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಟಿ ಎಲ್ ಪ್ರೇಮಾ ಸೇರಿದಂತೆ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.



# ನೇರ ನೇಮಕಾತಿಗೆ ಆಹ್ವಾನ

**ಬೆಂಗಳೂರು:** ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದಲ್ಲಿ ಖಾಲಿಯಿರುವ ವಿವಿಧ ವೃಂದದ ಹುದ್ದೆಗಳ ನೇರ ನೇಮಕಾತಿಗಾಗಿ 2024 ನೇ ಮಾರ್ಚ್ 12 ರಂದು ಹೊರಡಿಸಿದ ಅಧಿಸೂಚನೆಯಲ್ಲಿನ ಹುದ್ದೆಗಳಿಗೆ ತಾಂತ್ರಿಕ ಕಾರಣಗಳಿಂದ ಅರ್ಜಿಗಳನ್ನು ಸ್ವೀಕರಿಸಲು ಸಾಧ್ಯವಾಗಿರುವುದಿಲ್ಲ. ಆದುದರಿಂದ ಸದರಿ ಅಧಿಸೂಚನೆಯಲ್ಲಿನ ಕಿರಿಯ ಸಹಾಯಕರ ಹುದ್ದೆಗಳಿಗೆ ಸಂಬಂಧಿಸಿದಂತೆ ನವೆಂಬರ್ 30 ರ ತಿದ್ದುಪಡಿ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಪತ್ರದ ವಿಶೇಷ ರಾಜ್ಯ ಪತ್ರಿಕೆಯಲ್ಲಿ ಪ್ರಕಟಿಸಲಾಗಿರುತ್ತದೆ. ಈ ತಿದ್ದುಪಡಿ ಅಧಿಸೂಚನೆಯನ್ವಯ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ ಮೂಲಕ http://kea.kar.nic.in ಅಥವಾ https://cetonline.karnataka.gov.in/kea ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು 2025ನೇ ಜನವರಿ 3 ಕೊನೆಯ ದಿನಾಂಕವಾಗಿದೆ.ಅಭ್ಯರ್ಥಿಗಳು ನೇಮಕಾತಿಗೆ ಸಂಬಂಧಿಸಿದ ಅರ್ಜಿ ಸಲ್ಲಿಸುವ ವಿಧಾನ ಮೀಸಲಾತಿ ವರ್ಗೀಕರಣ, ವಿದ್ಯಾರ್ಹತೆ, ವಯೋಮಿತಿ, ಶುಲ್ಕ ಮತ್ತು ಇನ್ನಿತರೆ ಸಂಪೂರ್ಣ ಮಾಹಿತಿಗಾಗಿ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದhttps://www.kla.kar.nic.in/council/Career.htm ಪ್ರಾಧಿಕಾರದ ವೆಬ್ ಸೈಟ್ ಮೂಲಕ http://kea.kar.nic.in ಅಥವಾ https://cetonline.karnataka.gov.in/kea ವೀಕ್ಷಿಸಬಹುದಾಗಿದೆ ಎಂದು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಚಿತ್ರಕಲಾ ಸ್ಪರ್ಧೆ

**ಬೆಂಗಳೂರು:** ಕರ್ನಾಟಕ ಲಲಿತಕಲಾ ಅಕಾಡೆಮಿಯ 60 ವರ್ಷದ ಇತಿಹಾಸದಲ್ಲಿ ಪ್ರಪಥಮವಾಗಿ ಕಲಾ ವಿದ್ಯಾರ್ಥಿಗಳಿಗೆ ಚಿತ್ರಕಲಾ ಸ್ಪರ್ಧೆಯನ್ನು ಏರ್ಪಡಿಸಿದೆ. ನಿಮಗೆ ನಿಮ್ಮ ಪ್ರತಿಭೆಯನ್ನು ತೋರಿಸಿಕೊಳ್ಳಲು ಮುಕ್ತ ಅವಕಾಶವನ್ನು ಕಲ್ಪಿಸಿದೆ. ಕರ್ನಾಟಕದ ಕಲಾಶಾಲೆಗಳಲ್ಲಿ ಯಾವುದೇ ಹಂತದಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಸ್ಪರ್ಧೆಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಸುಂದರ ಪ್ರಕೃತಿಯ ಮಡಿಲಲ್ಲಿ ಕಲಾಶಿಬಿರವನ್ನು ಏರ್ಪಡಿಸಲಾಗುವುದು. ಶಿಬಿರದಲ್ಲಿ ಅತ್ಯುತ್ತಮ ಚಿತ್ರರಚಿಸಿದ ವಿದ್ಯಾರ್ಥಿಗಳಿಗೆ (ಕನಿಷ್ಠ 6, ಗರಿಷ್ಠ 10 ವಿದ್ಯಾರ್ಥಿಗಳಿಗೆ ರೂ.15,000/- ನಗದಿನೊಂದಿಗೆ ಸ್ಮರಣಿಕೆ, ಪ್ರಮಾಣಪತ್ರವನ್ನು ಬಹುಮಾನವನ್ನು ನೀಡಲಾಗುವುದು. ಜೊತೆಗೆ 2025 ರ ಉತ್ತಮ ಕಲಾ ವಿದ್ಯಾರ್ಥಿಯೆಂಬ ಗೌರವವನ್ನು ನೀಡಲಾಗುವುದು.ನಿಮ್ಮ ಕ್ರಿಯಾಶೀಲತೆಯನ್ನು ಮತ್ತಷ್ಟು ವಿಸ್ತರಿಸುವ ಈ ಸ್ಪರ್ಧೆಯಲ್ಲಿ ಎಲ್ಲಾ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ನಿಮ್ಮ ತಯಾರಿಗೆ ಒಂದು ತಿಂಗಳ ಕಾಲಾವಕಾಶವನ್ನು ಕಲ್ಪಿಸಿದೆ ಎಂದು ಕರ್ನಾಟಕ ಲಲಿತಾಕಲಾ ಅಕಾಡೆಮಿಯ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಪ್ರೋತ್ಸಾಹಧನಕ್ಕಾಗಿ ಅರ್ಜಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನಲ್ಲಿ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವರ್ಗಗಳ (ಮುಸ್ಲಿಂ, ಕ್ರಿಶ್ಚಿಯನ್, ಪಾರ್ಸಿ, ಸಿಖ್, ಜೈನ್, ಬೌದ್ಧ) Nationla Council for Teacher Education ನಿಂದ ಮಾನ್ಯತೆ ಪಡೆದಿರುವ ಸರ್ಕಾರಿ/ಅರೆ ಸರ್ಕಾರಿ/ಅನುದಾನಿತ ಹಾಗೂ ಖಾಸಗಿ ಕಾಲೇಜುಗಲ್ಲಿ ಬಿ.ಎಡ್ ದಾಖಲಾತಿ ಹೊಂದಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ರೂ 25,000/-ಗಳ ವಿಶೇಷ ಪ್ರೋತ್ಸಾಹಧನವನ್ನು ಪಡೆದು ಕೊಳ್ಳಲು ಅರ್ಜಿಯನ್ನು ಅಹ್ವಾನಿಸಲಾಗಿದೆ. ವಿದ್ಯಾರ್ಥಿಗಳು https://sevasindhu.karnataka.gov.in ಪೋರ್ಟಲ್‌ನಲ್ಲಿ ಆನ್ ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸಲ್ಲಿಸಿದ ಅರ್ಜಿಯ ಪ್ರತಿಯನ್ನು ಹಾಗೂ ಅಗತ್ಯ ದಾಖಲೆಗಳೊಂದಿಗೆ ಡಿಸೆಂಬರ್ 25 ರೊಳಗಾಗಿ ಪ್ರಾಂಶುಪಾಲರಿಂದ ದೃಢೀಕರಿಸಿ ಜಿಲ್ಲಾ ಅಧಿಕಾರಿಗಳ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ಇಲ್ಲಿ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ :08156-277049 ಗೆ ಸಂಪರ್ಕಿಸಬಹುದು.

# ಕ್ರೀಡಾಪಟುಗಳಿಂದ ಪ್ರೋತ್ಸಾಹಧನಕ್ಕೆ ಆಹ್ವಾನ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆಯಡಿ 2023 ನೇ ಕ್ಯಾಲೆಂಡರ್ ವರ್ಷದಲ್ಲಿ (01.01.2023 ರಿಂದ 31.12.2023) ಅಂತರರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಮತ್ತು ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡುವ ಉದ್ದೇಶದಿಂದ ಜಿಲ್ಲೆಯ ಅರ್ಹ ಕ್ರೀಡಾಪಟುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಡಿಸೆಂಬರ್ 16 ರೊಳಗೆ ಜಿಲ್ಲಾ ಕಚೇರಿಯಲ್ಲಿ ಅರ್ಜಿ ನಮೂನೆಗಳು ಹಾಗೂ ಮಾರ್ಗಸೂಚಿಯನ್ನು ಪಡೆದು ಡಿಸೆಂಬರ್ 20 ಒಳಗಾಗಿ ಭರ್ತಿ ಮಾಡಿದ ಅರ್ಜಿಯನ್ನು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಯಲ್ಲಿ ಸಲ್ಲಿಸಲು ಕೋರಿದೆ ಹಾಗೂ ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿಗೆ ಭೇಟಿ ನೀಡುವಂತೆ ಅಥವಾ ದೂರವಾಣಿ ಸಂಖ್ಯೆ: 08156-270054ಗೆ ಸಂಪರ್ಕಿಸಬಹುದೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 11ನೇ ಕೃಷಿ ಗಣತಿ ಪ್ರಗತಿ ಕಡಿಮೆ, ಕ್ರಮ ಕೈಗೊಳ್ಳಿ

**ಮಂಡ್ಯ:** 11 ನೇ ಕೃಷಿ ಗಣತಿಯ ದತ್ತಾಂಶ ಪ್ರಗತಿಯು ಕಡಿಮೆ ಇದ್ದು, ಎಲ್ಲಾ ತಹಶಿಲ್ದಾರರು ಕೂಡಲೆ ಕ್ರಮ ಕೈಗೊಳ್ಳಿ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ವಿಡಿಯೋ ಸಂವಾದದ ಮೂಲಕ ಜಿಲ್ಲಾ ಮಟ್ಟದ ಬೆಳೆ ಕಟಾವು, ಕೃಷಿ ಅಂಕಿ- ಅಂಶ ಹಾಗೂ 11 ನೇ ಕೃಷಿ ಗಣತಿ ಸಮಿತಿಗಳ ಸಮನ್ವಯ ಸಮಿತಿ ಸಭೆ ನಡೆಸಿ ಮಾತನಾಡಿದರು.

11ನೇ ಕೃಷಿ ಗಣತಿಯ ಎರಡನೇ ಹಂತದ ಕಾರ್ಯವು ಈಗಾಗಲೇ ಜಿಲ್ಲೆಯಾದ್ಯಂತ ಎಲ್ಲಾ ತಾಲೂಕುಗಳಲ್ಲಿ ಪ್ರಾರಂಭವಾಗಿದ್ದು, ಕಾರ್ಯವನ್ನು ಕೈಗೊಳ್ಳಲು ಗ್ರಾಮ ಆಡಳಿತ ಅಧಿಕಾರಿಗಳು ಮತ್ತು ರಾಜಸ್ವ ನಿರೀಕ್ಷಕರಿಗೆ ತರಬೇತಿಯನ್ನು ನೀಡಲಾಗಿರುತ್ತದೆ. ಹಿಡುವಳಿದಾರರು ಮತ್ತು ಸರ್ವೆ ನಂಬರ್ ವಾರು 2021 -22ರ ಅವಧಿಯಲ್ಲಿ ಸಾಗುವಳಿ ಹಿಡುವಳಿದಾರ ಭೂಮಿಯ ಬಳಕೆಯ ವಿವರದ ವಿಸ್ತೀರ್ಣವನ್ನು ನಿಗದಿತ ಕಾಲಂ ಗಳಲ್ಲಿ ಪರಿಶೀಲಿಸಿ ಅಳವಡಿಸುವುದು.

ಹಿಡುವಳಿವಾರು ಬೆಳೆದ ಒಟ್ಟು ಬೆಳೆಗಳ ವಿವರವನ್ನು ಕುರಿತು ಮಾಹಿತಿಯನ್ನು ವೆಬ್ ಆಧಾರಿತ ಅಥವಾ ಮೊಬೈಲ್ ಆಪ್ ಮೂಲಕ ಕೈಗೊಳ್ಳಲಾಗುತ್ತಿದೆ. ಮಂಡ್ಯ ಜಿಲ್ಲೆಯಲ್ಲಿ ಶೇಕಡ 34% ರಷ್ಟು ಅಂದರೆ 294 ಗ್ರಾಮಗಳು ಮತ್ತು 1,57,000 ಹಿಡುವಳಿದಾರರು ಎರಡನೇ ಹಂತದ 11ನೇ ಕೃಷಿಗಣತಿಯ ಕ್ಷೇತ್ರ ಕಾರ್ಯವನ್ನು ಕೈಗೊಳ್ಳಲಾಗುತ್ತಿದ್ದು, ಗ್ರಾಮ ಆಡಳಿತ ಅಧಿಕಾರಿಗಳು ಗಣತಿದಾರರಾಗಿ ಹಾಗೂ ರಾಜಸ್ವ ನಿರೀಕ್ಷಕರು ಮೇಲ್ವಿಚಾರಕರಾಗಿ ಮೇಲ್ವಿಚಾರಣೆಯನ್ನು ನಡೆಸಿ ಗ್ರಾಮವಾರು ಮತ್ತು ಸರ್ವೆ ನಂಬರ್ ವರು ಇಡುವಳಿದಾರರ ಭೂಮಿಯ ಬಳಕೆಯ ವಿವರದ ವಿಸ್ತೀರ್ಣವನ್ನು ಮತ್ತು ಬೆಳೆದ ಒಟ್ಟು ಬೆಳೆಗಳ ವಿವರವನ್ನು ಪರಿಶೀಲಿಸಿ ಅನುಮೋದಿಸತಕ್ಕದ್ದು ಎಂದರು.

ಪ್ರತಿ ವರ್ಷ ಋತುವಾರ ಬೆಳೆ ವಿಮಾ ಯೋಜನೆ ಅಡಿ ಅಧಿಸೂಚಿತ ಬೆಳೆಗಳಿಗೆ ಹೋಬಳಿವಾರು ಗ್ರಾಮ ಪಂಚಾಯಿತಿ ಅವರು ಬೆಳೆಕಟ್ಟವು ಪ್ರಯೋಗಗಳನ್ನು ಯೋಜಿಸಲಾಗುತ್ತದೆ. 2024-25 ನೇ ಮುಂಗಾರು ಹಂಗಾಮಿಗೆ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆ ಅಡಿ ಬೆಳೆಕಟಾವು ಪ್ರಯೋಗಗಳು ನಮೂನೆ -1 ಪೂರ್ಣಗೊಂಡಿದೆ. ಬೆಳೆ ಕಟಾವು ಪ್ರಯೋಗಗಳ ಬೆಳೆವಾರು ನಮೂನೆ -2 ರಲ್ಲಿ ಬಾಕಿ ಉಳಿದಿರುವ ಪ್ರಯೋಗವನ್ನು ಯಾವುದೇ ವಿಳಂಬ ಮಾಡದೆ ಆದಷ್ಟು ಬೇಗ ಪೂರ್ಣಗೊಳಿಸಿ ಎಂದರು. ಪ್ರತಿ ವರ್ಷವೂ ಬೆಳೆ ಸಮೀಕ್ಷೆಯನ್ನು ಜಿಐಎಸ್ ಆಧಾರಿತ ಮೊಬೈಲ್ ಆಪ್ ಮೂಲಕ ಪ್ರತಿ ಫ್ಲಾಟ್ ಗಳ ಬೆಳೆ ಸಮೀಕ್ಷೆ ನಡೆಸಿ ಬೆಳೆ ಸಮೀಕ್ಷೆಯಿಂದ ಬಂದ ದತ್ತಾಂಶಗಳನ್ನು ಮೇಲ್ವಿಚಾರಕರು ಮೇಲ್ವಿಚಾರಣೆ ಮಾಡಿ ಅನುಮೋದಿಸಿರುತ್ತಾರೆ. ಬೆಳೆ ಸಮೀಕ್ಷೆಯ ಬೆಳೆವಾರು ದತ್ತಾಂಶಗಳನ್ನು ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಸಮನ್ವಯದೊಂದಿಗೆ ತಾಲೂಕು ಮಟ್ಟದಲ್ಲಿ ಬೆಳೆ ಕ್ಷೇತ್ರ ವರದಿಯನ್ನು ತಯಾರಿಸಿ ತಾಲೂಕು ಮಟ್ಟದ ಸಮನ್ವಯ ಸಮಿತಿಯಿಂದ ಅನುಮೋದನೆಗೊಂಡ ವರದಿಯನ್ನು ದೃಢೀಕರಿಸಿ ಸಲ್ಲಿಸಬೇಕು ಎಂದರು.

# ಸಮಾನತೆಗೆ ಹೋರಾಡಿದವರು ಅಂಬೇಡ್ಕರ್

**ಬೆಂಗಳೂರು:** ದೇಶದಲ್ಲಿ ಬಸವಣ್ಣ, ಬುದ್ಧನ ನಂತರ ಸಮಾನತೆಗಾಗಿ ಹೋರಾಡಿದವರು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ವಿಧಾನಸೌಧದ ಮುಂಭಾಗ ಇರುವ ಸಂವಿಧಾನಶಿಲ್ಪಿ ಭಾರತರತ್ನ ಮಹಾ ಮಾನವತಾವಾದಿ ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ರವರ 68ನೇ ಮಹಾ ಪರಿನಿರ್ವಾಣ ದಿನದ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಮಾಧ್ಯಮ ದವರೊಂದಿಗೆ ಮಾತನಾಡಿದ ಮುಖ್ಯಮಂತ್ರಿಗಳು, ಬಾಬಾ ಸಾಹೇಬ ಅಂಬೇಡ್ಕರ್ ಅವರ ಪರಿನಿರ್ವಾಣ ದಿನದಂದು ಪುಷ್ಪಾರ್ಚನೆ ಮೂಲಕ ಅವರನ್ನು ಗೌರವಿಸುವ ಕೆಲಸವನ್ನು ಸರ್ಕಾರ ಮಾಡಿದೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು 1956 ಡಿಸೆಂಬರ್ 6 ರಂದು ನಮ್ಮನ್ನೆಲ್ಲಾ ಅಗಲಿದರು. ಆ ದಿನವನ್ನೇ ಪರಿನಿರ್ವಾಣ ದಿನಾಚರಣೆ ಎಂದು ಆಚರಿಸಲಾಗುತ್ತದೆ ಎಂದರು.

ಅವರು ತಮ್ಮ ಬದುಕನ್ನು ಸಾಮಾಜಿಕ ಹೋರಾಟದಲ್ಲಿ ಹಾಗೂ ಸಮಾಜದ ಪರಿವರ್ತನೆಗಾಗಿ ತೊಡಗಿಸಿಕೊಂಡರು. ಅಂಬೇಡ್ಕರ್ ಅವರು ಈ ದೇಶಕ್ಕೆ ಹಾಗೂ ನಮ್ಮ ಸಾಮಾಜಿಕ ಬದುಕಿಗೆ ಅಗತ್ಯವಾದಂತಹ ಸಂವಿಧಾನವನ್ನು ಕೊಟ್ಟಿದ್ದಾರೆ. ಜಗತ್ತಿನಲ್ಲಿಯೇ ಶ್ರೇಷ್ಠ ಲಿಖಿತ ಸಂವಿಧಾನವೆಂದು ನಮ್ಮ ಸಂವಿಧಾನ ಖ್ಯಾತಿ ಪಡೆದಿದೆ. ಸಂವಿಧಾನದ ಶ್ರೇಷ್ಠತೆ ತಿಳಿಯಬೇಕಾದರೆ ಒಳ್ಳೆಯವರ ಕೈಯಲ್ಲಿ ಅನುಷ್ಠಾನವಾಗಬೇಕು. ಕೆಟ್ಟವರ ಕೈಗೆ ಹೋದರೆ ಕೆಟ್ಟದಾಗುತ್ತದೆ ಎಂದು ಅಂಬೇಡ್ಕರ್ ಅವರು ಸ್ಪಷ್ಟವಾಗಿ ಈ ದೇಶದ ಜನರಿಗೆ ಎಚ್ಚರಿಕೆಯನ್ನು ಕೊಟ್ಟಿದ್ದರು ಎಂದರು.



ಕೇವಲ ದಲಿತರಿಗೆ ಎಲ್ಲರಿಗೂ ಸಾಮಾಜಿಕ ಅವಕಾಶಗಳನ್ನು ದೊರಕಿಸಲು ಅವರು ಶ್ರಮಿಸಿದರು. ಅವಕಾಶ ವಂಚಿತರು, ಶೋಷಣೆ, ಅನ್ಯಾಯಕ್ಕೆ, ಅವಮಾನಕ್ಕೆ, ದೌರ್ಜನ್ಯಕ್ಕೆ ಒಳಪಟ್ಟ ಎಲ್ಲಾ ಜನರ ಪರವಾಗಿ ಕೆಲಸ ಅವರು ಮಾಡಿದ್ದರು. ಸಮಾಜದಲ್ಲಿ ಸಮಾನತೆ ಬಯಸಿ ಅದನ್ನೇ ನಿರ್ಮಿಸಲು ಬಹಳ ಸ್ಪಷ್ಟವಾಗಿ ಹೇಳಿದ್ದರು. ಸಂವಿಧಾನದ ಧ್ಯೇಯೋದ್ದೇಶಗಳೂ ಅದನ್ನೇ ಹೇಳುತ್ತದೆ. ಸಂವಿಧಾನದಿಂದ ಅನುಕೂಲ ಪಡೆದವರು ಅವರ ಸೋದರ ಜನಾಂಗಗಳಿಗೆ ಸಹಾಯ ಮಾಡಬೇಕು. ಎಲ್ಲರೂ ಸಂವಿಧಾನವನ್ನು ಅರ್ಥ ಮಾಡಿಕೊಳ್ಳಬೇಕೆಂದು ಬಯಸಿದ್ದರು ಎಂದರು.

ಬಹಳ ಜನ ಸಂವಿಧಾನವನ್ನು ವಿರೋಧಿಸುತ್ತಾರೆ. ಭಾರತ ಬಹುಸಂಸ್ಕೃತಿಯ, ಬಹುತ್ವದ ದೇಶ. ಅನೇಕ ಜಾತಿ, ಧರ್ಮಗಳಿವೆ. ಅನೇಕ ಭಾಷೆಗಳೂ ಇವೆ. ಇದಕ್ಕೆ ಯೋಗ್ಯವಾದ ಸಂವಿಧಾನವನ್ನು ಕೊಟ್ಟವರು ಅಂಬೇಡ್ಕರ್. ಎಲ್ಲಾ ಧರ್ಮಗಳೂ, ಜಾರಿಗಳೂ ಸಮಾನವಾದುದು. ಮಾನವ ಧರ್ಮಕ್ಕೆ ಒತ್ತು ನೀಡಿದ್ದರು. ಮೂಲಭೂತವಾಗಿ ನಾವೆಲ್ಲಾ ಮನುಷ್ಯರು. ಮಾನವರು ಪರಸ್ಪರ ಪ್ರೀತಿಸಬೇಕೇ ಹೊರತು ದ್ವೇಷ ಸಲ್ಲದು. ಇದನ್ನು ಅಂಬೇಡ್ಕರ್ ಅವರು ತಮ್ಮ ಬದುಕಿನಲ್ಲಿ ಸಾರಿದ್ದರು.

ಜಾತಿ ವ್ಯವಸ್ಥೆ ವಿರುದ್ಧ ಹೋರಾಡಿದ್ದ ನಾನು ಹಿಂದೂ ಆಗಿ ಹುಟ್ಟಿದ್ದು, ಹಿಂದೂ ಆಗಿ ಸಾಯುವುದಿಲ್ಲ ಎಂದು ತಮ್ಮ ಕಡೇ ದಿನಗಳಲ್ಲಿ ಬೌದ್ಧ ಧರ್ಮ ಸ್ವೀಕಾರ ಮಾಡಿದರು. ಸ್ವೀಕಾರ ಮಾಡಿದ ನಂತರ ಬಹಳ ದಿನಗಳ ಕಾಲ ಉಳಿಯಲಿಲ್ಲ . ಅವರು ಕೊಟ್ಟ ಸಂವಿಧಾನದ ಪ್ರಕಾರ ಮತ್ತು ಅವರ ಹೋರಾಟದ ದಾರಿಯಲ್ಲಿ ನಡೆಯುವ ಪ್ರಾಮಾಣಿಕ ಪ್ರಯತ್ನ ಮಾಡುವುದೇ ಅವರಿಗೆ ನಾವು ಸಲ್ಲಿಸುವ ಗೌರವ ಎಂದರು. ಅದೇ ರೀತಿಯಲ್ಲಿ ಸಂವಿಧಾನ , ಪ್ರಜಾಪ್ರಭುತ್ವ, ಸಮಾನತೆ ತರುವ ಪ್ರಯತ್ನವನ್ನು ಸರ್ಕಾರ ಮಾಡುತ್ತಿದೆ ಎಂದರು.

ಬಳ್ಳಾರಿಯಲ್ಲಿ ಮತ್ತೊಂದು ಬಾಣಂತಿಯ ಸಾವಿಗಿರುವ ಬಗ್ಗೆ ಮಾತನಾಡಿ, ಈ ಬಗ್ಗೆ ಈಗಾಗಲೇ ಸಭೆ ನಡೆಸಿ ಡ್ರಗ್ಸ್ ಕಂಟ್ರೋಲರ್ ಅವರನ್ನು ಅಮಾನತು ಮಾಡಲಾಗಿದೆ. ಈ ಪ್ರಕರಣದಲ್ಲಿ ಸಾವು ಏಕೆ ಸಂಭವಿಸಿದೆ ಎಂದು ಪರಿಶೀಲಿಸಲಾಗುವುದು ಎಂದರು.

# ಉದ್ಯಮಶೀಲತೆ ಕೇವಲ ದೊಡ್ಡ ಉದ್ದಿಮೆದಾರರಿಗೆ ಮಾತ್ರ ಮೀಸಲಾಗಿಲ್ಲ

**ಬೆಂಗಳೂರು:** ಉದ್ಯಮಶೀಲತೆ ಕೇವಲ ದೊಡ್ಡ ಉದ್ದಿಮೆದಾರರಿಗೆ ಮಾತ್ರ ಮೀಸಲಾಗಿಲ್ಲಬದಲಾಗಿ ಗ್ರಾಮೀಣ ಯುವಕರು ಮತ್ತು ಮಹಿಳೆಯರು ಸೂಕ್ತ ಉದ್ದಿಮೆಗಳನ್ನು ಆಯೋಜಿಸಿ ಹೆಚ್ಚಿನ ಲಾಭಗಳಿಸಬಹುದಾಗಿದೆ. ಈ ನಿಟ್ಟಿನಲ್ಲಿ ತರಬೇತಿಯಲ್ಲಿ ಹೊಸ ಹೊಸ ಉದ್ದಿಮೆಗಳಿಗೆ ತಿಳಿಸಿಕೊಡಲು ನೆರವಾಗಿದೆ ಎಂದು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಡಾ: ಎಸ್.ವಿ. ಸುರೇಶ ತಿಳಿಸಿದರು.

ಇಂದು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗ, ಭಾರತ ಸರ್ಕಾರ, ನವದೆಹಲಿ ರವರ ಸಂಯುಕ್ತ ಆಶ್ರಯದಲ್ಲಿ ಜಿಕೆವಿಕೆ ಆವರಣದಲ್ಲಿ ಡಿಸೆಂಬರ್ 2 ರಿಂದ 6 ರವರೆಗೆ ಹಮ್ಮಿಕೊಂಡಿದ್ದ ''ಮಹಿಳಾ ಉದ್ಯಮಿಗಳಿಗೆ ಕೃಷಿ ನವೋದ್ಯಮಗಳು ಹಾಗೂ ಅವಕಾಶದ ಬಗ್ಗೆ ತರಬೇತಿ ಕಾರ್ಯಕ್ರಮ''ದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಕೃಷಿ ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳು ಇದ್ದು ಅದರಲ್ಲೂ ವಿಶೇಷವಾಗಿ ಸಂಸ್ಕರಣೆ, ಮೌಲ್ಯವರ್ಧನೆ ಹಾಗೂ ಮಾರುಕಟ್ಟೆಯು ಮಹಿಳೆಯರಿಗೆ ವಿಫುಲ ಉದ್ಯೋಗವಕಾಶಗಳನ್ನು ಒದಗಿಸುತ್ತಿದೆ, ಆದರೆ ಕೃಷಿ ಚಟುವಟಿಕೆಗಳಲ್ಲಿ ಶೇಕಡಾ 46 ರಷ್ಟು ತೊಡಗಿಸಿಕೊಂಡಿರುವ ಇವರು ಕೃಷಿ ಉದ್ದಿಮೆಗಳಲ್ಲಿ ಶೇಕಡಾ 13 ರಷ್ಟಿರುವುದು ಆತಂಕಕಾರಿಯಾಗಿದೆ. ಈ ನಿಟ್ಟಿನಲ್ಲಿ ಮಹಿಳೆಯರನ್ನು ಆರ್ಥಿಕವಾಗಿ ಸದೃಡರನ್ನಾಗಿಸಲು ಕೃಷಿ ಉದ್ದಿಮೆಗಳಲ್ಲಿ ತೊಡಗಿಸಿಕೊಳ್ಳಲು ಮತ್ತಷ್ಟು ರೂಪುರೇಷೆಗಳನ್ನು ಸಿದ್ದಪಡಿಸುವುದು ಅತ್ಯಗತ್ಯ ಎಂದು ತಿಳಿಸಿದರು.



ಕಾರ್ಯಕ್ರಮದಲ್ಲಿ ಡಾ: ವೈ.ಎನ್. ಶಿವಲಿಂಗಯ್ಯ, ವಿಸ್ತರಣಾ ನಿರ್ದೇಶಕರು, ಡಾ: ಕೆ.ಪಿ. ರಘುಪ್ರಸಾದ್, ಸಹ ವಿಸ್ತರಣಾ ನಿರ್ದೇಶಕರು, ಡಾ: ಸಿದ್ದಯ್ಯ, ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರು, ಕೃಷಿ ವ್ಯವಹಾರ ನಿರ್ವಹಣಾ ಸಂಸ್ಥೆ, ಡಾ.ವೇಣುಗೋಪಾಲ್, ಸಮಾಲೋಚಕರು, ಎ.ವಿ. ಟ್ರೇಡರ್ಸ್, ಅಗ್ರಿ ಕ್ಲಿನಿಕ್ ಬಿಸಿನೆಸ್, ದೊಡ್ಡಬಳ್ಳಾಪುರ ಹಾಗೂ ಡಾ: ಹೆಚ್.ಕೆ. ಪಂಕಜ, ಕಾರ್ಯಕ್ರಮದ ಸಂಯೋಜಕರು ಉಪಸ್ಥಿತರಿದ್ದರು.

# ಮಣ್ಣಿನ ಆರೋಗ್ಯದಲ್ಲಿ ಸುಸ್ಥಿರತೆ ಕಾಯ್ದುಕೊಳ್ಳಿ

**ಚಿಕ್ಕಬಳ್ಳಾಪುರ:** ಇತ್ತೀಚಿನ ದಿನಗಳಲ್ಲಿ ವಾತಾವರಣದಲ್ಲಿ ಆಗುತ್ತಿರುವ ಏರು-ಪೇರುಗಳಿಂದ ಹಾಗೂ ರೈತರು ಹೆಚ್ಚಾಗಿ ರಸಗೊಬ್ಬರ ಹಾಗೂ ಪೀಡೆನಾಶಕಗಳ ಅವೈಜ್ಞಾನಿಕ ಬಳಕೆ ಕಾರಣಗಳಿಂದಾಗಿ ಮಣ್ಣಿನ ಗುಣಮಟ್ಟ ಹಾಗೂ ಪ್ರಮಾಣ ಕಡಿಮೆಯಾಗುತ್ತಿದೆ ಎಂದು ಉಪ ಕೃಷಿ ನಿರ್ದೇಶಕರಾದ ಡಾ.ದೀಪಶ್ರೀ ರವರು ತಿಳಿಸಿದರು.

ಚಿಕ್ಕಬಳ್ಳಾಪುರ ತಾಲ್ಲೂಕು ಪಂಚಾಯ್ತಿ ತರಬೇತಿ ಸಭಾಂಗಣದಲ್ಲಿ ಗುರುವಾರ ವಿಶ್ವ ಮಣ್ಣು ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ರೈತರ ತರಬೇತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಒಂದು ಇಂಚು ಮಣ್ಣು ಪರಿವರ್ತನೆಯಾಗಲು ಸುಮಾರು ಒಂದು ಸಾವಿರ ವರ್ಷಗಳು ಬೇಕಾಗುತ್ತವೆ. ಹೆಚ್ಚಾಗುತ್ತಿರುವ ನಗರೀಕರಣ ಅರಣ್ಯ ನಾಶ ಹಾಗೂ ಅವೈಜ್ಞಾನಿಕ ಕೃಷಿ ಪದ್ಧತಿಯಿಂದ ಸಾಕಷ್ಟು ಭೂಮಿ ಅನ್ಯ ಉದ್ದೇಶಕ್ಕೆ ಬಳಕೆಯಾಗುತ್ತಿದೆ. ಮುಂದಿನ ಪೀಳಿಗೆಗಾಗಿ ಹಾಗೂ ಕೋಟ್ಯಾಂತರ ಜೀವರಾಶಿಗಳ ಉಳುವಿಗಾಗಿ ಮಣ್ಣಿನ ಆರೋಗ್ಯದಲ್ಲಿ ಸುಸ್ಥಿರತೆ ಕಾಯ್ದುಕೊಳ್ಳುವುದು ಈಗಿನ ಅವಶ್ಯ ವಿಷಯವಾಗಿದೆ. ಈ ಬಗ್ಗೆ ರೈತರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ವಿಶ್ವ ಮಣ್ಣು ದಿನಾಚರಣೆ ಆಚರಿಸಲಾಗುವುದು ಎಂದು ತಿಳಿಸಿದರು.

ಎಮ್.ಸಿ.ಎಫ್ ಸಂಸ್ಥೆಯ ಡಾ.ಮನೋಜ್ ರವರು ರೈತರಿಗೆ ಮಣ್ಣು ಮಾದರಿ ಸಂಗ್ರಹಣೆ, ವಿಶ್ಲೇಷಣೆ, ಮಣ್ಣು ಪರೀಕ್ಷೆ ವಿಶ್ಲೇಷಣೆ ಆಧಾರಿತ ರಸಗೊಬ್ಬರಗಳ ಬಳಕೆ ಬಗ್ಗೆ ತಾಂತ್ರಿಕ ಮಾಹಿತಿ ನೀಡಿದರು.

ಸಹಾಯಕ ಕೃಷಿ ನಿರ್ದೇಶಕರಾದ ಮುನಿರಾಜ.ಸಿ ರವರು ಮಾತನಾಡಿ, ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಮಣ್ಣು ಆರೋಗ್ಯ ಮತ್ತು ಫಲವತ್ತೆ ಯೋಜನೆಯಡಿ 1619 ಮಣ್ಣು ಮಾದರಿಗಳನ್ನು ವಿಶ್ಲೇಷಣೆಗೆ ಒಳಪಡಿಸಿದ್ದು ಎಲ್ಲಾ ಮಣ್ಣು ಮಾದರಿಗಳಲ್ಲಿ ಸಾವಯವ ಇಂಗಾಲ ಹಾಗೂ ಪೊಟ್ಯಾಶ್ ಅಂಶ ಕಡಿಮೆ ಇದ್ದು ಹೆಚ್ಚಾಗಿ ಸಾವಯವ ಗೊಬ್ಬರಗಳಾದ ಕೊಟ್ಟಿಗೆ ಗೊಬ್ಬರ, ಎರೆಹುಳ ಗೊಬ್ಬರ ಹಾಗೂ ಹಸಿರೆಲೆ ರಗೊಬ್ಬರಗಳನ್ನು ಬಳಸಲು ಮತ್ತು ಡಿ.ಎ.ಪಿ. ಬಳಸುವಂತಹ ರೈಥರು ಕಡ್ಡಾಯವಾಗಿ ಪೊಟ್ಯಾಶ್ ಗೊಬ್ಬರವನ್ನು ಬಳಸಲು ತಿಳಿಸಿದರು. ಈ ಸಂದರ್ಭದಲ್ಲಿ ಸಹಾಯಕ ಕೃಷಿ ನಿರ್ದೇಶಕ ಶ್ರೀನಿವಾಸ್, ಕೃಷಿ ಅಧಿಕಾರಿ ರಾಮಚಂದ್ರ.ವಿ, ಜೈಕಿಸಾನ್ ಸಂಸ್ಥೆಯ ದಯಾನಂದ್, ಡಿಸೋಜ, ತಮ್ಮಯ್ಯ, ಎಮ್.ಸಿ.ಎಫ್ ಸಂಸ್ಥೆಯ ಮಂಜುನಾಥ್ ಮತ್ತು ಆತ್ಮ ಯೋಜನೆಯ ಸಿಬ್ಬಂದಿ, ರೈತರು ಭಾಗವಹಿಸಿದರು.



**ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಡಾ.ಬಿ.ಆರ್.ಅಂಬೇಡ್ಕರ್ ಅವರ ಪುಣ್ಯತಿಥಿಯ ಅಂಗವಾಗಿ ರಾಜಭವನದ ಅಂಗಳದಲ್ಲಿರುವ ಅವರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿದರು.**

# 62ನೇ ಗೃಹರಕ್ಷಕ ಉತ್ಥಾನ ದಿನಾಚರಣೆ

**ಬೆಂಗಳೂರು;** ಇತ್ತೀಚೆಗೆ ನಡೆದ ಚುನಾವಣೆ ಕರ್ತವ್ಯ ಹಾಗೂ ವಿಪತ್ತು ನಿರ್ವಹಣೆಯ ಸಂದರ್ಭದಲ್ಲಿ ಗೃಹರಕ್ಷಕರ ಸೇವೆಯು ಶ್ಲಾಘನೀಯವಾಗಿದೆ. ತಮ್ಮ ಈ ಸೇವೆಯನ್ನು ಸಮಾಜಕ್ಕೆ ಮುಂದುವರೆಸುತ್ತಾ ಹೋಗುವಂತೆ ಕರ್ನಾಟಕ ರಾಜ್ಯದ ಗೃಹರಕ್ಷಕದಳದ ಪೊಲೀಸ್ ಮಹಾ ನಿರ್ದೇಶಕರು, ಹಾಗೂ ಮಹಾ ಸಮಾದೇಷ್ಟರು ಮತ್ತು ಪೌರರಕ್ಷಣೆಯ ನಿರ್ದೇಶಕರಾದ ಪ್ರಶಾಂತ್ ಕುಮಾರ್ ಠಾಕೂರ್ ತಿಳಿಸಿದರು. ಇಂದು ಗೃಹರಕ್ಷಕ ಮತ್ತು ಪೌರರಕ್ಷಣಾ ನಿರ್ದೇಶನಾಲಯದ ಆವರಣದಲ್ಲಿ ಆಯೋಜಿಸಿದ್ದ 62ನೇ ಗೃಹರಕ್ಷಕ ಉತ್ಥಾನ ದಿನಾಚರಣೆಯನ್ನು ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಜ್ಯದ 27 ಜಿಲ್ಲೆಗಳಲ್ಲಿ 30 ಸಾವಿರ ಗೃಹರಕ್ಷಕದಳ ಮತ್ತು 5 ಸಾವಿರ ಜನ ಪೌರರಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದು, ಪ್ರಕೃತಿ ವಿಕೋಪ, ಕರಾವಳಿ ತೀರಗಳಲ್ಲಿ ಅವಘಡಗಳು ಸಂಭವಿಸಿದಾಗ ತಮ್ಮ ಜೀವವನ್ನು ಲೆಕ್ಕಿಸದೇ ಸಾರ್ವಜನಿಕರ ಸೇವೆಗೆ ಮುಂದಾಗುತ್ತಾರೆ. ಬೇರೆ ರಾಜ್ಯಗಳಲ್ಲೂ ಸಹ ಗೃಹರಕ್ಷಕದಳ ತಮ್ಮ ಸೇವೆಯನ್ನು ಸಲ್ಲಿಸಿರುವುದು ಶ್ಲಾಘನೀಯವಾಗಿದೆ ಎಂದರು. ಈ ಸಂದರ್ಭದಲ್ಲಿ ಗೃಹರಕ್ಷಕ ಮತ್ತು ಪೌರರಕ್ಷಣಾ ಸ್ವಯಂ ಸೇವಕರಿಂದ ಕವಾಯತು ಗೌರವ ವಂದನೆಯನ್ನು ನೀಡಲಾಯಿತು. ಹಾಗೂ 2023 ಮತ್ತು 2024 ನೇ ಸಾಲಿನಲ್ಲ ಗೃಹ ಮಂತ್ರಾಲಯದಿಂದ ಡಿಜಿಸಿಡಿ ಡಿಸ್ಕ್ ಪ್ರಮಾಣ ಪಡೆದ ಅಧಿಕಾರಿ ಸಿಬ್ಬಂದಿಯವರಿಗೆ ಈ ಸಂದರ್ಭದಲ್ಲಿ ಅಭಿನಂದನಾ ಪತ್ರ ನೀಡಿ ಗೌರವಿಸಲಾಯಿತು.

ಸಮಾರಂಭದಲ್ಲಿ ಎಂ. ನಂಜುಂಡಸ್ವಾಮಿ, ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು ಹಾಗೂ ಪ್ರಭಾರ ಅಪರ ಮಹಾ ಸಮಾದೇಷ್ಟರು, ಗೃಹರಕ್ಷಕದಳ ಮತ್ತು ಪದನಿಮಿತ್ತ ಅಪರ ನಿರ್ದೇಶಕರು, ಪೌರರಕ್ಷಣೆ, ಅಕ್ಷಯ್ ಎಂ. ಹಾಕೆ. ಐಪಿಎಸ್, ಉಪ ಮಹಾ ಸಮಾದೇಷ್ಟರು. ಗೃಹರಕ್ಷಕದಳ ಮತ್ತು ಉಪ ನಿರ್ದೇಶಕರು, ಪೌರರಕ್ಷಣೆ. ಸಮಿವುಲ್ಲಾ ಖಾನ್, ಸಮಾದೇಷ್ಟರು. ಗೃಹರಕ್ಷಕ ಹಾಗೂ ಪೌರರಕ್ಷಣಾ ಅಕಾಡೆಮಿ, ಬೆಂಗಳೂರು ಹಾಗೂ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಇಲಾಖೆಯ ಎಲ್ಲಾ ಅಧಿಕಾರಿಗಳು ಹಾಗೂ ಇಲಾಖೆಯ ಎಲ್ಲಾ ಅಧಿಕಾರಿ/ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಅಂಬೇಡ್ಕರ್ ಶ್ರೇಷ್ಠ ಸಾಮಾಜಿಕ ವಿಜ್ಞಾನಿ: ಜಿಲ್ಲಾಧಿಕಾರಿ

**ಚಿಕ್ಕಬಳ್ಳಾಪುರ:** ಭಾರತೀಯ ಸಮಾಜದಲ್ಲಿ ಸ್ವಾತಂತ್ರ್ಯ, ಸಮಾನತೆ, ಶಿಕ್ಷಣ ಮತ್ತು ಸ್ವಾಭಿಮಾನಕ್ಕಾಗಿ ಹೋರಾಟ ಮಾಡಿದ ಅಪ್ರತಿಮ ಹೋರಾಟಗಾರ ಹಾಗೂ ಪ್ರಖರ ಪಾಂಡಿತ್ಯವನ್ನು ಹೊಂದಿದ್ದ ಶ್ರೇಷ್ಠ ಸಾಮಾಜಿಕ ವಿಜ್ಞಾನಿ ಡಾ.ಬಿ.ಆರ್ .ಅಂಬೇಡ್ಕರ್ ಅವರು ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ತಿಳಿಸಿದರು.

ಚಿಕ್ಕಬಳ್ಳಾಪುರ ನಗರದ ಜೈ ಭೀಮ್ ಮೆಮೋರಿಯಲ್ ಪದವಿ ಕಾಲೇಜು ಹಾಸ್ಟೆಲ್ ಆವರಣದಲ್ಲಿ ಜಿಲ್ಲಾಡಳಿತ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಇಂದು ಹಮ್ಮಿಕೊಂಡಿದ್ದ ಸಂವಿಧಾನ ಶಿಲ್ಪಿ,ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 68 ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಅವರ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಅಂಬೇಡ್ಕರ್ ತತ್ವ ಚಿಂತನೆಗಳ ಬೆಳಕಿನಲ್ಲಿ ಇಂದು ದೇಶ ಸಮರ್ಥವಾಗಿ ಮುಂದುವರೆಯುತ್ತಿದೆ. ಅಪಾರ ಜ್ಞಾನ,ಪಾಂಡಿತ್ಯವನ್ನು ಹೊಂದಿದ್ದ ಅಂಬೇಡ್ಕರ್ ಅವರು ಜಗತ್ತಿನ ಅಪ್ರತಿಮ ಜ್ಞಾನಿಗಳು ಮತ್ತು ಹೋರಾಟಗಾರರ ಪೈಕಿ ಮುಂಚೂಣಿಯಲ್ಲಿ ನಿಲ್ಲುತ್ತಾರೆ. ದೇಶದ ಸರ್ವರ ಏಳ್ಗೆಯಲ್ಲಿ ಅಂಬೇಡ್ಕರ್ ಅವರ ಪಾತ್ರ ಮತ್ತು ಪ್ರಭಾವ ಮಹತ್ವದ್ದಾಗಿದೆ. ಸಾಮಾಜಿಕ ಅಸಮಾನತೆಯನ್ನು ಹೋಗಲಾಡಿಸಲು ಶ್ರಮಿಸಿದ ಮೇರು ವ್ಯಕ್ತಿತ್ವ ಅಂಬೇಡ್ಕರ್. ಇಂದಿನ ವಿದ್ಯಾರ್ಥಿಗಳು, ಯುವಪೀಳಿಗೆ ಅವರನ್ನು ಗಂಭೀರವಾಗಿ ಅಧ್ಯಯನ ಮಾಡುವ ಜೊತೆಗೆ ಅರ್ಥ ಮಾಡಿಕೊಂಡು ಅವರ ಚಿಂತನೆಗಳ ಬೆಳಕಿನಲ್ಲಿ ಸಾಗಬೇಕು, ದೇಶವನ್ನು ಮತ್ತಷ್ಟು ಸದೃಢಗೊಳಿಸಲು ಮುಂದಾಗಬೇಕು. ಅರ್ಥವ್ಯವಸ್ಥೆಯೂ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಪರಿಣಿತರಾಗಿದ್ದ ಅಂಬೇಡ್ಕರ್ ಅವರು ದೇಶಕ್ಕೆ ಮತ್ತು ಸಮಾಜಕ್ಕೆ ನೀಡಿರುವ ಕೊಡುಗೆ ಅಪಾರ. ಕಾನೂನು ಸಚಿವರಾಗಿದ್ದಾಗ ಹಿಂದೂ ಕೋಡ್ ಬಿಲ್ ತರಲು ಯತ್ನಿಸಿದ್ದರು ಅದು ಅಂದೆ ಜಾರಿಯಾಗಿದ್ದರೆ ಮಹಿಳೆಯರ ಸ್ಥಿತಿ ಗತಿ ಮತ್ತಷ್ಟು ಉತ್ತಮ ವಾಗಿರುತ್ತಿತ್ತು ಎಂದು ತಿಳಿಸಿದರು.




ಇದೇ ಸಂದರ್ಭದಲ್ಲಿ ಅಂಬೇಡ್ಕರ್ ಅವರ ಕುರಿತು ಉಪನ್ಯಾಸ ನೀಡಿದ ಜಿಲ್ಲಾ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಕೋಡಿರಂಗಪ್ಪ, ಮಾತನಾಡಿ ಅಂಬೇಡ್ಕರ್ ಅವರು ಶೋಷಿತ,ಅಸಹಾಯಕ ಮತ್ತು ದುರ್ಬಲ ವರ್ಗಗಳನ್ನು ಅಸಮಾನತೆಯ ವ್ಯವಸ್ಥೆಯಿಂದ ಬಿಡುಗಡೆಗೊಳಿಸಲು ಹೋರಾಟ ಮಾಡಿದರು. ಮಹಿಳೆಯರ ಸ್ವಾತಂತ್ರ್ಯ, ಸ್ವಾಭಿಮಾನದ ಬದುಕಿಗಾಗಿ ದುಡಿದರು. ಅಂಬೇಡ್ಕರ್ ಈ ದೇಶದಲ್ಲಿ ಮಾತ್ರವಲ್ಲದೇ ಇಡೀ ಜಗತ್ತಿನಲ್ಲಿ ಹೋರಾಟದ ಮೂಲಕ ಸಂಚಲನ ಮೂಡಿಸಿದ ತಾಯಿ ಮನಸ್ಸಿನ ನಾಯಕ ಎಂದರು.

ಜಗತ್ತಿನ ಅತ್ಯುನ್ನತ ಜ್ಞಾನಿಗಳಲ್ಲಿ ಅಗ್ರಗಣ್ಯರಾಗಿರುವ ಡಾ.ಬಿ.ಆರ್ ಅಂಬೇಡ್ಕರ್ ಅವರ ಜ್ಞಾನದ ಫಲದಿಂದಾಗಿ ಈ ದಿನ ನಾವು ವಿವಿಧ ಸ್ತರಗಳ ಹುದ್ದೆಗಳಲ್ಲಿದ್ದೇವೆ,ಎಲ್ಲ ಕ್ಷೇತ್ರಗಳಲ್ಲಿ ಸುಧಾರಣೆ ಆಗಿದೆ.ಅಂಬೇಡ್ಕರ್ ಅವರ ಬಾಲ್ಯ ಶಿಕ್ಷಣದ ವ್ಯವಸ್ಥೆ ಈಗಿನ ಸೌಲತ್ತುಗಳನ್ನು ಆಗ ಹೊಂದಿರಲಿಲ್ಲ, ಏಪ್ರಿಲ್ 14 ಡಾ. ಬಿ. ಆರ್ ಅಂಬೇಡ್ಕರ್ ಅವರು ಹುಟ್ಟಿದ ದಿನವಾಗಿದೆ. 1956 ಡಿಸೆಂಬರ್ 6ರಂದು ಇಹಲೋಕವನ್ನು ತ್ಯಜಿಸಿದ ದಿನವಾಗಿದೆ. ಜಗತ್ತಿನಲ್ಲಿ ಸಂಚಲನ ಉಂಟುಮಾಡಿರುವಂತಹ ದೊಡ್ಡ ಶಕ್ತಿ ಡಾ.ಬಿ.ಆರ್ ಅಂಬೇಡ್ಕರ್. ಅವರು ಪರೀಕ್ಷೆಗೋಸ್ಕರ ಇತಿಹಾಸವನ್ನು ಓದಲಿಲ್ಲ ಭಾರತದ ಇತಿಹಾಸವನ್ನು ಬದಲಾಯಿಸಲು ಓದಿದರು. ದೇಶದ ಪ್ರಜೆಗಳಾಗಿ ಅಂಬೇಡ್ಕರ್ ಬಗ್ಗೆ, ಬಸವಣ್ಣ, ಬುದ್ಧನ ಬಗ್ಗೆ ತಿಳಿದುಕೊಳ್ಳಬೇಕು. ಅಂದಿನ ಸಮಾಜ ಸರ್ವರ ಅಕ್ಷರ ಸಂಸ್ಕೃತಿಗೆ ವಿರುದ್ದವಾಗಿತ್ತು ಮೌಢ್ಯದ ವಿಕೃತಿಗಳನ್ನು ಪರಿವರ್ತನೆ ಮಾಡಿದ ಮಹಾ ಸುಧಾರಕ ಅಂಬೇಡ್ಕರ್ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ನಗರ ಸಭೆಯ ಅಧ್ಯಕ್ಷ ಎ.ಗಜೇಂದ್ರ, ನಗರ ಸಭೆಯ ಉಪಾಧ್ಯಕ್ಷ ನಾಗರಾಜು, ಅಪರ ಜಿಲ್ಲಾಧಿಕಾರಿ ಡಾ. ಭಾಸ್ಕರ್, ಜಿಲ್ಲಾ ಉಪವಿಭಾಗಾಧಿಕಾರಿ ಡಿ.ಎಚ್ ಅಶ್ವಿನ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರ ತೇಜಾನಂದರೆಡ್ಡಿ, ಉಪ ಪೊಲೀಸ್ ವರಿಷ್ಠಾಧಿಕಾರಿ ಶಿವ ಕುಮಾರ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಶೇಷಾದ್ರಿ, ದಲಿತ ಸಂಘಟನೆಗಳ ಮುಖಂಡರು, ಪದಾಧಿಕಾರಿಗಳು, ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು ಇದ್ದರು.

# ಸಂಜೆ ಟಿಪ್ಸ್

## ಬ್ಲೂ ಡಾರ್ಟ್ ತಂತ್ರಜ್ಞಾನ ಪಾಲುದಾರರಿಗೆ ಲಾಜಿಸ್ಟಿಕ್ಸ್‌ನಲ್ಲಿ ನಾವೀನ್ಯತೆ ಉತ್ತೇಜಿಸಲು ಅಫಿಲಿಯೇಟ್ ಕಾರ್ಯಕ್ರಮ

ದಕ್ಷಿಣ ಏಷ್ಯಾದ ಪ್ರಮುಖ ಎಕ್ಸ್‌ಪ್ರೆಸ್ ಏರ್ ಮತ್ತು ಇಂಟಿಗ್ರೇಟೆಡ್ ಸಾರಿಗೆ ಕಂಪನಿಯಾಗಿರುವ ಬ್ಲೂ ಡಾರ್ಟ್ ತಂತ್ರಜ್ಞಾನ ಪಾಲುದಾರರು ಮತ್ತು ಪರಿಸರ ವ್ಯವಸ್ಥೆಯ ಅನುಕೂಲ ಮಾಡಿಕೊಡುವವರಿಗೆ ಇದೇ ಮೊದಲ ಬಾರಿಗೆ ''ಬ್ಲೂ ಡಾರ್ಟ್ ಅಫಿಲಿಯೇಟ್ ಕಾರ್ಯಕ್ರಮವನ್ನು'' ಪ್ರಾರಂಭಿಸುವುದಾಗಿ ಘೋಷಿಸಿದೆ. ಈ ನವೀನ ಕಾರ್ಯಕ್ರಮವು ಉದ್ಯಮದಲ್ಲಿನ ಉನ್ನತ ತಾಂತ್ರಿಕ ವರ್ಗದ ಜೊತೆಗೆ ಸಹಯೋಗವನ್ನು ಉತ್ತೇಜಿಸಲು ವಿನ್ಯಾಸಗೊಳಿಸಲಾಗಿದೆ. ಅಫಿಲಿಯೇಟ್ಗಳಿಗೆ ಹೊಸ ಆದಾಯದ ಅವಕಾಶಗಳನ್ನು ಸೃಷ್ಟಿಸುವುದರ ಜೊತೆಗೆ ಬ್ಲೂ ಡಾರ್ಟ್ನ ಸುಧಾರಿತ ಲಾಜಿಸ್ಟಿಕ್ಸ್ ಪರಿಹಾರಗಳ ಸರಾಗ ಏಕೀಕರಣವನ್ನೂ ಇದು ನೀಡುತ್ತದೆ. ಭಾಗವಹಿಸುವವರು ಬ್ಲೂ ಡಾರ್ಟ್ನ ಸೇವೆಗಳ ಗುಚ್ಛವನ್ನು ಪ್ರಚಾರ ಮಾಡಬಹುದು, ಹೊಸ ಗ್ರಾಹಕರನ್ನು ಆನ್ಬೋರ್ಡ್ ಮಾಡಬಹುದು ಮತ್ತು ಆಕರ್ಷಕ ಮಾಸಿಕ ಪ್ರೋತ್ಸಾಹಕಗಳನ್ನು ಗಳಿಸಬಹುದು. ಇದು ಮಹತ್ವದ ಬದಲಾವಣೆಯನ್ನು ಉಂಟು ಮಾಡುವ ತಂತ್ರಜ್ಞಾನ ಪೂರೈಕೆದಾರರು ಮತ್ತು ಉದ್ಯಮದಲ್ಲೇ ಪ್ರಮುಖ ಲಾಜಿಸ್ಟಿಕ್ಸ್ ನೆಟ್ವರ್ಕ್ನ ಪರಿಪೂರ್ಣ ಮಿಶ್ರಣವಾಗಿದ್ದು, ಗ್ರಾಹಕರಿಗೆ ಇವೆರಡರ ಅತ್ಯುತ್ತಮ ಮಿಶ್ರಣವನ್ನು ತರಲು ಸಹಯೋಗಿಸುತ್ತದೆ. ವಿಶ್ವಾಸಾರ್ಹ, ಮಾರುಕಟ್ಟೆಯನ್ನು ಮುನ್ನಡೆಸುವ ಬ್ರಾಂಡ್ನೊಂದಿಗೆ ಪಾಲುದಾರಿಕೆ ಮಾಡುವುದರಿಂದ ಅಫಿಲಿಯೇಟ್ಗಳು ಪ್ರಯೋಜನ ಪಡೆಯುತ್ತವೆ. ವಿಶ್ವ ದರ್ಜೆಯ ಮತ್ತು ಉದ್ಯಮದಲ್ಲೇ ಅತ್ಯುತ್ತಮ ನೆಟ್ವರ್ಕ್ಗೆ ಪ್ರವೇಶವನ್ನು ಅವರು ಪಡೆಯುತ್ತಾರೆ ಮತ್ತು ಬ್ಲೂ ಡಾರ್ಟ್ನ ಅತ್ಯಾಧುನಿಕ ತಂತ್ರಜ್ಞಾನ ಪರಿಹಾರಗಳು ಮತ್ತು ೦ಖಔ ಗಳಿಗೆ ಆರಂಭಿಕ ಪ್ರವೇಶವನ್ನು ಪಡೆಯುತ್ತವೆ. ಒಂದು ಮೀಸಲಾದ ಬೆಂಬಲ ತಂಡವು ಸುಗಮ ಸಹಯೋಗವನ್ನು ಖಚಿತಪಡಿಸುತ್ತದೆ. ಬ್ಲೂ ಡಾರ್ಟ್ ಎಲ್ಲಾ ಲಾಜಿಸ್ಟಿಕ್ಸ್ ಅಗತ್ಯಗಳನ್ನು ನಿರ್ವಹಿಸುವುದರ ಜೊತೆಗೆ ಅಫಿಲಿಯೇಟ್ಗಳು ತಮ್ಮ ಪರಿಹಾರಗಳನ್ನು ನಿರ್ಮಿಸುವತ್ತ ಗಮನಹರಿಸಲು ಅನುವು ಮಾಡಿಕೊಡುತ್ತದೆ. ಮುಂದಿನ ದಿನಗಳಲ್ಲಿ, ಈ ಕಾರ್ಯಕ್ರಮವು ಭವಿಷ್ಯಕ್ಕೆ ಸಿದ್ಧ ಏಕೀಕರಣವನ್ನು ನೀಡುತ್ತದೆ. ಇದರಲ್ಲಿ ಒಂದೇ-ವಿಂಡೋ ಪರಿಹಾರದ ಮೂಲಕ ಬ್ಲೂ ಡಾರ್ಟ್-DHL ಉತ್ಪನ್ನ ಸಾಲುಗಳಿಗೆ ಪ್ರವೇಶವನ್ನು ಒಳಗೊಂಡಿರುತ್ತದೆ, ದೀರ್ಘಾವಧಿಯ ಬೆಳವಣಿಗೆ ಮತ್ತು ನಾವೀನ್ಯತೆಯನ್ನು ಚಾಲನೆ ಮಾಡುತ್ತದೆ.

## ಅವಲಕ್ಕಿ ಪುಳಿಯೋಗರೆ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಅವಲಕ್ಕಿ 1/2 ಕೆಜಿ,ಪುಳಿಯೋಗರೆ ಪುಡಿ ಅಥವಾ ಗೊಜ್ಜು- ಸ್ವಲ್ಪ, ಎಣ್ಣೆ-ಅಗತ್ಯಕ್ಕೆ ತಕ್ಕಷ್ಟು, ಉಪ್ಪು-ರುಚಿಗೆ ತಕ್ಕಷ್ಟು, ಕರಿಬೇವು- ಸ್ವಲ್ಪ, ಕಡಲೆಕಾಯಿ ಬೀಜ- ಸ್ವಲ್ಪ, ಅರಿಶಿಣ- ಸ್ವಲ್ಪ, ಕಡಲೆಬೇಳೆ, ಉದ್ದಿನ ಬೇಳೆ-ಸ್ವಲ್ಪ, ಸಾಸಿವೆ-ಸ್ವಲ್ಪ, ಹುಣಸೆಹಣ್ಣಿನ ರಸ- ಸ್ವಲ್ಪ, ಬೆಲ್ಲ-ಸ್ವಲ್ಪ, ಒಣಕೊಬ್ಬರಿ (ತುರಿದದ್ದು)- ಸ್ವಲ್ಪ

### ಮಾಡುವ ವಿಧಾನ

ಅವಲಕ್ಕಿಯನ್ನು ತೊಳೆದು ಸ್ವಲ್ಪ ಹೊತ್ತು ನೆನೆಯಲು ಬಿಡಿ. ಬಾಣಲೆಯಲ್ಲಿ ಎಣ್ಣೆ ಹಾಕಿ ಕಾದ ನಂತರ ಸ್ವಲ್ಪ ಸಾಸಿವೆ, ಕಡಲೆಕಾಯಿ ಬೀಜ, ಕಡಲೆಬೇಳೆ, ಉದ್ದಿನ ಬೇಳೆ ಕರಿಬೇವಿನಸೊಪ್ಪು ಹಾಗೂ ಅರಿಶಿಣ ಹಾಕಿ ಬಾಡಿಸಿ. ಇದಕ್ಕೆ ಪುಳಿಯೋಗರೆ ಪುಡಿ ಅಥವಾ ಗೊಜ್ಜು, ಬೆಲ್ಲ ಹಾಗೂ ಹುಣಸೆಹಣ್ಣಿನ ರಸ, ರುಚಿಗೆ ತಕ್ಕಷ್ಟು ಉಪ್ಪನ್ನು ಹಾಕಿ ಚೆನ್ನಾಗಿ ಸಣ್ಣ ಉರಿಯಲ್ಲಿ ಬಾಡಿಸಿ. ಬಳಿಕ ಇದಕ್ಕೆ ಮೊದಲೆ ನೆನೆಸಿಟ್ಟುಕೊಂಡ ಅವಲಕ್ಕಿ ಹಾಗೂ ಕೊಬ್ಬರಿ ತುರಿಯನ್ನು ಹಾಕಿ ಚೆನ್ನಾಗಿ ಬಾಡಿಸಿ ಸಣ್ಣ ಉರಿಯಲ್ಲಿ ಬೇಯಿಸಿರಿ. ಬೇಕಾದರೆ ಸಣ್ಣಗೆ ಹೆಚ್ಚಿದ ಕೊತ್ತಂಬರಿ ಸೊಪ್ಪನ್ನು ಹಾಕಬಹುದು.

## ಅಂಗಾಲು ಉರಿಯಲು ಕಾರಣಗಳೇನು?

### ಹೆಲ್ತ್ ಟಿಪ್ಸ್

ದೇಹದ ಥೈರಾಯ್ಡ್ ಗ್ರಂಥಿ ಕೆಲವೊಮ್ಮೆ ಬೇಕಾದಷ್ಟು ಚೋದಕಗಳನ್ನು ಸ್ರವಿಸುವುದಿಲ್ಲ. ಕಡಿಮೆ ಅಥವಾ ಹೆಚ್ಚೂ ಸ್ರವಿಸಬಹುದು. ಈ ಎರಡೂ ಸಂದರ್ಭಗಳಲ್ಲಿ ಬೇರೆಯದೇ ರೀತಿಯ ತೊಂದರೆಗಳು ದೇಹದಲ್ಲಿ ಕಾಣಿಸಿಕೊಳ್ಳುತ್ತವೆ. ಥೈರಾಯ್ಡ್ ಸ್ರವಿಸುವಿಕೆ ಕಡಿಮೆ ಇದ್ದರೆ ಹೀಗೆ ಕಾಲಿನ ತೊಂದರೆಗಳು ಬರಬಹುದು. ಹಾರ್ಮೋನುಗಳ ಸಮತೋಲನ ಇಲ್ಲದಿದ್ದರೂ ನರಗಳಿಗೆ ಹಾನಿಯಾಗುವ ಸಾಧ್ಯತೆಯಿದೆ. ಕೆಲವು ಮಾರಕ ಸೋಂಕುಗಳಿಂದಲೂ ನರಗಳಿಗೆ ಹಾನಿಯಾಗುವ ಸಂಭವವಿದೆ. ಸಿಫಿಲಿಸ್, ಎಚ್ಐವಿಯಂಥ ಗಂಭೀರ ಸೋಂಕುಗಳು ನರವ್ಯೂಹವೂ ಸೇರಿದಂತೆ ದೇಹದ ಹಲವು ವ್ಯವಸ್ಥೆಗಳನ್ನು ಹಾಳು ಮಾಡುತ್ತವೆ. ಅವುಗಳಿಂದಾಗಿ ಪಾದಗಳಲ್ಲಿ, ಅಂಗಾಲಲ್ಲಿ ಉರಿ ಕಾಡುವ ಸಾಧ್ಯತೆಯಿದೆ. ಸಂಪೂರ್ಣ ಸಸ್ಯಾಹಾರವನ್ನೇ ಸೇವಿಸುವವರಲ್ಲಿ ಕಾಣುವ ದೋಷಗಳಲ್ಲಿ ವಿಟಮಿನ್ ಬಿ12 ಕೊರತೆಯೂ ಒಂದು. ಇದರಿಂದಲೂ ಪಾದಗಳ ಉರಿ ಬೆನ್ನು ಹತ್ತಬಹುದು. ಅದಲ್ಲದೆ, ವಿಟಮಿನ್ ಬಿ1 ಮತ್ತು ವಿಟಮಿನ್ ಬಿ6 ಅಂಶಗಳು ದೇಹದಲ್ಲಿ ಅಧಿಕವಾದರೂ ಕಾಡುವ ಸಮಸ್ಯೆಯಿದು. ಹಾಗಾಗಿ ಈ ಬಗ್ಗೆ ವೈದ್ಯರಲ್ಲೇ ಕೇಳುವುದು ಒಳಿತು.

ನಮ್ಮ ದೇಹದ ಅಂಗಾಂಗಗಳನ್ನೇ ಶತ್ರುಗಳೆಂದು ತಿಳಿದು ನಮ್ಮದೇ ದೇಹದ ಪ್ರತಿರೋಧಕ ಶಕ್ತಿಯು ದಾಳಿ ಮಾಡುವಂಥ ತೊಂದರೆಯಿದು. ಇಂಥ ಸಂದರ್ಭಗಳಲ್ಲಿ ದೇಹದ ಕೀಲುಗಳು, ಚರ್ಮ, ನರಗಳಿಗೆಲ್ಲಾ ಹಾನಿ ಉಂಟಾಗುವ ಸಾಧ್ಯತೆಯನ್ನು ತಳ್ಳಿಹಾಕಲಾಗದು. ಇದರಿಂದಲೂ ಸೂಕ್ಷ್ಮ ನರಗಳಿಗೆ ತೊಂದರೆಯಾಗಿ, ಕಾಲುರಿ ಬರುವ ಸಂಭವವಿದೆ. ಸುಮ್ಮನಿರಲಾರದೆ ಮೈಯೆಲ್ಲಾ ಇರುವ ಬಿಟ್ಟುಕೊಂಡವರ ಕತೆಯಿದು. ಬೇರಾವ ರೋಗ, ಸಮಸ್ಯೆಗಳ ಬಾಧೆ ಇಲ್ಲದಿದ್ದಾಗ ಚಟಗಳನ್ನಾದರೂ ಅಂಟಿಸಿಕೊಂಡು ಆರೋಗ್ಯ ಹಾಳುಗಳೆಯುವ ಉತ್ಸಾಹ ಅಗತ್ಯವಿಲ್ಲ. ಮದ್ಯದಲ್ಲಿರುವ (ನೀರಲ್ಲಿ ಇರಬಹುದಾದ) ಟಾಕ್ಸಿನ್ ಮತ್ತು ಆರ್ಸೆನಿಕ್ ಅಂಶಗಳಿಂದಲೂ ಕಾಲಿನ ಉರಿ ಬರುವ ಸಾಧ್ಯತೆಯಿದೆ. ಮದಿರೆಯ ಮೇಲೆ ಕಡಿವಾಣ ಅಗತ್ಯ. ದೇಹಕ್ಕೆ ಅನಗತ್ಯವಾದ ಅಂಶಗಳು ಸರಿಯಾಗಿ ಹೊರಗೆ ಹೋಗದಿದ್ದರೆ, ಮೂತ್ರಪಿಂಡದ ಆರೋಗ್ಯದ ಬಗ್ಗೆ



ಅನುಮಾನ ಬರುವುದು ಸಹಜ. ಕಿಡ್ನಿಯ ತೊಂದರೆ ರಕ್ತದಲ್ಲಿ ಅನಗತ್ಯ ಅಂಶಗಳು ಹೆಚ್ಚುತ್ತವೆ. ಈ ಸಂದರ್ಭದಲ್ಲೂ ಕಾಲಿನ ಉರಿ ಕಾಣಬಹುದು. ಆದರೆ ಇಂಥ ಪ್ರಕರಣಗಳಲ್ಲಿ ಉರಿಯೊಂದಿಗೆ ನೋವು ಬರುವ ಸಂಭವವೂ ಇರುತ್ತದೆ.

ಇದೊಂದು ರೀತಿಯ ಫಂಗಸ್ ಸೋಂಕು. ಇದರಿಂದ ಪಾದದ ತ್ವಚೆ ಒಣಗಿ, ಚರ್ಮದ ಹುರುಪೆ ಎದ್ದು ಬರುವಂತಾಗುತ್ತದೆ. ಚರ್ಮದ ಬಣ್ಣ ಬಿಳಿಯಾಗಿಯೂ ಕಾಣಬಹುದು. ಇಂಥ ಸಮಸ್ಯೆಯೂ ಪಾದಗಳ ಉರಿಗೆ ಕಾರಣವಾಗಬಹುದು. ತಣ್ಣೀರಿನ ಟಬ್ನಲ್ಲಿ ಕೆಲವು ನಿಮಿಷಗಳ ಕಾಲ ಪಾದವನ್ನು ನೆನೆಸಿ ಇಡಬಹುದು. ಆದರೆ ಇದಕ್ಕಾಗಿ ಫ್ರಿಜ್ನಲ್ಲಿರುವ ನೀರನ್ನು ಬಳಸುವ ಅಗತ್ಯವಿಲ್ಲ. ನಲ್ಲಿಯಲ್ಲಿನ ಮಾಮೂಲಿ ತಣ್ಣೀರಾದರೂ ಸಾಕಾಗುತ್ತದೆ. ಎಪ್ಸಮ್ ಉಪ್ಪು ಹಾಕಿದ ನೀರಿನಲ್ಲಿ ಪಾದವನ್ನು ಕೆಲಕಾಲ ಮುಳುಗಿಸಿಡುವುದು. ಕಾಲಿನಲ್ಲಿ ನೋವಿದ್ದರೆ ಈ ಕ್ರಮ ಹೆಚ್ಚು ಉಪಯುಕ್ತ ಕೊಬ್ಬರಿ ಎಣ್ಣೆಯ ಜೊತೆಗೆ ಕೊಂಚ ಲೋಳೆಸರದ ಜೆಲ್ ಬಳಸಿ ಪಾದಗಳನ್ನು ಲಘುವಾಗಿ ಮಸಾಜ್ ಮಾಡಿ. ಇದರಿಂದ ರಕ್ತ ಸಂಚಾರ ಹೆಚ್ಚಿ, ಸಮಸ್ಯೆ ತಗ್ಗುತ್ತದೆ. ದಿನವೂ ವ್ಯಾಯಾಮ ತಪ್ಪಿಸಬೇಡಿ. ಇದರಿಂದ ದೇಹದ ಎಲ್ಲಾ ಭಾಗಗಳಿಗೆ ರಕ್ತ ಸಂಚಾರ ವರ್ಧಿಸಿ, ಹಲವು ಸಮಸ್ಯೆಗಳಿಗೆ ಉಪಶಮನ ದೊರೆಯುತ್ತದೆ.

## ನಿಮ್ಮ ಮೂಗನ್ನು ರಕ್ಷಿಸಲು ಆಯುರ್ವೇದ ಸಲಹೆ

### ಬ್ಯೂಟಿ ಟಿಪ್ಸ್



ಮೂಗಿನ ಆರೋಗ್ಯ ಬಹಳ ಮುಖ್ಯವಾದದ್ದು. ಏಕೆಂದರೆ ಮೂಗು ತಲೆಯನ್ನು ತಲುಪುವ ದ್ವಾರದಂತಿದೆ. ಮೂಗಿನ ಯಾವುದೇ ಅಡಚಣೆ ನೀವು ಗ್ರಹಿಸುವುದಕ್ಕಿಂತ ವೇಗವಾಗಿ ತಲೆಯ ಮೇಲೆ ಪರಿಣಾಮ ಬೀರಬಹುದು. ಮೂಗು ಕೇವಲ ಇಂದ್ರಿಯ ಅಂಗವಲ್ಲ ನಮ್ಮ ಶ್ವಾಸಕೋಶವನ್ನು ಹಾನಿಕಾರಕ ಬ್ಯಾಕ್ಟೀರಿಯಾ ಮತ್ತು ಅಲರ್ಜಿಕಾರಕಗಳಿಂದ ರಕ್ಷಿಸುತ್ತದೆ. ಆಯುರ್ವೇದ ವೈದ್ಯ ಮತ್ತು ಸ್ವಾಸ್ಥ್ಯ ತರಬೇತುದಾರ ವರ ಯನಮೀಂದ್ರ ಅವರು ಆರೋಗ್ಯಕರ ಮೂಗಿಗೆ ಆಯುರ್ವೇದ ಸಲಹೆಗಳನ್ನು ಹಂಚಿಕೊಳ್ಳುತ್ತಾರೆ. ತಜ್ಞರ ಪ್ರಕಾರ, ಮೂಗು ಕೇವಲ ಇಂದ್ರಿಯ ಅಂಗವಲ್ಲ ಆದರೆ ಉಸಿರಾಟದ ಪ್ರಮುಖ ರಚನೆಯಾಗಿದೆ. ಮೂಗನ್ನು ಔಷಧ ನಿರ್ವಹಣೆಗೆ ವೇಗದ ಮಾರ್ಗಗಳಲ್ಲಿ ಒಂದೆಂದು ಪರಿಗಣಿಸಲಾಗಿದೆ. ಪ್ರತಿದಿನ ಆಗದಿದ್ದರೆ 2 ದಿನಕ್ಕೆ ಒಮ್ಮೆಯಾದರೂ ಮೂಗನ್ನು ಸ್ವಚ್ಛಗೊಳಿಸಿಕೊಳ್ಳಿ. ಧೂಳು ಅಥವಾ ಇನ್ನಿತರ ಸಂದರ್ಭಗಳಲ್ಲಿ ಹೆಚ್ಚಿನ ಮುನ್ನೆಚ್ಚರಿಕೆ ವಹಿಸಿ. ಹೆಚ್ಚುವರಿ ದ್ರವವನ್ನು ಹೊರಹಾಕಲು ನಿಮ್ಮ ಸೈನಸ್ಗಳನ್ನು ಶುದ್ಧೀಕರಿಸಲು ನೇತಿ ಅಥವಾ ಉಪ್ಪು ನೀರನ್ನು ಪ್ರಯತ್ನಿಸಬಹುದು. ನೀವು ಅಲರ್ಜಿಯೊಂದಿಗೆ ಹೋರಾಡುತ್ತಿದ್ದರೆ, ನಿಮ್ಮ ಮೂಗಿನ ಒಳಗೆ ಒಂದು ಹನಿ ತುಪ್ಪ ಹಾಕಿ ಅದನ್ನು ಮೂಗಿನ ಒಳಗೆ ಸವರಿಕೊಳ್ಳಿ ಇದರಿಂದ ಏನು ತೊಂದರೆ ಇರುವುದಿಲ್ಲ ಆದರೆ ನೀವು ಶುದ್ಧ ತುಪ್ಪ ಬಳಸಬೇಕಾಗುತ್ತದೆ. ಇದು ಮೂಗಿನಲ್ಲಿರುವ ಅಲರ್ಜಿಕಾರಕಗಳ ಸಂಪರ್ಕವನ್ನು ತಪ್ಪಿಸಿ. ನಿಮಗೆ ತುರಿಕೆ ಅಥವಾ ಇನ್ನಿತರ ಅಲರ್ಜಿಯಿಂದ ಮುಕ್ತಿಗೊಳಿಸುತ್ತದೆ. ಉಸಿರಾಟಕ್ಕೆ ಕಷ್ಟವಾಗುತ್ತಿದ್ದಲ್ಲಿ ಸ್ವಲ್ಪ ಒಣ ಪುಡಿಯನ್ನು ಸೇರಿಸಿ ಇನ್ಹೇಲ್ ಮಾಡಿ.(ವೈದ್ಯರ ಸಲಹೆ ಅಗತ್ಯ) ಇದು ಯಾವುದೇ ಉರಿಯೂತವನ್ನು ಕೂಡ ಗುಣಪಡಿಸಲು ಸಹಾಯ ಮಾಡುತ್ತದೆ ಮತ್ತು ಮೂಗಿನ ಲೋಳೆಯಿಂದ ಅಲರ್ಜಿಕಾರಕಗಳನ್ನು ತೆಗೆದುಹಾಕುವಲ್ಲಿ ಸಹಾಯ ಮಾಡುತ್ತದೆ. ನಿಯಮಿತವಾಗಿ ಮೂಗಿನ ಒಳಸೇರಿಸುವ ಧೂಳು ಮಾಲಿನ್ಯಕಾರಕಗಳ ಬಗ್ಗೆ ಗಮನ ನೀಡಿ. ಏಕೆಂದರೆ ಇವು ಕೇವಲ ನಿಮ್ಮ ಮೂಗು ಮಾತ್ರವಲ್ಲ ತಲೆವರೆಗೂ ಪ್ರಭಾವ ಬೀರಬಲ್ಲದು. ನೀವು ಮುನ್ನೆಚ್ಚರಿಕೆ ವಹಿಸಿದಲ್ಲಿ ನಿಮ್ಮ ತಲೆಯ ಒಟ್ಟಾರೆ ಆರೋಗ್ಯಕ್ಕೆ ಸಹಾಯ ಮಾಡುತ್ತದೆ. ಇದು ತಲೆನೋವನ್ನು ನಿವಾರಿಸುತ್ತದೆ, ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸುತ್ತದೆ ಮತ್ತು ಮಾನಸಿಕ ಕಾರ್ಯವನ್ನು ಹೆಚ್ಚಿಸುತ್ತದೆ. ನಿಮ್ಮ ಇಡೀ ದೇಹವು ಮೂಗಿನ ಸಮಸ್ಯೆ ಇಂದಾಗಿ ಹಲವಾರು ರೀತಿಯಲ್ಲಿ ಪರಿಣಾಮಗಳನ್ನು ಅನುಭವಿಸಬಹುದು ಎಂದು ನಿಮಗೆ ತಿಳಿದಿದೆಯೇ? ಶೀತದಿಂದ ಕಿಕ್ಕಿರಿದ ಮೂಗು ನಿಮಗೆ ಉಸಿರಾಡಲು, ಮಲಗಲು ಅಥವಾ ವಿಶ್ರಾಂತಿ ಪಡೆಯಲು ಕಷ್ಟವಾಗಬಹುದು.

## ಹೃದಯ ಕದ್ದವಳ ಹೆಸರು ರಿವೀಲ್ ಮಾಡಿದ ಸಲ್ಮಾನ್ ಖಾನ್!




58ರ ಹರೆಯದಲ್ಲೂ ಸಲ್ಮಾನ್ ಖಾನ್ ಒಂಟಿ ಜೀವನ ನಡೆಸುತ್ತಿದ್ದಾರೆ. ನಟನ ಅಭಿಮಾನಿಗಳು ಅವರು ಯಾವಾಗ ಮದುವೆಯಾಗುತ್ತಾರೆ ಎಂದು ಚಿಂತಿತರಾಗಿದ್ದಾರೆ.. ಈ ನಟನ ಹೆಸರು ಅನೇಕ ದೊಡ್ಡ ನಟಿಯರೊಂದಿಗೆ ಸಂಬಂಧ ಹೊಂದಿದೆ. ಆದರೆ ಈ ಹಿಂದೆ ಸಲ್ಮಾನ್ ಖಾನ್ ನಟಿಯೊಬ್ಬರ ಜೊತೆಗಿನ ಸಂಬಂಧವನ್ನು ಎಲ್ಲರ ಮುಂದೆ ಒಪ್ಪಿಕೊಂಡಿದ್ದರು.

ಸಂಗೀತಾ ಬಿಜಲಾನಿ ನಂತರ, ಸಲ್ಮಾನ್ ಖಾನ್ ಮತ್ತು ಐಶ್ವರ್ಯಾ ರೈ ಅವರ ಸಂಬಂಧವು ಹೆಚ್ಚು ಸುದ್ದಿಯಲ್ಲಿತ್ತು. ಆದರೆ ಈ ಸಂಬಂಧ ಕೇವಲ ಎರಡು ವರ್ಷಗಳಲ್ಲಿ ಮುರಿದುಬಿತ್ತು. ಐಶ್ವರ್ಯಾ ನಂತರ, ಸಲ್ಮಾನ್ ಖಾನ್ ಕತ್ರಿನಾ ಕೈಫ್‌ನೊಂದಿಗೆ ಬಹಳ ಕಾಲ ಡೇಟ್ ಮಾಡಿದರು. ನಟ ನಟಿಯೊಂದಿಗಿನ ತನ್ನ ಸಂಬಂಧವನ್ನು ಎಲ್ಲರ ಮುಂದೆ ಸಾರ್ವಜನಿಕವಾಗಿ ಬಹಿರಂಗಪಡಿಸಿದ್ದರು.. ಅದರ ವೀಡಿಯೊ ಈಗ ವೈರಲ್ ಆಗುತ್ತಿದೆ.

ವಾಸ್ತವವಾಗಿ, ಸಲ್ಮಾನ್ ಖಾನ್ ಅವರ ಹಳೆಯ ವೀಡಿಯೊ 'ದಸ್ ಕಾ ದಮ್' ಕಾರ್ಯಕ್ರಮದ್ದಾಗಿದೆ.. ಇದರಲ್ಲಿ ಸಲ್ಮಾನ್ ಖಾನ್ ಗೆ ನಿಮ್ಮ ನೆಚ್ಚಿನ ಗೆಳತಿ ಯಾರು ಎಂದು ಕೇಳಲಾಯಿತು. ಇದಕ್ಕೆ ಪ್ರತಿಕ್ರಿಯಿಸಿದ ನಟ, 'ನನಗೆ ಒಬ್ಬಳೇ ಗೆಳತಿ ಇದ್ದಾಳೆ' ಎಂದಿದ್ದಾರೆ. ಅಲ್ಲದೇ ವೇದಿಕೆಯಲ್ಲಿದ್ದ ಬಾಲಕನ ಹೆಸರನ್ನು ಸಲ್ಮಾನ್ ಖಾನ್ ಕೇಳುತ್ತಾರೆ.. ಬಾಲಕ ಕತ್ರಿನಾ ಕೈಫ್ ಎನ್ನುತ್ತಾನೆ.. ಆಗ ಸಲ್ಲು 'ನೋಡಿ, ನನ್ನ ಗೆಳತಿ ಕತ್ರಿನಾ ಕೈಫ್ ಎಂದು ಹೇಳುತ್ತಿದ್ದಾನೆ' ಎನ್ನುತ್ತಾರೆ.. ಇದಕ್ಕೆ ವೇದಿಕೆ ಮೇಲಿದ್ದ ಮಹಿಳೆ ನಗುತ್ತಾ ಆತ ಹೇಳಿದ್ದು ಸರಿ ಎಂದು ಹೇಳಿದರೆ.. ಸಲ್ಮಾನ್ ಆಶ್ಚರ್ಯದಿಂದ, ಮಗುವಿಗೆ ಇದು ತಿಳಿದಿದೆ ಎಂದು ನನಗೆ ತಿಳಿದಿರಲಿಲ್ಲ.. ಎಂದು ಹೇಳಿದ್ದಾರೆ.. ಸದ್ಯ ಈ ವಿಡಿಯೋ ಸೋಷಿಯಲ್ ಮಿಡಿಯಾದಲ್ಲಿ ಸಖತ್ ವೈರಲ್ ಆಗುತ್ತಿದೆ..

ಸಲ್ಮಾನ್ ಖಾನ್ ಜೊತೆಗಿನ ಬ್ರೇಕಪ್ ನಂತರ, ಐಶ್ವರ್ಯಾ ರೈ 2007 ರಲ್ಲಿ ಅಭಿಷೇಕ್ ಬಚ್ಚನ್ ಅವರನ್ನು ವಿವಾಹವಾದರು. ಇದರ ನಂತರ, ಸಲ್ಮಾನ್ ಕತ್ರಿನಾ ಕೈಫ್‌ನೊಂದಿಗೆ ಬಹಳ ಕಾಲ ಡೇಟಿಂಗ್ ಮಾಡಿದರು. ಆದರೆ ನಂತರ ಇಬ್ಬರೂ ಬೇರ್ಪಟ್ಟರು. ಸಲ್ಮಾನ್‌ನಿಂದ ಬೇರ್ಪಟ್ಟ ನಂತರ, ಕತ್ರಿನಾ ಕೈಫ್ 2021 ರಲ್ಲಿ ವಿಕ್ಕಿ ಕೌಶಲ್ ಅವರನ್ನು ವಿವಾಹವಾದರು.

## ಕಾಲ್ತುಳಿತಕ್ಕೆ ಸಿಕ್ಕಿ ಮೃತಪಟ್ಟ ಮಹಿಳೆ ಕುಟುಂಬಕ್ಕೆ 25 ಲಕ್ಷ ನೆರವು ಘೋಷಿಸಿದ ಅಲ್ಲು ಅರ್ಜುನ್

**ಹೈದರಾಬಾದ್:** 'ಪುಷ್ಪ 2' ಪ್ರೀಮಿಯರ್ ಶೋ ವೇಳೆ ಕಾಲ್ತುಳಿತ ಸಂಭವಿಸಿ ಮೃತಪಟ್ಟ ಮಹಿಳಾ ಕುಟುಂಬಕ್ಕೆ ನಟ ಅಲ್ಲು ಅರ್ಜುನ್ 25 ಲಕ್ಷ ರೂ. ಆರ್ಥಿಕ ನೆರವು ನೀಡುವುಯದಾಗಿ ಘೋಷಣೆ ಮಾಡಿದ್ದಾರೆ.

ಡಿಸೆಂಬರ್ 4 ರಂದು ನಡೆದ ಪುಷ್ಪ 2: ದಿ ರೂಲ್?ನ ಪ್ರೀಮಿಯರ್ ಶೋ ವೇಳೆ ಹೈದರಾಬಾದ್‌ನ ಸಂಧ್ಯಾ ಥಿಯೇಟರ್‌ನಲ್ಲಿ ಸಂಭವಿಸಿದ ದುರಂತ ಘಟನೆಯ ಬಗ್ಗೆ ಸಂತಾಪ ವ್ಯಕ್ತಪಡಿಸುವ ವೀಡಿಯೊವನ್ನು ನಟ ತಮ್ಮ ಎಕ್ಸ್‌ನಲ್ಲಿ ಹಂಚಿಕೊಂಡಿದ್ದಾರೆ.

ರೇವತಿ (39) ಎಂಬ ಮಹಿಳೆ ಸಾವನ್ನಪ್ಪಿದ್ದು, ಅವರ 9 ವರ್ಷದ ಮಗ ಕಾಲ್ತುಳಿತಕ್ಕೆ ಸಿಕ್ಕಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಸಂತ್ರಸ್ತೆ ಕುಟುಂಬಕ್ಕೆ ನಾನು ಮತ್ತು ನನ್ನ ಇಡೀ ಪುಷ್ಪ-2 ತಂಡ ಸಂತಾಪ ಸೂಚಿಸುತ್ತದೆ.

ಸಂಧ್ಯಾ ಥಿಯೇಟರ್‌ನಲ್ಲಿ ಸಂಭವಿಸಿದ ದುರಂತ ಘಟನೆ ಹೃದಯ ವಿದ್ರಾವಕವಾಗಿದೆ. ಈ ನೋವಿನಲ್ಲಿ ನಮ್ಮ ತಂಡ ಅವರೊಂದಿಗೆ ಇರುತ್ತದೆ. ಶೀಘ್ರದಲ್ಲೇ ನಾನು ಅವರ ಮನೆಗೆ ಭೇಟಿ ನೀಡಲಿದ್ದೇನೆ. ಆಕೆಯ ಕುಟುಂಬದ ಭವಿಷ್ಯಕ್ಕಾಗಿ 25 ಲಕ್ಷ ರೂ.ಗಳ ಆರ್ಥಿಕ ಸಹಾಯ ನೀಡಲು ಬಯಸುತ್ತೇನೆ. ಗಾಯಗೊಂಡವರ ಚಿಕಿತ್ಸಾವೆಚ್ಚವನ್ನು ನಮ್ಮ ಇಡೀ ತಂಡ ನೋಡಿಕೊಳ್ಳಲಿದೆ. ಅಲ್ಲದೇ ಭವಿಷ್ಯದಲ್ಲಿ ಅಭಿಮಾನಿಗಳು ಎಚ್ಚರಿಕೆ ಮತ್ತು ಜಾಗರೀಕತೆಯಿಂದಿರಿ ಎಂದು ಎಚ್ಚರಿಕೆ ನೀಡಿದ್ದಾರೆ.ಇನ್ನೂ ಹೈದ್ರಾಬಾದ್‌ನಲ್ಲಿ ಮಹಿಳಾ ಅಭಿಮಾನಿ ಸಾವು ಪ್ರಕರಣ ಸಂಬಂಧ ನಟ ಅಲ್ಲು ಅರ್ಜುನ್ ವಿರುದ್ಧ ಜಾಮೀನು ರಹಿತ ಸೆಕ್ಷನ್‌ಗಳನ್ನು ಒಳಗೊಂಡ ಎಫ್‌ಐಆರ್ ದಾಖಲಾಗಿದೆ. ಘಟನೆ ಬಗ್ಗೆ ಎನ್‌ಹೆಚ್‌ಆರ್‌ಸಿಗೆ ದೂರು ಹೋಗಿದೆ.



## 70ರ ಇಳಿಗಾಲದಲ್ಲಿ ಆರ್ಥಿಕ ಸೇರ್ಪಡೆ

ಮೈಸೂರು ಸಮೀಪದ ನಂಜನಗೂಡು ತಾಲೂಕಿನಲ್ಲಿ ಸೋಮಶೇಖರಪ್ಪ ಮತ್ತು ಸ್ಪೈಸ್ ಮನಿ ಹೇಗೆ ಬದುಕು ಬದಲಿಸುತ್ತಿದ್ದಾರೆ ಕರ್ನಾಟಕ ರಾಜ್ಯದ ಮೈಸೂರು ಸಮೀಪದ ನಂಜನಗೂಡು ತಾಲೂಕಿನ ಹೆಮ್ಮರಗಾಲ ಗ್ರಾಮದಲ್ಲಿ ಬ್ಯಾಂಕಿಂಗ್ ಮೂಲಭೂತ ಸೇವೆಗಳ ಲಭ್ಯತೆ ವಿರಳವಾದ ಕಾರಣ ಆರ್ಥಿಕ ಒಳಗೊಳ್ಳುವಿಕೆಯು(ಸೇರ್ಪಡೆ) ಹಲವರಿಗೆ ದೂರದ ಕನಸಾಗಿತ್ತು. ಆದರೆ ಭಾರತದ ಡಿಜಿಟಲ್ ಪೇಮೆಂಟ್ ಮತ್ತು ಬ್ಯಾಂಕಿಂಗ್ ಸೇವೆಯಲ್ಲಿ ಮುಂಚೂಣಿಯಲ್ಲಿರುವ ಸ್ಪೈಸ್ ಮನಿ, ಗ್ರಾಮೀಣ ಭಾರತದ ಆರ್ಥಿಕ ಅಂತರ(ಕಂದಕ) ಕಡಿಮೆ ಮಾಡುವ ಉದ್ದೇಶದೊಂದಿಗೆ ಈ ನೆಲಗಟ್ಟಿನ ವಾಸ್ತವವನ್ನು ಬದಲಾಯಿಸಲು ಕೆಲಸ ಮಾಡುತ್ತಿದೆ. ಅಂತಹ ಒಂದು ಗಮನಾರ್ಹವಾದ ಯಶಸ್ಸಿನ ಕಥೆಯೆಂದರೆ, 70 ವರ್ಷದ ಸಣ್ಣ ಪ್ರಮಾಣದ ಉದ್ಯಮಶೀಲ(ನ್ಯಾನೋಪ್ರೀನಿಯರ್) ಮತ್ತು ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ(ಪಿಡಿಒ) ಶ್ರೀ ಸೋಮಶೇಖರಪ್ಪ ಅವರು, ತಮ್ಮ ಪತ್ನಿಯೊಂದಿಗೆ ಸೇರಿ ತಮ್ಮ ಸಮುದಾಯಕ್ಕೆ ಆರ್ಥಿಕ ಪ್ರವೇಶ ಒದಗಿಸುವಲ್ಲಿ ದಾರಿದೀಪವಾಗಿದ್ದಾರೆ. ಈ ಪ್ರದೇಶಕ್ಕೆ ಸ್ಪೈಸ್ ಮನಿ ಎಂಟ್ರಿ ಕೊಡುವ ಮೊದಲು, ಸೀಮಿತ ಬ್ಯಾಂಕಿಂಗ್ ಸೇವಾ ಅವಧಿಯ ಕಾರಣದಿಂದ ಗ್ರಾಮೀಣರು ಬ್ಯಾಂಕಿಂಗ್ ಸೇವೆಗಳನ್ನು ಪ್ರವೇಶಿಸಲು ಗಮನಾರ್ಹ ಸವಾಲುಗಳನ್ನು ಎದುರಿಸಿದರು, ಸಮೀಪದ ಬ್ಯಾಂಕ್ ಅನನುಕೂಲಕರವಾಗಿ ನೆಲೆಗೊಂಡಿತ್ತು. ಸ್ಥಳೀಯ ಬ್ಯಾಂಕಿಂಗ್ ಪ್ರತಿನಿಧಿಗಳು ಸಾಮಾನ್ಯವಾಗಿ ತಮ್ಮ ಸೇವೆಗಳನ್ನು ಬ್ಯಾಂಕ್ ಸಮಯಕ್ಕೆ ಸೀಮಿತಗೊಳಿಸಿದರೆ, ಶ್ರೀ ಸೋಮಶೇಖರಪ್ಪ ಅವರು ಬ್ಯಾಂಕಿಂಗ್ ಅವಧಿ ದಾಟಿದ ಸಮಯದಲ್ಲಿ ಪ್ರವೇಶಿಸಬಹುದಾದ ಪರಿಹಾರ ಅಗತ್ಯವನ್ನು ಗುರುತಿಸಿದರು. ಇದು ಅನೇಕ ಸ್ಥಳೀಯರನ್ನು ಸ್ಪೈಸ್ ಮನಿಯ ಹಣಕಾಸು ಸೇವೆಗಳನ್ನು ಬಳಸಲು ಪರಿವರ್ತಿಸಿತು.



ಗ್ರಾಮ ಪಂಚಾಯಿತಿ ಕಚೇರಿಯಿಂದ ನಿವೃತ್ತರಾದ ನಂತರ ಶ್ರೀ ಸೋಮಶೇಖರಪ್ಪ ಅವರು, ಸರ್ಕಾರಿ ಅಧಿಕಾರಿಯಾದ ತಮ್ಮ ಪುತ್ರಿಯಿಂದ ಡಿಜಿಟಲ್ ಬ್ಯಾಂಕಿಂಗ್ ತರಬೇತಿ ಪಡೆದರು, ನಂತರ ವಿತರಕರ ಮೂಲಕ ಸ್ಪೈಸ್ ಮನಿ ಪರಿಚಯವಾಯಿತು. ಅವರ ಸಾಮರ್ಥ್ಯ ಗುರುತಿಸಿದ ಸ್ಪೈಸ್ ಮನಿ ತಂಡವು, ಸ್ಪೈಸ್ ಮನಿ ಅಧಿಕಾರಿಯಾಗಿ ತನ್ನನ್ನು ತಾನು ಸ್ಥಾಪಿಸಿಕೊಳ್ಳಲು ಅಗತ್ಯವಾದ ತರಬೇತಿ ಮತ್ತು ಆರ್ಥಿಕ ಬೆಂಬಲ ನೀಡಿತು. ಆರಂಭಿಕ ಸವಾಲುಗಳು ಮತ್ತು ಹಿಂಜರಿಕೆಗಳ ಹೊರತಾಗಿಯೂ, ಅವರು ತಮ್ಮ ಸಮುದಾಯಕ್ಕೆ ಅಗತ್ಯವಾದ ಹಣಕಾಸು ಸೇವೆಗಳನ್ನು ಒದಗಿಸಲು ಈ ಅವಕಾಶವನ್ನು ಸ್ವೀಕರಿಸಿದರು. ಕಳೆದ ವರ್ಷ ಅವರ ಅಂಗಡಿಯು ಹಣಕಾಸು ಸೇವೆಗಳ ಕೇಂದ್ರವಾಗಿ ಮಾರ್ಪಟ್ಟಿದೆ. ಅಲ್ಲಿ ಅವರು ಹೆಮ್ಮರಗಾಲ ಮತ್ತು ನೆರೆಯ ಗ್ರಾಮಗಳ ನಿವಾಸಿಗಳಿಗೆ ನಿರ್ಣಾಯಕ ಬ್ಯಾಂಕಿಂಗ್ ಪರಿಹಾರಗಳನ್ನು ನೀಡುತ್ತಿದ್ದಾರೆ. ಪತ್ನಿಯ ಜತೆಗೂಡಿ ಅವರು ಪ್ರತಿದಿನ ಹಲವಾರು ವಹಿವಾಟುಗಳನ್ನು ನಿರ್ವಹಿಸುತ್ತಾರೆ, ಹಿಂದೆ ತಲುಪಲಾಗದ ವಿಶ್ವಾಸಾರ್ಹ ಮತ್ತು ಅನುಕೂಲಕರ ಹಣಕಾಸು ಸೇವೆಗಳನ್ನು ನೀಡುತ್ತಿದ್ದಾರೆ.

ಶ್ರೀ ಸೋಮಶೇಖರಪ್ಪ ಅವರ ಸಂಪೂರ್ಣ ಸಮರ್ಪಣೆ ಮತ್ತು ಸೇವಾ ಮನೋಭಾವವು ಪ್ರಭಾವಶಾಲಿ ಮೈಲಿಗಲ್ಲುಗಳಿಗೆ ಕಾರಣವಾಗಿದೆ. ಪ್ರತಿ ತಿಂಗಳ ಅವರ ಅತ್ಯಧಿಕ ಜೀವಿತಾವಧಿಯ ಒಟ್ಟು ವಹಿವಾಟು ಮೌಲ್ಯ(ಜಿಟಿವಿ) 22 ಲಕ್ಷ ರೂ.ಗೆ ತಲುಪಿದೆ. ಒಟ್ಟು ವಹಿವಾಟಿನ ಮೌಲ್ಯ 18,90,214 ರೂ.ಗೆ ಏರಿಕೆ ಕಂಡಿದೆ. ಆಧಾರ್ ಸಕ್ರಿಯಗೊಳಿಸಿದ ಪಾವತಿ ವ್ಯವಸ್ಥೆ(ಎಇಪಿಎಸ್) ಮೂಲಕ ಕನಿಷ್ಠ 10 ಲಕ್ಷ ರೂ. ಸ್ಥಿರ ಮಾಸಿಕ ಹಣಕಾಸು ಪ್ರಕ್ರಿಯೆ ನಡೆಸುತ್ತಿದ್ದಾರೆ. ನಿವೃತ್ತ ಸರ್ಕಾರಿ ಅಧಿಕಾರಿಯಿಂದ ವಿಶ್ವಾಸಾರ್ಹ ಸ್ಪೈಸ್ ಮನಿ ಅಧಿಕಾರಿಯವರೆಗಿನ ಅವರ ಪ್ರಯಾಣವು ಗ್ರಾಮೀಣ ಭಾರತಕ್ಕೆ ತಂತ್ರಜ್ಞಾನ ಮತ್ತು ಉದ್ಯಮಶೀಲತೆ ಹೇಗೆ ಪರಿವರ್ತನೀಯ ಬದಲಾವಣೆಗಳನ್ನು ತರಬಹುದು ಎಂಬುದನ್ನು ತೋರಿಸುತ್ತಿದೆ. ನಗದು ಹಿಂಪಡೆಯುವಿಕೆ, ಹಣ ವರ್ಗಾವಣೆ ಮತ್ತು ಬಿಲ್ ಪಾವತಿ ಸೇವೆಗಳನ್ನು ಒದಗಿಸುವ ಮೂಲಕ, ಶ್ರೀ ಸೋಮಶೇಖರಪ್ಪ ಅವರು ತಮ್ಮ ಸ್ವಂತ ಜೀವನೋಪಾಯವನ್ನು ಸುಧಾರಿಸಿಕೊಂಡಿದ್ದಾರೆ ಮಾತ್ರವಲ್ಲದೆ, ತಮ್ಮ ಸಮುದಾಯದ ಆರ್ಥಿಕ ಸೇವೆಗಳ ಪ್ರವೇಶದಲ್ಲಿ ನಿರ್ಣಾಯಕ ಕಂದಕವನ್ನು ತುಂಬಿದ್ದಾರೆ. ಅವರ ಯಶೋಗಾಥೆಯು ಸ್ಪೈಸ್ ಮನಿ ಹೇಗೆ ಸ್ಥಳೀಯ ಉದ್ಯಮಿಗಳಿಗೆ ಆರ್ಥಿಕ ಸೇರ್ಪಡೆಗೆ ಮತ್ತು ಸಂಪೂರ್ಣ ಸಮುದಾಯಗಳನ್ನು ಉನ್ನತೀಕರಿಸಲು ಅಧಿಕಾರ ನೀಡುತ್ತದೆ ಎಂಬುದಕ್ಕೆ ಸಾಕ್ಷಿಯಾಗಿದೆ. ಇಂದು ಅವರ ಅಂಗಡಿಯು ಹೆಮ್ಮರಗಾಲ ನಿವಾಸಿಗಳಿಗೆ ಪ್ರಮುಖ ಆರ್ಥಿಕ ಪ್ರವೇಶ ಬಿಂದುವಾಗಿ ನಿಂತಿದೆ, ಬದಲಾವಣೆ ಸ್ವೀಕರಿಸಲು ಮತ್ತು ಸಮುದಾಯದ ಬೆಳವಣಿಗೆ ಬೆಂಬಲಿಸಲು ವಯಸ್ಸು ಅಡ್ಡಿಯಲ್ಲ ಎಂಬುದನ್ನು ಸಾಬೀತುಪಡಿಸಿದೆ. ಅವರ ಯಶೋಗಾಥೆಯು ಆರ್ಥಿಕ ಅವಕಾಶಗಳನ್ನು ಸೃಷ್ಟಿಸಲು ಮತ್ತು ಹಣಕಾಸಿನ ಸೇವೆಗಳನ್ನು ಭಾರತದ ಅತ್ಯಂತ ದೂರದ ಗ್ರಾಮೀಣ ಪ್ರದೇಶಗಳಿಗೆ ತಲುಪಿಸುವ ಸ್ಪೈಸ್ ಮನಿಯ ಬದ್ಧತೆಯನ್ನು ಇದು ಪ್ರತಿಬಿಂಬಿಸುತ್ತಿದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಸ್ವಂತ ವ್ಯವಹಾರದಲ್ಲಿ ಅನುಕೂಲ, ಕೈಗಾರಿಕೆಯವರಿಗೆ ಅನುಕೂಲ, ವಾಹನ ಅಪಘಾತಗಳು, ತಾಯಿಯಿಂದ ಲಾಭ.

**ವೃಷಭ:** ಭೂಮಿ ವಾಹನ ಸ್ಥಿರಾಸ್ತಿಯಿಂದ ನಷ್ಟ, ದಾಂಪತ್ಯ ಕಲಹಗಳು, ಉದ್ಯೋಗ ಬದಲಾವಣೆಯಿಂದ ತೊಂದರೆಗಳು, ಅನಗತ್ಯ ಕಲಹಗಳಿಂದ ಜೈಲುವಾಸ.

**ಮಿಥುನ:** ಆರ್ಥಿಕ ಸಹಾಯ, ಮಿತ್ರರಿಂದ ಅನುಕೂಲ, ಹಿತಶತ್ರುಗಳ ಕಾಟ, ಮಾತಿನಿಂದ ಸಮಸ್ಯೆ.

**ಕಟಕ:** ಉದ್ಯೋಗದಲ್ಲಿ ಅನುಕೂಲ, ಉದ್ಯೋಗ ಪ್ರಾಪ್ತಿ, ಉತ್ತಮ ಹೆಸರು, ಮಕ್ಕಳಿಂದ ಬೇಜವಾಬ್ದಾರಿತನ, ಆಧ್ಯಾತ್ಮಿಕ ಚಿಂತನೆ.

**ಸಿಂಹ:** ಯಂತ್ರೋಪಕರಣಗಳಿಂದ ಅನುಕೂಲ, ತಂತ್ರದ ಭೀತಿಗಳು, ಕಾರ್ಯ ನಿಮಿತ್ತ ಪ್ರಯಾಣ, ಗುಪ್ತ ಮಾರ್ಗದಲ್ಲಿ ಜಯ.

**ಕನ್ಯಾ:** ಭೂ ವ್ಯವಹಾರಗಳಿಂದ ತೊಂದರೆ, ದಾಯಾದಿ ಕಲಹಗಳು, ಕೋರ್ಟ್ ಕೇಸ್‌ಗಳಿಂದ ಸಮಸ್ಯೆ, ಅಪಘಾತಗಳ ಸಾಧ್ಯತೆ ಜೋಪಾನ, ಕೆಲಸಕಾರ್ಯಗಳಿಗೆ ಅಡೆತಡೆಗಳು.

**ತುಲಾ:** ಸಂಗಾತಿಯಿಂದ ಹಠಮಾರಿ ಧೋರಣೆ, ಪಾಲುದಾರಿಕೆಯಿಂದ ಧನಾಗಮನ, ಉದ್ಯೋಗ ಅನುಕೂಲದ ಭರವಸೆ, ಮೂರನೇ ವ್ಯಕ್ತಿಗಳಿಂದ ತೊಂದರೆ.

**ವೃಶ್ಚಿಕ:** ಶತ್ರು ದಮನವಾಗುವುದು, ರೋಗಬಾಧೆ ಮತ್ತು ಸಾಲದ ಚಿಂತೆ, ಬೇಜವಾಬ್ದಾರಿತನದಿಂದ ನಷ್ಟಗಳು, ಗೃಹ ಬದಲಾವಣೆಯಿಂದ ತೊಂದರೆ.

**ಧನಸ್ಸು:** ಗುಪ್ತ ಪ್ರೀತಿಗಳು, ಗುಪ್ತ ಭಾವನೆಗಳು, ಮಕ್ಕಳಿಂದ ಅನುಕೂಲ, ಆಧ್ಯಾತ್ಮಿಕ ಚಿಂತನೆಗಳು, ವಿದ್ಯಾಭ್ಯಾಸದಲ್ಲಿ ಪ್ರಗತಿ.

**ಮಕರ:** ಸ್ಥಿರಾಸ್ತಿ ಭೂಮಿ ವಾಹನ ಲಾಭ, ಮಾನಸಿಕ ಭಾದೆ, ಸಂಗಾತಿ ನಡವಳಿಕೆಯಿಂದ ಬೇಸರ, ಗುಪ್ತ ಲಾಭದ ಪ್ರಯತ್ನ.

**ಕುಂಭ:** ಉದ್ಯೋಗದಲ್ಲಿ ಅನುಕೂಲ, ಕೆಲಸ ಕಾರ್ಯಗಳಲ್ಲಿ ನಿರಾಸಕ್ತಿ, ದಾಯಾದಿಗಳಿಂದ ಸಮಸ್ಯೆ, ಬದಲಾವಣೆಯಿಂದ ಅನುಕೂಲ.

**ಮೀನ:** ಆರ್ಥಿಕ ಅನುಕೂಲ, ಕುಟುಂಬದಿಂದ ಸಹಕಾರ, ಯಂತ್ರೋಪಕರಣಗಳಿಂದ ಅನುಕೂಲ, ದೂರ ಪ್ರಯಾಣ ತಂದೆಯಿಂದ ಸಹಕಾರ.

## ಅಂತರಾಷ್ಟ್ರೀಯ ನಾಗರಿಕ ವಿಮಾನಯಾನ ದಿನ




ಆಧುನಿಕ ಜೀವನದ ಮೇಲೆ ವಿಮಾನ ಉದ್ಯಮದ ಪ್ರಭಾವವನ್ನು ಅಂಗೀಕರಿಸಲು ಡಿಸೆಂಬರ್ 7 ರಂದು ನಾವು ಅಂತರರಾಷ್ಟ್ರೀಯ ನಾಗರಿಕ ವಿಮಾನಯಾನ ದಿನವನ್ನು ಆಚರಿಸುತ್ತೇವೆ. 24 ಗಂಟೆಗಳಿಗಿಂತ ಕಡಿಮೆ ಅವಧಿಯಲ್ಲಿ ನೀವು ನಿಮ್ಮ ದೇಹವನ್ನು ಪ್ರಪಂಚದಾದ್ಯಂತ ಎಲ್ಲಿಯಾದರೂ ಸಾಗಿಸಬಹುದು ಎಂದು ಯೋಚಿಸುವುದು ನಂಬಲಾಗದ ಸಂಗತಿಯಾಗಿದೆ. ಹಾರಾಟವು ಜಗತ್ತನ್ನು ತುಂಬಾ ಚಿಕ್ಕದಾಗಿದೆ ಮತ್ತು ನಮ್ಮ ಜೀವನದ ಮೇಲೆ ಭಾರಿ ಪರಿಣಾಮ ಬೀರಿದೆ. ಉನ್ನತ ವಾಯುಯಾನ ಪತ್ರಕರ್ತರಿಂದ ವಾಯುಯಾನಕ್ಕೆ ಸಂಬಂಧಿಸಿದ ಸುದ್ದಿಗಳ ಕುರಿತು ನವೀಕೃತವಾಗಿರಿ. ಇಂದು ನಾವು ಹಾರಾಟದ ಪರಿಣಾಮವನ್ನು ಆಚರಿಸುತ್ತೇವೆ ಮತ್ತು ಅದು ನಮಗೆಲ್ಲರಿಗೂ ಹಲವು ಬಾಗಿಲುಗಳನ್ನು ತೆರೆದಿರುವುದಕ್ಕೆ ಕೃತಜ್ಞರಾಗಿರುತ್ತೇವೆ. ವಿಶ್ವಸಂಸ್ಥೆಯೊಳಗಿನ ವಿಶೇಷ ಸಂಸ್ಥೆಯಾದ ಇಂಟರ್ನ್ಯಾಷನಲ್ ಸಿವಿಲ್ ಏವಿಯೇಷನ್ ಆರ್ಗನೈಸೇಶನ್, ನಾಗರಿಕ ವಿಮಾನಯಾನವು ಪ್ರಪಂಚದ ಮೇಲೆ ಬೀರಿದ ಪ್ರಭಾವವನ್ನು ಆಚರಿಸಲು ಡಿಸೆಂಬರ್ 7 ಅನ್ನು ದಿನವಾಗಿ ಸ್ಥಾಪಿಸಿತು. ಹಾರಾಟದ ಕಾರಣದಿಂದಾಗಿ ಪ್ರವಾಸೋದ್ಯಮ ಮತ್ತು ವ್ಯಾಪಾರ ಎರಡನ್ನೂ ಶಾಶ್ವತವಾಗಿ ಬದಲಾಯಿಸಲಾಗಿದೆ, ಸಕ್ರಿಯ ಗೊಳಿಸಿದ ಸಾಂಸ್ಕೃತಿಕ ಸಂಪರ್ಕಗಳನ್ನು ನಮೂದಿಸಬಾರದು.

ICAOನ 50 ನೇ ವಾರ್ಷಿಕೋತ್ಸವದ ಭಾಗವಾಗಿ 1994 ರಲ್ಲಿ ಮೊದಲ ಅಂತರರಾಷ್ಟ್ರೀಯ ನಾಗರಿಕ ವಿಮಾನಯಾನ ದಿನವನ್ನು ನಡೆಸಲಾಯಿತು ಮತ್ತು 1996 ರಲ್ಲಿ ಯುನೈಟೆಡ್ ನೇಷನ್ಸ್ ಜನರಲ್ ಅಸೆಂಬ್ಲಿ ಡಿಸೆಂಬರ್ 7 ಅನ್ನು ಅಂತರರಾಷ್ಟ್ರೀಯ ನಾಗರಿಕ ವಿಮಾನಯಾನ ದಿನವೆಂದು ಅಧಿಕೃತವಾಗಿ ಗುರುತಿಸಿತು. ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ನಾಗರಿಕ ವಿಮಾನಯಾನದ ಪ್ರಾಮುಖ್ಯತೆಯನ್ನು ಬಲಪಡಿಸಲು ಮತ್ತು ನಿಜವಾದ ಜಾಗತಿಕ ಸಾರಿಗೆ ನೆಟ್ವರ್ಕ್ ಸಹಕರಿಸಲು ಮತ್ತು ಜೀವಕ್ಕೆ ತರಲು ದೇಶಗಳಿಗೆ ಸಹಾಯ ಮಾಡುವಲ್ಲಿ ಅಂತರರಾಷ್ಟ್ರೀಯ ನಾಗರಿಕ ವಿಮಾನಯಾನ ಸಂಸ್ಥೆ ವಹಿಸುವ ಅನನ್ಯ ಪಾತ್ರವನ್ನು ಗುರುತಿಸಲು ಅವರು ದಿನವನ್ನು ಪ್ರಯತ್ನಿಸಲು ಮತ್ತು ಬಳಸಲು ಒಪ್ಪಿಕೊಂಡರು. ಯುಎನ್ ಈಗ ಅಜೆಂಡಾ 2030 ಅನ್ನು ಅಳವಡಿಸಿಕೊಂಡಿರುವುದರಿಂದ, ಜಾಗತಿಕ ಸುಸ್ಥಿರ ಅಭಿವೃದ್ಧಿಯಲ್ಲಿ ಹೊಸ ಯುಗದ ಅಂತಿಮ ಗುರಿಯೊಂದಿಗೆ ಬರುವ ಮಾಲಿನ್ಯದ ಕಡಿತದ ಪ್ರತಿಜ್ಞೆ, ಜಾಗತಿಕ ಸಂಪರ್ಕದ ಎಂಜಿನ್ನಂತೆ ವಾಯುಯಾನದ ಪ್ರಾಮುಖ್ಯತೆಯು ಅಷ್ಟೇ ಪ್ರಸ್ತುತವಾಗಿದೆ.

ಸಂಜೆ ಮುಗಿಲು
ಶನಿವಾರ
7.12.2024



# ಅಮೆರಿಕದಲ್ಲಿ 7.0 ತೀವ್ರತೆಯ ಭೂಕಂಪ; ಸುನಾಮಿ ಎಚ್ಚರಿಕೆ

**ವಾಷಿಂಗ್ಟನ್:** ಅಮೆರಿಕದ ಉತ್ತರ ಕ್ಯಾಲಿಫೋರ್ನಿಯಾ ದಲ್ಲಿ ಗುರುವಾರ (ಡಿ. 5) 7.0 ತೀವ್ರತೆಯ ಶಕ್ತವಾದ ಭೂಕಂಪ ಸಂಭವಿಸಿದೆ ಈ ಹಿನ್ನೆಲೆಯಲ್ಲಿ ಅಮೆರಿಕದ ಪಶ್ಚಿಮ ಕರಾವಳಿಯಲ್ಲಿ ಸುನಾಮಿ ಎಚ್ಚರಿಕೆ ನೀಡಲಾಗಿದೆ. ಸಾವು-ನೋವು ಸಂಭವಿಸಿರುವ ಬಗ್ಗೆ ವರದಿಯಾಗಿಲ್ಲ.

ಒರೆಗಾನ್ ಗಡಿಯಿಂದ ಸುಮಾರು 130 ಮೈಲಿ (209 ಕಿ.ಮೀ.) ದೂರದಲ್ಲಿರುವ ಕರಾವಳಿಯ ಹಂಬೋಲ್ಟ್ ಕೌಂಟಿಯ ಸಣ್ಣ ನಗರವಾದ ಫರ್ಂಡೇಲ್ನ ಪಶ್ಚಿಮಕ್ಕೆ ಬೆಳಗ್ಗೆ 10:44ಕ್ಕೆ ಭೂಕಂಪ ಸಂಭವಿಸಿದೆ ಎಂದು ಮೂಲಗಳು ತಿಳಿಸಿವೆ. ಇದರ ತೀವ್ರತೆ ಎಷ್ಟಿತ್ತೆಂದರೆ ಸುಮಾರು 270 ಮೈಲಿ (435 ಕಿ.ಮೀ.) ದೂರದಲ್ಲಿರುವ ಸ್ಯಾನ್ ಫ್ರಾನ್ಸಿಸ್ಕೋದವರೆಗೂ ಬಲವಾದ ಭೂಕಂಪನದ ಅನುಭವವಾಗಿದೆ. ಹಲವು ಸೆಕೆಂಡುಗಳ ಕಾಲ ಭೂಮಿ ಕಂಪಿಸಿದ ಅನುಭವವಾಗಿದೆ ಎಂದು ಅಲ್ಲಿನ ನಿವಾಸಿಗಳು ತಿಳಿಸಿದ್ದಾರೆ. ಇದರ ನಂತರ ಅನೇಕ ಸಣ್ಣ ಭೂಕಂಪಗಳು ಸಂಭವಿಸಿದವು.

2019ರಲ್ಲಿ ರಿಡ್ಜೆಕ್ರೆಸ್ಟ್‌ನಲ್ಲಿ 7.1 ತೀವ್ರತೆಯ ಭೂಕಂಪನದ ನಂತರ ಕ್ಯಾಲಿಫೋರ್ನಿಯಾದಲ್ಲಿ ಸಂಭವಿಸಿದ ಅತ್ಯಂತ ಪ್ರಬಲ ಭೂಕಂಪಗಳಲ್ಲಿ ಒಂದಾದ ಇದರಿಂದ ಹೆಚ್ಚಿನ ಹಾನಿ ಅಥವಾ ಗಾಯಗಳಾದ ಬಗ್ಗೆ ವರದಿ ಬಂದಿಲ್ಲ. ಸುನಾಮಿ ಎಚ್ಚರಿಕೆ ಸುಮಾರು ಒಂದು ಗಂಟೆ ಕಾಲ ಜಾರಿಯಲ್ಲಿತ್ತು. ಭೂಕಂಪ ಸಂಭವಿಸಿದ ಕೆಲವೇ ಹೊತ್ತಲ್ಲಿ ಕ್ಯಾಲಿಫೋರ್ನಿಯಾದ ಮಾಂಟೆರೆ ಕೊಲ್ಲಿಯ ಉತ್ತರದಿಂದ ಒರೆಗಾನ್ವರೆಗೆ ಸುಮಾರು 500 ಮೈಲಿ (805 ಕಿ.ಮೀ.) ಕರಾವಳಿಗೆ ಸುನಾಮಿ ಎಚ್ಚರಿಕೆ ನೀಡಲಾಯಿತು. ''ಶಕ್ತಿಯುತ ಸಮುದ್ರದ ಅಲೆಗಳು ಮತ್ತು ಬಲವಾದ ಪ್ರವಾಹಗಳ ಸರಣಿಯು ನಿಮ್ಮ ಹತ್ತಿರದ ಕರಾವಳಿಗಳ ಮೇಲೆ ಪರಿಣಾಮ ಬೀರಬಹುದು. ನೀವು ಅಪಾಯದಲ್ಲಿದ್ದೀರಿ. ಕರಾವಳಿ ಪ್ರದೇಶದಿಂದ ಸಾಧ್ಯವಾದಷ್ಟು ದೂರವಿರಿ. ಈಗ ಎತ್ತರದ ಮೈದಾನ ಅಥವಾ ಒಳನಾಡಿಗೆ ತೆರಳಿ. ಮರಳುವುದು ಸುರಕ್ಷಿತ ಎಂದು ಸ್ಥಳೀಯ ಅಧಿಕಾರಿಗಳು ಹೇಳುವವರೆಗೂ ಕರಾವಳಿಯಿಂದ ದೂರವಿರಿ ಎನ್ನುವ ಸಂದೇಶ ಮೊಬೈಲ್ ಫೋನ್ಗೆ ಬಂದಿತ್ತು ಎಂದು ಹಲವರು ತಿಳಿಸಿದ್ದಾರೆ.



## 85 ಹೊಸ ಕೇಂದ್ರೀಯ ವಿದ್ಯಾಲಯಗಳ ಆರಂಭಕ್ಕೆ ಸಂಪುಟದ ಅನುಮೋದನೆ

**ನವದೆಹಲಿ:** 85 ಹೊಸ ಕೇಂದ್ರೀಯ ವಿದ್ಯಾಲಯಗಳು, 28 ಹೊಸ ನವೋದಯ ವಿದ್ಯಾಲಯಗಳನ್ನು ತೆರೆಯಲು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಶುಕ್ರವಾರ ತಿಳಿಸಿದ್ದಾರೆ.ಹರಿಯಾಣಕ್ಕೆ ಸಂಪರ್ಕವನ್ನು ಹೆಚ್ಚಿಸಲು ದೆಹಲಿ ಮೆಟ್ರೋದ 26.46 ಕಿ.ಮೀ ರಿಥಾಲಾ-ಕುಂಡ್ಲಿ ಕಾರಿಡಾರ್ಗೆ ಕ್ಯಾಬಿನೆಟ್ ಅನುಮೋದನೆ ನೀಡಿದೆ.ಈ ಹೊಸ ಕೇಂದ್ರೀಯ ವಿದ್ಯಾಲಯಗಳ ಪ್ರಾರಂಭವು ದೇಶಾದ್ಯಂತ 82,000 ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಕೈಗೆಟುಕುವ ಮತ್ತು ಉತ್ತಮ ಗುಣಮಟ್ಟದ ಶಿಕ್ಷಣವನ್ನು ಪಡೆಯಲು ಅವಕಾಶವನ್ನು ಒದಗಿಸುತ್ತದೆ.2025-26 ರಿಂದ ಎಂಟು ವರ್ಷಗಳ ಅವಧಿಯಲ್ಲಿ 85 ಹೊಸ ಕೇಂದ್ರೀಯ ವಿದ್ಯಾಲಯಗಳ ಸ್ಥಾಪನೆ ಮತ್ತು ಅಸ್ತಿತ್ವದಲ್ಲಿರುವ ಒಂದು ಕೇಂದ್ರೀಯ ವಿದ್ಯಾಲಯದ ವಿಸ್ತರಣೆಗೆ ಒಟ್ಟು 5,872.08 ಕೋಟಿ ರೂಪಾಯಿ.ಪ್ರಸ್ತುತ, ಮಾಸ್ಕೋ, ಕಠ್ಮಂಡು ಮತ್ತು ಟೆಹ್ರಾನ್ ಸೇರಿದಂತೆ 1,256 ಕ್ರಿಯಾತ್ಮಕ ಕೇಂದ್ರೀಯ ವಿದ್ಯಾಲಯಗಳಿವೆ ಮತ್ತು ಈ ಶಾಲೆಗಳಲ್ಲಿ 13.56 ಲಕ್ಷ ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ.



## ಚಿಲಿ ದೇಶದ ಮಾಜಿ ಅಧ್ಯಕ್ಷೆ ಮಿಶೆಲ್ ಬಚೆಲೆಟ್‌ಗೆ ಇಂದಿರಾ ಗಾಂಧಿ ಶಾಂತಿ ಪ್ರಶಸ್ತಿ

**ನವದೆಹಲಿ:** ಚಿಲಿ ದೇಶದ ಮಾಜಿ ಅಧ್ಯಕ್ಷೆ ಮತ್ತು ಜಾಗತಿಕ ಮಾನವ ಹಕ್ಕುಗಳ ಪ್ರತಿಪಾದಕಿ ಮಿಶೆಲ್ ಬಚೆಲೆಟ್ ಅವರಿಗೆ 2024ರ ಇಂದಿರಾ ಗಾಂಧಿ ಶಾಂತಿ ಪ್ರಶಸ್ತಿ ಘೋಷಿಸಲಾಗಿದೆ.

ಮಾಜಿ ರಾಷ್ಟ್ರೀಯ ಭದ್ರತಾ ಸಲಹೆಗಾರ ಮತ್ತು ಭಾರತದ ವಿದೇಶಾಂಗ ಕಾರ್ಯದರ್ಶಿ ಶಿವಶಂಕರ್ ಮೆನನ್ ನೇತೃತ್ವದ ಅಂತಾರಾಷ್ಟ್ರೀಯ ಜ್ಯೂರಿಗಳಿದ್ದ ಸಮಿತಿ ಪ್ರಶಸ್ತಿ ಘೋಷಿಸಿದೆ.



ಜಾಗತಿಕ ಶಾಂತಿ, ಸಮಾನತೆ, ಮಾನವ ಹಕ್ಕುಗಳು, ಪ್ರಜಾಪ್ರಭುತ್ವ ಮತ್ತು ಸಂಕಷ್ಟದ ಸಂದರ್ಭದಲ್ಲಿ ಭಾರತದ ಜೊತೆಗಿನ ಚಿಲಿ ಕೊಡುಗೆಗಳನ್ನು ಸ್ಮರಿಸಿ ಇಂದಿರಾಗಾಂಧಿ ಶಾಂತಿ, ನಿಶಸ್ತ್ರೀಕರಣ ಮತ್ತು ಅಭಿವೃದ್ಧಿ ಪ್ರಶಸ್ತಿಗೆ ಪರಿಗಣಿಸಲಾಗಿದೆ.

ಬಚೆಲೆಟ್ ಅವರ ಪೂರ್ಣ ಹೆಸರು ವೆರೊನಿಕಾ ಮಿಶೆಲ್ ಬಚೆಲೆಟ್ ಜೆರಿಯಾ. ಇವರು ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಹೈಕಮಿಷನರ್ ಆಗಿ ಎರಡು ಅವಧಿ ಹಾಗೂ ಚಿಲಿಯ ಮೊದಲ ಮಹಿಳಾ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಲಿಂಗ ಸಮಾನತೆ ಮತ್ತು ಅಲಕ್ಷಿತ ಸಮುದಾಯದ ಹಕ್ಕಿಗಾಗಿ ದೇಶೀಯವಾಗಿ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ನಿರಂತರವಾಗಿ ಹೋರಾಡಿದ್ದಾರೆ.

1951ರ ಸೆಪ್ಟೆಂಬರ್ 29ರಂದು ಚಿಲಿಯ ಲಾ ಸಿಸ್ಟೆರ್ನಾ ಸಂಟಿಕೊದಲ್ಲಿ ಜನಿಸಿದ ಬಚೆಲೆಟ್, ಆಗುಸ್ಟೊ ಪಿನೋಚೆಟ್ ನಿರಾಂಕುಶ ಅವಧಿಯಲ್ಲಿ ವೈಯಕ್ತಿಕ ಹಾಗೂ ರಾಜಕೀಯ ಸವಾಲುಗಳನ್ನು ಎದುರಿಸಿದ್ದರು. 1973ರಲ್ಲಿ ಬಂಧಿತರಾಗಿ ಶಿಕ್ಷೆಗೆ ಗುರಿಯಾಗಿದ್ದರು. ಆಸ್ಟ್ರೇಲಿಯಾ ಬಳಿಕ ಜರ್ಮನಿಗೂ ಗಡಿಪಾರಾಗಿದ್ದರು. ಇದಾದ ಬಳಿಕ ಚಿಲಿಗೆ ಆಗಮಿಸಿದ ಅವರು, ದೇಶದ ರಾಜಕೀಯ ಬದಲಾವಣೆಗೆ ಅಪಾರ ಕೊಡುಗೆ ನೀಡಿದರು. 2006 ಮತ್ತು 2014ರಲ್ಲಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು.

ತಮ್ಮ ಅಧ್ಯಕ್ಷೀಯ ಅವಧಿಯಲ್ಲಿ ಬಚೆಲೆಟ್ ಶಿಕ್ಷಣ ಮತ್ತು ತೆರಿಗೆ ವ್ಯವಸ್ಥೆಗಳಲ್ಲಿ ಸಾಕಷ್ಟು ಸುಧಾರಣೆ ಮಾಡಿದ್ದರು. ಭಾರತ ಮತ್ತು ಚಿಲಿ ನಡುವಿನ ದ್ವಿಪಕ್ಷೀಯ ಸಂಬಂಧ ಅಭಿವೃದ್ಧಿಗೊಳ್ಳುವುದರ ಜೊತೆಗೆ ಉಚಿತ ವ್ಯಾಪಾರ ಒಪ್ಪಂದಕ್ಕೂ ಕೂಡ ಸಹಿ ಹಾಕಲಾಗಿತ್ತು.

## ರೈತರ ದಿಲ್ಲಿ ಚಲೋ: ಅಶ್ರುವಾಯು ಸಿಡಿಸಿದ ಪೊಲೀಸರು, ಪ್ರತಿಭಟನೆ ಸ್ಥಗಿತ

**ಅಂಬಾಲಾ(ಹರಿಯಾಣ):** ಕನಿಷ್ಠ ಬೆಂಬಲ ಬೆಲೆಗೆ ಆಗ್ರಹಿಸಿ ದೆಹಲಿ ಚಲೋಗೆ ಕರೆ ನೀಡಿರುವ ಪಂಜಾಬ್ ರೈತರು, ಭಾನುವಾರದವರೆಗೆ ಪ್ರತಿಭಟನೆ ಮುಂದೂಡಿದರು. ಪೊಲೀಸರು ಅಶ್ರುವಾಯು ಸಿಡಿಸಿದ್ದರಿಂದ ಅನೇಕ ರೈತರು ಗಾಯಗೊಂಡಿದ್ದಾರೆ. ಹೀಗಾಗಿ ಪ್ರತಿಭಟನೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ ಎಂದು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದೊಂದಿಗೆ ನಾಳೆ (ಶನಿವಾರ) ಮಾತುಕತೆ ನಡೆಸಲು ನಮ್ಮ ಒಪ್ಪಿಗೆ ಇದೆ. ರೈತರೊಂದಿಗೆ ಯಾರೇ ಮಾತುಕತೆ ನಡೆಸಿದರೂ ಸರಿ. ನಾವು ಸರ್ಕಾರದ ಜೊತೆ ಸಂಘರ್ಷವನ್ನು ಯಾವತ್ತೂ ಬಯಸುವುದಿಲ್ಲ. ನಾವು ಶಾಂತಿಯುತವಾಗಿ ಆಲಿಸುತ್ತೇವೆ. ಶನಿವಾರದವರೆಗೆ ಕಾಯುತ್ತೇವೆ. ಮಾತುಕತೆಯಿಂದ ಬಗೆಹರಿಯರಿಯಬೇಕು ಎಂಬುವುದು ನಮ್ಮ ಬಯಕೆ ಎಂದು ರೈತ ಮುಖಂಡ ಶರ್ವಾನ್ ಸಿಂಗ್ ಪಂಧೇರ್ ಹೇಳಿದ್ದಾರೆ.

ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಸೇರಿದಂತೆ 12 ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ 101 ಮಂದಿ ಇರುವ ರೈತರ ಪ್ರತಿಭಟನಾ ಜಾಥ, ಶಂಭು ಗಡಿಯಿಂದ ದೆಹಲಿಯತ್ತ ಪಾದಯಾತ್ರೆ ನಡೆಸಿದೆ. ಆದರೆ, ಪ್ರತಿಭಟನಾ ಮೆರವಣಿಗೆಗೆ ಚಾಲನೆ ನೀಡಿದ ಸ್ಥಳದಿಂದ



ಕೆಲವೇ ಮೀಟರ್ಗಳಲ್ಲಿ ರೈತರನ್ನು ಬ್ಯಾರಿಕೇಡ್ ಹಾಕಿ ಪೊಲೀಸರು ತಡೆದಿದ್ದಾರೆ. ಪ್ರತಿರೋಧ ನೀಡಿದ್ದರಿಂದ ಭದ್ರತಾ ಸಿಬ್ಬಂದಿ ಪ್ರತಿಭಟನಾನಿರತರ ವಿರುದ್ಧ ಅಶ್ರುವಾಯು ಪ್ರಯೋಗಿಸಿದ್ದಾರೆ. ಅಲ್ಲದೇ ಪೊಲೀಸರು ನಿರ್ಮಿಸಿದ್ದ ಕಾಂಕ್ರೀಟ್ ಬ್ಲಾಕ್, ಕಬ್ಬಿಣದ ಮೊಳೆ ಹಾಗೂ ಮುಳ್ಳು ತಂತಿಗಳನ್ನು ಭೇದಿಸುವಲ್ಲಿ ವಿಫಲಗೊಂಡಿದ್ದರಿಂದ ತಮ್ಮ ಮೆರವಣಿಗೆಯನ್ನು ಮುಂದುವರಿಸಲು ಸಾಧ್ಯವಾಗಲಿಲ್ಲ.

ಇಂದಿನ ಪ್ರತಿಭಟನೆಯಿಂದ ಗ್ರೇಟರ್ ನೋಯ್ಡಾದಲ್ಲಿ ಭಾರೀ ಟ್ರಾಫಿಕ್ ಜಾಮ್ ಆಗಿತ್ತು. ಪ್ರತಿಭಟನೆ ಕಾವು ಪಡೆಯುತ್ತಿದ್ದಂತೆ ಪೊಲೀಸರು ಕೆಲವು ರೈತರನ್ನು ವಶಕ್ಕೆ ಪಡೆದರು. ಶಾಂತಿಯುತವಾಗಿ ಹೋರಾಟ ಮಾಡುವಂತೆ ಮತ್ತು ಸರ್ಕಾರಿ ಆಸ್ತಿಪಾಸ್ತಿಗೆ ಹಾನಿ ಮಾಡದಂತೆ, ದೆಹಲಿ ಚಲೋಗೆ ಅನುಮತಿ ಪಡೆಯುವಂತೆ ಪೊಲೀಸರು ಮೈಕ್ ಮೂಲಕ ರೈತರಲ್ಲಿ ಮನವಿ ಮಾಡಿಕೊಂಡರು. ಆದರೆ, ದೆಹಲಿಗೆ ಹೋಗಲು ಯಾವುದೇ ರೀತಿಯ ಅನುಮತಿ ಅಗತ್ಯವಿಲ್ಲ ಎಂದು ರೈತರು ಪೊಲೀಸರ ವಿರುದ್ಧ ಘೋಷಣೆ ಕೂಗತೊಡಗಿದರು.

## ಎಸ್‌ಪಿ ಶಾಸಕನ ಪುತ್ರಿಯೊಂದಿಗೆ ಮಗನ ಮದ್ವೆ: ಪಕ್ಷದಿಂದ ಉಚ್ಚಾಟನೆ

**ಲಕ್ನೋ:** ಸಮಾಜವಾದಿ ಪಕ್ಷದ ಶಾಸಕನ ಮಗಳ ಜೊತೆ ಮಗನ ಮದುವೆ ಮಾಡಿಸಿದ್ದಕ್ಕೆ ಬಿಎಸ್‌ಪಿ ಹಿರಿಯ ನಾಯಕನನ್ನು ಪಕ್ಷದಿಂದಲೇ ಮಾಯಾವತಿ ಉಚ್ಚಾಟನೆ ಮಾಡಿದ್ದಾರೆ.

ಬರೇಲಿಯ ಬಿಎಸ್‌ಪಿ ಪ್ರಭಾವಿ ನಾಯಕ ಸುರೇಂದ್ರ, ಸಾಗರ್ ಅವರ ಪುತ್ರನ ವಿವಾಹ ಎಸ್‌ಪಿ ಶಾಸಕ ತ್ರಿಭುವನ್ ದತ್ ಅವರ ಪುತ್ರಿಯ ಜೊತೆ ನಡೆದಿತ್ತು. ಎಸ್‌ಪಿ ಮುಖ್ಯಸ್ಥ ಅಖಿಲೇಶ್ ಯಾದವ್ ಇತ್ತೀಚೆಗೆ ಅಂಬೇಡ್ಕರ್ ನಗರದಲ್ಲಿರುವ ದತ್ ಅವರ ನಿವಾಸಕ್ಕೆ ಭೇಟಿ ನೀಡಿದ್ದರು.ಬರೇಲಿ ವಿಭಾಗದ ಪ್ರಮುಖ ಬಿಎಸ್‌ಪಿ ನಾಯಕರಾದ ಸುರೇಂದ್ರ, ಸಾಗರ್ ಅವರು ಐದು ಬಾರಿ ರಾಂಪುರದ ಜಿಲ್ಲಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ ಮತ್ತು ಕ್ಯಾಬಿನೆಟ್ ಸಚಿವ ಸ್ಥಾನಮಾನವನ್ನು ಅಲಂಕರಿಸಿದ್ದರು. ಪಕ್ಷ ವಿರೋಧಿ ಚಟುವಟಿಕೆಗಳು ಮತ್ತು ಅಶಿಸ್ತಿನ ಕಾರಣ ನೀಡಿ ಉಚ್ಚಾಟಿಸಲಾಗಿದೆ ಎಂದು ಬಿಎಸ್‌ಪಿ ತನ್ನ ನಿರ್ಧಾರವನ್ನು ಸಮರ್ಥಿಸಿಕೊಂಡಿದೆ.

ಈ ವಿಚಾರಕ್ಕೆ ಪ್ರತಿಕ್ರಿಯಿಸಿದ ಸುರೇಂದ್ರ, ಸಾಗರ್, ನಾನು ಯಾವುದೇ ಅಶಿಸ್ತು ತೋರಿಲ್ಲ. ನನ್ನ ಮಗ ಅಂಕುರ್‌ನನ್ನು ಎಸ್‌ಪಿ ಶಾಸಕ ತ್ರಿಭುವನ್ ದತ್ ಅವರ ಮಗಳ ಜೊತೆ ಮದುವೆ ಮಾಡಿ ಕೊಟ್ಟಿದ್ದೇನೆ ಎಂದು ತಿಳಿಸಿದರು.

ಮಾಯಾವತಿ ಈ ರೀತಿಯ ಕ್ರಮ ಕೈಗೊಳ್ಳುವುದು ಇದೇ ಮೊದಲಲ್ಲ. ಮೀರಾಪುರ ಉಪಚುನಾವಣೆಯಲ್ಲಿ ಎಸ್‌ಪಿಯಿಂದ ಸ್ಪರ್ಧಿಸಿದ್ದ ಖಾದಿರ್ ರಾಣಾ ಅವರ ಪುತ್ರನ ವಿವಾಹ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಕ್ಕೆ ಭಾಗೀಯ ಉಸ್ತುವಾರಿಯಾಗಿದ್ದ ಪ್ರಶಾಂತ್ ಗೌತಮ್ ಅವರನ್ನು ಹುದ್ದೆಯಿಂದ ತೆಗೆದುಹಾಕಿದ್ದರು.

## ಜೈಶ್ ಉಗ್ರ ಮಸೂದ್ ಅಜಾರ್ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹ

**ನವದೆಹಲಿ:** ಸಾರ್ವಜನಿಕ ಸಭೆಯೊಂದರಲ್ಲಿ ಭಾಷಣ ಮಾಡಿರುವ ಜೈಶ್-ಎ-ಮೊಹಮ್ಮದ್ ಉಗ್ರ ಸಂಘಟನೆ ಮುಖ್ಯಸ್ಥ ಮಸೂದ್ ಅಜರ್ ವಿರುದ್ಧ ಕಠಿಣ ಕ್ರಮ ಜರುಗಿಸಬೇಕೆಂದು ಪಾಕಿಸ್ತಾನಕ್ಕೆ ಭಾರತ ಒತ್ತಾಯಿಸಿದ್ದಾರೆ.



ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಪ್ರತಿಕ್ರಿಯಿಸಿದ್ದು, ಭಯೋತ್ಪಾದನೆಯನ್ನು ನಿಗ್ರಹಿಸುವಲ್ಲಿ ಪಾಕಿಸ್ತಾನ ದ್ವಂದ್ವ ನೀತಿಯನ್ನು ಅನುಸರಿಸುತ್ತಿದೆ ಎಂದು ಆರೋಪಿಸಿದ್ದಾರೆ. ಅಜರ್ ಅವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು ಮತ್ತು ಅವರನ್ನು ನ್ಯಾಯಾಂಗಕ್ಕೆ ತರಬೇಕು ಎಂದು ನಾವು ಒತ್ತಾಯಿಸುತ್ತೇವೆ. ಆತ ಪಾಕಿಸ್ತಾನದಲ್ಲಿ ಇಲ್ಲವೇ ಇಲ್ಲ ಎಂದು ಅಲ್ಲಿನ ಸರ್ಕಾರ ಹೇಳುತ್ತಲೇ ಇದೆ. ಆದರೆ ಇದೀಗ ಆತ ಬಹವಾಲ್ಪುರದಲ್ಲಿ ಸಾರ್ವಜನಿಕ ಭಾಷಣ ಮಾಡುತ್ತಿದ್ದಾನೆ. ಇದು ಪಾಕಿಸ್ತಾನದ ದ್ವಂದ್ವ ನೀತಿಯನ್ನು ಬಯಲು ಮಾಡುತ್ತಿದೆ. ಮಸೂದ್ ಅಜರ್ ಭಾರತದ ಮೇಲಿನ ಗಡಿಯಾಚೆಗಿನ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿದ್ದಾನೆ ಮತ್ತು ಆತನ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕೆಂದು ನಾವು ಬಯಸುತ್ತೇವೆ ಎಂದು ಜೈಸ್ವಾಲ್ ಹೇಳಿದ್ದಾರೆ. ಗ್ರೂಪ್ನ ಆನ್ಲೈನ್ ಡಿಜಿಟಲ್ ಪ್ಲಾಟ್ಫಾರ್ಮ್ ಮಂಗಳವಾರ ಘೋಷಿಸಿದಂತೆ ಜೈಶ್-ಎ-ಮೊಹಮ್ಮದ್ (ಎಇಒ) ಸದಸ್ಯರಿಗೆ ಅಜರ್ 20 ವರ್ಷಗಳ ನಂತರ ತಮ್ಮ ಮೊದಲ ಭಾಷಣ ಮಾಡಿದ್ದ. ಭಾರತ ಮತ್ತು ಇಸ್ರೇಲ್ನಲ್ಲಿ ಭಯೋತ್ಪಾದಕ ಚಟುವಟಿಕೆಗೆ ಪ್ರಚೋದನೆ ನೀಡುತ್ತಿದ್ದಾನೆ. ಮಸೂದ್ ಅಜರ್ ಭಾಷಣದ ದಿನಾಂಕ ಅಥವಾ ಸ್ಥಳವನ್ನು ಬಹಿರಂಗಪಡಿಸಿಲ್ಲ.

## ರಾಜಸ್ಥಾನ ಶ್ರೀಕೃಷ್ಣ ದೇವಾಲಯಕ್ಕೆ ದೇಣಿಗೆಯ ಮಹಾಪೂರ!

**ಜೈಪುರ:** ರಾಜಸ್ಥಾನದಸನ್ವಾಲಿಯಾ ಸೇಠ್ನಲ್ಲಿರುವ ಭಗವಾನ್ ಶ್ರೀಕೃಷ್ಣನಪ್ರಸಿದ್ಧ ದೇವಾಲಯದಲ್ಲಿ ದೇಣಿಗೆಯ ಎಣಿಕೆ ಪ್ರಕ್ರಿಯೆ ಆರಂಭವಾಗಿದ್ದು, ಈವರೆಗೆ 1 ಕೆಜಿ ಚಿನ್ನ ಮತ್ತು 23 ಕೋಟಿ ರೂಪಾಯಿ ಹಣ ಸಂಗ್ರಹವಾಗಿದೆ ಎಂದು ತಿಳಿದು ಬಂದಿದೆ. ರಾಜಸ್ಥಾನದ ಚಿತ್ತೋರ್ಗಢ್ ಸಮೀಪದ ಸನ್ವಾಲಿಯಾ ಸೇಠ್ ಪ್ರದೇಶದಲ್ಲಿರುವ ಶ್ರೀಕೃಷ್ಣ ದೇವಾಲಯವು ದಾಖಲೆಯ ದೇಣಿಗೆ ಸಂಗ್ರಹಕ್ಕೆ ಸಾಕ್ಷಿಯಾಗಿದೆ. ಭಗವಾನ್ ಕೃಷ್ಣನಿಗೆ ಸಮರ್ಪಿತವಾದ ಪ್ರಸಿದ್ಧ ದೇವಾಲಯವು ಇತ್ತೀಚೆಗೆ ತನ್ನ ಖಜಾನೆ ಎಣಿಕೆ ಪ್ರಕ್ರಿಯೆಯನ್ನು ಪ್ರಾರಂಭಿಸಿದ್ದು, ಈ ವೇಳೆ ಸಂಗ್ರಹವಾಗಿರುವ ಒಟ್ಟು ಕಾಣಿಕೆಗಳನ್ನು ಬಹಿರಂಗಪಡಿಸಿದೆ. ಇದುವರೆಗಿನ ಲೆಕ್ಕಾಚಾರದ ಪ್ರಕಾರ 23 ಕೋಟಿ ರೂ ನಗದು ಎಣಿಕೆಯಾಗಿದ್ದು,1 ಕೆ.ಜಿ ತೂಕದ ಚಿನ್ನದ ಬಿಸ್ಕತ್ ಗಳು ಕೂಡ ಕಾಣಿಕೆ ರೂಪದಲ್ಲಿ ಬಂದಿದೆ. ಭಕ್ತಾದಿಗಳು ಚಿಕ್ಕ ಚಿನ್ನದ ಬಿಸ್ಕತ್ತುಗಳು, ಬೆಳ್ಳಿಯ ಕಲಾಕೃತಿಗಳು, ಬೆಳ್ಳಿಯ ಪಿಸ್ತೂಲ್, ಶುದ್ಧ ಬೆಳ್ಳಿಯ ಬೀಗ, ಕೀ ಮತ್ತು ಕೊಳಲುಗಳಂತಹ ವಿಶೇಷ ವಸ್ತುಗಳನ್ನು ಕಾಣಿಕೆಯಾಗಿ ನೀಡಿರುವುದು ಕಂಡು ಬಂದಿದೆ. ಈ ದೇವಾಲಯದಲ್ಲಿ ಇಷ್ಟು ದೊಡ್ಡ ಪ್ರಮಾಣದ ದೇಣಿಗೆ ಸಂಗ್ರಹ ಇದೇ ಮೊದಲ ಬಾರಿಗೆ ಆಗಿರುವುದು ಎನ್ನಲಾಗಿದೆ.



## ಕಾಂಗೋದಲ್ಲಿ ನಿಗೂಢ ಕಾಯಿಲೆಗೆ 150 ಮಂದಿ ಸಾವು

**ಕಿನ್ಷಾಸಾ:** ಕಾಂಗೋದ ಕ್ವಾಂಗೋ ಪ್ರಾಂತ್ಯದಲ್ಲಿ ನಿಗೂಢ ಕಾಯಿಲೆಯು ಸುಮಾರು 150 ಜನರನ್ನು ಬಲಿ ತೆಗೆದುಕೊಂಡಿದೆ. ಜ್ವರ ತರಹದ ರೋಗಲಕ್ಷಣಗಳೊಂದಿಗೆ ಜನರು ತೀವ್ರವಾಗಿ ಅನಾರೋಗ್ಯಕ್ಕೆ ಒಳಗಾಗುತ್ತಿದ್ದಾರೆ.

ಆರೋಗ್ಯ ಇಲಾಖೆ ಅಧಿಕಾರಿಗಳ ಪ್ರಕಾರ, ನವೆಂಬರ್ 10 ಮತ್ತು 25 ರ ನಡುವೆ ಪಂಜಿ ಆರೋಗ್ಯ ವಲಯದಲ್ಲಿ ಸುಮಾರು 150 ಜನರು ಈ ತಪ್ಪಿಸಿಕೊಳ್ಳಲಾಗದ ಕಾಯಿಲೆಯಿಂದ ಸಾವನ್ನಪ್ಪಿದ್ದಾರೆ.

ಅನೇಕ ರೋಗಿಗಳು ತಮ್ಮ ಮನೆಗಳಲ್ಲಿ ಸಾಯುತ್ತಿದ್ದಾರೆ ಎಂದು ಹೇಳಲಾಗುತ್ತದೆ. ರೋಗಿಗಳಿಂದ ಮಾದರಿಗಳನ್ನು ಸಂಗ್ರಹಿಸಲು ವೈದ್ಯಕೀಯ ತಂಡವು ಪಂಜಿ ಆರೋಗ್ಯ ವಲಯವನ್ನು ತಲುಪಿತು. ತೀವ್ರ ಜ್ವರ, ಅಸಹನೀಯ ತಲೆನೋವು, ಕೆಮ್ಮು ಮತ್ತು ಆಲಸ್ಯ ಈ ಅಜ್ಞಾತ ಕಾಯಿಲೆಯ ಲಕ್ಷಣಗಳಾಗಿವೆ. ಹೀಗಾಗಿ ಹೈ ಅಲರ್ಟ್ ಘೋಷಣೆ ಮಾಡಲಾಗಿದೆ ಎಂದು ಪ್ರಾಂತೀಯ ಆರೋಗ್ಯ ಸಚಿವ ಅಪೊಲಿರ್ ಯುಂಬಾ ಹೇಳಿದ್ದಾರೆ.



## ಇಸ್ರೇಲ್ ವೈಮಾನಿಕ ದಾಳಿ: 15 ಪ್ಯಾಲೆಸ್ಟೀನಿಯನ್ನರ ಸಾವು

**ಗಾಜಾ ಪ್ಯಾಲೆಸ್ಟೈನ್:** ಉತ್ತರ ಗಾಜಾ ಪಟ್ಟಿಯ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 15 ಪ್ಯಾಲೆಸ್ಟೀನಿಯನ್ನರು ಮೃತಪಟ್ಟಿದ್ದಾರೆ ಎಂದು ಪ್ಯಾಲೆಸ್ಟೈನ್ ಮೂಲಗಳು ತಿಳಿಸಿವೆ. ಸ್ಥಳೀಯ ಮೂಲಗಳು ಮತ್ತು ಪ್ರತ್ಯಕ್ಷದರ್ಶಿಗಳ ಪ್ರಕಾರ, ಇಸ್ರೇಲ್ನ ಯುದ್ಧವಿಮಾನಗಳು ಗುರುವಾರ ಮಧ್ಯಾಹ್ನ ಬೀಟ್ ಲಾಹಿಯಾ ಪಟ್ಟಣದಲ್ಲಿರುವ ವಸತಿ ಗೃಹವನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿವೆ ಎಂದು ಹೇಳಿದ್ದಾರೆ.

ದಾಳಿಯಲ್ಲಿ ಮಕ್ಕಳು ಮತ್ತು ಮಹಿಳೆಯರು ಸೇರಿದಂತೆ 15 ಜನರು ಅಸುನೀಗಿದ್ದಾರೆ ಎಂದು ಗಾಜಾದಲ್ಲಿ ಸಿವಿಲ್ ಡಿಫೆನ್ಸ್ ವಕ್ತಾರ ಮಹಮೂದ್ ಬಾಸಲ್ ಕ್ಸಿನ್ಹುವಾ ಸುದ್ದಿ ಸಂಸ್ಥೆಗೆ ತಿಳಿಸಿದ್ದಾರೆ. ಈ ಘಟನೆಯ ಬಗ್ಗೆ ಇಸ್ರೇಲ್ ಸೇನೆ ಯಾವುದೇ ಪ್ರತಿಕ್ರಿಯೆ ನೀಡಿಲ್ಲ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಹೇಳಿದೆ.

ಗುರುವಾರ ಗಾಜಾದಲ್ಲಿನ ನಾಗರಿಕ ರಕ್ಷಣಾ ಜನರಲ್ ಡೈರೆಕ್ಟರೇಟ್, ದಕ್ಷಿಣ ಗಾಜಾದಲ್ಲಿ ಇಸ್ರೇಲಿ ಸೈನ್ಯವು ಮಾನವೀಯ ಪ್ರದೇಶ ಎಂದು ಗೊತ್ತುಪಡಿಸಿದ ಸ್ಥಳಾಂತರಗೊಂಡ ನಾಗರಿಕರಿಗೆ ಒದಗಿಸುವ ಸೇವೆಗಳು ಮತ್ತು ಮಾನವೀಯ ಮಧ್ಯಸ್ಥಿಕೆಗಳ ಸಂಭವನೀಯ ಕಾರ್ಯವನ್ನು ಅಮಾನತು ಮಾಡುವುದಾಗಿ ಎಚ್ಚರಿಕೆ ನೀಡಿದೆ. ಮಾನವೀಯ ಪ್ರದೇಶದಲ್ಲಿ ಇಂಧನ ಕೊರತೆಯಿಂದಾಗಿ ನಾಗರಿಕ ರಕ್ಷಣಾ ವ್ಯವಸ್ಥೆ ಬಿಕ್ಕಟ್ಟಿಗೆ ಒಳಗಾಗಿದ್ದು,



ಸಮಸ್ಯೆಗಳಿದ್ದ ಬಳಲುತ್ತಿದ್ದಾರೆ ಎಂದು ಗಾಜಾದಲ್ಲಿ ನಾಗರಿಕ ರಕ್ಷಣಾ ಪೂರೈಕೆ ನಿರ್ದೇಶಕ ಮುಹಮ್ಮದ್ ಅಲ್ - ಮುಗ್ಹೈರ್ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಇಂಧನ ಪೂರೈಕೆಯ ನಿರಂತರ ತಡೆಗಟ್ಟುವಿಕೆಯಿಂದಾಗಿ ನಾಗರಿಕರ ಜೀವಕ್ಕೆ ಅಪಾಯವನ್ನುಂಟು ಮಾಡುತ್ತದೆ ಎಂದು ಅವರು ಎಚ್ಚರಿಸಿದ್ದಾರೆ. ಸ್ಥಳಾಂತರಗೊಂಡ ಸಾವಿರಾರು ಜನರು ಇಸ್ರೇಲ್ನ ಈ ಕ್ರಮದಿಂದ ಸಂಕಷ್ಟಕ್ಕೆ ಒಳಗಾಗಿದ್ದಾರೆ.

ಅಕ್ಟೋಬರ್ 7, 2023 ರಂದು ದಕ್ಷಿಣ ಇಸ್ರೇಲ್ ಗಡಿಯ ಮೂಲಕ ಹಮಾಸ್ ದಾಳಿ ಮಾಡಿತ್ತು. ಈ ಸಂದರ್ಭದಲ್ಲಿ ಸುಮಾರು 1,200 ಜನರು ಸಾವನ್ನಪ್ಪಿದರು ಮತ್ತು ಸುಮಾರು 250 ಇಸ್ರೇಲಿಗರನ್ನು ಹಮಾಸ್ ಬಂಡುಕೋರರು ಒತ್ತೆಯಾಳುಗಳಾಗಿ ಇರಿಸಿಕೊಂಡಿದ್ದಾರೆ.

## ವಿಶ್ವ ಭೂಪಟದಿಂದ 'ಸಿಂಗಾಪುರ' ಕಣ್ಮರೆ: ಎಚ್ಚರಿಕೆ!

**ನವದೆಹಲಿ:** ಟೆಸ್ಲಾ ಸಿಇಒ ಎಲೋನ್ ಮಸ್ಕ್ ಅವರ ಇತ್ತೀಚಿನ ಸಾಮಾಜಿಕ ಮಾಧ್ಯಮ ಪೋಸ್ಟ್ ಸೆನ್ಸೇಷನ್ ಸೃಷ್ಟಿಸಿದ್ದು, ಇದರಲ್ಲಿ ಸಿಂಗಾಪುರ ಸೇರಿದಂತೆ ಇತರ ಅನೇಕ ದೇಶಗಳನ್ನ ವಿಶ್ವ ಭೂಪಟದಿಂದ ತೆಗೆದುಹಾಕಲಾಗಿದೆ ಎಂದು ಹೇಳಿದ್ದಾರೆ. ಸಿಂಗಾಪುರ ಸೇರಿದಂತೆ ಅನೇಕ ದೇಶಗಳು ಅಳಿವಿನ ಅಂಚಿನಲ್ಲಿವೆ ಎಂದು ಎಲೋನ್ ಮಸ್ಕ್ ಹೇಳಿದ್ದಾರೆ. ''ಸಿಂಗಾಪುರ ಸೇರಿದಂತೆ ಇತರ ಅನೇಕ ದೇಶಗಳು ಸಾಯುತ್ತಿವೆ'' ಎಂದು ಮಸ್ಕ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಕಾಮೆಂಟ್ ಮಾಡಿದ್ದಾರೆ.

ಫಲವತ್ತತೆ ದರವನ್ನ ಕಡಿಮೆ ಮಾಡುವಲ್ಲಿ ರೊಬೊಟಿಕ್ಸ್ ಪಾತ್ರ ಮತ್ತು ಅನೇಕ ದೇಶಗಳಲ್ಲಿ ಅದರ ಪರಿಣಾಮದ ಬಗ್ಗೆ ಮಾತನಾಡಿದ ಪ್ರಸಿದ್ಧ ಸಾಮಾಜಿಕ ಮಾಧ್ಯಮ ವ್ಯಕ್ತಿ ಮಾರಿಯೋ ನವ್ಫಾಲ್ ಅವರ ಪೋಸ್ಟ್ಗೆ ಎಲೋನ್ ಮಸ್ಕ್ ಪ್ರತಿಕ್ರಿಯಿಸಿದ್ದಾರೆ.

ಸಿಂಗಾಪುರವು ಮೂರು ದಶಕಗಳಿಂದ ಕುಸಿಯುತ್ತಿರುವ ಫಲವತ್ತತೆ ದರ ದೊಂದಿಗೆ ಹೋರಾಡುತ್ತಿದೆ. ಪರಿಸ್ಥಿತಿ ನಿರಂತರವಾಗಿ ಹದಗೆಡುತ್ತಿದೆ. ಸಿಂಗಾಪುರದಲ್ಲಿ ಫಲವತ್ತತೆ ದರವು 0.97ಕ್ಕೆ ತಲುಪಿದೆ. ಫಲವತ್ತತೆ ದರವು ಪ್ರತಿ ಮಹಿಳೆಗೆ 1 ಕ್ಕಿಂತ ಕಡಿಮೆ ಇರುತ್ತದೆ. ಅಂದರೆ, ಇಲ್ಲಿನ ಮಹಿಳೆಯರು ಒಂದೇ ಮಗುವಿಗೆ ಜನ್ಮ ನೀಡುತ್ತಿಲ್ಲ.

ಇಲ್ಲಿನ ಜನಸಂಖ್ಯೆಯಲ್ಲಿ ಸಮತೋಲನವನ್ನು ಕಾಪಾಡಿಕೊಳ್ಳಲು, ಫಲವತ್ತತೆ ದರವನ್ನ 2.1 ಹೊಂದಿರುವುದು ಅವಶ್ಯಕ. ಸಿಂಗಾಪುರದ 25-34 ವರ್ಷ ವಯಸ್ಸಿನ ಹೆಚ್ಚಿನ ಮಹಿಳೆಯರು ಅವಿವಾಹಿತರಾಗಿ ಉಳಿಯಲು ಬಯಸುತ್ತಾರೆ ಎಂದು ಸರ್ಕಾರದ ಅಂಕಿ ಅಂಶಗಳು ತಿಳಿಸಿವೆ. ಇದಲ್ಲದೆ, 20 ವರ್ಷದವರೆಗಿನ ಹೆಚ್ಚಿನ ಮಹಿಳೆಯರ ಫಲವತ್ತತೆ ದರವೂ ಕುಸಿತ ಕಂಡಿದೆ.

ಜನಸಂಖ್ಯೆಯ ಈ ಕುಸಿತದಿಂದಾಗಿ, ಕಾರ್ಖಾನೆಗಳಿಂದ ಹೋಟೆಲ್ಗಳು ಮತ್ತು ರೆಸ್ಟೋರೆಂಟ್ಗಳವರೆಗೆ ಕೆಲಸ ಮಾಡುವ ಜನರ ಸಂಖ್ಯೆ ನಿರಂತರವಾಗಿ ಕಡಿಮೆಯಾಗುತ್ತಿದೆ ಮತ್ತು ಬದಲಿಗೆ ರೋಬೋಟ್‌ಗಳು ಸೇರಿದಂತೆ ಇತರ ತಂತ್ರಜ್ಞಾನವನ್ನು ಕೆಲಸದಲ್ಲಿ ಆಶ್ರಯಿಸಲಾಗುತ್ತಿದೆ.



## ಪ್ರಾಂಶುಪಾಲರನ್ನು ಗುಂಡಿಕ್ಕಿ ಕೊಂದ 12ನೇ ತರಗತಿ ವಿದ್ಯಾರ್ಥಿ!

**ನವದೆಹಲಿ:**ಶಾಲೆಯಿಂದ ಛೀಮಾರಿ ಹಾಕಿದ್ದ ಕಾರಣ ಶಾಲೆಯ ಪ್ರಾಂಶುಪಾಲರನ್ನೇ ಗುಂಡಿಕ್ಕಿ ಕೊಂದ ದರ್ಘಟನೆ ಮಧ್ಯಪ್ರದೇಶದ ಛತ್ತರ್ಪುರದಲ್ಲಿ ನಡೆದಿದೆ. ಧಮೋರಾದ ಸರ್ಕಾರಿ ಹೈಯರ್ ಸೆಕೆಂಡರಿ ಶಾಲೆಯಲ್ಲಿ ಈ ಘಟನೆ ನಡೆದಿದೆ. 12ನೇ ತರಗತಿ ವಿದ್ಯಾರ್ಥಿಯೊಬ್ಬ ತನ್ನದೇ ಶಾಲೆಯ ಪ್ರಾಂಶುಪಾಲರ ತಲೆಗೆ ಗುಂಡು ಹಾರಿಸಿ ಕೊಂದು ಹಾಕಿ ಸಂಚಲನ ಮೂಡಿಸಿದ್ದಾನೆ.

ಪದೇ-ಪದೆ ಶಾಲೆಗೆ ಗೈರು ಹಾಜರಾಗಿದ್ದಕ್ಕೆ ಆರೋಪಿ ವಿದ್ಯಾರ್ಥಿಗೆ ಪ್ರಾಂಶುಪಾಲರು ಛೀಮಾರಿ ಹಾಕಿದ್ದರು. ಇದರಿಂದ ಮನನೊಂದ ಅಪ್ರಾಪ್ತ ವಿದ್ಯಾರ್ಥಿಯು ಕಂಟ್ರಿಮೇಡ್ ಪಿಸ್ತೂಲ್ನೊಂದಿಗೆ ಶಾಲೆಗೆ ನುಗ್ಗಿ ಶೌಚಾಲಯದಲ್ಲಿ ನಿಂತಿದ್ದ ಪ್ರಾಂಶುಪಾಲರ ತಲೆಗೆ ಗುಂಡು ಹಾರಿಸಿದ್ದಾನೆ. ಗುಂಡು ತಗುಲಿದ ತಕ್ಷಣ ಪ್ರಾಂಶುಪಾಲರು ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ.

ಶಾಲಾ ಪ್ರಾಂಶುಪಾಲರಾದ ಸುರೇಂದ್ರ ಕುಮಾರ್ ಸಕ್ಸೇನಾರ ಸಾವಿನ ಸುದ್ದಿ ತಿಳಿಯುತ್ತಿದ್ದಂತೆಯೇ ಭಾರೀ ಪೊಲೀಸ್ ಪಡೆ ಸ್ಥಳಕ್ಕೆ ಆಗಮಿಸಿ ಘಟನೆಯನ್ನು ಪರಿಶೀಲನೆ ನಡೆಸಿತು. ಘಟನೆಗೆ ಸಂಬಂಧಿಸಿದಂತೆ ಸಿಬ್ಬಂದಿ ಹಾಗೂ ಶಾಲಾ ಮಕ್ಕಳಿಂದ ಎಸ್ಪಿ ಮಾಹಿತಿ ಸಂಗ್ರಹಿಸಿದರು. ಓರ್ಚಾ ರಸ್ತೆ ಪೊಲೀಸ್ ಠಾಣೆ ವ್ಯಾಪ್ತಿಯ ಧಮೋರಾ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಶಾಲೆಯಲ್ಲಿ ಅಳವಡಿಸಲಾಗಿದ್ದ ಸಿಸಿಟಿವಿಯಲ್ಲಿ ಪ್ರಿನ್ಸಿಪಾಲ್ ಕೊಲೆ ಪ್ರಕರಣದ ಆರೋಪಿಗಳ ಕೃತ್ಯ ಸೆರೆಯಾಗಿದೆ.

ವಿಡಿಯೊದಲ್ಲಿ ಆರೋಪಿಗಳು ಶಾಲೆಯಿಂದ ಓಡಿ ಹೋಗುತ್ತಿರುವುದು ಕಂಡು ಬಂದಿದೆ. ಸರ್ಕಾರಿ ಶಾಲೆಯ ಮುಖ್ಯೋಪಾಧ್ಯಾಯರ ಹತ್ಯೆ ಪ್ರಕರಣದ ಪ್ರಮುಖ ಅಪ್ರಾಪ್ತ ಆರೋಪಿಯನ್ನು ಪೊಲೀಸ್ ತಂಡ ಬಂಧಿಸಿ ವಿಚಾರಣೆ ನಡೆಸುತ್ತಿದೆ. ಆರೋಪಿ ವಿದ್ಯಾರ್ಥಿಯು ಗೂಂಡಾ ಸ್ವಭಾವದವನೆಂದು ಶಾಲೆಯ ಶಿಕ್ಷಕರು ತಿಳಿಸಿದ ನಂತರ ಆರೋಪಿ ವಿದ್ಯಾರ್ಥಿಯು ಪ್ರಾಂಶುಪಾಲರ ಸ್ಕೂಟರ್ ಸಮೇತ ಪರಾರಿಯಾಗಿದ್ದಾನೆ. ಶಾಲೆಯಲ್ಲಿ ವಾದ ಮಾಡುತ್ತಿದ್ದ ಹಾಗೂ ನಿರಂತರವಾಗಿ ಶಾಲೆಗೆ ಗೈರುಹಾಜರಾಗಿದ್ದರಿಂದ ಅವನ ತಂದೆ ಮತ್ತು ಸಹೋದರನಿಗೆ ದೂರು ನೀಡಲಾಗಿತ್ತು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 2ನೇ ಬಾರಿ ಜೈಲು ಪಾಲಾದ ಚೈತ್ರಾ ಕುಂದಾಪುರ

ದೊಡ್ಮನೆ ಆಟ ದಿನದಿಂದ ದಿನಕ್ಕೆ ಹಲವು ತಿರುವುಗಳನ್ನು ಪಡೆದು 70ನೇ ದಿನದತ್ತ ಮುನ್ನುಗ್ಗುತ್ತಿದೆ. ಇದೀಗ ಈ ವಾರ ಕಳಪೆ ಪ್ರದರ್ಶನ ಅಂತ ಮನೆ ಮಂದಿ ಮತ್ತೆ ಚೈತ್ರಾರನ್ನು ಜೈಲಿಗೆ ಅಟ್ಟಿದ್ದಾರೆ. ಕೆಲವರ ಪಿತೂರಿಯಿಂದ ನನಗೆ ಕಳಪೆ ಸಿಕ್ಕಿದೆ ಅಂತ ಚೈತ್ರಾ ಕೂಗಾಡಿದ್ದಾರೆ. ಈ ಕುರಿತ ಪ್ರೋಮೋ ವಾಹಿನಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದೆ.

ಗೌತಮಿ, ಉಗ್ರಂ ಮಂಜು, ಚೈತ್ರಾ ಸೇರಿದಂತೆ ಅನೇಕರು ಚೈತ್ರಾ ಹೆಸರನ್ನು ಕಳಪೆಗೆ ಸೂಚಿಸಿದ್ದಾರೆ. ಇದು ಚೈತ್ರಾ ಸಿಟ್ಟಿಗೆ ಕಾರಣವಾಗಿದೆ. ನಾನು ಪ್ರದರ್ಶನ ಕೊಟ್ಟರೂ ಕೂಡ ಅದು ಹೇಗೆ ನೀವು ಕಳಪೆ ಎನ್ನುತ್ತೀರಿ ಎಂದು ಚೈತ್ರಾ ರೇಗಿದ್ದಾರೆ. ನೀವು ಜಾಸ್ತಿ ಮಾತನಾಡಿತ್ತೀರಿ, ವಾದ ವಿವಾದ ಮಾಡುತ್ತೀರಿ



ಅದು ಸರಿ ಇಲ್ಲ. ಹಾಗಾಗಿ ಕಳಪೆ ಕೊಡುತ್ತೇನೆ ಎಂದು ಮಂಜು ನೇರವಾಗಿ ಚೈತ್ರಾ ಹೇಳಿದ್ದಾರೆ.

ಇದು ಎರಡನೇ ಬಾರಿ ಈ ಮನೆಯಲ್ಲಿ ಅವರು ಜೈಲು ಸೇರುತ್ತಿದ್ದಾರೆ. ಈ ಮೊದಲೂ ಸಹ ಒಮ್ಮೆ ಕಳಪೆ ಪಟ್ಟ ತೆಗೆದುಕೊಂಡು ಅವರು ಜೈಲು ಪಾಲಾಗಿದ್ದರು. ಡಿ.3ರಂದು ಚೈತ್ರಾ ಅವರು ವಂಚನೆ ಪ್ರಕರಣ ಸಂಬಂಧ ನ್ಯಾಯಾಲಯದ ವಿಚಾರಣೆಗೆಂದು ಬಿಗ್‌ಬಾಸ್‌ನಿಂದ ಹೊರಗೆ ಬಂದಿದ್ದರು. ಕಾಕತಾಳೀಯದಂತೆ ಅದೇ ವಾರದಲ್ಲಿ ಅವರು ಬಿಗ್ ಬಾಸ್ ಮನೆಯ ಜೈಲು ಸೇರಿದ್ದಾರೆ. ಆದರೆ ಈ ಬಾರಿ ಅವರಿಗೆ ಕಳಪೆ ಪಟ್ಟ ನೀಡಿರುವುದು ಚೈತ್ರಾ ಅವರಿಗೆ ಸುತಾರಾಂ ಹಿಡಿಸಿಲ್ಲ. ಉಗ್ರಂ ಮಂಜು ಹಾಗೂ ಕೆಲವರ ಪಿತೂರಿಯಿಂದಲೇ ತಮಗೆ ಕಳಪೆ ದೊರೆತಿದೆ ಎಂದು ಚೈತ್ರಾ ಆರೋಪಿಸಿದ್ದಾರೆ.



# ತಿರುಪತಿ ಸನ್ನಿಧಾನಕ್ಕೆ ತೆರಳಿ ಮುಡಿ ಕೊಟ್ಟ ಶಿವರಾಜ್ ಕುಮಾರ್-ಗೀತಾ

ಶಿವರಾಜ್ ಕುಮಾರ್ ಅವರು ತಮಗಿರೋ ಕೆಲವು ಸಿನಿಮಾ ಕಮಿಟ್ ಮೆಂಟ್ ಗಳನ್ನು ಪೂರ್ಣಗೊಳಿಸಿದ್ದಾರೆ. ಅದಕ್ಕೆ ಕಾರಣ ಅನಾರೋಗ್ಯ. ಅವರು ಚಿಕಿತ್ಸೆ ಪಡೆಯಲು ವಿದೇಶಕ್ಕೆ ತೆರಳಬೇಕಿದೆ. ಹೀಗಾಗಿ, ಕೆಲವು ಸಿನಿಮಾ ಕೆಲಸಗಳನ್ನು ಮುಂದಕ್ಕೆ ಹಾಕಿದ್ದಾರೆ.

ಶಿವರಾಜ್ ಕುಮಾರ್ ಅವರು ಈಗ ತಿರುಪತಿಗೆ ತೆರಳಿದ್ದಾರೆ. ಇಡೀ ಕುಟುಂಬದ ಜೊತೆ ಅಲ್ಲಿಗೆ ತೆರಳಿರೋ ಅವರು ಮುಡಿ ಕೊಟ್ಟಿದ್ದಾರೆ. ಗೀತಾ ಶಿವರಾಜ್ ಕುಮಾರ್ ಕೂಡ ಕೂದಲು ತೆಗೆಸಿದ್ದಾರೆ. ಆ ಸಂದರ್ಭದ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿವೆ.

ಚಿಕಿತ್ಸೆಗಾಗಿ ಶಿವರಾಜ್ ಕುಮಾರ್ ಅಮೆರಿಕಕ್ಕೆ ತೆರಳಲಿದ್ದಾರೆ. ಅವರಿಗೆ ಏನಾಗಿದೆ ಎಂಬ ವಿಚಾರ ಇನ್ನೂ ರಿವೀಲ್ ಮಾಡಿಲ್ಲ. ಅವರು ಚಿಕಿತ್ಸೆ ಪಡೆಯುವುದಕ್ಕೂ ಮೊದಲು ತಿಮ್ಮಪ್ಪನ ಸನ್ನಿಧಾನದಲ್ಲಿದ್ದು ಆಶೀರ್ವಾದ ಪಡೆದಿದ್ದಾರೆ.

ಶಿವರಾಜ್ ಕುಮಾರ್ ಅವರು ಕೆಲವು ತಿಂಗಳು ನಟನೆಯಿಂದ ದೂರ ಇರುವ ನಿರ್ಧಾರಕ್ಕೆ ಬಂದಿದ್ದಾರೆ. ಅವರು ಸಂಪೂರ್ಣ ಚೇತರಿಕೆ ಕಂಡ ಬಳಿಕವೇ ನಟನೆಯತ್ತ ಗಮನ ಹರಿಸಲಿದ್ದಾರೆ. ಈಗ ಶಿವಣ್ಣನ ಲುಕ್ ನೋಡಿ ಅನೇಕರು ಅಚ್ಚರಿ ಹೊರಹಾಕಿದ್ದಾರೆ.

ಶಿವರಾಜ್ ಕುಮಾರ್ ನಟನೆಯ 'ಭೈರತಿ ರಣಗಲ್' ಸಿನಿಮಾ ಇತ್ತೀಚೆಗೆ ರಿಲೀಸ್ ಆಯಿತು. ಈಗ ಅವರು ನಟಿಸಿರೋ '45' ಚಿತ್ರದ ಶೂಟಿಂಗ್ ಪೂರ್ಣಗೊಂಡಿದ್ದು, ಈ ಸಿನಿಮಾ ಕೂಡ ಶೀಘ್ರವೇ ರಿಲೀಸ್ ಆಗುವ ಸಾಧ್ಯತೆ ಇದೆ.



# ಭಾವಿ ಪತಿಯನ್ನು ಪರಿಚಯಿಸಿದ 'ಸೀತಾ ರಾಮ' ನಟಿ ಮೇಘನಾ



'ಸೀತಾ ರಾಮ', 'ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್' ಶೋ ಮೂಲಕ ಮನಗೆದ್ದಿರುವ ನಟಿ ಮೇಘನಾ ಶಂಕರಪ್ಪ ಅವರು ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಭಾವಿ ಪತಿ ಜಯಂತ್ ಜೊತೆಗಿನ ಫೋಟೋ ಹಂಚಿಕೊಂಡು ಎಂಗೇಜ್ ಆಗಿರೋದಾಗಿ ತಿಳಿಸಿದ್ದಾರೆ.

ಸದ್ಯದಲ್ಲೇ ನಟಿ ಹಸೆಮಣೆ ಏರೋದಕ್ಕೆ ರೆಡಿಯಾಗಿದ್ದಾರೆ. ಭಾವಿ ಪತಿ ಜೊತೆಗಿನ ವಿಶೇಷ ವಿಡಿಯೋ ಹಂಚಿಕೊಂಡು ಫ್ಯಾನ್ಸ್‌ಗೆ ಪರಿಚಯಿಸಿದ್ದಾರೆ. ಹೊಸ ಜೋಡಿಗೆ ಅಭಿಮಾನಿಗಳು ಶುಭಕೋರುತ್ತಿದ್ದಾರೆ. ಸಿನಿಮಾ ಸ್ಟೈಲಿನಲ್ಲಿ ಭಾವಿ ಪತಿಯನ್ನು ನಟಿ ಪರಿಚಯಿಸಿದ್ದಾರೆ. ರೆಸ್ಟೋರೆಂಟ್‌ವೊಂದರಲ್ಲಿ ಕಾಫಿ ಕುಡಿಯಲು ಬಂದು ಆ ನಂತರ ಪಾರ್ಟ್ನರ್ ಮುಖವನ್ನು ನಟಿ ರಿವೀಲ್ ಮಾಡಿದ್ದಾರೆ.

ಇನ್ನೂ ಈ ಹಿಂದೆ ನಮ್ಮನೆ ಯುವರಾಣಿ, ಕಿನ್ನರಿ, ರತ್ನಗಿರಿ ರಹಸ್ಯ, ಸಿಂಧೂರ, ಕೃಷ್ಣ ತುಳಸಿ ಸೇರಿದಂತೆ ಹಲವು ಸೀರಿಯಲ್‌ಗಳಲ್ಲಿ ಅವರು ನಟಿಸಿದ್ದಾರೆ. ಪ್ರಸ್ತುತ ಸೀತಾ ರಾಮ ಧಾರಾವಾಹಿಯಲ್ಲಿ ನಾಯಕಿ ಸೀತಾ ಫ್ರೆಂಡ್ ಪ್ರಿಯಾ ಪಾತ್ರದ ಮೂಲಕ ಮೇಘನಾ ಎಲ್ಲರ ಮನ ಗೆದ್ದಿದ್ದಾರೆ.

# ಗೀತಾ ಶಿವರಾಜ್‌ಕುಮಾರ್ ನಿರ್ಮಾಣದಲ್ಲಿ ಧೀರೆನ್ ಹೊಸ ಸಿನಿಮಾ

'ವೇದ', 'ಭೈರತಿ ರಣಗಲ್' ಸಿನಿಮಾ ಸಕ್ಸಸ್ ಬಳಿಕ ಮತ್ತೊಂದು ಹೊಸ ಚಿತ್ರ ನಿರ್ಮಾಣ ಮಾಡಲು ಗೀತಾ ಶಿವರಾಜ್‌ಕುಮಾರ್ ಮುಂದಾಗಿದ್ದಾರೆ. ಈ ಬಾರಿ ದೊಡ್ಮನೆ ಕುಡಿ ಧೀರೆನ್ ಆರ್. ರಾಜ್‌ಕುಮಾರ್ ಹೊಸ ಚಿತ್ರಕ್ಕೆ ಬಂಡವಾಳ ಹೂಡುತ್ತಿದ್ದಾರೆ. ಈ ಸಿನಿಮಾಗೆ 'ಶಾಖಾಹಾರಿ' ಸಂದೀಪ್ ಸುಂಕದ್ ನಿರ್ದೇಶನ ಮಾಡುತ್ತಿದ್ದಾರೆ.

'ಶಾಖಾಹಾರಿ' ಎಂಬ ವಿಭಿನ್ನ ಸಿನಿಮಾ ಕೊಟ್ಟಂತಹ ಸಂದೀಪ್ ಜೊತೆ ಗೀತಾ ಶಿವರಾಜ್‌ಕುಮಾರ್ ಕೈಜೋಡಿಸಿದ್ದಾರೆ. 'ಶಿವ 143' ಚಿತ್ರದ ಮೂಲಕ ಸ್ಯಾಂಡಲ್‌ವುಡ್‌ಗೆ ಎಂಟ್ರಿ ಕೊಟ್ಟ ಧೀರೆನ್ ಹೊಸ ಬಗೆಯ ಪಾತ್ರದಲ್ಲಿ ಮಿಂಚಲು ರೆಡಿಯಾಗಿದ್ದಾರೆ.

ಅಂದಹಾಗೆ, ಅದರೊಂದಿಗೆ ಧೀರೆನ್ 'ಕೆಆರ್‌ಜಿ' ಸಂಸ್ಥೆ ಜೊತೆ ಹೊಸ ಸಿನಿಮಾ ಒಪ್ಪಿಕೊಂಡಿದ್ದಾರೆ. ಅವರಿಗೆ ಹೊಸ ಬಗೆಯ ಸ್ಟೋರಿಯಲ್ಲಿ ಮಿಂಚಲು ರೆಡಿಯಾಗಿದ್ದಾರೆ.



## ಪಿಂಕ್‌ಬಾಲ್ ಟೆಸ್ಟ್: ಭಾರತ 180ಕ್ಕೆ ಆಲೌಟ್

# ಸ್ಟಾರ್ಕ್ ವೇಗಕ್ಕೆ ನೆಲ ಕಚ್ಚಿದ ಬ್ಯಾಟರ್ಸ್

**ಅಡಿಲೇಡ್:** ಇಲ್ಲಿ ನಡೆಯುತ್ತಿರುವ ಬಾರ್ಡರ್ ಗವಾಸ್ಕರ್ ಟೆಸ್ಟ್ ಸರಣಿಯ ಪಿಂಕ್ ಬಾಲ್ ಟೆಸ್ಟ್ ಪಂದ್ಯದ ಮೊದಲ ದಿನ ಪರ್ತ್ ಪಂದ್ಯದ ಫಲಿತಾಂಶವೇ ಮರುಕಳಿಸಿದಂತೆ ಕಂಡುಬಂದಿದೆ. ಮೊದಲ ದಿನದಾಟದಲ್ಲಿ ಭಾರತ 180 ರನ್‌ಗಳಿಗೆ ಆಲೌಟ್ ಆಗಿದೆ. ಬಳಿಕ ತನ್ನ ಸರದಿಯ ಮೊದಲ ಇನ್ನಿಂಗ್ಸ್ ಆರಂಭಿಸಿರುವ ಆಸ್ಟ್ರೇಲಿಯಾ ತಂಡ 33 ಓವರ್‌ಗಳಲ್ಲಿ 86 ರನ್‌ಗಳಿಗೆ ಒಂದು ವಿಕೆಟ್ ಕಳೆದುಕೊಂಡಿದೆ.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ದುಕೊಂಡ ಭಾರತ ಆರಂಭದಲ್ಲೇ ಅಗ್ರ ಕ್ರಮಾಂಕದ ಬ್ಯಾಟರ್ ಗಳನ್ನ ಕಳೆದುಕೊಂಡು ಸಂಕಷ್ಟಕ್ಕೀಡಾಯಿತು. ಆಸೀಸ್ ಎಡಗೈ ವೇಗಿ ಮಿಚೆಲ್ ಸ್ಟಾರ್ಕ್ ಭಾರತ ತಂಡಕ್ಕೆ ಮೊದಲ ಎಸೆತದಲ್ಲಿ ಆಘಾತ ನೀಡಿದರು. ಮೊದಲ ಟೆಸ್ಟ್ ಪಂದ್ಯದ 2ನೇ ಇನ್ನಿಂಗ್ಸ್‌ನಲ್ಲಿ 161 ರನ್ ಸಿಡಿಸಿ ಅಬ್ಬರಿಸಿದ್ದ ಯಶಸ್ವಿ ಜೈಸ್ವಾಲ್ ಅವರನ್ನು ಪಂದ್ಯದ ಮೊದಲನೇ ಎಸೆತದಲ್ಲೇ ಎಲ್‌ಬಿಡಬ್ಲ್ಯೂ ಬಲೆಗೆ ಕೆಡವಿದರು. ಜೈಸ್ವಾಲ್ ಅವರು ಸತತವಾಗಿ 2ನೇ ಪಂದ್ಯದಲ್ಲೂ ಪ್ರಥಮ ಇನ್ನಿಂಗ್ಸ್ ನಲ್ಲೇ ಶೂನ್ಯ ಸುತ್ತಿದ ಕುಖ್ಯಾತಿಗೆ ಒಳಗಾದರು. ಎರಡೂ ಪಂದ್ಯಗಳಲ್ಲೂ ಅವರನ್ನು ಶೂನ್ಯಕ್ಕೆ ಸ್ಟಾರ್ಕ್ ಅವರೇ ಔಟ್ ಮಾಡಿದ್ದು ಎಂಬುದು ಗಮನಾರ್ಹ.

ಅಲ್ಲಿಂದ ಬಳಿಕ ಶುಭಮನ್ ಗಿಲ್ ಮತ್ತು ಕೆಎಲ್ ರಾಹುಲ್ ಅವರು ಭಾರತ ಇನ್ನಿಂಗ್ಸ್‌ಗೆ ಜೀವಕಳೆ ತಂದರು. 2ನೇ ವಿಕೆಟ್‌ಗೆ ಅವರಿಂದ 69 ರನ್ ಗಳ ಜೊತೆಯಾಟ ಬಂದಾಗ ಭಾರತ ಮತ್ತೆ ದೊಡ್ಡ ಮೊತ್ತ ಪೇರಿಸುವ ಸೂಚನೆ ನೀಡಿತ್ತು. ಆದ್ರೆ ಕೆ.ಎಲ್ ರಾಹುಲ್ 37 ರನ್‌ಗಳಿಗೆ ವಿಕೆಟ್ ಒಪ್ಪಿಸಿ ನಿರಾಸೆ ಮೂಡಿಸಿದರು. ಈ ಬೆನ್ನಲ್ಲೇ ಬೋಲೆಂಡ್ ವೇಗದ ದಾಳಿಗೆ ಶುಭಮನ್ ಗಿಲ್ (31 ರನ್) ಸಹ ಔಟಾದರು.



ಈ ನಡುವೆ ನಿತೀಶ್ ಕುಮಾರ್ ರೆಡ್ಡಿ ಅವರ ದಿಟ್ಟ ಬ್ಯಾಟಿಂಗ್ ಪ್ರದರ್ಶನ ಭಾರತ ತಂಡವನ್ನು 180ರ ಗಡಿ ವರೆಗೆ ಕೊಂಡೊಯ್ದಿತು. ಒಂದೆಡೆ ವಿಕೆಟ್‌ಗಳು ಉರುಳುತ್ತಿದ್ದರೆ ಮತ್ತೊಂದೆಡೆ ನಿತೀಶ್ ಆಸೀಸ್ ವೇಗಿಗಳ ಬೌಲಿಂಗ್ ಲೆಕ್ಕಕ್ಕಿಲ್ಲದಂತೆ ಸಿಕ್ಸರ್, ಬೌಂಡರಿ ಚಚ್ಚುತ್ತಿದ್ದರು. ಈ ನಡುವೆ 54 ಎಸೆತಗಳಲ್ಲಿ 3 ಬೌಂಡರಿ, 3 ಸಿಕ್ಸರ್ ನೊಂದಿಗೆ 42 ರನ್ ಬಾರಿಸಿ, ಉತ್ತಮ ಪ್ರದರ್ಶನ ನೀಡುತ್ತಿದ್ದ ನಿತೀಶ್ ರೆಡ್ಡಿ ಮತ್ತೆ ಸಿಕ್ಸರ್ ಸಿಡಿಸುವ ಬರದಲ್ಲಿ ಕ್ಯಾಚ್ ನೀಡಿ ಔಟಾದರು.

**ಕೈಕೊಟ್ಟ ಕೊಹ್ಲಿ, ರೋಹಿತ್:** ಭಾರಿ ನಿರೀಕ್ಷೆ ಹುಟ್ಟಿಸಿದ್ದ ವಿರಾಟ್ ಕೊಹ್ಲಿ 7 ರನ್‌ಗಳಿಗೆ ಔಟಾಗಿ ನಿರಾಸೆ ಮೂಡಿಸಿದರು. ಅಲ್ಲದೇ ಕೆ.ಎಲ್ ರಾಹುಲ್ ಅವರಿಗೆ ಒಮ್ಮೆ ಜೀವದಾನ ಸಿಕ್ಕರೂ ಅದನ್ನು ಸರಿಯಾಗಿ ಬಳಸಿಕೊಳ್ಳುವಲ್ಲಿ ವಿಫಲರಾದರು. ಇನ್ನೂ 6ನೇ ಕ್ರಮಾಂಕದಲ್ಲಿ ಬ್ಯಾಟ್ ಬೀಸಿದ ನಾಯಕ ರೋಹಿತ್ ಶರ್ಮಾ 23 ಎಸೆತಗಳಲ್ಲಿ 3 ರನ್ ಗಳಿಸಿ ಔಟಾದರು. ಇದರೊಂದಿಗೆ ರಿಷಬ್ ಪಂತ್ 21 ರನ್, ರವಿಚಂದ್ರನ್ ಅಶ್ವಿನ್ 22 ರನ್‌ಗಳ ಕೊಡುಗೆ ನೀಡಿದರು.

**ಮಿಂಚಿದ ಮಿಚೆಲ್ ಸ್ಟಾರ್ಕ್:** ಪಿಂಕ್ ಬಾಲ್ ಟೆಸ್ಟ್ ಪಂದ್ಯದ ಮೊದಲ ದಿನವೇ ಭಾರತೀಯ ಬ್ಯಾಟರ್ ಗಳ ಎದುರು ಬಿಗಿ ಹಿಡಿತ ಸಾಧಿಸಿದ ಮಿಚೆಲ್ ಸ್ಟಾರ್ಕ್ 14.1 ಓವರ್‌ಗಳಲ್ಲಿ 6 ವಿಕೆಟ್ ಕಿತ್ತರೆ, ಸ್ಕಾಟ್ ಬೋಲೆಂಡ್ ಹಾಗೂ ಪ್ಯಾಟ್ ಕಮ್ಮಿನ್ಸ್ ತಲಾ 2 ವಿಕೆಟ್ ಕಿತ್ತರು. ಬಳಿಕ ತನ್ನ ಸರದಿಯ 2ನೇ ಇನ್ನಿಂಗ್ಸ್ ಆರಂಭಿಸಿದ ಆಸೀಸ್ 33 ಓವರ್‌ಗಳಲ್ಲಿ 86 ರನ್ ಗಳಿಗೆ ಒಂದು ವಿಕೆಟ್ ಕಳೆದುಕೊಂಡಿತು. ಆರಂಭಿಕ ಆಟಗಾರ ಉಸ್ಮಾನ್ ಖವಾಜ 13 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಆ ಬಳಿಕ ಜೊತೆಗೂಡಿದ ನಾಥನ್ ಮೆಕ್‌ಸ್ವೀನಿ 97 ಎಸೆತಗಳಲ್ಲಿ 38 ರನ್, ಮಾರ್ನಸ್ ಲಾಬುಶೇನ್ 20 ರನ್ ಗಳಿಸಿ ಕ್ರೀಸ್‌ನಲ್ಲಿ ಉಳಿದರು.

# ಜಸ್‌ಪ್ರೀತ್ ಬುಮ್ರಾ ಬೌಲಿಂಗ್‌ಗೆ ಹೊಸ ದಾಖಲೆ ನಿರ್ಮಾಣ



ಅಡಿಲೇಡ್‌ನ ಓವಲ್ ಮೈದಾನದಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯಾ ವಿರುದ್ಧದ ದ್ವಿತೀಯ ಟೆಸ್ಟ್ ಪಂದ್ಯದ ಮೂಲಕ ಟೀಮ್ ಇಂಡಿಯಾ ಜಸ್ ಪ್ರೀತ್ ಬುಮ್ರಾ ವಿಶೇಷ ದಾಖಲೆ ಬರೆದಿದ್ದಾರೆ. ಈ ಪಂದ್ಯದ ಮೊದಲ ದಿನದಾಟದಲ್ಲಿ 11 ಓವರ್ ಎಸೆದ ಬುಮ್ರಾ ಉಸ್ಮಾನ್ ಖ್ವಾಜಾ (13) ಅವರ ವಿಕೆಟ್ ಕಬಳಿಸುವಲ್ಲಿ ಯಶಸ್ವಿಯಾದರು.

ಈ ವಿಕೆಟ್‌ನೊಂದಿಗೆ 2024 ರಲ್ಲಿ ಟೆಸ್ಟ್‌ನಲ್ಲಿ 50 ವಿಕೆಟ್ ಪೂರೈಸಿದ ವಿಶ್ವದ ಮೊದಲ ಬೌಲರ್ ಎನಿಸಿಕೊಂಡರು. ಅಲ್ಲದೆ ಒಂದು ವರ್ಷದೊಳಗೆ ಟೆಸ್ಟ್‌ನಲ್ಲಿ 50 ವಿಕೆಟ್ ಕಬಳಿಸಿದ ಭಾರತದ 3ನೇ ವೇಗದ ಬೌಲರ್ ಎಂಬ ಹಿರಿಮೆಗೂ ಪಾತ್ರರಾದರು.

ಇದಕ್ಕೂ ಮುನ್ನ ಭಾರತದ ಪರ ಈ ಸಾಧನೆ ಮಾಡಿದ್ದು ಕಪಿಲ್ ದೇವ್ ಮತ್ತು ಝುಹೀರ್ ಖಾನ್ ಮಾತ್ರ. 1979 ಮತ್ತು 1983 ರಲ್ಲಿ ಕಪಿಲ್ ದೇವ್ ಕ್ರಮವಾಗಿ 74 ಹಾಗೂ 75 ವಿಕೆಟ್ ಕಬಳಿಸಿದ್ದರು. ಹಾಗೆಯೇ ಝುಹೀರ್ ಖಾನ್ 2002 ರಲ್ಲಿ 51 ವಿಕೆಟ್ ಕಬಳಿಸಿ ಮಿಂಚಿದ್ದರು.

ಇದೀಗ ಜಸ್‌ಪ್ರೀತ್ ಬುಮ್ರಾ ಒಂದೇ ವರ್ಷದೊಳಗೆ ಟೆಸ್ಟ್‌ನಲ್ಲಿ 50 ವಿಕೆಟ್ ಕಬಳಿಸಿ ಈ ಸಾಧಕರ ಪಟ್ಟಿಗೆ ಸೇರ್ಪಡೆಯಾಗಿದ್ದಾರೆ. ಈ ವರ್ಷ 11 ಟೆಸ್ಟ್ ಪಂದ್ಯಗಳನ್ನಾಡಿರುವ ಬುಮ್ರಾ ಇದುವರೆಗೆ 50 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಇನ್ನೆರಡು ವಿಕೆಟ್ ಪಡೆದರೆ ಝುಹೀರ್ ಖಾನ್ ಅವರ ದಾಖಲೆಯನ್ನು ಹಿಂದಿಕ್ಕಬಹುದು.

ಇನ್ನು ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ ಮಿಚೆಲ್ ಸ್ಟಾರ್ಕ್ ಅವರ ಮಿಂಚಿನ ದಾಳಿಗೆ ತತ್ತರಿಸಿದೆ. ಪರಿಣಾಮ ಕೇವಲ 180 ರನ್‌ಗಳಿಸಿ ಭಾರತ ತಂಡವು ಪ್ರಥಮ ಇನಿಂಗ್ಸ್ ಅಂತ್ಯಗೊಳಿಸಿದೆ. ಅತ್ತ ಮೊದಲ ಇನಿಂಗ್ಸ್ ಆರಂಭಿಸಿರುವ ಆಸ್ಟ್ರೇಲಿಯಾ ತಂಡವು ಮೊದಲ ದಿನದಾಟದ ಮುಕ್ತಾಯದ ವೇಳೆಗೆ 1 ವಿಕೆಟ್ ಕಳೆದುಕೊಂಡು 86 ರನ್ ಕಲೆಹಾಕಿದೆ.

## ಬಳ್ಳಾರಿ ಬಾಣಂತಿಯರ ಸಾವು

# ತಪ್ಪಿತಸ್ಥರ ವಿರುದ್ಧ ಮುಲಾಜಿಲ್ಲದೆ ಕ್ರಮ

**ಬೆಂಗಳೂರು:** ಬಳ್ಳಾರಿ ಬಾಣಂತಿಯರ ಸಾವು ಪ್ರಕರಣ ಶುಕ್ರವಾರ ನಡೆದ ಕರ್ನಾಟಕ ಸಚಿವ ಸಂಪುಟ ಸಭೆಯಲ್ಲಿಯೂ ಚರ್ಚೆಗೆ ಬಂದಿದೆ. ಬಾಣಂತಿಯರ ಸಾವಿನ ಬಗ್ಗೆ ಸಂಪುಟ ಸಭೆಯಲ್ಲಿ ಗಂಭೀರ ಚರ್ಚೆಯಾಗಿದ್ದು, 'ನನ್ನ ಸರ್ಕಾರದಲ್ಲಿ ಇಂಥದ್ದಕ್ಕೆಲ್ಲ ಅವಕಾಶವಿಲ್ಲ' ಎಂದು ಸಿಎಂ ಸಿದ್ದರಾಮಯ್ಯ ಖಡಕ್ ಸಂದೇಶ ರವಾನಿಸಿದ್ದಾರೆ. ಜತೆಗೆ, ತಪ್ಪಿತಸ್ಥರ ವಿರುದ್ಧ ಮುಲಾಜಿಲ್ಲದೆ ಕ್ರಮ ಕೈಗೊಳ್ಳುವಂತೆ ಖಡಕ್ ಸೂಚನೆ ನೀಡಿದ್ದಾರೆ.

ಬಳ್ಳಾರಿಯಲ್ಲಿ ಬಾಣಂತಿಯರ ಸಾವಿನ ಸಂಖ್ಯೆ 5ಕ್ಕೆ ಏರಿಕೆಯಾಗಿದೆ. ಏತನ್ಮಧ್ಯೆ, ವಿಧಾನಸೌಧದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಸಚಿವ ಸಂಪುಟ ಸಭೆ ನಡೆದಿದ್ದು, ಬಾಣಂತಿಯರ ಸಾವಿನ ಬಗ್ಗೆ ಗಹನವಾದ ಚರ್ಚೆಯಾಗಿದೆ. ಇದೇ ವೇಳೆ ಸಿದ್ದರಾಮಯ್ಯ, ಬಾಣಂತಿಯರ ಸಾವಿನ ಬಗ್ಗೆ ಮೊದಲು ಪರಿಶೀಲನೆ ನಡೆಸುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

**ನನ್ನ ಸರ್ಕಾರದಲ್ಲಿ ಇಂಥದ್ದಕ್ಕೆಲ್ಲ ಅವಕಾಶ ಇಲ್ಲ: ಸಿಎಂ ಗುಡುಗು:** ಬಳ್ಳಾರಿ ಪ್ರಕರಣದಲ್ಲಿ ಯಾರು ತಪ್ಪು ಮಾಡಿದ್ದಾರೆಯೋ ಅವರ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಿ. ನನ್ನ ಸರ್ಕಾರದಲ್ಲಿ ಇಂಥದ್ದಕ್ಕೆಲ್ಲ



ಅವಕಾಶ ಇಲ್ಲ. ಯಾವುದೇ ಮುಲಾಜಿಲ್ಲದೇ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಿ ಎಂದು ಸಿದ್ದರಾಮಯ್ಯ ತಾಕೀತು ಮಾಡಿದ್ದಾರೆ.

ಬಳ್ಳಾರಿಯ ಜಿಲ್ಲಾಸ್ಪತ್ರೆಯಲ್ಲಿ ಹೆರಿಗೆಯ ನಂತರ ನೀಡಲಾಗಿದ್ದ ಐವಿ ದ್ರಾವಣದಿಂದಾಗಿ ನಾಲ್ವರು ಬಾಣಂತಿಯರು ಕೆಲವು ದಿನಗಳ ಹಿಂದೆ ಮೃತಪಟ್ಟಿದ್ದರು. ಇದೀಗ ಮತ್ತೊಬ್ಬ ಬಾಣಂತಿ ಮೃತಪಟ್ಟಿದ್ದು, ಸಾವಿನ ಸಂಖ್ಯೆ ಐದಕ್ಕೆ ಏರಿಕೆಯಾಗಿದೆ. ಏತನ್ಮಧ್ಯೆ, ಕರ್ನಾಟಕದಾದ್ಯಂತ ಈ ವರ್ಷ ಈವರೆಗೆ 327 ಮೆಟರ್ನಲ್ ಸಾವಾಗಿದೆ ಎಂಬ ಆಘಾತಕಾರಿ ವಿಚಾರವೂ ಬೆಳಕಿಗೆ ಬಂದಿದೆ.

ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರಿಗೆ ನವೆಂಬರ್ 9 ರಂದು ಸಿಸೇರಿಯನ್ ಮೂಲಕ ಹೆರಿಗೆ ಮಾಡಲಾಗಿತ್ತು. ಹೆರಿಗೆ ಬಳಿಕ ಬಾಣಂತಿಯರಿಗೆ ಐವಿ ದ್ರಾವಣ ನೀಡಲಾಗಿತ್ತು. ಅದಾದ ಎರಡೇ ಗಂಟೆಯಲ್ಲಿ ಬಾಣಂತಿಯರು ಅಸ್ವಸ್ಥಗೊಂಡಿದ್ದರು.

ಒಟ್ಟು 9 ಮಂದಿ ಬಾಣಂತಿಯರ ಪೈಕಿ, ಇದೀಗ ಐವರು ಮೃತಪಟ್ಟಿದ್ದು, ನಾಲ್ವರು ಚಿಕಿತ್ಸೆ ಪಡೆದು ಬಿಡುಗಡೆಯಾಗಿದ್ದಾರೆ. ಅಸ್ವಸ್ಥರಾದ ಕೆಲವು ಮಂದಿ ಬಾಣಂತಿಯರು ಕಿಡ್ನಿ ಮತ್ತು ಬಹು ಅಂಗಾಂಗ ವೈಫಲ್ಯತೆಯಿಂದ ಬಳಲುತ್ತಿರುವುದು ಗೊತ್ತಾಗಿದ್ದರೆ, ಮೂವರಲ್ಲಿ ಇಲಿ ಜ್ವರ ಕಾಣಿಸಿಕೊಂಡಿತ್ತು.

ಬಾಣಂತಿಯರಿಗೆ ನೀಡಿದ್ದ ಐವಿ ರಿಂಗರ್ ಲ್ಯಾಕ್ಟೇಟ್ ದ್ರಾವಣ ಬಳಸಲು ಯೋಗ್ಯವಲ್ಲವೆಂದು ಕರ್ನಾಟಕ ರಾಜ್ಯ ಡ್ರಗ್ಸ್ ಲಾಜಿಸ್ಟಿಕ್ಸ್ ಮತ್ತು ವೇರ್ ಹೌಸಿಂಗ್ ವರದಿಯಲ್ಲಿ ಉಲ್ಲೇಖಿಸಲಾಗಿತ್ತು. ಅಷ್ಟಾಗಿಯೂ ಅದೇ ದ್ರಾವಣವನ್ನು ವೈದ್ಯರು ಬಳಸಿದ್ದು ಯಾಕೆ ಎಂಬ ಪ್ರಶ್ನೆ ಮೂಡಿದ್ದು, ತೀವ್ರ ಚರ್ಚೆಗೆ ಗ್ರಾಸವಾಗಿತ್ತು. ಈ ಎಲ್ಲ ಬೆಳವಣಿಗೆಗಳ ಬೆನ್ನಲ್ಲೇ ಖುದ್ದು ಸಿಎಂ ಸಿದ್ದರಾಮಯ್ಯನವರೇ ಈಗ ಸಂಪುಟ ಸಭೆಯಲ್ಲಿ ಆ ಬಗ್ಗೆ ಗಂಭೀರ ಚರ್ಚೆ ನಡೆಸಿದ್ದಾರೆ.

# ಮುಸ್ಲಿಮರನ್ನು ಅವರಂತೆ ಹೆದರಿಸದಿದ್ರೆ, ಜಗತ್ತಿನ ಎಲ್ಲಾ ಸಂಸ್ಕೃತಿಗಳು ನಾಶವಾಗಲಿವೆ

**ಚಿಕ್ಕಮಗಳೂರು:** ಕಾಫಿನಾಡಲ್ಲಿ ಇಂದಿನಿಂದ ದತ್ತಜಯಂತಿ ಸಂಭ್ರಮ ಮನೆ ಮಾಡಿದ್ದು, ನಗರದ ಕಾಮಧೇನು ಗಣಪತಿ ದೇವಾಲಯದಲ್ಲಿ ಮಾಜಿ ಸಚಿವ ಸಿ.ಟಿ ರವಿ ದತ್ತ ಮಾಲಾಧಾರಣೆ ಮಾಡಿದ್ದಾರೆ.

ಸಿ.ಟಿ ರವಿಯವರ ಜೊತೆ ಭಜರಂಗದಳ ಮುಖಂಡ ರಘು ಸಕಲೇಶಪುರ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳ 100ಕ್ಕೂ ಹೆಚ್ಚು ದತ್ತ ಭಕ್ತರಿಂದ ಮಾಲಾಧಾರಣೆ ಮಾಡಲಾಗಿದೆ. ಇಂದಿನಿಂದ 9 ದಿನಗಳ ಕಾಲ ವ್ರತದಲ್ಲಿ ಇರುವ ದತ್ತಭಕ್ತರು, ಡಿಸೆಂಬರ್ 14 ರಂದು ದತ್ತಪೀಠದಲ್ಲಿ ದತ್ತ ಪಾದುಕೆ ದರ್ಶನ ಮಾಡಲಿದ್ದಾರೆ. 12ರಂದು ಅನಸೂಯ ಜಯಂತಿ, 13 ರಂದು ಬೃಹತ್ ಶೋಭಾಯಾತ್ರೆ ನಡೆಯಲಿದೆ. 14 ರಂದು 25,000ಕ್ಕೂ ಅಧಿಕ ಭಕ್ತರಿಂದ ದತ್ತಪೀಠದಲ್ಲಿ ಪಾದುಕೆ ದರ್ಶನ ಮಾಡಲಿದ್ದಾರೆ.

ಮಾಲಾಧಾರಣೆ ಬಳಿಕ ಮಾತಾಡಿದ ಸಿ.ಟಿ ರವಿಯವರು, ರಾಜ್ಯದ ಉದ್ದಗಲಕ್ಕೂ ವಕ್ಫ್ ಬೋರ್ಡ್ ಗಲಾಟೆ ಇದೆ. ವಕ್ಫ್ ಬೋರ್ಡಿಗೆ ಕಾಫಿನಾಡಲ್ಲಿ ಮೊದಲ ಬಲಿಯೇ ದತ್ತಪೀಠ, ದತ್ತಾತ್ರೇಯ ದೇವರು. 1973-74ರಲ್ಲಿ ಮೂಲ ದಾಖಲೆ ಪರಿಶೀಲಿಸದೆ ದತ್ತಪೀಠವನ್ನೂ ಸೇರಿಸಿ ವಕ್ಫ್



ಬೋರ್ಡ್ ಗೆಜೆಟ್ ನೋಟಿಫಿಕೇಶನ್ ಮಾಡಿದ್ದರು. ದತ್ತಪೀಠವನ್ನ ಉಳಿಸಿಕೊಳ್ಳಲು ಜನಾಂದೋಲನ ಮಾಡಿ, ನ್ಯಾಯಾಲಯದಲ್ಲಿ ಹೋರಾಟ ಮಾಡಬೇಕಾಯಿತು. ಜನಾಂದೋಲನ ಪ್ರಭಾವ ಬೀರಿದೆ, ನ್ಯಾಯಾಲಯದ ಹೋರಾಟದಲ್ಲಿ ಅರ್ಧ ನ್ಯಾಯ ಸಿಕ್ಕಿದೆ. ಬಾಂಗ್ಲಾ ಬೆಳವಣಿಗೆ ಗಮನಿಸಿದ್ರೆ, ಇಸ್ಲಾಂ ಡಿಎನ್‌ಎಗೆ ಅಂಗೈ ಹುಣ್ಣಿಗೆ ಕನ್ನಡಿ ಬೇಡ ಎಂಬಂತೆ ಇದೆ ಎಂದಿದ್ದಾರೆ.

ಇಸ್ಲಾಂ ಹೆಸರಿನ ಕ್ರೌರ್ಯ, ನರಮೇಧ, ಸಂಸ್ಕೃತಿ ನಾಶಕ್ಕೆ ಸಾಕ್ಷಿ ಬೇಕಿಲ್ಲ. ಅವರನ್ನು ಅವರದ್ದೇ ರೀತಿಯಲ್ಲಿ ಹೆದರಿಸದೇ ಇದ್ದರೆ ಜಗತ್ತಿನ ಎಲ್ಲಾ ಸಂಸ್ಕೃತಿ, ಪರಂಪರೆ, ಭಾಷೆ ನಾಶವಾಗುತ್ತದೆ. ಬಾಂಗ್ಲಾದಲ್ಲಿ 90% ರಷ್ಟು ಮುಸ್ಲಿಮರು ಎಂದು ಹೇಳುತ್ತಿದ್ದಾರೆ. ನೂರು ವರ್ಷಗಳ ಹಿಂದೆ 1% ಮುಸ್ಲಿಮರು ಇರಲಿಲ್ಲ. ಅಖಂಡ ಭಾರತದಲ್ಲೇ ಮುಸ್ಲಿಮರು ಇರಲಿಲ್ಲ ಎಂದಿದ್ದಾರೆ.

ವಿವಾದಿತ ಇನಾಂ ದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾದಲ್ಲಿ ಪೂಜೆ ನಡೆಯುವುದರಿಂದ 9 ದಿನಗಳ ಕಾಲ ಜಿಲ್ಲಾದ್ಯಂತ ಪೊಲೀಸರು ಶಾಂತಿ ಸುವ್ಯವಸ್ಥೆ ಕಾಪಾಡಲು ಕ್ರಮ ಕೈಗೊಂಡಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com